


ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಅಕ್ಟೋಬರ್ 30 ಬುಧವಾರ 2024



ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 194 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಮುಡಾದ ಬ್ರಹ್ಮಾಂಡ ಭ್ರಷ್ಟಾಚಾರದ ಬಾಹುಗಳ ಜಾಲಾಡುತ್ತಿರುವ ಇಡಿ

ಮೈಸೂರಿನ ಎಂಎಂಜಿ ಕನ್‌ಸ್ಟ್ರಕ್ಷನ್ಸ್ ಮೇಲೆ ದಾಳಿ

ಶೇಕಡ 50:50 ಅನುಪಾತದ ನಿವೇಶನಗಳ ಮಾರಾಟದಲ್ಲಿ ಎಂಎಂಜಿ ಕನ್‌ಸ್ಟ್ರಕ್ಷನ್ಸ್ ಮಾಲೀಕ ಜಯರಾಂ ಶಾಮೀಲು ಶಂಕೆ; ರಾಜಕಾರಣಿ, ಅಧಿಕಾರಿಗಳಿಗೆ ಈತ ಗಳಸ್ಯ–ಕಂಠಸ್ಯ; ಪಾನ್, ಆಧಾರ್ ಕಾರ್ಡ್ ಮಾಹಿತಿ ಆಧರಿಸಿ ಹಗರಣದ ಆಳ–ಅಗಲ ಶೋಧ

ಮೈಸೂರು, ಅ.29(ಬಿಎಲ್‌ಯು)– ಮುಡಾದಲ್ಲಿ ನಡೆದಿರುವ ಶೇಕಡ 50:50 ಅನುಪಾತದ ಬಹುಕೋಟಿ ರೂಪಾಯಿ ಹಗರಣ ಕೆದಕುತ್ತಿದ್ದಂತೆ ಇಡಿ(ಜಾರಿ ನಿರ್ದೇಶನಾಲಯ) ಅಧಿಕಾರಿಗಳಿಗೆ ಹಲವು ಸ್ಫೋಟಕ ಮಾಹಿತಿಗಳು ಲಭ್ಯವಾಗುತ್ತಿವೆ. ಮೈಸೂರಿನಲ್ಲೇ ಮೊಕ್ಕಾಂ ಹೂಡಿರುವ ಇಡಿ ಅಧಿಕಾರಿಗಳು ಮೈಸೂರಿನ ಎಂಎಂಜಿ ಕನ್‌ಸ್ಟ್ರಕ್ಷನ್ಸ್ ಮೇಲೆ ದಾಳಿ ನಡೆಸಿದ್ದಾರೆ. ಈ ಮೂಲಕ ಮುಡಾ ಹಗರಣ ರಾಜಕಾರಣಿಗಳು, ಅಧಿಕಾರಿಗಳು ಮಾತ್ರವಲ್ಲದೆ ಬಿಲ್ಡರ್‌ಗಳ ಕೊರಳಿಗೂ ಸುತ್ತಿಕೊಳ್ಳುತ್ತಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಆಪ್ತ ರಾಕೇಶ್ ಪಾಪಣ್ಣ ಮನೆಯಲ್ಲಿ ಪರಿಶೀಲನೆ ನಡೆಯುತ್ತಿದ್ದ ವೇಳೆಯೇ ಇಡಿ ಅಧಿಕಾರಿಗಳ ಮತ್ತೊಂದು ತಂಡ ಮೈಸೂರಿನ ನ್ಯೂ ಕಾಂತರಾಜ್ ಅರಸ್ ರಸ್ತೆಯ ಎಂಎಂಜಿ ಕನ್‌ಸ್ಟ್ರಕ್ಷನ್ಸ್ ಕಚೇರಿ ಹಾಗೂ ಇದರ ಮಾಲೀಕರಾದ ಬಿಲ್ಡರ್, ರಿಯಲ್ ಎಸ್ಟೇಟ್ ಉದ್ಯಮಿ ಜಯರಾಂ ಅವರ ಶ್ರೀರಾಂಪುರದ ನಿವಾಸದ ಮೇಲೆ ಏಕಕಾಲಕ್ಕೆ ದಾಳಿ ನಡೆಸಿ, ದಾಖಲೆಗಳನ್ನು ಜಾಲಾಡುತ್ತಿದೆ. ಐದು ಇನ್ನೋವಾ ಕಾರಿನಲ್ಲಿ ಬಂದಿರುವ 16ಕ್ಕೂ ಹೆಚ್ಚು ಇಡಿ ಅಧಿಕಾರಿಗಳು ಸೋಮವಾರ ಬೆಳಗ್ಗೆ 7 ಗಂಟೆಯಿಂದ ರಾತ್ರಿವರೆಗೂ ಪರಿಶೀಲನೆ ನಡೆಸಿದರಲ್ಲದೆ, ಎರಡನೇ ದಿನವಾದ ಇಂದೂ ಬೆಳಗ್ಗೆಯಿಂದ ಕಾರ್ಯಾಚರಣೆ ಮುಂದುವರೆಸಿದ್ದಾರೆ.

ಎಂಎಂಜಿ ಕನ್‌ಸ್ಟ್ರಕ್ಷನ್ಸ್ ಮೂಲಕ ನಡೆಸಲಾಗಿರುವ ವ್ಯವಹಾರ, ಮುಡಾದ ಶೇಕಡ 50:50 ಅನುಪಾತದಡಿ ಅಕ್ರಮವಾಗಿ ನಿವೇಶನ ಮಂಜೂರಾತಿ ಪಡೆದಿರುವ ಬಗ್ಗೆಯೂ ದಾಖಲಾತಿಗಳನ್ನು ಪರಿಶೀಲಿಸಿದ್ದಾರೆ. ಕಚೇರಿ ಚಿಕ್ಕದಾಗಿದ್ದರೂ ನೂರಾರು ಕೋಟಿ ರೂ. ವಹಿವಾಟು ನಡೆಸಿರುವ ಬಗ್ಗೆ ಮಾಹಿತಿ ತಿಳಿದು ಇಡಿ ಅಧಿಕಾರಿಗಳೇ ಶಾಕ್ ಆಗಿದ್ದಾರೆ ಎನ್ನಲಾಗಿದೆ. ಕೆಲವು ಇಡಿ ಅಧಿಕಾರಿಗಳು ಆಗಾಗ ಎಂಎಂಜಿ ಕನ್‌ಸ್ಟ್ರಕ್ಷನ್ಸ್ ಕಚೇರಿಯಿಂದ ಹೊರಗೆ ಬಂದು ಕಾರಿನಲ್ಲಿ ಬೇರೆಲ್ಲೋ ಹೋಗಿ, ಬರುತ್ತಿದ್ದರು. ಸಾಮಾನ್ಯವಾಗಿ ಇಡಿ ಅಧಿಕಾರಿಗಳು ಒಂದು ದಿನದಲ್ಲಿ ಕಾರ್ಯಾಚರಣೆ ಮುಗಿಸಿ, ಅಗತ್ಯ ದಾಖಲಾತಿಗಳನ್ನು ವಶಕ್ಕೆ ಪಡೆಯುತ್ತಾರೆ. ■ 6ನೇ ಪುಟಕ್ಕೆ

ಎರಡು ದಿನ ಶೋಧ ನಡೆಸಿದರೂ ಮುಗಿಯದ ಹಗರಣದ ಪುರಾಣ





ಎಂಎಂಜಿ ಕನ್‌ಸ್ಟ್ರಕ್ಷನ್ಸ್ ಕಚೇರಿ (ಬಲಗಡೆ)ಹಾಗೂ ಇದರ ಮಾಲೀಕರಾದ ಬಿಲ್ಡರ್, ರಿಯಲ್ ಎಸ್ಟೇಟ್ ಉದ್ಯಮಿ ಜಯರಾಂ

10 ವರ್ಷದ ಹಿಂದೆ ಗಾರೆ ಕೆಲಸಗಾರ ಇಂದು ಕೋಟ್ಯಾಧಿಪತಿ

ಹತ್ತು ವರ್ಷದ ಹಿಂದೆ ಗಾರೆ ಕೆಲಸ ಮಾಡುತ್ತಿದ್ದ ಜಯರಾಂ, ಇಂದು ಕೋಟ್ಯಾಧೀಶ್ವರ. ಮುಡಾದ ಶೇ.50:50 ಅನುಪಾತದ ನಿವೇಶನಗಳ ಕೊಡು–ಕೊಳ್ಳುವ ವ್ಯವಹಾರ ಇವರನ್ನು ಧನಿಕರನ್ನಾಗಿ ಮಾಡಿದೆ ಎನ್ನಲಾಗುತ್ತಿದೆ.

ಮೂಲತಃ ಮೈಸೂರಿನ ಹೆಚ್.ಡಿ.ಕೋಟೆ ಮೂಲದವರಾದ ಜಯರಾಂಗೆ ಗಾರೆ ಕೆಲಸ ಮಾಡುವಾಗ ಗುತ್ತಿಗೆದಾರರ ಪರಿಚಯವಾಗಿದೆ. ನಂತರ ಮುಡಾ ಅಧಿಕಾರಿಗಳ ಸಖ್ಯ ಬೆಳೆಸಿದ್ದಾರೆ. ಆಗಿನಿಂದ ಜಯರಾಂ ತಿರುಗಿ ನೋಡಿದ್ದೆ ಇಲ್ಲ. ನೋಡನೋಡುತ್ತಿದ್ದಂತೆ ಕೋಟಿ ಒಡೆಯರಾಗಿದ್ದಾರೆ. ಯಾವುದೇ ಶೇ.50:50 ಅನುಪಾತದ ನಿವೇಶನ ಮಾರಾಟ ವಹಿವಾಟಲ್ಲೂ ಜಯರಾಂ ಹೆಸರು ಕೇಳಿಬರುತ್ತಿದೆ. ಮುಡಾದ ಹಿಂದಿನ ಆಯುಕ್ತರಾದ ಡಾ.ನಟೇಶ್ ಹಾಗೂ ದಿನೇಶ್‌ಕುಮಾರ್ ಜೊತೆ ನಿಕಟ ಸಂಬಂಧ ಹೊಂದಿದ್ದ ಜಯರಾಂ, ಶೇ.50:50 ಅನುಪಾತದ ನಿವೇಶನ ಮಾರಾಟವನ್ನೇ ತನ್ನ ವ್ಯವಹಾರವನ್ನಾಗಿಸಿಕೊಂಡಿದ್ದರು ಎಂದು ಹೇಳಲಾಗುತ್ತಿದೆ. ಇದರ ಜಾಡು ಹಿಡಿದಿರುವ ಇಡಿ ಅಧಿಕಾರಿಗಳು ಈಗ ಜಯರಾಂ ಹಣಕಾಸು ವ್ಯವಹಾರವನ್ನು ಜಾಲಾಡುತ್ತಿದ್ದಾರೆ. ಆದರೆ ಜಯರಾಂ ಜೊತೆ ವ್ಯವಹಾರದ ಸಖ್ಯ ಬೆಳೆಸಿದ್ದ ಯಾವ ರಾಜಕಾರಣಿ ಹಾಗೂ ಅಧಿಕಾರಿಗಳ ಕೊರಳಿಗೆ ಈ ಹಗರಣ ಸುತ್ತಿಕೊಳ್ಳುವುದೋ ಕಾದು ನೋಡಬೇಕಿದೆ. ■ 6ನೇ ಪುಟಕ್ಕೆ

ಎಲ್ಲಾ ಪರೀಕ್ಷೆಗಳಿಗೆ ಆಧಾರ್ ಲಿಂಕ್ ಕಡ್ಡಾಯ; ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರಸ್ತಾವನೆ
(ಪೂರ್ಣ ವರದಿ ಪುಟ–9)

ಮುಡಾ ನಿವೇಶನ ಹಂಚಿಕೆ ಅಕ್ರಮದ ಶೋಧನೆ

ಮಾಜಿ ಆಯುಕ್ತ ಡಾ.ನಟೇಶ್ ಇಡಿ ವಶಕ್ಕೆ

- ಅಕ್ರಮಕ್ಕೂ ಸಮರ್ಥನೆ; ಮಾಡಿದ್ದೇ ಸರಿ ಎಂಬ ಹುಂಬತನ
- ಶಾಂತಿನಗರ ಇಡಿ ಕಚೇರಿಯಲ್ಲಿ ವಿಚಾರಣೆ
- ಮುಡಾ ಮತ್ತೋರ್ವ ಮಾಜಿ ಆಯುಕ್ತ ದಿನೇಶ್‌ಕುಮಾರ್ ನಾಪತ್ತೆ



ಡಾ.ಡಿ.ಬಿ.ನಟೇಶ್



ಬೆಂಗಳೂರು,ಅ.29– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ನಿವೇಶನ ಹಂಚಿಕೆ ಅಕ್ರಮ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಡಾ ಮಾಜಿ ಆಯುಕ್ತ ಡಾ.ಡಿ.ಬಿ.ನಟೇಶ್ ಅವರನ್ನು ಇಡಿ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ನಟೇಶ್ ಮನೆ ಮೇಲೆ ಸೋಮವಾರ ಇಡಿ ಅಧಿಕಾರಿಗಳು ದಾಳಿ ನಡೆಸಿ, ಅವರನ್ನು ವಿಚಾರಣೆಗೆ ಒಳಪಡಿಸಿದ್ದರು. ಆದರೆ ವಿಚಾರಣೆಗೆ ಸಹಕರಿಸುತ್ತಿಲ್ಲ ಎಂಬ ಕಾರಣದಿಂದ ನಟೇಶ್ ಅವರನ್ನು ಇಂದು ವಶಕ್ಕೆ ಪಡೆದು, ಶಾಂತಿನಗರದ ಇಡಿ ಕಚೇರಿಗೆ ಕರೆದೊಯ್ದಿದ್ದಾರೆ. ಅಲ್ಲಿಯೂ ಅಸಹಕಾರ ಮುಂದುವರೆಸಿದರೆ ಅವರನ್ನು ಬಂಧಿಸುವ ಸಾಧ್ಯತೆ ಇದೆ ಎನ್ನಲಾಗಿದೆ.

ನಟೇಶ್ ಮುಡಾ ಆಯುಕ್ತರಾಗಿದ್ದಾಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರಿಗೆ ನಿವೇಶನ ಮಂಜೂರಾಗಿತ್ತು. ಅಲ್ಲದೆ ಇವರು ಮುಡಾದಿಂದ 50:50 ಅನುಪಾತದಲ್ಲಿ 928 ನಿವೇಶನಗಳನ್ನು ಅಕ್ರಮ ಹಂಚಿಕೆ ಮಾಡಿದ್ದಾರೆಂಬ ಆರೋಪವೂ ಕೇಳಿಬಂದಿತ್ತು. ಈ ಹಿನ್ನೆಲೆಯಲ್ಲಿ ಬೆಂಗಳೂರಿನ ಮಲ್ಲೇಶ್ವರಂನಲ್ಲಿರುವ ನಟೇಶ್ ಮನೆ ಮೇಲೆ ದಾಳಿ ನಡೆಸಿದ್ದ ಇಡಿ ಅಧಿಕಾರಿಗಳು ಸತತ 33 ಗಂಟೆಗಳ ಕಾಲ ಪರಿಶೀಲನೆ ನಡೆಸಿ, ಎರಡು ಬ್ಯಾಗ್‌ನಲ್ಲಿ ದಾಖಲೆಗಳನ್ನು ವಶಕ್ಕೆ ಪಡೆದಿದ್ದಾರೆ. ಬಳಿಕ ನಟೇಶ್ ಅವರನ್ನು ವಿಚಾರಣೆಗೆ ಸಹಕರಿಸದ ಆರೋಪದ ಮೇಲೆ ವಶಕ್ಕೆ ಪಡೆದಿದ್ದಾರೆ ಎನ್ನಲಾಗಿದೆ. ಅವರನ್ನು ವಿಚಾರಣೆಗೆ ಒಳಪಡಿಸಿದಾಗ ನಾನು ಯಾವುದೇ ತಪ್ಪು ಮಾಡಿಲ್ಲ. ಸರ್ಕಾರದ ಆದೇಶ ಚಾಚೂ ತಪ್ಪದೇ ಪರಿಪಾಲಿಸಿದ್ದೇನೆ. ಕಾರ್ತಿಕ್ ಲೇಔಟ್ ನಿರ್ಮಾಣ ಸಂದರ್ಭದಲ್ಲಿ ಆದ ಬೆಳವಣಿಗೆ ■ 6ನೇ ಪುಟಕ್ಕೆ

ಯಾವ ರೈತರನ್ನೂ ಒಕ್ಕಲೆಬ್ಬಿಸಲ್ಲ...

ವಕ್ಫ್‌ಬೋರ್ಡ್ ನೀಡಿರುವ ನೋಟಿಸ್ ವಾಪಸ್ ಪಡೆಯುತ್ತೇವೆ...

- ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ
- ಗೊಂದಲದ ಬಗ್ಗೆ ಈಗಾಗಲೇ ಸಚಿವತ್ರಯರಿಂದ ಸ್ಪಷ್ಟನೆ

ಬೆಂಗಳೂರು, ಅ.29(ಕೆಎಂಶಿ)–ಯಾವ ರೈತರನ್ನೂ ಅವರ ಜಮೀನುಗಳಿಂದ ಒಕ್ಕಲೆಬ್ಬಿಸುವುದಿಲ್ಲ, ರೈತರಿಗೆ ನೀಡಿರುವ ವಕ್ಫ್ ಬೋರ್ಡ್ ನೋಟಿಸ್ ವಾಪಸ್ ಪಡೆಯಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.



ರಾಜ್ಯಾದ್ಯಂತ ವಿವಿಧ ಜಿಲ್ಲೆಗಳಲ್ಲಿ ರೈತರ ಜಮೀನುಗಳನ್ನು ವಕ್ಫ್ ಆಸ್ತಿ ಎಂಬುದಾಗಿ ಘೋಷಿಸಿ ನೋಟಿಸ್ ನೀಡಿರುವ ಕುರಿತು ಈಗಾಗಲೇ ಕಂದಾಯ ಸಚಿವ ಕೃಷ್ಣಬೈರೇಗೌಡ, ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್, ವಕ್ಫ್ ಸಚಿವ ಜಮೀರ್ ಅಹ್ಮದ್ ಸ್ಪಷ್ಟನೆ ನೀಡಿದ್ದಾರೆ ಎಂದರು. ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿಗೆ ತೀರ್ಮಾನಿಸಲಾಗಿದೆ, ಈ ಉದ್ದೇಶಕ್ಕೆ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ನೇತೃತ್ವದ ಏಕಸದಸ್ಯ ಆಯೋಗ ರಚಿಸಲು ತೀರ್ಮಾನಿಸಿದ್ದು, ಪರಾಮರ್ಶೆ ನಡೆಸಿ ವರದಿ ನೀಡಲು ಆಯೋಗಕ್ಕೆ ಮೂರು ತಿಂಗಳ ಕಾಲಾವಕಾಶ ನೀಡಲಾಗುವುದು. ವಿವಿಧ ಹುದ್ದೆಗಳ ನೇಮಕಾತಿಗೆ ಈಗಾಗಲೇ ಹೊರಡಿಸಿರುವ ಅಧಿಸೂಚನೆಗಳನ್ನು ಹೊರತುಪಡಿಸಿ, ಏಕಸದಸ್ಯ ಆಯೋಗದ ವರದಿ ಬರುವವರೆಗೆ ಉಳಿದ ಎಲ್ಲಾ ಸರ್ಕಾರಿ ನೇಮಕಾತಿಗಳಿಗೆ ಅಧಿಸೂಚನೆ ಹೊರಡಿಸುವುದಿಲ್ಲ ಎಂದರು.

ಒಳಮೀಸಲಾತಿ ಸಂಬಂಧ ಶೀಘ್ರ ಏಕಸದಸ್ಯ ಆಯೋಗ ರಚನೆ

3 ತಿಂಗಳಲ್ಲೇ ಜಾರಿಗೆ ಕ್ರಮ

ಬೆಂಗಳೂರು, ಅ.29– ಪರಿಶಿಷ್ಟ ಜಾತಿಗಳಲ್ಲಿ(ಎಸ್‌ಸಿ) ಒಳಮೀಸಲಾತಿ ಒದಗಿಸಲು ಪ್ರಾಯೋಗಿಕ ದತ್ತಾಂಶಗಳನ್ನು ಸಂಗ್ರಹಿಸಲು ಶೀಘ್ರದಲ್ಲೇ ಏಕಸದಸ್ಯ ಆಯೋಗವನ್ನು ರಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದ್ದಾರೆ. ನಿನ್ನೆ ನಡೆದ ಸಚಿವ ಸಂಪುಟದಲ್ಲಿ ಪರಿಶಿಷ್ಟ ಜಾತಿಗಳಿಗೆ ಒಳಮೀಸಲಾತಿ ನೀಡುವ ನಿರ್ಣಯವನ್ನು ಕೈಗೊಂಡಿದ್ದೇವೆ. ಮೀಸಲಾತಿಯ ಹಂಚಿಕೆ, ಸುಪ್ರೀಂ ಕೋರ್ಟ್‌ನ ಆದೇಶ ಪಾಲನೆ ಹಾಗೂ ಇನ್ನಿತರೆ ವಿಷಯಗಳಲ್ಲಿ ಸೂಕ್ತ ನಿರ್ಣಯಗಳನ್ನು ಕೈಗೊಳ್ಳಲು ಅನುಕೂಲವಾಗಲಿ ಎಂಬ ಉದ್ದೇಶದಿಂದ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದ ಏಕಸದಸ್ಯ ಆಯೋಗ ರಚನೆಗೆ ತೀರ್ಮಾನಿಸಲಾಗಿದೆ ಎಂದು ಸಿಎಂ ತಿಳಿಸಿದ್ದಾರೆ. ಇಂದು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ, ಈ ಆಯೋಗಕ್ಕೆ ವರದಿ ಸಲ್ಲಿಸಲು ಮೂರು ತಿಂಗಳ ಸಮಯ ನಿಗದಿಪಡಿಸಲಾಗಿದ್ದು, ವರದಿ ಸಲ್ಲಿಕೆಯಾಗುವವರೆಗೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ಹೊರಡಿಸಬಾರದು ■ 6ನೇ ಪುಟಕ್ಕೆ

ಮುಡಾ ನಿವೇಶನ ಹಂಚಿಕೆ ಹಗರಣ

ಸಿಎಂ ಸಿದ್ದರಾಮಯ್ಯ ಆಪ್ತ ರಾಕೇಶ್ ಪಾಪಣ್ಣ ಮನೆಯಲ್ಲಿ ಇಡಿ ಶೋಧನೆ–ಪರಿಶೀಲನೆ ಅಂತ್ಯ

ಸತತ ಎರಡು ದಿನ ಜಾಲಾಡಿದ ಅಧಿಕಾರಿಗಳು; ಹಲವು ದಾಖಲೆಗಳೊಂದಿಗೆ ವಾಪಸ್



ರಾಕೇಶ್



ಮೈಸೂರು, ಅ.29(ಆರ್‌ಕೆ)– ಮುಡಾ ನಿವೇಶನ ಹಂಚಿಕೆಯಲ್ಲಿನ ಹಗರಣ ಸಂಬಂಧ ಹಿನಕಲ್‌ನ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರೂ ಆದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತ ರಾಕೇಶ್ ಪಾಪಣ್ಣ ಅವರ ಮನೆ ಮೇಲೆ ದಾಳಿ ನಡೆಸಿದ್ದ ಜಾರಿ ನಿರ್ದೇಶನಾಲಯ(ಇಡಿ)ದ ಅಧಿಕಾರಿಗಳು, ಎರಡು ದಿನಗಳ ಶೋಧನೆ–ಪರಿಶೀಲನೆ ನಂತರ ಹಲವು ದಾಖಲೆಗಳೊಂದಿಗೆ ಇಂದು ರಾತ್ರಿ ವಾಪಸ್ಸಾದರು.

ಸೋಮವಾರ ಬೆಳಗ್ಗೆ 7.30ರ ಸುಮಾರಿಗೆ ದಾಳಿ ನಡೆಸಿದ್ದ ಐದಾರು ಇಡಿ ಅಧಿಕಾರಿಗಳ ತಂಡ, ರಾತ್ರಿ ಬಹುಹೊತ್ತಿನವರೆಗೂ ದಾಖಲೆಗಳ ಶೋಧನೆ ಹಾಗೂ ಪರಿಶೀಲನೆ ನಡೆಸಿತ್ತು. ರಾತ್ರಿಯೂ ಅವರ ಮನೆಯಲ್ಲೇ ಇಡಿಯ ಭದ್ರತಾ ಸಿಬ್ಬಂದಿ ಬಿಡಾರ ಹೂಡಿದ್ದರು. ಎರಡನೇ ದಿನವಾದ ಇಂದು ಬೆಳಗ್ಗೆ 6.30ರಿಂದಲೇ ಶೋಧ ಕಾರ್ಯವನ್ನು ಮುಂದುವರೆಸಿ, ಸಂಜೆ 6 ಗಂಟೆ ಸುಮಾರಿಗೆ ಹಲವು ■ 6ನೇ ಪುಟಕ್ಕೆ



ಮೈಸೂರಿನ ಹಿನಕಲ್‌ನಲ್ಲಿರುವ ರಾಕೇಶ್ ಪಾಪಣ್ಣ ಮನೆ

ನ.1ರಂದು ವಿಶೇಷ 'ಸ್ವಾತಿ' ಪೂಜೆ

ಮೈಸೂರು,ಅ.29–ಮೈಸೂರಿನ ಕಾಳಿದಾಸ ರಸ್ತೆಯಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ನ.1ರಂದು ಶುಕ್ರವಾರ 'ಸ್ವಾತಿ' ನಕ್ಷತ್ರದ ಪ್ರಯುಕ್ತ ವಿಶೇಷ ಪೂಜೆ ಆಯೋಜಿಸಲಾಗಿದೆ.

ಅಂದು ಬೆಳಿಗ್ಗೆ 8ಕ್ಕೆ ಸಂಕಲ್ಪ, 9ಕ್ಕೆ ಅಭಿಷೇಕ, 10.30ಕ್ಕೆ ಅಲಂಕಾರ, 11.30ಕ್ಕೆ ಮಹಾ ಮಂಗಳಾರತಿ, ಮಧ್ಯಾಹ್ನ 12.30ಕ್ಕೆ ಶಾತ್ತುಮೊರೈ, 1 ಗಂಟೆಗೆ ತೀರ್ಥ ಪ್ರಸಾದ ವಿನಿಯೋಗವನ್ನು ಏರ್ಪಡಿಸಲಾಗಿದೆ. ಸಂಜೆ 7.30ಕ್ಕೆ ಪ್ರಾಕಾರೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಮುಖ್ಯಸ್ಥ ವಿದ್ವಾನ್ ಕೆ.ಆರ್. ಯೋಗಾನರಸಿಂಹನ್ (ಮುರಳಿ ಅಯ್ಯಂಗಾರ್) ತಿಳಿಸಿದ್ದಾರೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಕೋರಿದ್ದಾರೆ. ಮಾಹಿತಿಗೆ ಮೊಬೈಲ್ 9342188323, 7598832271 ಸಂಪರ್ಕಿಸಬಹುದು.

ಅಲೋಕ್ ಆರ್.ಜೈನ್‌ಗೆ ಪುನೀತ್ ರಾಜರತ್ನ ಪ್ರಶಸ್ತಿ ಪ್ರದಾನ



ಪುನೀತ್ ರಾಜಕುಮಾರ್ ಅಭಿಮಾನಿ ಬಳಗ ಹಾಗೂ ಮಲೆ ಮಹದೇಶ್ವರ ಸೇವಾ ಸಂಸ್ಥೆ ವತಿಯಿಂದ ಪವರ್ ಸ್ಟಾರ್ ಪುನೀತ್ ರಾಜಕುಮಾರ್ 3ನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ಕ್ರೀಡಾ ಕ್ಷೇತ್ರದಿಂದ ವಿಕಲಚೇತನ ಸ್ನೂಕರ್ ಹಾಗೂ ಪಂಜ ಕುಸ್ತಿಪಟು ಸಿದ್ದಾರ್ಥ ಲೇಔಟ್ ನಿವಾಸಿ ಅಲೋಕ್ ಆರ್.ಜೈನ್ ಅವರಿಗೆ ಶಾಸಕ ಹರೀಶ್‌ಗೌಡ ಪುನೀತ್ ರಾಜರತ್ನ ಪ್ರಶಸ್ತಿ ನೀಡಿ ಗೌರವಿಸಿದರು. ಪಾಲಿಕೆ ಮಾಜಿ ಸದಸ್ಯರಾದ ಗೋಪಿ, ಮೋಹನ್‌ಕುಮಾರ್, ಮಹಾನ್ ಶ್ರೇಯಸ್, ಲೋಕೇಶ್, ನಿತಿನ್, ಚಂದ್ರು, ಲಕ್ಕೇಗೌಡ ಇನ್ನಿತರರು ಈ ವೇಳೆ ಹಾಜರಿದ್ದರು.

ಶೂಟಿಂಗ್: ರಾಜ್ಯ ಮಟ್ಟಕ್ಕೆ ಆಯ್ಕೆ



ಮೈಸೂರು,ಅ.29–ಇತ್ತೀಚೆಗೆ ನಡೆದ ಗೋವಾ ಮುಕ್ತ ಶೂಟಿಂಗ್ ಚಾಂಪಿಯನ್ ಶಿಪ್ ಮತ್ತು ದಕ್ಷಿಣ ವಲಯ ಶೂಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಮೈಸೂರಿನ ಸ್ಪರ್ಧಿಗಳು ಪದಕ ಗಳಿಸಿ, ರಾಷ್ಟ್ರೀಯ ಶೂಟಿಂಗ್ ಚಾಂಪಿಯನ್‌ಶಿಪ್‌ಗೆ ಆಯ್ಕೆಯಾದರು. ಮೈಸೂರು ವಿವಿ ರಾಜ್ಯಶಾಸ್ತ್ರ ವಿಭಾಗದ ಎಂ.ಎಲ್. ಚೈತ್ರಾ 10 ಮೀ. ಏರ್ ಪಿಸ್ತೂಲ್ ವಿಭಾಗದಲ್ಲಿ ಚಿನ್ನದ ಪದಕ, 10 ಮೀ. ಏರ್ ಪಿಸ್ತೂಲ್ ವಿಭಾಗದಲ್ಲಿ ಎ.ಬಿ.ಮಂಜುನಾಥೇಶ್ವರಿ ಕಂಚು ಮತ್ತು ಬಿಇಎಂಎಲ್ ಡಿಜಿಎಂಎಂಎಸ್ ನಾಗೇಂದ್ರ ಅವರು 50 ಮೀ. ಫ್ರೀ ಪಿಸ್ತೂಲ್ ವಿಭಾಗದಲ್ಲಿ ಬೆಳ್ಳಿ ಪದಕ ಪಡೆದರು. ಇವರನ್ನು ರಾಷ್ಟ್ರೀಯ ತಂಡದ ಮುಖ್ಯ ತರಬೇತುದಾರರಾದ ಕೆ.ಶಂಕರ್ ಶೆಟ್ಟಿ, ಎಂ.ಸತೀಶ್ ಮತ್ತು ಸುರೇಶ್ ಅಭಿನಂದಿಸಿದ್ದಾರೆ.

ರಾಜ್ಯಮಟ್ಟದ ಕುಸ್ತಿ ಪಂದ್ಯಾವಳಿ



ಶಾಲಾ ಸಾಕ್ಷರತಾ ಇಲಾಖೆ ವತಿಯಿಂದ ಕನಕ ಪುರದ ತಾಲೂಕು ಕ್ರೀಡಾಂಗಣದಲ್ಲಿ ನಡೆದ ರಾಜ್ಯ ಮಟ್ಟದ ಕುಸ್ತಿ ಪಂದ್ಯಾವಳಿಯಲ್ಲಿ ಮೈಸೂರಿನ ಜೆಎಸ್‌ಎಸ್ ಪ್ರೌಢಶಾಲೆ ಲಕ್ಷ್ಮೀಪುರಂನ ವಿದ್ಯಾರ್ಥಿ ಜ್ಞಾನೇಶ್ ಬಿ. ಸಾಯಿ 60 ಕೆ.ಜಿ. ವಿಭಾಗದ ಗ್ರೀಕೋ ರೋಮನ್‌ನಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ. ಈತನನ್ನು ಶಾಲೆ ಮುಖ್ಯ ಶಿಕ್ಷಕ ಎಸ್.ಎನ್. ನಾಗೇಂದ್ರಪ್ರಸಾದ್, ದೈಹಿಕ ಶಿಕ್ಷಣ ಶಿಕ್ಷಕ ರವಿ ಮತ್ತು ಶಾಲಾ ವೃಂದದವರು ಅಭಿನಂದಿಸಿದ್ದಾರೆ.

ಕ್ಯಾಂಟರ್ ಡಿಕ್ಕಿ; ದ್ವಿಚಕ್ರ ವಾಹನ ಸವಾರ ಸಾವು



ಮೈಸೂರು, ಅ.29(ಪಿಎಂ)– ಕ್ಯಾಂಟರ್ ಡಿಕ್ಕಿ ಹೊಡೆದ ಪರಿಣಾಮ ದ್ವಿಚಕ್ರ ವಾಹನ ಸವಾರ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಮೈಸೂರು–ಟಿ.ನರಸೀಪುರ ರಸ್ತೆಯ ವರಕೋಡು ಗೇಟ್‌ನಲ್ಲಿ ಮಂಗಳವಾರ ಸಂಜೆ ನಡೆದಿದೆ.

ನಾಡನಹಳ್ಳಿ ಗ್ರಾಮದ ಮಹದೇವ (50) ಮೃತಪಟ್ಟವರು. ಚಟ್ನಹಳ್ಳಿಯಲ್ಲಿದ್ದ ತಮ್ಮ ಜಮೀನಿಗೆ ಹೋಗಿ ನಾಡನಹಳ್ಳಿಗೆ ಮರಳುತ್ತಿದ್ದ ಮಹದೇವ ಅವರ ಟಿವಿಎಸ್ ಮೊಪೆಡ್‌ಗೆ (ಕೆಎ 09, ಇಬಿ 7203) ಎದುರಿಂದ ಬಂದ ಕ್ಯಾಂಟರ್ (ಕೆಎ 17, ಎ–9864) ಡಿಕ್ಕಿ ಹೊಡೆದಿದೆ. ಪರಿಣಾಮ ಮಹದೇವ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಸ್ಥಳಕ್ಕೆ ಬಂದ ವರುಣ ಪೊಲೀಸರು, ಕ್ರಮ ಜರುಗಿಸಿದ್ದು, ಮೈಸೂರು ವೈದ್ಯಕೀಯ ಕಾಲೇಜಿನ ಶವಾಗಾರದಲ್ಲಿ ಮೃತದೇಹ ಇರಿಸಲಾಗಿದೆ. ನಾಳೆ ಮರಣೋತ್ತರ ಪರೀಕ್ಷೆ ನಂತರ ಮೃತದೇಹವನ್ನು ವಾರಸುದಾರರಿಗೆ ಒಪ್ಪಿಸುವುದಾಗಿ ವರುಣ ಠಾಣೆ ಪೊಲೀಸರು ಮಾಹಿತಿ ನೀಡಿದರು.

ನಿಧನ

ಆನಂದ ಕೃಷ್ಣಪ್ಪ



ಮೈಸೂರು, ಅ.29–ಮೈಸೂರಿನ ಆಲನಹಳ್ಳಿ ಬಡಾವಣೆ ನಿವಾಸಿ ಆನಂದ ಕೃಷ್ಣಪ್ಪ (94) ಶುಕ್ರವಾರ ನಿಧನರಾದರು. ಮೂಲತಃ ಗುಂಡ್ಲುಪೇಟೆ ತಾಲೂಕಿನ ರಾಘವಾಪುರದವರಾದ ಇವರು ಪತ್ನಿ, ಮೂವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ಅದೇ ದಿನ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಹೆಚ್.ಎ.ಅಮರ್‌ನಾಥ್



ಮೈಸೂರು ದಟ್ಟಗಳ್ಳಿ ನಿವಾಸಿ ಹೆಚ್.ಎ.ಅಮರ್‌ನಾಥ್ (46) ಇಂದು ಮುಂಜಾನೆ ನಿಧನರಾದರು. ಇವರು ರಾಮಸ್ವಾಮಿ ಸರ್ಕಲ್‌ನಲ್ಲಿರುವ ಆಕ್ಸ್‌ಫರ್ಡ್ ಸ್ಟೇಷನರಿ, ಶೂ ವರ್ಲ್ಡ್ ಮತ್ತು ಪ್ರೆಸ್ಟೀಜ್ ಶಾಪಿಂಗ್ ಆರ್ಕೇಡ್‌ನ ಮಾಲೀಕರಾಗಿದ್ದರು. ಮೃತರು ತಂದೆ ಟಿ.ಆರ್.ಅನಂತಶೆಟ್ಟಿ, ತಾಯಿ ಕನಕಲಕ್ಷ್ಮಿ, ಪತ್ನಿ ಶ್ವೇತಾದೇವಿ, ಪುತ್ರಿ ಶರಣ್ಯ, ಕಿರಿಯ ಸಹೋದರ ರವಿಚಂದ್ರ ಹಾಗೂ ಅಪಾರ ಬಂಧು–ಮಿತ್ರರನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಇಂದು ಸಂಜೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಉದ್ಯಮಿ ಸಿ.ಎ.ದಿಲ್ದಾರ್



ಮೈಸೂರು, ಅ.29– ಕೊಡಗು ಜಿಲ್ಲೆ ವಿರಾಜಪೇಟೆಯ ಬಾದ್‌ಶಾ ಸ್ಟೋರ್ಸ್‌ನ ಮಾಲೀಕ ಸಿ.ಎ.ದಿಲ್ದಾರ್ (83) ಮಂಗಳವಾರ ಬೆಂಗಳೂರಿನ ತಮ್ಮ ನಿವಾಸದಲ್ಲಿ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಬೆಂಗಳೂರಿನ ಶಾಂತಿನಗರದಲ್ಲಿರುವ ಮಸೀದ್ ಇ ಬಿಲಾಲ್‌ನಲ್ಲಿ ಮಂಗಳವಾರ ಪ್ರಾರ್ಥನೆ ನಂತರ ಸಂಜೆ ಮೃತರ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರೋಬೋಟ್, ಚಾಟ್ ಜಿಪಿಟಿಯಿಂದ ಜನರ ಉದ್ಯೋಗಕ್ಕೆ ಕುತ್ತು

■ ಧಾರವಾಡ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಮುಖ್ಯಸ್ಥ ಪ್ರೊ.ಶಿವಪ್ರಸಾದ್ ಆತಂಕ ■ ವಿದೇಶಿ ತಂತ್ರಜ್ಞಾನದಿಂದ ನಾವು ಬಿಳಿಕೋಟು ಧರಿಸಿದ ಗುಲಾಮರು



ಮೈಸೂರಿನ ಬನ್ನಿಮಂಟಪದಲ್ಲಿರುವ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಮತ್ತು ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಅಲೈಡ್ ಹೆಲ್ತ್ ಸೈನ್ಸ್ ವಿಭಾಗದ ವಿದ್ಯಾರ್ಥಿಗಳ ಪದವಿ ಪ್ರದಾನ ಸಮಾರಂಭದಲ್ಲಿ ಮಂಗಳವಾರ ಪ್ರತಿಭಾನ್ವಿತ ವಿದ್ಯಾರ್ಥಿಗಳು ಚಿನ್ನದ ಪದಕ ಮತ್ತು ಮೆರಿಟೋರಿಯಸ್ ಪ್ರಮಾಣಪತ್ರ ಸ್ವೀಕರಿಸಿದರು.

ಮೈಸೂರು,ಅ.29(ಜಿಎ)– ರೋಬೋಟ್, ಚಾಟ್ ಜಿಪಿಟಿ ಅಭಿವೃದ್ಧಿಗೊಂಡು ಬಳಕೆಯಲ್ಲಿದ್ದು, ಮುಂದಿನ 15 ವರ್ಷಗಳಲ್ಲಿ ಇವು ಪ್ರಮುಖ ಕ್ಷೇತ್ರಗಳನ್ನು ಆವರಿಸಲಿದೆ. ಇದರಿಂದ ಅನೇಕ ಜನರು ಕೆಲಸ ಕಳೆದುಕೊಳ್ಳುವ ಸಾಧ್ಯತೆಯಿದೆ ಎಂದು ಧಾರವಾಡ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಮುಖ್ಯಸ್ಥ ಪ್ರೊ.ಎಸ್.ಎಂ.ಶಿವಪ್ರಸಾದ್ ಆತಂಕ ವ್ಯಕ್ತಪಡಿಸಿದರು.

ಮೈಸೂರಿನ ಬನ್ನಿಮಂಟಪದಲ್ಲಿರುವ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಮತ್ತು ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಅಲೈಡ್ ಹೆಲ್ತ್ ಸೈನ್ಸ್ ವಿಭಾಗದ ವಿದ್ಯಾರ್ಥಿಗಳ ಪದವಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ವಿದೇಶಿ ತಂತ್ರಜ್ಞಾನ ಅವಲಂಬನೆ ಮುಂದುವರೆದರೆ ನಾವು ಬಿಳಿ ಕೋಟ್ ಧರಿಸಿದ ಗುಲಾಮರಾಗಿ ಇರಬೇಕಾಗುತ್ತದೆ. ಯುವ ಸಮೂಹ ಹೊಸ ಆವಿಷ್ಕಾರದ ಮೂಲಕ ಬದಲಾವಣೆ ತರಬೇಕು ಎಂದು ಸಲಹೆ ನೀಡಿದರು.

ನಾವು ಬಳಸುತ್ತಿರುವ ಗೂಗಲ್, ಚಾಟ್ ಜಿಪಿಟಿ ಹೀಗೆ ಹಲವು ತಂತ್ರಜ್ಞಾನ ವಿದೇಶಿಗರ ನಿಯಂತ್ರಣದಲ್ಲಿವೆ. ಅದಕ್ಕೆ ಸದ್ಯ ಹೊಡೆಯಬಲ್ಲ ಅನ್ವೇಷಣೆಗಳು ಭಾರತದಲ್ಲಿ ನಡೆಯಬೇಕಿದೆ. ನಾವು ಬದುಕಬೇಕಾದರೆ ದಿದ್ದರೆ ಯಂತ್ರಗಳ ಅಡಿಯಾಳುಗಳಾಗಿಯೇ ಉಳಿಯಬೇಕಾಗುತ್ತದೆ. ಮುಂದಿನ ದಿನಗಳಲ್ಲಿ ಎಂಜಿನಿಯರ್, ವೈದ್ಯಕೀಯ ಹಾಗೂ ಸಮಾಜದ ಎಲ್ಲಾ ಪ್ರಮುಖ ಹುದ್ದೆಗಳು ವಿಜ್ಞಾನದ ಮುಂದೆ ಗೌಣವಾಗುತ್ತದೆ. ಪದವಿಯ ಅನುಭವದೊಂದಿಗೆ ಹೊಸ ಅಧ್ಯಾಯಕ್ಕೆ ತೆರಳುವ ಮುನ್ನ ಈ ಕುರಿತ ಅರಿವು ನಮ್ಮಲ್ಲಿ ಅಗತ್ಯ ಎಂದು ಹೇಳಿದರು.

ಪ್ರಸ್ತುತ ಸಮಾಜ ವೇಗ ಹಾಗೂ ಸ್ಥಿರತೆಯನ್ನು ಬೇಡುತ್ತದೆ. ಹಿರಿಯರ ಕಾಲದ ಜ್ಞಾನ ಸಾಕಾಗುವುದಿಲ್ಲ. ನಾವು ಅನ್ವೇಷಿಸುವ ಹೊಸ ವಿಚಾರವೇ ನಮ್ಮ ಸ್ಥಾನಮಾನವನ್ನು ನಿರ್ಧರಿಸುತ್ತದೆ. ಇಂದಿನ ಶಿಕ್ಷಣ ವ್ಯವಸ್ಥೆ ಪದವಿಯನ್ನಷ್ಟೇ ನೀಡುತ್ತದೆ. ಯಾವ ಕ್ಷಣಕ್ಕೆ, ಹೇಗೆ ಸಿದ್ಧರಾಗಿರಬೇಕೆಂಬುದನ್ನು ತಿಳಿಸುತ್ತಿಲ್ಲ. ಮುಂದಿನ ಪೀಳಿಗೆ ಈ ತಪ್ಪನ್ನು ಮಾಡಬಾರದು ಎಂದು ತಿಳಿಸಿದರು.

ತಂತ್ರಜ್ಞಾನ ಕ್ಷಿಪ್ರಗತಿಯಲ್ಲಿ ಬೆಳವಣಿಗೆಯಾಗುತ್ತಿದೆ. ನ್ಯಾನೋ ಹಾಗೂ ಬಯೋ ಟೆಕ್ನಾಲಜಿ, ಕೃತಕ ಬುದ್ಧಿಮತ್ತೆಯು ಜೊತೆಯಾಗಿ ಸಾಗುತ್ತಿರುವ ಕಾಲದಲ್ಲಿ ನಾವು ಬದುಕುತ್ತಿದ್ದೇವೆ. ರೋಬೋಟ್, ಚಾಟ್ ಜಿಪಿಟಿ ಅಭಿವೃದ್ಧಿಗೊಂಡು ಬಳಕೆಯಲ್ಲಿದ್ದು, ಅವು ಮುಂದಿನ 15 ವರ್ಷಗಳಲ್ಲಿ ಪ್ರಮುಖ ಕ್ಷೇತ್ರಗಳನ್ನು ಆವರಿಸಲಿದೆ. ಇದರಿಂದ ಅನೇಕ ಜನರು ಕೆಲಸ ಕಳೆದುಕೊಳ್ಳುವ ಸಾಧ್ಯತೆಯಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಈ ಹೊಸ ತಂತ್ರಜ್ಞಾನಗಳ ಆತಂಕದ ನಡುವೆಯೂ ಮಾನವ ಶಕ್ತಿಯನ್ನು ಉತ್ತೇಜಿಸಲು ಸಹಾಯಕವಾಗಿದೆ. ಚಾಟ್ ಜಿಪಿಟಿಗಳ ಜ್ಞಾನವನ್ನೂ ಮೀರುವ ಜ್ಞಾನ ಸಂಪತ್ತು ನಮ್ಮದಾಗಬೇಕಿದೆ. ಶಿಕ್ಷಣ ವ್ಯವಸ್ಥೆಯಲ್ಲಿ ಯಾಂತ್ರಿಕೃತ ಬೋಧನಾ ವಿಧಾನದ ಬದಲಾಗಿ ಎಲ್ಲರ ಹೃದಯ ಮುಟ್ಟುವ ವಿಷಯದ ಬಗ್ಗೆ ಕೇಂದ್ರೀಕರಿಸಿದರೆ ಉದ್ಯೋಗದಲ್ಲಿ ಬೆಳೆಯಲು ಸಾಧ್ಯ. ಮೂರು ತಂತ್ರಜ್ಞಾನಗಳ ಸಂಗಮವಾಗಿರುವ ಕಾಲದಲ್ಲಿ ಅವನ್ನು ಧನಾತ್ಮಕವಾಗಿ ತೆಗೆದುಕೊಂಡು ಹೊಸ ಬದಲಾವಣೆಯ ಬಗ್ಗೆ ಯುವ ಸಮೂಹ ಚಿಂತಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಒಟ್ಟು 321 ವಿದ್ಯಾರ್ಥಿಗಳು 151 ಪದವಿ ಮತ್ತು 170 ಸ್ನಾತಕೋತ್ತರ ವಿದ್ಯಾರ್ಥಿಗಳು ಪ್ರಮಾಣಪತ್ರ ಸ್ವೀಕರಿಸಿದ್ದಾರೆ.

ಇವರಲ್ಲಿ 23 ಪ್ರತಿಭಾನ್ವಿತ ವಿದ್ಯಾರ್ಥಿಗಳು ಚಿನ್ನದ ಪದಕ ಮತ್ತು ಮೆರಿಟೋರಿಯಸ್ ಪ್ರಮಾಣ ಪತ್ರ ಸ್ವೀಕರಿಸಿದರು. ಈ ವೇಳೆ ಸಂಸ್ಥೆಯ ಕಾರ್ಯನಿರ್ವಾಹಕ ಸಂಚಾಲಕ ಡಾ.ಸಿ.ಜಿ.ಬೆಟಸೂರ್ ಮಠ್, ಕುಲಪತಿ ಡಾ.ಸುರೀಂದರ್ ಸಿಂಗ್, ಕುಲಸಚಿವ ಡಾ.ಬಿ.ಮಂಜುನಾಥ್, ಡೀನ್ ಡಾ.ಎಂ.ಎನ್.ಸುಮಾ, ಪ್ರಾಂಶುಪಾಲ ಡಾ.ಎಚ್. ಬಸವಣ್ಣಗೌಡಪ್ಪ, ಉಪಪ್ರಾಂಶುಪಾಲ ಡಾ.ಪ್ರವೀಣ್ ಕುಲಕರ್ಣಿ, ವಿಶಾಲ್‌ಕುಮಾರ್ ಗುಪ್ತ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕತ್ತಿವರಸೆ ಪಂದ್ಯಾವಳಿ...



2024–25ನೇ ಸಾಲಿನ ಅಖಿಲ ಭಾರತ ಅಂತರ ವಿವಿ ಕತ್ತಿವರಸೆ ಪುರುಷರ ಪಂದ್ಯಾವಳಿ ನ.6ರಿಂದ 10ರವರೆಗೆ ಜಮ್ಮು ವಿಶ್ವವಿದ್ಯಾನಿಲಯದಲ್ಲಿ ನಡೆಯಲಿದೆ. ಸದರಿ ಪಂದ್ಯಾವಳಿಗೆ ಮೈಸೂರು ವಿಶ್ವವಿದ್ಯಾನಿಲಯದ ಕತ್ತಿವರಸೆ ಪುರುಷರ ತಂಡ ಭಾಗವಹಿಸಲಿದೆ. ಚಿತ್ರದಲ್ಲಿ (ನಿಂತಿರುವವರು: ಎಡದಿಂದ ಬಲ) ಧನುಷ್, ಅರ್ಜುನ್, ರಾಜೇಂದ್ರ, ಶ್ರೀಸೂರ್ಯ (ಕುಳಿತಿರುವವರು): ಪ್ರವೀಣ್‌ಕುಮಾರ್ (ನಾಯಕ), ಡಾ.ಕಿರಣ್‌ರಾವತ್ (ವ್ಯವಸ್ಥಾಪಕರು), ಡಾ.ಸಿ.ವೆಂಕಟೇಶ್, ನಿರ್ದೇಶಕರು, ಡಾ.ಶ್ರೀನಿವಾಸ್ ಅವರನ್ನು ಕಾಣಬಹುದು.


ಅಂಬಳೆ ಶಿವಣ್ಣನವರಿಗೆ ಸನ್ಮಾನ...



ರಾಜ್ಯ ಶಿವಾರ್ಚಕರ ಸಂಘದ ನೂತನ ಗೌರವಾಧ್ಯಕ್ಷ ಅಂಬಳೆ ಶಿವಣ್ಣ ಅವರನ್ನು ಶಾಸಕ ಟಿ.ಎಸ್.ಶ್ರೀವತ್ಸ ಸನ್ಮಾನಿಸಿದರು. ಕನ್ನಡ ಸಾಹಿತ್ಯ ಕಲಾಕೂಟ ಅಧ್ಯಕ್ಷ ಎಂ.ಚಂದ್ರಶೇಖರ್, ಬಸವ ಬಳಗ ಚಾಮುಂಡಿಪುರಂ ಸಂಘದ ಅಧ್ಯಕ್ಷ ಸಿ.ಸಂದೀಪ್, ಮುಖಂಡರಾದ ಜೋಗಿ ಮಂಜು, ಪಾಪಣ್ಣ, ಅಹಮದ್, ಅಜಯ್‌ಶಾಸ್ತ್ರಿ, ನಾಗೇಂದ್ರ, ವೆಂಕಟೇಶ್, ಸಂತೋಷ್, ಮಹೇಶ್, ನಾಗರಾಜ್, ಗುರುಸ್ವಾಮಿ ಮತ್ತಿತರರಿದ್ದಾರೆ.

ಮಕ್ಕಳಿಗೆ ಶಾಲೆಗಳು ಅಕ್ಷರದ ಜೊತೆಗೆ ಸಂಸ್ಕಾರ ನೀಡುವಂತಾಗಬೇಕು

ಮಕ್ಕಳ ಸಾಂಸ್ಕೃತಿಕ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿದ ಕವಿ ಡಾ.ಜಯಪ್ಪ ಹೊನ್ನಾಳಿ ಅಭಿಮತ



ಅಕ್ಷರ ದಾಸೋಹ ಯೋಜನೆ ಸಹಾಯಕ ನಿರ್ದೇಶಕ ಬಿ.ಸೋಮಶೇಖರ್, ಡಿ.ಎಂ.ಪಾಳ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕಿ ಹೆಚ್.ಸಿ.ಸುಬ್ಬಲಕ್ಷ್ಮಿ ಅವರನ್ನು ಸನ್ಮಾನಿಸಲಾಯಿತು.


ಮೈಸೂರು, ಅ.29–ಇಂದಿನ ವಿದ್ಯಾರ್ಥಿಗಳಿಗೆ 'ಮಾರ್ಕ್ಸ್‌ಗಿಂತ ರಿಮಾರ್ಕ್ಸ್ ಇಲ್ಲದ ಜೀವನ ಬಹು ಮುಖ್ಯವಾದುದು ಅಕ್ಷರಕ್ಕಿಂತ ಮುಖ್ಯವಾದದ್ದು ಸಂಸ್ಕಾರವೆಂದೂ ಹೇಳಬೇಕಾದ ಪರಿಸ್ಥಿತಿ ಎದುರಾಗಿದ್ದು, ಇದನ್ನು ಶಾಲೆಗಳು ಪ್ರಾಮಾಣಿಕವಾಗಿ ಮಾಡಬೇಕಾಗಿದೆ. ಇಲ್ಲದಿದ್ದರೆ ಶಾಲೆಗಳಲ್ಲಿ ಹೃದಯವಂತ ಮಕ್ಕಳು ನಿರ್ಮಾಣವಾಗದೇ ಉಸಿರಾಡುವ ಕಂಪ್ಯೂಟರ್‌ಗಳು ನಿರ್ಮಾಣವಾಗುತ್ತವೆ. ಹೃದಯಹೀನವಾದ ಅವುಗಳಿಂದ ಮಾನವೀಯವಾದ ಭಾರತವನ್ನು ಕಟ್ಟಲಾಗದು ಎಂದು ಖ್ಯಾತ ಕವಿ ಡಾ.ಜಯಪ್ಪ ಹೊನ್ನಾಳಿ ಅಭಿಪ್ರಾಯಿಸಿದರು.

ಮೈಸೂರಿನ ವಿಜಯನಗರದ ಡಿಎಸ್‌ಎಂ ವಿದ್ಯಾಸಂಸ್ಥೆಯ ಶ್ರೀ ಸಿದ್ದೇಶ್ವರ ಪ್ರೌಢಶಾಲೆಯಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತು ಆಯೋಜಿಸಿದ್ದ ಮಕ್ಕಳ ಸಾಂಸ್ಕೃತಿಕ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದಿನ ಸಮಾಜದಲ್ಲಿ ಹಣ ಮಾಲೀಕನಾಗಿ, ಗುಣ ಗುಲಾಮನಾಗಿರುವ ದುಃಸ್ಥಿತಿ ಬಂದಿದೆ. ಇದೇ ಸ್ಥಿತಿ ಮುಂದುವರೆದು, ಅಮಾನವೀಯವಾದ ಚಟುವಟಿಕೆಗಳು ಸಮುದಾಯದಲ್ಲಿ ಹೆಚ್ಚಾಗಬಾರದೆಂದರೆ, ನಮ್ಮ ಮಕ್ಕಳು ಫೇಸ್ ಬುಕ್, ಪಾಸ್ ಬುಕ್, ಚೆಕ್ ಬುಕ್‌ಗಳ ಅಸಹ್ಯ ಸಹವಾಸದಿಂದ ದೂರವಾಗಿ, ನಮ್ಮ ಸುಸಂಸ್ಕೃತಿ ಕಲಿಸುವ ಶಾಲಾ ಬುಕ್‌ಗಳಿಗೆ ಹತ್ತಿರವಾಗಬೇಕಿದೆ. ಅಕ್ಷರಗಳೊಂದಿಗೆ ಶಾಲೆಗಳು ಮಕ್ಕಳಿಗೆ ಮಾನವೀಯ ಮೌಲ್ಯಗಳನ್ನು ತಿಳಿಸಿ, ಮನುಷ್ಯತ್ವದ ಸಂಸ್ಕಾರವನ್ನೂ ಮಕ್ಕಳಿಗೆ ನೀಡಬೇಕಿದೆ. ಅವರು ಮುಂದೆ ಏನಾದರಾಗಲೀ, ಅದಕ್ಕೂ ಮೊದಲು ಅವರನ್ನು ಮಾನವರನ್ನಾಗಿ ಮಾಡಬೇಕಿದೆ ಎಂದು ತಿಳಿಸಿದರು.

ಕೃಷಿಯನ್ನೇ ನಂಬಿ ಬದುಕುತ್ತಿರುವ ಈ ನೆಲದ ಕೃಷಿಕನ ಮಗನೀಗ 'ಹುಯ್ಯೋ ಹುಯ್ಯೋ ಮಳೆರಾಯ, ಅಕ್ಕನ ತೋಟಕ್ಕೆ ನೀರಿಲ್ಲಾ' ಹಾಡುವ ಬದಲು, 'ರೇನ್ ರೇನ್ ಗೋ ಅವೇ' ಹಾಡುತ್ತಿರುವುದು ದೌರ್ಭಾಗ್ಯದ ವಿಚಾರ. 'ಆಚಾರಕ್ಕರಸಾಗು ನೀತಿಗೆ ಪ್ರಭುವಾಗು ಮಾತಿನಲಿ ಚೂಡಾಮಣಿಯಾಗು ನನಕಂದ ಜ್ಯೋತಿಯೇ ಆಗು ಜಗಕ್ಕೆಲ್ಲ' ಎನ್ನುತ್ತಿದ್ದ ಒಕ್ಕಲುಗಿತ್ತಿಯೀಗ ಆಂಗ್ಲದ ಆ ಹಾಡು ಕೇಳಿ ಅರ್ಥವಾಗದಿದ್ದರೂ ಆನಂದಿಸುತ್ತಿರುವುದು ವಿಷಾದನೀಯ ವಿಚಾರ ಎಂದರು.

ಇದೇ ಸಂದರ್ಭದಲ್ಲಿ ಸಾಧಕರಾದ ನಂಜನಗೂಡು ತಾಲೂಕಿನ ಅಕ್ಷರ ದಾಸೋಹ ಯೋಜನೆ ಸಹಾಯಕ ನಿರ್ದೇಶಕ ಬಿ.ಸೋಮಶೇಖರ್ ಹಾಗೂ ಡಿ.ಎಂ. ಪಾಳ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಶ್ರೀಮತಿ ಹೆಚ್.ಸಿ.ಸುಬ್ಬಲಕ್ಷ್ಮಿ ಅವರನ್ನು ಸನ್ಮಾನಿಸಲಾಯಿತು. ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ಸಂಘಟನೆಯ ಅಧ್ಯಕ್ಷ ಡಾ.ಎಂ.ಶಿವಸ್ವಾಮಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕಾರ್ಯದರ್ಶಿ ಹಾಗೂ ಯುವ ಕವಿ ಬಿಡಿಎಂ ಕುಮಾರ ನಿರೂಪಿಸಿದರೆ, ಶಿಕ್ಷಕ ಹರೀಶ್ ವಂದಿಸಿದರು. ಪದಾಧಿಕಾರಿಗಳಾದ ಪಾರ್ವತಮ್ಮ, ಮಹದೇವಮ್ಮ, ರಾಣಿ ಮಾದಪ್ಪ, ಮಣಿಕಂಠ, ಲೀಲಾವತಿ ಯಾಲಕಯ್ಯ, ಕವಯತ್ರಿ ಶಾಂತಕುಮಾರಿ, ಉಮೇಶ್, ರಂಗಸ್ವಾಮಿ, ರತ್ನಮ್ಮ, ಚಂದ್ರಶೇಖರಯ್ಯ, ಅಲುಮೇಲಮ್ಮ, ಸಾಂಬಾಮೂರ್ತಿ, ಕೃಷ್ಣಶೆಟ್ಟಿ, ಚಿಕ್ಕಲಿಂಗಸ್ವಾಮಿ, ಕಮಲ, ಅನಿಲ್‌ರಾಜ್, ಭಾಗೀರತಿ, ಚಿಕ್ಕಣ್ಣ, ಮಂಜುಳಾದೇವಿ, ವೆಂಕಟಮ್ಮ, ನಾಗರತ್ನಮ್ಮ, ಶಿಕ್ಷಕಿ ತನುಜ, ಶಿಕ್ಷಕರಾದ ಶಿವಮೂರ್ತಿ, ಮಹದೇವಸ್ವಾಮಿ, ಜಯರಾಜ್, ನಾಗಪ್ಪ ಹಾಗೂ ಬಿ.ಎಡ್. ಪ್ರಶಿಕ್ಷಣಾರ್ಥಿಗಳು ಮತ್ತಿತರರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

30.10.2024 ಬುಧವಾರ, ಮಳೆ ನಕ್ಷತ್ರ: ಸ್ವಾತಿ, 24.10.2024 ರಿಂದ 05.11.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಅಶ್ವಯುಜ ಮಾಸ, ಕೃಷ್ಣ ಪಕ್ಷ,
ತಿಥಿ: ತ್ರಯೋದಶಿ, ನಕ್ಷತ್ರ: ಹಸ್ತ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಕುತ್ತಿಗೆ ಹಾಗೂ ಬೆನ್ನು ನೋವಿಗೆ ಅಕ್ಯೂಪಂಕ್ಚರ್ ಮತ್ತು ಯೋಗ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ರಿಂದ ಸಂಜೆ 4.30 ರವರೆಗೆ.

■ **ಎಸ್.ಡಿ.ಆರ್. ಪ್ರೊಡಕ್ಷನ್ಸ್ :** ಮಾವುತ ಚಿತ್ರದ ಮುಹೂರ್ತ ಸಮಾರಂಭ, ಉಪಸ್ಥಿತರು: ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಎ. ಮಂಜು, ಶಿಲ್ಪಿ ಅರುಣ್ ಯೋಗಿರಾಜ್, ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಶಾಸಕರಾದ ಟಿ.ಎಸ್. ಶ್ರೀವತ್ಸ, ಕೆ. ಹರೀಶ್‌ಗೌಡ, ಇಳೈ ಆಳ್ವಾರ್ ಸ್ವಾಮೀಜಿ, ಶಾಸಕ ಮಂಥರ್‌ಗೌಡ, ನಾಗರಾಜ್ ವಿ. ಬೈರಿ, ಚಿತ್ರ ನಿರ್ಮಾಪಕ ಟಿ. ಸುರೇಶ್ ಗೋಲ್ಡ್, ಸಾಹಸ ನಿರ್ದೇಶಕ ಥ್ರಿಲ್ಲರ್ ಮಂಜು, ಸ್ಥಳ: ಶ್ರೀ ಮಹಾಗಣಪತಿ ದೇವಸ್ಥಾನ, ಅಗ್ರಹಾರ, ಬೆಳಗ್ಗೆ 9.30ಕ್ಕೆ.

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ರಿಂದ.

■ **ಜೆಎಸ್‌ಎಸ್ ಆಸ್ಪತ್ರೆ :** ವಿಶ್ವ ಆಸ್ಟಿಯೊಪೊರೋಸಿಸ್ ದಿನಾಚರಣೆ, ಮುಖ್ಯ ಅತಿಥಿಗಳು : ಹಿರಿಯ ವೈದ್ಯ ಡಾ. ಪ್ರೇಮನಾಥ್, ಗೌರವ ಅತಿಥಿಗಳು : ಜೆಎಸ್‌ಎಸ್ ಮೆಡಿಕಲ್ ಕಾಲೇಜು ಪ್ರಾಂಶುಪಾಲ ಡಾ. ಹೆಚ್. ಬಸವನಗೌಡಪ್ಪ, ವೈದ್ಯಕೀಯ ಅಧೀಕ್ಷಕ ಡಾ. ಸಿ.ಪಿ. ಮಧು, ಸ್ಥಳ: ಶ್ರೀ ರಾಜೇಂದ್ರ ಶತಮಾನೋತ್ಸವ ಸಭಾಂಗಣ, 3ನೇ ಮಹಡಿ, ಜೆಎಸ್‌ಎಸ್ ಆಸ್ಪತ್ರೆ, ಬೆಳಗ್ಗೆ 11ಕ್ಕೆ.

■ **ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ :** ದಲಿತ ಸಮಾಜದ (ಬಲಗೈ) ಮುಖಂಡರ ಸಭೆ, ಸ್ಥಳ: ಜಲದರ್ಶಿನಿ ಅತಿಥಿ ಗೃಹ, ಸಂಜೆ 5.30ಕ್ಕೆ.

ಮೈಸೂರು ಆಕಾಶವಾಣಿ





ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ವಾದ್ಯ ವೈಭವ–ಸಂಗೀತ ವಾದ್ಯಗಳ ಪರಿಚಯ ಮಾಲಿಕೆ, ಪ್ರಸ್ತುತಿ: ಚೈತ್ರಿಕಾ. ಎಸ್., 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಕೆ. ಶ್ರೇಯಾ, ವ್ಯಾಖ್ಯಾನ –ಡಾ. ಹೆಚ್. ಎಂ. ಕಲಾಶ್ರೀ, 6.50 ರೈತರಿಗೆ ಸಲಹೆ, 7.15 ವಾತ್ಸಲ್ಯವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಮಕ್ಕಳ ರಕ್ಷಣಾ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, 8.30 ಹಾಸನಾಂಬೆ ದರ್ಶನ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಜಿಲ್ಲಾಡಳಿತ, ಹಾಸನ, 8.45 ಚಿತ್ರಗೀತೆಗಳು, 9.00 ವೃತ್ತಿ ಮಾರ್ಗದರ್ಶನ 'ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ಸೇವಾ ಅವಕಾಶಗಳು' ಕುರಿತು ಅತ್ಯುತ್ತಮ ಎನ್.ಎಸ್.ಎಸ್. ಅಧಿಕಾರಿ ರಾಷ್ಟ್ರಪ್ರಶಸ್ತಿ ಪುರಸ್ಕೃತರು ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರಾಗಿರುವ ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕು ಬಾಬುರಾಯನ ಕೊಪ್ಪಲಿನ ಡಾ. ಆರ್.ರಾಘವೇಂದ್ರ ಅವರೊಂದಿಗೆ ಮಾತುಕತೆ ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಅನುಷ್ಕಾ ಶಂಕರ್–ಸಿತಾರ್ ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.30 ಆಯುಷ್‌ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.35 ದೇವರನಾಮ–ರಾಮದಾಸರ ರಚನೆಗಳು, 12.45 ಜನಪದ ಸಂಗೀತ, 1.00 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖನ ಹಾಗೂ ಪ್ರಸ್ತುತಿ: ಶಭಾನ ಮತ್ತು ಕೀರ್ತಿ ಎಸ್.ಬೈಂದೂರು, ಪರಿಕಲ್ಪನೆ : ಅಬ್ದುಲ್ ರಶೀದ್, 1.20 ಭಾವಗೀತೆಗಳು–ಕೆ.ಬಿ.ಸುನೀತಾ ಆಚಾರ್ಯ, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಟಿ.ಆರ್.ಮಹಾಲಿಂಗಂ–ಕೊಳಲು ವಾದನ, 4.00 ಮಹಿಳಾರಂಗ 'ಹೀಗಿದೆ ನೋಡಿ ನಮ್ ಜೋಡಿ', ಭಾಗವಹಿಸುವವರು–ಹಿರಿಯ ನ್ಯಾಯವಾದಿ, ಚಿಂತಕ ಪಿ.ಪಿ.ಬಾಬುರಾಜ್ ಹಾಗೂ ಸಾಮಾಜಿಕ ಕಾರ್ಯಕರ್ತೆ, ಅನುವಾದಕಿ ಉಷಾ ಅಂಬ್ರೋಸ್, ಪ್ರಸ್ತುತಿ: ಅಬ್ದುಲ್ ರಶೀದ್, 4.45 ಹಿಂದಿ ಪಾಠ–ಕಿಶೋರ್. ಎಂ.ಕಾಕಡೆ, 6.50 ಕೃಷಿರಂಗ: ಕೃಷಿ ದೀವಿಗೆ 'ಸಂಶೋಧನಾ ಸಂಸ್ಥೆಯೊಂದಿಗೆ ಕೃಷಿ ಕಲಿಕೆ' ಕುರಿತ ಬಾನುಲಿ ಸರಣಿ ಕಬ್ಬಿನ ಬೇಸಾಯದಲ್ಲಿ ಯಾಂತ್ರೀಕರಣ ಈ ಕುರಿತು ಮಂಡ್ಯದ ವಿ.ಸಿ.ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಸಹಾಯಕ ಪ್ರಾಧ್ಯಾಪಕರಾದ ಡಾ. ಎಂ.ಎಸ್. ಶ್ರೀದೇವಿ ಅವರೊಂದಿಗೆ ಸಂದರ್ಶನ, ಸಂದರ್ಶಕರು: ಎನ್.ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ, 8.00 ಕ್ಷಿತಿಜ ಲಿಟರರಿ ಗುರು–ಸಾಹಿತ್ಯ ಸಾಧಕರೊಂದಿಗೆ ಸಂವಾದ, 9.30 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಹಿಮಾಂಶು ಬಿಷ್‌ವಾಸ್–ಸಂತೂರ್ ವಾದನ, 10.00 ಜನಪದ ಸಂಗೀತ, 10.30 ಸವಿನೆನಪು

■ **ರಂಗಭೂಮಿ ಟ್ರಸ್ಟ್, ಕೊಡಗು :** 'ಸತ್ಯವನ್ನೇ ಹೇಳುತ್ತೇನೆ' ನಾಟಕ, ರಚನೆ, ನಿರ್ದೇಶನ: ಮೈಸೂರು ರಂಗಾಯಣದ ಮಾಜಿ ನಿರ್ದೇಶಕ ಅಡ್ಡಂಡ ಕಾರ್ಯಪ್ಪ, ಸ್ಥಳ: ಕಿರುರಂಗಮಂದಿರ, ಕಲಾಮಂದಿರ ಆವರಣ, ಸಂಜೆ 6.30ಕ್ಕೆ.

ಎರಡನೇ ದಿನವೂ ಭರ್ತಿ ಪ್ರದರ್ಶನ ಕಂಡ 'ಸತ್ಯವನ್ನೇ ಹೇಳುತ್ತೇನೆ' ನಾಟಕ

ಖ್ಯಾತ ಹಿರಿಯ ಕಾದಂಬರಿಕಾರ ಡಾ.ಎಸ್.ಎಲ್.ಭೈರಪ್ಪ ಸೇರಿ ಅನೇಕ ಗಣ್ಯರಿಂದ ವೀಕ್ಷಣೆ

ಮೈಸೂರಿನ ಕಲಾಮಂದಿರ ಆವರಣದ ಕಿರುರಂಗಮಂದಿರದಲ್ಲಿ ಮಂಗಳವಾರ ನಡೆದ 'ಸತ್ಯವನ್ನೇ ಹೇಳುತ್ತೇನೆ' ನಾಟಕ ಪ್ರದರ್ಶನದ ದೃಶ್ಯಗಳು



ಖ್ಯಾತ ಹಿರಿಯ ಕಾದಂಬರಿಕಾರ ಡಾ.ಎಸ್.ಎಲ್.ಭೈರಪ್ಪ 'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್' ಸಂಸ್ಥಾಪಕ ಸಂಪಾದಕರಾದ ಡಾ.ಕೆ.ಬಿ.ಗಣಪತಿ (ಕೆಬಿಜಿ) ಮತ್ತು ಅವರ ಧರ್ಮಪತ್ನಿಯವರಾದ ರ್‍ಯಾಲಿ ಗಣಪತಿ ಸೇರಿದಂತೆ ಅನೇಕ ಗಣ್ಯರು ನಾಟಕ ವೀಕ್ಷಿಸಿದರು.

ಮೈಸೂರು,ಅ.29(ಪಿಎಂ)– ಮೈಸೂರು ರಂಗಾಯಣದ ಮಾಜಿ ನಿರ್ದೇಶಕ ಅಡ್ಡಂಡ ಸಿ.ಕಾರ್ಯಪ್ಪ ಅವರು ರಚಿಸಿ, ನಿರ್ದೇಶಿಸಿರುವ 'ಸತ್ಯವನ್ನೇ ಹೇಳುತ್ತೇನೆ' ನಾಟಕದ ಎರಡನೇ ದಿನದ ಪ್ರದರ್ಶನಕ್ಕೂ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು.

ಮೈಸೂರಿನ ಕಲಾಮಂದಿರ ಆವರಣದ ಕಿರುರಂಗಮಂದಿರದ ಎಲ್ಲಾ ಆಸನಗಳೂ ಭರ್ತಿಯಾಗುವ ಮೂಲಕ ಮಂಗಳವಾರ ನಡೆದ ಎರಡನೇ ಪ್ರದರ್ಶನವೂ ಯಶಸ್ವಿಯಾಯಿತು. ರಂಗಭೂಮಿ ಟ್ರಸ್ಟ್ ಕೊಡಗು ಪ್ರಸ್ತುತಿಯ ಈ ನಾಟಕವು ಇದೇ ಸಭಾಂಗಣದಲ್ಲಿ ಅ.31ರವರೆಗೆ ನಡೆಯಲಿದ್ದು, ಸೋಮವಾರ ನಡೆದ ಮೊದಲ ಪ್ರದರ್ಶನಕ್ಕೂ ಪ್ರೇಕ್ಷಕರು ಕಿಕ್ಕಿರಿದು ತುಂಬಿದ್ದರು. ಅದೇ ಯಶಸ್ಸಿನ ಓಟ ಮುಂದುವರೆದಿದ್ದು, ನಾಟಕದ ಪ್ರಸ್ತುತಿಯಲ್ಲಿ ಎಲ್ಲಾ ಪಾತ್ರಧಾರಿಗಳ ಅಭಿನಯ ಅದ್ಭುತವಾಗಿ ಮೂಡಿಬಂದಿದೆ ಎಂಬ ಅಭಿಪ್ರಾಯ ಪ್ರೇಕ್ಷಕರಿಂದ ವ್ಯಕ್ತವಾಯಿತು.

ಢೋಂಗಿತನವನ್ನು ಅನಾವರಣಗೊಳಿಸುವ ಮೂಲಕ ಮುಚ್ಚಿಟ್ಟ ಸತ್ಯಗಳನ್ನು ಈ ನಾಟಕದ ಮೂಲಕ ಬಿಚ್ಚಿಡಲಾಗಿದೆ. ಭೂಗರ್ಭದಲ್ಲಿ ಮುಚ್ಚಿಟ್ಟ ಚರಿತ್ರೆಯಲ್ಲಿನ ಸತ್ಯಗಳು ಈ ನಾಟಕದಲ್ಲಿ ಸ್ಫೋಟಗೊಂಡಿದೆ. ರಂಗದ ಮೇಲೆ ಧ್ವನಿ–ಬೆಳಕು ಸಹ ಉತ್ತಮವಾಗಿದೆ ಎಂದೂ ಪ್ರೇಕ್ಷಕರು ಅಭಿಪ್ರಾಯಪಟ್ಟಿದ್ದಾರೆ ಎಂದು ನಾಟಕದ ನಿರ್ದೇಶಕರೂ ಆದ ಅಡ್ಡಂಡ ಸಿ. ಕಾರ್ಯಪ್ಪ ತಿಳಿಸಿದ್ದಾರೆ.

ಮೊದಲ ದಿನದ ಪ್ರದರ್ಶನಕ್ಕೂ ವಿವಿಧ ಕ್ಷೇತ್ರಗಳ ಗಣ್ಯರು, ಹಿರಿಯರು ಮಾತ್ರವಲ್ಲದೆ, ಹೆಚ್ಚಿನ ಸಂಖ್ಯೆಯಲ್ಲಿ ಯುವ ಜನರೂ ನಾಟಕ ನೋಡಲು ಆಗಮಿಸಿದ್ದರು. ಅದೇ ರೀತಿ ಇಂದು ಸಹ ಎಲ್ಲಾ ವರ್ಗದ ಪ್ರೇಕ್ಷಕರಿಂದ ಇಡೀ ಸಭಾಂಗಣ ಭರ್ತಿಯಾಗಿತ್ತು. ಇಂದು ಖ್ಯಾತ ಹಿರಿಯ ಕಾದಂಬರಿಕಾರ ಡಾ.ಎಸ್.ಎಲ್.ಭೈರಪ್ಪ, 'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್' ಸಂಸ್ಥಾಪಕ ಸಂಪಾದಕರಾದ ಡಾ.ಕೆ.ಬಿ.ಗಣಪತಿ (ಕೆಬಿಜಿ) ಮತ್ತು ಅವರ ಧರ್ಮಪತ್ನಿಯವರಾದ ರ್‍ಯಾಲಿ ಗಣಪತಿ ಸೇರಿದಂತೆ ಅನೇಕ ಗಣ್ಯರು ನಾಟಕ ವೀಕ್ಷಿಸಿದರು. ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ.ಪ್ರಧಾನ ಗುರುದತ್, ವಿಶ್ರಾಂತ ಕುಲಪತಿ ಪ್ರೊ.ಬೆಳ್ಳಿಯಪ್ಪ, ಪತ್ರಕರ್ತ ರವೀಂದ್ರ ಜೋಶಿ ಮತ್ತಿತರರು ನಾಟಕ ವೀಕ್ಷಿಸಿದರು.

ವಾಣಿಜ್ಯ ತೆರಿಗೆ ವಸೂಲಿ ಗುರಿ ಮುಟ್ಟದಿದ್ದರೆ ಅಧಿಕಾರಿಗಳೇ ಹೊಣೆ



ನವದೆಹಲಿ, ಅ.29– ವಾಣಿಜ್ಯ ತೆರಿಗೆ ಸಂಗ್ರಹ ಗುರಿಯನ್ನು ತಲುಪುವಲ್ಲಿ ವಿಫಲರಾದ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಎಚ್ಚರಿಕೆ ನೀಡಿದ್ದಾರೆ.

ವಾಣಿಜ್ಯ ತೆರಿಗೆ ಸಂಗ್ರಹದ ಪ್ರಗತಿ ಕುರಿತ ಪರಿಶೀಲನಾ ಸಭೆಯಲ್ಲಿ ಮಾತನಾಡಿರುವ ಸಿಎಂ, ಯಾವುದೇ ಸಂದರ್ಭದಲ್ಲೂ ಕಡಿಮೆ ಆಗಬಾರದು ಎಂದು ಒತ್ತಿ ಹೇಳಿದರು.

ರಾಜ್ಯ 2024–25ಕ್ಕೆ 1,10,000 ಕೋಟಿ ರೂ.ಗಳ ವಾಣಿಜ್ಯ ತೆರಿಗೆ ಸಂಗ್ರಹದ ಗುರಿಯನ್ನು ಹೊಂದಿದೆ. ಅಕ್ಟೋಬರ್ ಅಂತ್ಯದ ವೇಳೆಗೆ ಜಿಎಸ್‌ಟಿ 44,783 ಕೋಟಿ ರೂ, ಕರ್ನಾಟಕ ಮಾರಾಟ ತೆರಿಗೆ 13,193 ಕೋಟಿ ರೂ. ಮತ್ತು ವೃತ್ತಿಪರ ತೆರಿಗೆ 797 ಕೋಟಿ ರೂ.ಗಳನ್ನು ಒಳಗೊಂಡಂತೆ ಒಟ್ಟು 58,773 ಕೋಟಿ ರೂ ತೆರಿಗೆ ಸಂಗ್ರಹ ಮಾಡಲಾಗಿದೆ.

ರಾಜ್ಯದ ಅಭಿವೃದ್ಧಿಗೆ ಗುರಿ ಸಾಧಿಸುವುದು ಅತ್ಯಗತ್ಯ' ಎಂದ ಸಿದ್ದರಾಮಯ್ಯ, ಸಮನ್ವಯದ ಪ್ರಯತ್ನದ ಅಗತ್ಯವನ್ನು ಒತ್ತಿ ಹೇಳಿದ್ದಾರೆ. ರಾಜ್ಯವು ಈವರೆಗೆ ಶೇ.53.5 ಗುರಿ ಸಾಧಿಸಿದೆ. ಕಳೆದ ವರ್ಷ ಇದೇ ಅವಧಿಗೆ ಹೋಲಿಸಿದರೆ 5,957 ಕೋಟಿ ರೂ.ಗಳ ಸಂಗ್ರಹ ಹೆಚ್ಚಿದ್ದು, ಮಾರ್ಚ್ ವೇಳೆಗೆ ವಾರ್ಷಿಕ ಗುರಿ ತಲುಪಲು ಮುಂದಿನ 5 ತಿಂಗಳಲ್ಲಿ ತಿಂಗಳಿಗೆ 10,200 ಕೋಟಿ ಸಂಗ್ರಹಿಸಬೇಕಿದೆ.

ರಾಜ್ಯದ ಅಭಿವೃದ್ಧಿಗೆ ಗುರಿ ಸಾಧಿಸುವುದು ಅತ್ಯಗತ್ಯ' ಎಂದ ಸಿದ್ದರಾಮಯ್ಯ, ಸಮನ್ವಯದ ಪ್ರಯತ್ನದ ಅಗತ್ಯವನ್ನು ಒತ್ತಿ ಹೇಳಿದರು. ಮಾಸಿಕ ಪರಿಶೀಲನೆ ನಡೆಸುವುದಾಗಿ ಘೋಷಿಸಿದ ಸಿಎಂ, ಯಾವುದೇ ಅಧಿಕಾರಿ ಗುರಿ ತಲುಪದಿದ್ದಲ್ಲಿ ಅವರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಪುನರುಚ್ಚರಿಸಿದರು. ಕರಸಮಾಧಾನ ಯೋಜನೆಯಿಂದ ಹೆಚ್ಚುವರಿಯಾಗಿ 2,000 ಕೋಟಿ ರೂಪಾಯಿ ಆದಾಯ ಬರುವ ನಿರೀಕ್ಷೆ ಇದೆ ಎಂದು ಸಿಎಂ ಇದೇ ವೇಳೆ ತಿಳಿಸಿದರು. ನಂತರ ಅಬಕಾರಿ ಇಲಾಖೆಯ ತೆರಿಗೆ ಸಂಗ್ರಹವನ್ನು ಪರಿಶೀಲಿಸಿದ ಸಿದ್ದರಾಮಯ್ಯ, ಗೋವಾದಿಂದ ಅಕ್ರಮ ಮದ್ಯ ಸಾಗಾಟ ತಡೆಯಲು ಹಾಗೂ ಮಾರ್ಚ್‌ನ ಗುರಿ ತಲುಪಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಇಲಾಖೆಗೆ ಸೂಚನೆ ನೀಡಿದರು. 2024–25ರಲ್ಲಿ ಅಬಕಾರಿ ತೆರಿಗೆ ಸಂಗ್ರಹ ಗುರಿ 38,525 ಕೋಟಿ ರೂಪಾಯಿಗಳಾಗಿವೆ. ಅಕ್ಟೋಬರ್ 28 ರವರೆಗೆ ಇಲಾಖೆ 20,237 ಕೋಟಿ ರೂ.ಗಳನ್ನು ಸಂಗ್ರಹಿಸಿದ್ದು, ಗುರಿಯ ಶೇ.52.53 ರಷ್ಟು ಸಾಧನೆ ಮಾಡಿದೆ.

ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಈ ವರ್ಷದ ಸಂಗ್ರಹಣೆಗಳು 1,301.15 ಕೋಟಿ ಹೆಚ್ಚಾಗಿದೆ ಎಂದು ಸಿಎಂಒ ತಿಳಿಸಿದೆ.

ಪುನೀತ್ ರಾಜ್‌ಕುಮಾರ್ 3ನೇ ವರ್ಷದ ಪುಣ್ಯಸ್ಮರಣೆ: ಕುಟುಂಬದಿಂದ ಸಮಾಧಿಗೆ ಪೂಜೆ



ಬೆಂಗಳೂರು, ಅ.29– ನಟ ಪುನೀತ್ ರಾಜ್‌ಕುಮಾರ್ ಅವರು ಅಗಲಿ ಮೂರು ವರ್ಷ ಉರುಳಿದೆ. ಮಂಗಳವಾರ (ಅ.29) ಪುನೀತ್ ಅವರ ಪತ್ನಿ ಅಶ್ವಿನಿ ಪುನೀತ್ ರಾಜ್‌ಕುಮಾರ್, ಮಗಳು ವಂದಿತಾ, ನಟ ರಾಘವೇಂದ್ರ ರಾಜ್‌ಕುಮಾರ್ ದಂಪತಿ ಸೇರಿದಂತೆ ಕುಟುಂಬದ ಸದಸ್ಯರು ಇಲ್ಲಿನ ಕಂಠೀರವ ಸ್ಟುಡಿಯೋದಲ್ಲಿರುವ ಪುನೀತ್ ಅವರ ಸಮಾಧಿಗೆ ಪೂಜೆ ಸಲ್ಲಿಸಿದರು.

2021ರ ಅ.29ರಂದು ಪುನೀತ್ ಅವರು ಅಕಾಲಿಕ ನಿಧನರಾಗಿದ್ದರು. ಪೂಜೆ ಸಲ್ಲಿಸಿದ ಬಳಿಕ ಅಶ್ವಿನಿ ಪುನೀತ್ ರಾಜ್‌ಕುಮಾರ್ ಹಾಗೂ ವಂದಿತಾ ಅವರು ಪುನೀತ್ ಅವರ ನೆಚ್ಚಿನ ತಿಂಡಿ, ಸಿಹಿ ತಿನಿಸುಗಳನ್ನು ಎಡೆ ಇಟ್ಟರು. ವರ್ಷ ಉರುಳಿದಂತೆ ಪುನೀತ್ ಅವರ ಸಮಾಧಿಗೆ ಭೇಟಿ ನೀಡುವವರ ಸಂಖ್ಯೆ ಹೆಚ್ಚುತ್ತಲೇ ಇದೆ. ಮಂಗಳವಾರವೂ ಸಾವಿರಾರು ಜನರು ಸಮಾಧಿಗೆ ಭೇಟಿ ನೀಡಿ, ಪುಷ್ಪನಮನ ಸಲ್ಲಿಸಿದರು. ಮೈಸೂರು ದಸರಾ ವಿದ್ಯುದ್ದೀಪಾಲಂಕಾರ ಮಾಡಿದವರೇ ಸಮಾಧಿ ಸುತ್ತಮುತ್ತ ವಿದ್ಯುದ್ದೀಪಾಲಂಕಾರ ಮಾಡಿದ್ದಾರೆ. ಪುಣ್ಯಭೂಮಿಯ ಆವರಣದಲ್ಲೇ ಅಭಿಮಾನಿಗಳು ನೇತ್ರದಾನದ ಪ್ರತಿಜ್ಞೆ ತೆಗೆದುಕೊಂಡರು. ಅನ್ನದಾನ ಮತ್ತು ರಕ್ತದಾನದ ಕಾರ್ಯಗಳೂ ನಡೆದವು. ಪುನೀತ್ ರಾಜ್‌ಕುಮಾರ್ ಹುಟ್ಟಿದ ವರ್ಷ, ನಿಧನರಾದ ವರ್ಷ ಹಾಗೂ 2024ರಲ್ಲಿ ಬಿಡುಗಡೆಗೊಂಡ ನಾಣ್ಯಗಳನ್ನು, ನೋಟ್‌ಗಳನ್ನು ಬಳಸಿಕೊಂಡು ರಚಿಸಿದ ಕಲಾಕೃತಿಗಳು ನೆರೆದವರನ್ನು ಸೆಳೆದವು. ಪ್ರತಿನಿತ್ಯವೂ ಅವನ ನೆನಪಿನಲ್ಲೇ ಇದ್ದೇವೆ. ದುಃಖ ಇನ್ನೂ ಇದೆ. ಜನಗಳ ಪ್ರೀತಿ ಕಮ್ಮಿ ಆಗುತ್ತಲೇ ಇಲ್ಲ. ಅವರ ಪ್ರೀತಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಪುನೀತ್ ಅವರ ಗುಣಗಳನ್ನು ನಿಮ್ಮಲ್ಲೂ ಮುಂದುವರಿಸಿ ಎಂದು ಅಭಿಮಾನಿಗಳಲ್ಲಿ ಕೇಳಿಕೊಳ್ಳುತ್ತೇನೆ ಎಂದು ನಟ ರಾಘವೇಂದ್ರ ರಾಜ್‌ಕುಮಾರ್ ಹೇಳಿದರು.

ನಕ್ಕರೆ ಅದೇ ಸ್ವರ್ಗ

ಭಿಕ್ಷುಕಿ : ಅಣ್ಣಾ... ಮೂರು ದಿನದಿಂದ ಊಟ ಮಾಡಿಲ್ಲ. ಒಂದು ರೂಪಾಯಿ ಕೊಡಿ.

ಗುಂಡ : ಮೂರು ದಿನದಿಂದ ಊಟ ಮಾಡಿಲ್ಲ ಅಂತಿಯಾ.. ಒಂದು ರೂಪಾಯಿನಲ್ಲಿ ಏನು ಮಾಡ್ತೀಯ?

ಭಿಕ್ಷುಕಿ : ಎಷ್ಟು ಕೆಜಿ ಕಮ್ಮಿ ಆಗಿದ್ದೀನಿಂತಾ ನೋಡ್ತೀನಿ.

ಮೈಸೂರು ಮಿತ್ರ

ಬುಧವಾರ, 30 ಅಕ್ಟೋಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಮನಕೆ ನೋವಾಗಿದೆ ಎಂದು ಇಂದೇ ಕಣ್ಣೀರು ಖಾಲಿ ಮಾಡಿದರೆ,
ಮುಂದೊಂದು ದಿನ ಬರುವ ಆನಂದಭಾಷ್ಪಕ್ಕೆ ನೀರೆಲ್ಲಿ?

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಅತ್ತೆಗೊಂದು ಕಾಲ, ಸೊಸೆಗೊಂದು ಕಾಲ

ನಿಮ್ಮ ಪತ್ರಗಳು

■ ಕಸ ವಿಲೇವಾರಿ ಮಾಡಿ

ಮಾನ್ಯರೇ

ವಿಶ್ವೇಶ್ವರ ಬಡಾವಣೆಯ (ಜಾಕಿ ಫ್ಯಾಕ್ಟರಿ ರಸ್ತೆ) ಪ್ರತಿಷ್ಠಿತ ಅಪಾರ್ಟ್‌ಮೆಂಟ್‌ಗಳಲ್ಲಿ ಒಂದಾದ ತಪೋವನ ಅಪಾರ್ಟ್‌ಮೆಂಟ್‌ನಲ್ಲಿ ಸುಮಾರು 120ಕ್ಕೂ ಮೇಲ್ಪಟ್ಟು ಸಂಸಾರಗಳು ವಾಸವಿದ್ದು, ಇಲ್ಲಿ ಹೆಚ್ಚಾಗಿ ಹಿರಿಯ ನಾಗರಿಕರಿದ್ದಾರೆ. ಹಲವು ತಿಂಗಳಿಂದ ನಗರಪಾಲಿಕೆ ವತಿಯಿಂದ ಮನೆಯ ಹಸಿ ಹಾಗೂ ಒಣಕಸ ಸರಿಯಾಗಿ ವಿಲೇವಾರಿಯಾಗದೆ ಇನ್ನಿಲ್ಲದ ತೊಂದರೆಯನ್ನು ಅನುಭವಿಸುವಂತಾಗಿದೆ. ಸುಮಾರು ಒಂದು ವಾರದಿಂದ ಮನೆಗಳ ಕಸಗಳನ್ನು ಸಾಗಿಸಲು ಪೌರ ಕಾರ್ಮಿಕರು ಬಾರದೆ ಇಲ್ಲಿಯ ಕುಟುಂಬಗಳು ಮುಖ್ಯವಾಗಿ ಹಿರಿಯ ನಾಗರಿಕರು ಕೆಟ್ಟ ದುರ್ವಾಸನೆಯಿಂದ ಅನುಭವಿಸಿದ ಬವಣೆ ಹೇಳತೀರದು.

ಈ ರಸ್ತೆಯಲ್ಲಿ ಹಲವಾರು ಅಪಾರ್ಟ್‌ಮೆಂಟ್‌ಗಳಿದ್ದು ಒಟ್ಟಾರೆಯಾಗಿ ಎಲ್ಲರೂ ಇದೇ ಪರಿಸ್ಥಿತಿ ಅನುಭವಿಸುತ್ತಿದ್ದು ನಮ್ಮಗಳ ಗೋಳನ್ನು ಯಾರೂ ಕಿವಿಯ ಮೇಲೆ ಹಾಕಿಕೊಳ್ಳದ ಪರಿಸ್ಥಿತಿ ಬಂದೊದಗಿದೆ. ಈ ಬಗ್ಗೆ ನಮ್ಮ ಅಪಾರ್ಟ್‌ಮೆಂಟ್ ಆಡಳಿತ ಮಂಡಳಿಯ ಸದಸ್ಯರು ಹಾಗೂ ಈ ರಸ್ತೆಯಲ್ಲಿರುವ ಇನ್ನಿತರ ಅಪಾರ್ಟ್‌ಮೆಂಟ್ ಅವರು ಲಿಖಿತ ದೂರುಗಳ ಜೊತೆಗೆ ಸಂಬಂಧಪಟ್ಟ ಅಧಿಕಾರಿಗಳನ್ನು ಭೇಟಿ ಮಾಡಿ ಮನವಿ ಮಾಡಿಕೊಂಡರೂ ಬರೀ ಆಶ್ವಾಸನೆ ಕೊಡುವುದು ಬಿಟ್ಟರೆ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಅಲ್ಲದೆ ಈ ರಸ್ತೆಯಲ್ಲಿ ಇರುವ ಪ್ರತಿಷ್ಠಿತ ಕಾಲೇಜೊಂದರ ಕಲುಷಿತ ನೀರು ಮೋರಿಯ ಮೂಲಕ ಹರಿದು ಬರುತ್ತಿದ್ದು, ಕೆಲವು ತಿಂಗಳಿಂದ ನಮ್ಮ ಅಪಾರ್ಟ್‌ಮೆಂಟ್ ಮುಖ್ಯದ್ವಾರದ ಸಮೀಪದಲ್ಲಿ ಮೋರಿಯಲ್ಲಿ ಕಸತುಂಬಿ ನೀರು ಸರಾಗವಾಗಿ ಹರಿದು ಹೋಗಲು ಅವಕಾಶವಿಲ್ಲದೆ ನಿಂತಿರುವ ಕೊಳಕು ನೀರಿನಿಂದ ಕೆಟ್ಟ ದುರ್ವಾಸನೆ ಹಾಗೂ ಕ್ರಿಮಿಕೀಟಗಳ ಉಪದ್ರವದಿಂದ ಸುತ್ತಮುತ್ತಲ ವಾಸಿಸುವ ಕುಟುಂಬಗಳು ಹಾಗೂ ಸಂಚರಿಸುವ ನಾಗರಿಕರು ಇನ್ನಿಲ್ಲದ ತೊಂದರೆ ಅನುಭವಿಸುತ್ತಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಎಚ್ಚೆತ್ತು ಇಲ್ಲಿನ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರುತ್ತೇವೆ.

–ಜಿ.ಎಸ್.ಗಣೇಶ್‌ರಾವ್, ವಿಶ್ವೇಶ್ವರನಗರ, ಮೈಸೂರು

■ ಮೈಸೂರು–ಬೆಂಗಳೂರು ರಾತ್ರಿ ರೈಲು ಪುನರಾರಂಭವಾಗಲಿ

ಮಾನ್ಯರೇ,

ಈ ಹಿಂದೆ ಮೈಸೂರಿನಿಂದ ಬೆಂಗಳೂರಿಗೆ ಪ್ರತಿದಿನ ರಾತ್ರಿ 12 ಗಂಟೆಗೆ ಪ್ಯಾಸೆಂಜರ್ ರೈಲು ಚಲಿಸುತ್ತಿತ್ತು. ಕೊರೊನಾ ಬಂದಾಗಿನಿಂದ ಇಲ್ಲಿವರೆಗೆ ಆ ರೈಲು ಪುನರಾರಂಭಗೊಳ್ಳದೇ ಸ್ಥಗಿತಗೊಂಡಿದೆ. ಇದರಿಂದ ನೂರಾರು ಪ್ರಯಾಣಿಕರಿಗೆ ಅದರಲ್ಲೂ ಮಧ್ಯಮ ವರ್ಗದವರಿಗೆ ಅನಾನುಕೂಲವಾಗಿದೆ. ಈ ರೈಲು ಪ್ರಯಾಣಿಕರಿಂದ ತುಂಬಿ ತುಳುಕುತ್ತಿತ್ತು. ಬೆಂಗಳೂರಿಂದ ಮೈಸೂರಿಗೆ ಇದೇ ಸಮಯದಲ್ಲಿ ದಿನನಿತ್ಯ ಸಂಚರಿಸುತ್ತಿದೆ. ಸಂದರ್ಶನಕ್ಕೆ ಹೋಗುವ ವಿದ್ಯಾರ್ಥಿಗಳು, ಶುಭ ಕಾರ್ಯಕ್ಕೆ ತೆರಳುವವರು, ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು, ಆಸ್ಪತ್ರೆಗೆ ಚಿಕಿತ್ಸೆಗೆಂದು ತೆರಳುವ ರೋಗಿಗಳು, ವ್ಯಾಪಾರಸ್ಥರಿಗೆ ಈ ರೈಲಿನಿಂದ ಸಮಯದ ಜೊತೆ ಉಳಿತಾಯವೂ ಆಗುತ್ತಿತ್ತು. ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಆದಷ್ಟು ಬೇಗ ಈ ರೈಲು ಪುನರಾರಂಭಗೊಂಡು ಎಲ್ಲರಿಗೂ ಅನುಕೂಲವಾಗಲಿ ಎಂದು ಕೇಳಿಕೊಳ್ಳುತ್ತೇವೆ.

–ನೊಂದ ಪ್ರಯಾಣಿಕರು, ಚಂದ್ರಶೇಖರ, ಅನಿಲ್‌ರಾಜ್, ಸುರೇಶ, ರಶ್ಮಿ, ಸುಜಾತ, ಜಾನಕಿ, ಸರೋಜ, ಸತೀಶ, ಚಕ್ರಪಾಣಿ ಜಯಲಕ್ಷ್ಮೀಪುರಂ, ಮೈಸೂರು

■ ಬೆಳಕನ್ನು ಸಂಭ್ರಮಿಸೋಣ, ಪಟಾಕಿಯನ್ನಲ್ಲ

ಮಾನ್ಯರೆ,

ಪಟಾಕಿ ಇಲ್ಲದ ದೀಪಾವಳಿಯನ್ನು ಊಹಿಸಿಕೊಳ್ಳುವುದೇ ಕಷ್ಟ, ಬರೀ ದೀಪಗಳ ಬೆಳಗುವಿಕೆಯಿಂದ ಸುಂದರಗೊಳ್ಳುತ್ತಿದ್ದ ಸಂಜೆಗೆ ಯಾವಾಗ ಪಟಾಕಿ ತಳುಕು ಹಾಕಿಕೊಂಡಿತೋ ಗೊತ್ತಿಲ್ಲ. ಪಟಾಕಿ ಸುಟ್ಟಾಗ ಮೂಡುವ ಬೆಳಕು ಹಾಗೂ ಹೊಮ್ಮುವ ಸದ್ದು ಆ ಕ್ಷಣಕ್ಕೆ ಸಂಭ್ರಮ ಮೂಡಿಸಿದರೂ, ಆ ಬೆಳಕು ಅಡಗಿದ ಬಳಿಕ ಏಳುವ ಹೊಗೆ ಅತ್ಯಂತ ವಿಷಕಾರಿಯಾಗಿರುತ್ತದೆ. ಪಟಾಕಿಯಲ್ಲಿರುವ ವಿವಿಧ ಬಗೆಯ ರಾಸಾಯನಿಕಗಳು ಗಾಳಿಗೆ ಸೇರಿದಾಗ ನಮ್ಮ ಉಸಿರಾಟದ ನಾಳಗಳಲ್ಲಿ ಉರಿ ತರಿಸುತ್ತವೆ. ರಕ್ತದಲ್ಲಿ ಸೇರಿ ಅದರ ಕ್ಷಮತೆಯನ್ನು ಕುಗ್ಗಿಸುತ್ತವೆ, ತನ್ಮೂಲಕ ರಕ್ತಹೀನತೆ ಎದುರಾಗುತ್ತದೆ. ನರ ವ್ಯವಸ್ಥೆಯನ್ನು ಶಿಥಿಲಗೊಳಿಸುತ್ತವೆ. ಇದಲ್ಲದೆ ಪಟಾಕಿಗಳಿಂದಾಗುವ ಅನಾಹುತ, ಶಬ್ದಮಾಲಿನ್ಯ, ವಾಯುಮಾಲಿನ್ಯ ಹಾಗೂ ಪ್ರಾಣಿಗಳಿಗೆ ಎದುರಾಗುವ ಕುತ್ತು ಅಷ್ಟಿಷ್ಟಲ್ಲ. ಪಟಾಕಿಗಳನ್ನು ಸುಡುವುದರಿಂದ ಇಷ್ಟೆಲ್ಲ ತೊಂದರೆ ಇರುವುದನ್ನು ಅರಿತು ಈ ಬಾರಿ ದೀಪಗಳನ್ನು ಮಾತ್ರ ಬೆಳಗಿಸಿ ಸಂಭ್ರಮಪಡೋಣ. ಹಾನಿಕಾರಕ ಪಟಾಕಿಗಳಿಂದ ದೂರವಿರೋಣ. **–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.**

■ ಉಪ ಚುನಾವಣೆ : ಶಾಸಕ ಜಿಟಿಡಿ ಕಡೆಗಣನೆ

ಮಾನ್ಯರೆ,

ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಹಾಗೂ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರೂ ಆಗಿರುವ ಜಿ.ಟಿ.ದೇವೇಗೌಡರು ಇತ್ತೀಚೆಗೆ ಪಕ್ಷದ ಚಟುವಟಿಕೆಗಳಿಂದ ಹಿಂದೆ ಸರಿದಂತೆ ಕಂಡುಬರುತ್ತಿದ್ದು, ಪಕ್ಷದ ವೇದಿಕೆಗಳಲ್ಲಿ ಅವರ ಹಾಜರಾತಿ ಕೊರತೆ ಎದ್ದು ಕಾಣುತ್ತಿದೆ. ದಸರಾ ಉದ್ಘಾಟನಾ ಸಮಾರಂಭದ ಭಾಷಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪರ ಬ್ಯಾಟ್ ಬೀಸಿ ಪಕ್ಷದ ಕೆಂಗಣ್ಣಿಗೆ ಗುರಿಯಾಗಿದ್ದರು. ಅಲ್ಲದೇ ಜೆಡಿಎಸ್‌ನ ಆಂತರಿಕ ಬೆಳವಣಿಗೆಗಳ ಬಗ್ಗೆ ಅವರಲ್ಲಿ ಅಸಮಾಧಾನ ಇದ್ದಂತೆ ಕಂಡು ಬರುತ್ತಿದ್ದು ಮೊನ್ನೆ ಚನ್ನಪಟ್ಟಣ ಉಪಚುನಾವಣೆ ಅಭ್ಯರ್ಥಿ ನಾಮಪತ್ರ ಸಲ್ಲಿಕೆಯಲ್ಲೂ ಅವರ ಗೈರು ಹಾಜರಿ ಎದ್ದು ಕಾಣುತ್ತಿತ್ತಲ್ಲದೆ ಇದಕ್ಕೂ ಮುನ್ನಾ ನಡೆದ ಜೆಡಿಎಸ್‌ನ ಸರಣಿ ಸಭೆಗಳಲ್ಲೂ ಭಾಗವಹಿಸಿದ ನಿದರ್ಶನಗಳಿಲ್ಲ. ಈ ಬೆಳವಣಿಗೆಗಳನ್ನು ಗಮನಿಸಿದರೆ ಅವರು ಜನತಾದಳದಿಂದ ಒಂದು ಹೆಜ್ಜೆ ಹೊರಗೆ ಇಟ್ಟಿದ್ದಾರೆಂಬ ಶಂಕೆ ವ್ಯಕ್ತವಾಗುತ್ತಿದೆ. ಈ ಹಿಂದೆ ಇಂತಹದೆ ಕಹಿ ಪ್ರಸಂಗ ಬಂದಾಗ ಜೆಡಿಎಸ್ ವರಿಷ್ಠ ಹೆಚ್.ಡಿ. ದೇವೇಗೌಡರು ಮಧ್ಯ ಪ್ರವೇಶಿಸಿ ಜಿಟಿಡಿ ಅವರ ಅಸಮಾಧಾನವನ್ನು ಶಮನ ಮಾಡಿದ್ದರು.

ಆದರೆ ಇತ್ತೀಚೆಗೆ ಜಿ.ಟಿ.ದೇವೇಗೌಡ ಹಾಗೂ ಕೇಂದ್ರ ಸಚಿವ ಕುಮಾರಸ್ವಾಮಿ ನಡುವೆ ಮುಸುಕಿನ ಗುದ್ದಾಟ ನಡೆಯುತ್ತಿರಬಹುದೆಂಬ ಬಲವಾದ ಶಂಕೆ ಕಂಡುಬರುತ್ತಿದೆ. ಜಿಟಿಡಿ ಅವರಿಗೆ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕನಾಗಬೇಕೆಂಬ ಅಭಿಲಾಷೆಗೆ ಕುಮಾರಸ್ವಾಮಿ ತಣ್ಣೀರೆರಚಿದರೆಂಬ ಕಾರಣದಿಂದ ಅಸಮಾಧಾನಗೊಂಡಂತೆ ಕಂಡುಬರುತ್ತಿದೆ. ಜಿ.ಟಿ.ದೇವೇಗೌಡರು ಮೈಸೂರು ಜಿಲ್ಲೆಯ ಪ್ರಭಾವಿ ಒಕ್ಕಲಿಗ ನಾಯಕನಾಗಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಚಾಮುಂಡೇಶ್ವರಿ ಕ್ಷೇತ್ರದಲ್ಲಿ ತಮ್ಮದೇ ಹಿಡಿತ ಹೊಂದಿರುವ ಗೌಡರ ಮುನಿಸಿಗೆ ಜೆಡಿಎಸ್ ನಾಯಕರು ಕಾರಣ ಹುಡುಕಿ ವಿಶ್ವಾಸಕ್ಕೆ ತೆಗೆದುಕೊಳ್ಳದಿದ್ದರೆ ಓರ್ವ ಪ್ರಭಾವಿ ಮುಖಂಡನನ್ನು ಪಕ್ಷ ಕಳೆದುಕೊಳ್ಳುವುದರಲ್ಲಿ ಸಂದೇಹವೇ ಇಲ್ಲ. **–ಹೆಚ್.ಆರ್.ಪ್ರಸಾದ್, ವಿವೇಕಾನಂದನಗರ, ಮೈಸೂರು,**

ತಿದ್ದುಪಡಿ ಹಾಗೂ ಸ್ಪಷ್ಟೀಕರಣ

ಸೋಮವಾರದ 'ಮೈಸೂರು ಮಿತ್ರ' ಸಂಚಿಕೆಯ ಎರಡನೇ ಪುಟದಲ್ಲಿನ ಸಿ.ವೆಂಕಟಸ್ವಾಮಿ ನಾಯ್ಡು ಅವರ ನಿಧನ ಸುದ್ದಿಯಲ್ಲಿ 'ಸಂಕಲ್ಪ' ಸಿಎಂಡಿ ಜಗದೀಶ್ ಪ್ರಸಾದ್ ಎಂದು ಪ್ರಕಟವಾಗಿದ್ದು, ಅದನ್ನು ಜಗದೀಶ್ ಬಾಬು ಎಂದು ಓದಿಕೊಳ್ಳುವುದು. ತಪ್ಪಿಗಾಗಿ ವಿಷಾದಿಸುತ್ತೇವೆ. **–ಸಂಪಾದಕ**



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಕನ್ನಡ ಸಂಸ್ಕೃತ ಸಂಬಂಧ

ಸರ್ವಜ್ಞಂ ತದಹಂ ವಂದೇ ಪರಂ ಜ್ಯೋತಿಸ್ತಮೋಽಪಹಮ್।
ಪ್ರವೃತ್ತಾ ಯನ್ಮುಖಾದ್ದೇವೀ ಸರ್ವಭಾಷಾ ಸರಸ್ವತೀ॥

ಕನ್ನಡ ಭಾಷೆ ಎಷ್ಟು ಸಹಸ್ರ ವರ್ಷ ಹಳೆಯದು? ನಮಗೆ ತಿಳಿಯದು! ನಾವೀಗ ಕರ್ನಾಟಕವೆಂದು ಕರೆಯುತ್ತಿರುವ ಭೂ ಭಾಗದಲ್ಲಿ ಮನುಷ್ಯ ವಸತಿ ಆರಂಭಗೊಂಡಾಗಿನಿಂದ ಇಲ್ಲಿದ್ದ ಜನರು ಆಡುತ್ತಿದ್ದ ನುಡಿಯು ಪ್ರಾಚೀನ ಕನ್ನಡ. ಅದಕ್ಕೆ ಲಿಪಿ ರೂಪಗೊಂಡ ಅನಂತರದ ಕನ್ನಡದ ಇತಿಹಾಸ ಮಾತ್ರ ನಮಗೆ ಗೊತ್ತು ಹಾಗೆ ಶಾಸನಗಳಲ್ಲಿ, ಉಳಿದು ಬಂದ ಸಾಹಿತ್ಯ ಗ್ರಂಥಗಳಲ್ಲಿ ನಾವು ಕಾಣುವುದನ್ನು ಹಳೆಗನ್ನಡ ಎಂದು ಕರೆಯಬಹುದು. ಆಮೇಲೆ ಮಧ್ಯ ಕಾಲದ ಕನ್ನಡವನ್ನು ನಡುಗನ್ನಡ ಎಂದು ಕರೆಯುವ ರೂಢಿಯಿದೆ. ಹತ್ತೊಂಬತ್ತನೆಯ ಶತಮಾನದಿಂದ ಈಚಿನ ಕನ್ನಡ, ನಾವು ಮಾತನಾಡುತ್ತಿರುವ ಭಾಷೆ ಹೊಸಗನ್ನಡ.

ಇನ್ನು ಸಂಸ್ಕೃತದ ಬಗೆಗೆ ಹೇಳಬೇಕೆಂದರೆ, ವೇದಗಳಲ್ಲಿ ಬಳಸಲ್ಪಟ್ಟ ಭಾಷೆ ಅದರ ಪ್ರಾಚೀನ ಸ್ವರೂಪ. ಆಗ, ಅಂದರೆ ವೇದಗಳ ಕಾಲದಲ್ಲಿ ಅದನ್ನು 'ಸಂಸ್ಕೃತ' ಎಂಬ ಹೆಸರಿನಿಂದ ಕರೆಯುತ್ತಿರಲಿಲ್ಲ. ಆಮೇಲೆ ಕ್ರಿಸ್ತಪೂರ್ವ ಆರನೆಯ ಶತಮಾನದಲ್ಲಿದ್ದ ಪಾಣಿನಿಯ ಕಾಲದಿಂದ ಈಚಿನ ಭಾಷೆಯನ್ನು ಅಭಿಜಾತ ಸಂಸ್ಕೃತ (classical Sanskrit) ಎಂದು ಕರೆಯುವ ವಾಡಿಕೆಯಿದೆ. ಪಾಣಿನಿಯೂ ಅದನ್ನು ಸಂಸ್ಕೃತ ಎಂದು ಕರೆದಿಲ್ಲ. ಭಾಷಾ ಎಂದು ಮಾತ್ರ ಹೇಳಿದ್ದಾನೆ. ಆಮೇಲಿನ ಕಾಲದಲ್ಲಿ ಜನರು ಆಡುತ್ತಿದ್ದ ಭಾಷೆಗಳನ್ನು ಪ್ರಾಕೃತ ಎಂದೂ ಗ್ರಂಥಗಳಲ್ಲಿ ಮತ್ತು ವಿದ್ವದ್ ವ್ಯವಹಾರದಲ್ಲಿ ಇದ್ದ ಭಾಷೆಯನ್ನು ಸಂಸ್ಕೃತವೆಂದೂ ಕರೆಯುವ ಪ್ರವೃತ್ತಿ ಹುಟ್ಟಿತೆಂದು ತೋರುತ್ತದೆ. ಕ್ರಿ.ಶ. ಏಳನೆಯ ಶತಮಾನದಲ್ಲಿದ್ದ ದಂಡಿಯ ಕಾವ್ಯಾದರ್ಶದಲ್ಲಿ –

'ಸಂಸ್ಕೃತಂ ನಾಮದೈವೀ ವಾಗನ್ವಾಖ್ಯಾತಾ ಮಹರ್ಷಿಭಿಃ'

ಎಂದು ಸ್ಪಷ್ಟವಾಗಿ ಹೇಳಿದ್ದಾನೆ. ಮಹರ್ಷಿಗಳು ಯಾವ ದೇವಭಾಷೆಗೆ ವ್ಯಾಕರಣವನ್ನು ರಚಿಸಿರುವರೋ ಅದು ಸಂಸ್ಕೃತ ಎಂದು ಅವನ ಮಾತಿನ ಅರ್ಥ. ಅನಂತರ ಕಾಲದಲ್ಲಿ ಪ್ರಾಕೃತ ಭಾಷೆಗಳಿಗೂ ದೇಶಭಾಷೆಗಳಿಗೂ ವ್ಯಾಕರಣವನ್ನು ರಚಿಸಲಾಯಿತು. ಸಂಸ್ಕೃತ ಭಾಷೆಯು ದೇಶದ ಸಕಲ ಪ್ರದೇಶಗಳಲ್ಲೂ ಹರಡಿ ವಿದ್ವಾಂಸರು ಆ ಭಾಷೆಯಲ್ಲಿ ಕಾವ್ಯಗಳನ್ನೂ ನಾಟಕಗಳನ್ನೂ ಶಾಸ್ತ್ರ ಗ್ರಂಥಗಳನ್ನೂ ರಚಿಸಿದ ಕಾರಣದಿಂದ ಅದರ ಸಾಹಿತ್ಯ ವಿಪುಲವಾಗಿ ಬೆಳೆಯಿತು. ಅದಕ್ಕೆ ಪ್ರಾದೇಶಿಕ ಸೀಮಿತಗಳಿರಲಿಲ್ಲ. ಕಾಶ್ಮೀರದಿಂದ ಕನ್ಯಾಕುಮಾರಿವರೆಗೂ ಅಸ್ಸಾಮಿನಿಂದ ರಾಜಸ್ಥಾನದವರೆಗೂ ಎಲ್ಲಾ ಪ್ರಾಂತ್ಯಗಳಲ್ಲಿ ಸಂಸ್ಕೃತದಲ್ಲಿ ಬರೆದ ವಿದ್ವಾಂಸರೂ ಕವಿಗಳೂ ಆಚಾರ್ಯರೂ ಇದ್ದುದನ್ನು ಕಾಣುತ್ತೇವೆ. ಪಾಣಿನಿಯು ರಚಿಸಿದುದು ಜನನಾತ್ಮಕ (Generating) ವ್ಯಾಕರಣ. ಅದರಿಂದ ಹೊಸ ಶಬ್ದರೂಪಗಳ ಸೃಷ್ಟಿಯನ್ನು ಯಾರಾದರೂ ಮಾಡಬಹುದು. ಈ ಕಾರಣದಿಂದ ಸಂಸ್ಕೃತದಲ್ಲಿ ಪುಷ್ಕಲವಾದ ಪದಸಂಪತ್ತಿದೆ. ಈ ಗುಣವು ಇತರ ಭಾಷೆಗಳ ಮೇಲೆ ಸಂಸ್ಕೃತದ ಪ್ರಭಾವ ಹೆಚ್ಚಾಗಿ ಉಂಟಾಗುವಂತೆ ಮಾಡಿತು.

ಕನ್ನಡ ನಾಡಿಗೆ ಸಂಸ್ಕೃತವು ಯಾವಾಗ ಬಂದಿತೋ ತಿಳಿಯದು. ಮೊದಲು ಪ್ರಾಕೃತವು ಉತ್ತರ ಭಾರತದಿಂದ ದಕ್ಷಿಣಕ್ಕೆ ಬಂದಿರಬಹುದು. ಅತ್ಯಂತ ಪ್ರಾಚೀನ ಶಾಸನಗಳು, ಎಂದರೆ ಅಶೋಕನ ಶಿಲಾಶಾಸನಗಳು ಪ್ರಾಕೃತ (ಪಾಲೀ) ಭಾಷೆಯಲ್ಲಿವೆ. ಮೊದಲಿನ ಜೈನ ಗ್ರಂಥಗಳೂ ಪ್ರಾಕೃತದಲ್ಲಿ ರಚಿತವಾಗಿವೆ. ಮೂರನೆಯ ಶತಮಾನದ ಮೇಲೆ ಸಂಸ್ಕೃತ ಇಲ್ಲಿ ತನ್ನ ಪ್ರಭಾವವನ್ನು ಬೀರಲಾರಂಭಿಸಿತೆಂದು ಹೇಳಬಹುದು. ಆಮೇಲೆ ನಾವು ನೋಡುವ ಕನ್ನಡ ಶಾಸನಗಳಲ್ಲೂ ಸಂಸ್ಕೃತ ಪದಗಳ ಬಳಕೆಯನ್ನು ಕಾಣುತ್ತೇವೆ. ಕಪ್ಪೆ ಅರಭಟ್ಟನ ಶಾಸನದಲ್ಲಿ 'ಸಾಧ್ವಗೆ ಸಾಧು' ಇತ್ಯಾದಿಗಳಲ್ಲಿ ಸಂಸ್ಕೃತದ ತತ್ಸಮ ರೂಪಗಳು ಇವೆ. ಇದು ಕರ್ನಾಟಕಕ್ಕೆ ಸೀಮಿತವಲ್ಲ. ಇತರ ಭಾಷೆಗಳಲ್ಲಿ ಇದೇ ಪ್ರಭಾವ ಇರುವುದನ್ನೂ ಗಮನಿಸಬಹುದು.

ಆ ಕಾಲದ ಕವಿಗಳು, ವಿದ್ವಾಂಸರು ಕನ್ನಡ, ಸಂಸ್ಕೃತ, ಪ್ರಾಕೃತ ಎಂಬ ಭಾಷಾತ್ರಯದಲ್ಲೂ ಪ್ರಭುತ್ವವನ್ನು ಪಡೆದಿರುತ್ತಿದ್ದರು. ಕನ್ನಡದ ಉಪಲಬ್ಧ ಆದಿಮ ಗ್ರಂಥ 'ಕವಿರಾಜಮಾರ್ಗ'ದ ರಚನಾಕಾರನ ಆಶ್ರಯದಾತೃ ಅಮೋಘವರ್ಷ ನೃಪತುಂಗನು ಸ್ವಯಂ ಸಂಸ್ಕೃತ ಕವಿಯಾಗಿದ್ದು ಪ್ರಶ್ನೋತ್ತರ ರತ್ನ ಮಾಲಿಕಾ ಎಂಬ ಗ್ರಂಥವನ್ನು ರಚಿಸಿದ್ದನು. ವಸ್ತು ವಿಷಯದಲ್ಲಿ ಹೇಳಬೇಕೆಂದರೆ ಶ್ರೀ ವಿಜಯನು ದಂಡಿಗೆ ಋಣಿ. ಕವಿರಾಜಮಾರ್ಗದ ಅನೇಕ ಪದ್ಯಗಳು ಕಾವ್ಯಾದರ್ಶನದ ಶ್ಲೋಕಗಳ ಅನುವಾದಗಳು. ಸಂಸ್ಕೃತದ ಗ್ರಂಥಗಳು ಕನ್ನಡದ ಕಾವ್ಯಗಳಿಗೆ ಇತಿ ವೃತ್ತವನ್ನು ಒದಗಿಸಿದ ಮೂಲಸ್ರೋತಸ್ಸುಗಳು. ಪಂಪನ ಆದಿ ಪುರಾಣಕ್ಕೆ ಜಿನಸೇನರು ಸಂಸ್ಕೃತದಲ್ಲಿ ಬರೆದಿದ್ದ ಕೃತಿಯು ಆಧಾರ. ಅವನ ವಿಕ್ರಮಾರ್ಜುನ ವಿಜಯಕ್ಕೆ ಮಹಾಭಾರತವೇ ಮೂಲ.

'ವ್ಯಾಸಮುನೀಂದ್ರ ರುಂದ್ರವಚನಾಮೃತವಾರ್ಧಿಯನೀಸುವೆಂ'

ಎಂದು ಪಂಪನೇ ಹೇಳಿಕೊಂಡಿದ್ದಾನೆ. ರನ್ನನ 'ಸಾಹಸ ಭೀಮ ವಿಜಯ'ದ ಮೂಲಗಳು ಮಹಾಭಾರತ ಮತ್ತು ಭಟ್ಟ ನಾರಾಯಣನ ವೇಣೀಸಂಹಾರ. ಜನ್ನನ ಯಶೋಧರ ಚರಿತೆಗೆ ಆಕರ ಸೋಮದೇವ ಸೂರಿಯ ಯಶಸ್ತಿಲಕ ಚಂಪೂ ಕುಮಾರವ್ಯಾಸನಿಗೆ ಮಹಾಭಾರತವೂ ಲಕ್ಷ್ಮೀಶನಿಗೆ ಸಂಸ್ಕೃತ ಜೈಮಿನಿ ಭಾರತವೂ ಆಕರ ಗ್ರಂಥಗಳು.

ಆದರೆ ಇವು ಯಾವುವೂ ಕನ್ನಡ ಕವಿಗಳ ಪ್ರತಿಭೆಗೆ ಅಡ್ಡಿಯಾಗಿಲ್ಲ. ಶಿಲೆಯನ್ನು ಕಡೆದು ಶಿಲ್ಪಿಯು ವಿಗ್ರಹವನ್ನು ಮಾಡಿದಂತೆ ಅವರು ಹೊಸತನವನ್ನು ತುಂಬಿ ನೂತನ ಸೌಂದರ್ಯವನ್ನು ಸೃಷ್ಟಿಸಿದ್ದಾರೆ. ಸಂಸ್ಕೃತದ ಅಂದವನ್ನೂ ಕನ್ನಡದ ಚಂದವನ್ನೂ ಒಗ್ಗೂಡಿಸುವ ಕಲೆ ಅವರಿಗೆ ಒಗ್ಗಿತ್ತು. ತಮ್ಮ ಸ್ವಂತಿಕೆಯಿಂದ ಅವರು ಹೊಸತನವನ್ನು ಕಾವ್ಯಗಳಲ್ಲಿ ತಂದಿದ್ದಾರೆ.

ಛಂದಸ್ಸಿನ ಬಗೆಗೆ ಹೇಳುವುದಾದರೆ ಕನ್ನಡ ಕವಿಗಳು ಮೊದಲು ಸಂಸ್ಕೃತದ ಛಂದಸ್ಸುಗಳನ್ನು ಅಳವಡಿಸಿಕೊಂಡಿದ್ದರೆಂದು ತೋರುತ್ತದೆ. ಉತ್ಪಲ ಮಾಲೆ, ಚಂಪಕ ಮಾಲೆ, ಸ್ರಗ್ಧರೆ, ಮಹಾಸ್ರಗ್ಧರೆ, ಶಾರ್ದೂಲ ವಿಕ್ರೀಡಿತ, ಮತ್ತೇಭವಿಕ್ರೀಡಿತ ಮುಂತಾದ ಪ್ರಸಿದ್ಧ ಸಂಸ್ಕೃತ ಛಂದಸ್ಸುಗಳನ್ನೂ, ಹೆಚ್ಚಾಗಿ ಕಂದ (ಸ್ಕಂಧಕ) ಗಳನ್ನೂ ಪಂಪಾದಿಗಳು ಬಳಸಿದ್ದರು. ಅನಂತರ ಸಂಸ್ಕೃತದಲ್ಲಿಲ್ಲದ, ಕನ್ನಡದ್ದೇ ಆದ ಷಟ್ಪದೀ ಎಂಬ ಛಂದಸ್ಸು ಜನಪ್ರಿಯವಾಗಿ ವೈಭವವನ್ನು ಪಡೆಯಿತು. ಕುಮಾರ ವ್ಯಾಸ, ಲಕ್ಷ್ಮೀಶ, ರಾಘವಾಂಕ ಮುಂತಾದವರ ಪ್ರತಿಭಾ ಜ್ಯೋತಿಯು ಬೆಳಗಲು ಷಟ್ಪದಿ ಕಾರಣವಾಯಿತು. ಹಾಗೆ ತ್ರಿಪದೀ ಎಂಬ ಛಂದಸ್ಸು ಸರ್ವಜ್ಞನ ವಚನಗಳಿಂದ ಜನರಿಗೆ ಇಷ್ಟವಾಯಿತು. ದ್ವಿತೀಯಾ ಕ್ಷರಪ್ರಾಸ ಸಂಸ್ಕೃತದಲ್ಲಿಲ್ಲ. ಕನ್ನಡದಲ್ಲಿ ಅದು ನಿಯತ. ಪಾದಾಂತ್ಯಯತಿ ಸಂಸ್ಕೃತದಲ್ಲಿದೆ, ಕನ್ನಡಕ್ಕೆ ಅದು ಬೇಕಿಲ್ಲ. ಪಂಪನು ತನ್ನ ಕಾವ್ಯಗಳಲ್ಲಿ ಅನೇಕ ಸಂಸ್ಕೃತ ಪದ್ಯಗಳನ್ನೂ ರಚಿಸಿದ್ದಾನೆ (ಆದಿಪುರಾಣ, ಷೋಡಶಾ ಶ್ವಾಸ, 63–72). ಅಲ್ಲಿ ಸಂಸ್ಕೃತೋಚಿತವಾದ ಎಲ್ಲ ನಿಯಮಗಳನ್ನು ಪಾಲಿಸಿದ್ದಾನೆ. ಇದು ಅವನಲ್ಲಿದ್ದ ಸುಮಧುರ ಕನ್ನಡ–ಸಂಸ್ಕೃತ ಬಾಂಧವ್ಯವನ್ನು ಸೂಚಿಸುತ್ತದೆ. ಅನೇಕ ಸ್ಥಳಗಳಲ್ಲಿ ಅವನ ರಚನೆ ಸಂಸ್ಕೃತ ಭೂಯಿಷ್ಠವಾಗಿ ಕನ್ನಡಿಗರಿಗೆ ಕಷ್ಟವೆಂದೆನಿಸಬಹುದು. ಸುಲಿದ ಬಾಳೆಯ ಹಣ್ಣಿ ನಂದದಿ ಅಳಿದ ಉಷ್ಣದ ಹಾಲಿನಂದದಿ ಸುಲಭವಾಗಿರ್ಪ ಕನ್ನಡ ನುಡಿ ಇರುವಾಗ ಕಷ್ಟವಾದ ವ್ಯಾಕರಣ ಜಟಿಲ ಸಂಸ್ಕೃತವನ್ನು ಬಳಸುವ ಆವಶ್ಯಕತೆ ಏನಿತ್ತು ಎಂದು ಕೆಲವರು ಕೇಳಬಹುದು. ಸಂಪೂರ್ಣವಾಗಿ ಸಂಸ್ಕೃತ ತತ್ಸಮಗಳನ್ನು ಬಿಟ್ಟು ಕನ್ನಡ ಪದಗಳನ್ನೇ ಬಳಸಿ ಕಾವ್ಯವನ್ನು ರಚಿಸಲು ಪ್ರಯತ್ನಿಸಿದ ಆಂಡಯ್ಯನಂತಹ ಕಬ್ಬಿಗರೂ ನಮ್ಮಲ್ಲಿದ್ದರು. ಹಾಲು–ಸಕ್ಕರೆಯಂತೆ ಕನ್ನಡವೂ ಸಂಸ್ಕೃತವೂ ಬೆರೆತರೆ ಕಾವ್ಯದ ಸವಿ ಇಮ್ಮಡಿಯಾಗುವುದೆಂಬ ಭಾವನೆ ಅನೇಕ ಕವಿಗಳಲ್ಲಿತ್ತು.

ಸಂಸ್ಕೃತದಿಂದ ನಾವಿಷ್ಟು ತೆಗೆದುಕೊಂಡಿದ್ದೇವೆ, ಕನ್ನಡವು ಸಂಸ್ಕೃತಕ್ಕೇನು ಕೊಟ್ಟಿದೆ ಎಂದರೆ, ಕನ್ನಡದ ಅನೇಕ ಪದಗಳೂ ಧಾತುಗಳೂ ಸಂಸ್ಕೃತದಲ್ಲಿ ಸೇರಿಹೋಗಿವೆ. ಕೂಟ ಎಂಬ ಪದ ಶುದ್ಧ ಕನ್ನಡದ್ದು. (ಆಡು>ಆಟ, ಮಾಡು > ಮಾಟ, ಕೂಡು>ಕೂಟ). ಈಗ ಸಂಸ್ಕೃತದಲ್ಲೂ ಈ ಪದ ಗುಂಪು, ಸಂಘ ಎಂಬ ಅರ್ಥದಲ್ಲಿ ಸೇರಿ ಹೋಗಿದೆ. ಕುಟ್ಟು ಎಂಬುದು ಕನ್ನಡ ಧಾತು. ಅದು ಸಂಸ್ಕೃತ ಧಾತು ಪಾಠದಲ್ಲಿ ಅದೇ ಅರ್ಥದಲ್ಲಿ ಸೇರಿಕೊಂಡಿದೆ. ಕುಟ್ಟತಿ ಎಂದರೆ ಕುಟ್ಟುತ್ತಾನೆ ಎಂದೇ ಅರ್ಥ. ಗ್ರಂಥಗಳ ಬಗೆಗೆ ಹೇಳುವುದಾದರೆ ಅಲ್ಲಮಪ್ರಭುದೇವರ ವಚನಗಳನ್ನು ಬಹು ಹಿಂದೆಯೇ ಪದ್ಯರೂಪದಲ್ಲಿ ಅನುವಾದ ಮಾಡಿದ್ದಾರೆ. ನಿಜಗುಣ ಶಿವಯೋಗಿಗಳ ವಿವೇಕಚಿಂತಾಮಣಿಯೆಂಬ ಕನ್ನಡ ಗ್ರಂಥವನ್ನು ಲಿಂಗರಾಜನೆಂಬ ಅರಸನು ಸಂಸ್ಕೃತಕ್ಕೆ ತರ್ಜುಮೆ ಮಾಡಿದ್ದನು. ಇಪ್ಪತ್ತೊಂದನೆಯ ಶತಮಾನದಲ್ಲಿ ಕುವೆಂಪು, ಮಾಸ್ತಿ, ದೇವುಡು, ಭೈರಪ್ಪ ಮುಂತಾದವರ ಕೃತಿಗಳು ಭಾಷಾಂತರಗೊಂಡು ಸಂಸ್ಕೃತದಲ್ಲಿ ಲಭ್ಯವಾಗಿವೆ. ಈ ಭಾಷಾ ಸಂಬಂಧವು ಉತ್ತರೋತ್ತರವಾಗಿ ಬೆಳೆಯಲಿ, ಬೆಳಗಲಿ.

ರೈತರ ಪಿತ್ರಾರ್ಜಿತ ಆಸ್ತಿ ವಕ್ಫ್ ಬೋರ್ಡ್‌ಗೆ ಸೇರಿದ್ದು ಎಂದು ಘೋಷಿಸಿದ ಸರ್ಕಾರ; ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಾಗ್ದಾಳಿ

ಬೆಂಗಳೂರು,ಅ.29(ಕೆಎಂಶಿ)–ರೈತರ ಪಿತ್ರಾರ್ಜಿತ ಸ್ವತ್ತುಗಳನ್ನು ವಕ್ಫ್ ಬೋರ್ಡ್ ಆಸ್ತಿ ಎನ್ನುವ ಮೂಲಕ ರಾಜ್ಯ ಸರ್ಕಾರ ಮಣ್ಣು ತಿನ್ನುವ ಕೆಲಸ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಇಂದಿಲ್ಲಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈತರ ಪಿತ್ರಾರ್ಜಿತ ಆಸ್ತಿಯನ್ನು ರಾತ್ರೋರಾತ್ರಿ ವಕ್ಫ್ ಬೋರ್ಡ್‌ಗೆ ಸೇರಿದ್ದು ಎಂದು ಘೋಷಿಸುತ್ತಿದ್ದು, ಸರ್ಕಾರದ ಈ ಅನ್ಯಾಯದ ವಿರುದ್ಧ ಬಿಜೆಪಿ ಹೋರಾಟ ಮಾಡಲಿದೆ ಎಂದರು.

ರಾಜ್ಯ ಸರ್ಕಾರದ ಇಂತಹ ಕ್ರಮದಿಂದ ಬಡ ರೈತರು ಬೀದಿಗೆ ಬೀಳುವಂತಾಗಿದೆ. ತಮ್ಮ ಪಕ್ಷ ರೈತರ ಪರ ಹೋರಾಟಕ್ಕೆ ಮುಂದಾದರೆ ಬಿಜೆಪಿಯವರು ರಾಜಕಾರಣ ಮಾಡುತ್ತಿದ್ದಾರೆ ಎಂಬ ಆರೋಪ ಮಾಡುತ್ತಾರೆ. ಅಲ್ಪಸಂಖ್ಯಾತರನ್ನು ಎತ್ತಿ ಕಟ್ಟುವ, ದೇಶವನ್ನು ಜಾತಿ, ಧರ್ಮದ ಆಧಾರದಲ್ಲಿ ವಿಭಜಿಸುವ ಕೆಲಸವನ್ನು ಕಾಂಗ್ರೆಸ್ ಪಕ್ಷ ಹಿಂದಿನಿಂದಲೂ ಮಾಡುತ್ತಾ ಬಂದಿದೆ, ಸಚಿವ ಜಮೀರ್ ಅಹ್ಮದ್ ನೇತೃತ್ವದಲ್ಲಿ ರಾಜ್ಯದಲ್ಲಿ ಬೆಂಕಿ ಹಚ್ಚುವ ಕೆಲಸ ನಡೆದಿದೆ, ರೈತರಿಗೆ ಅನ್ಯಾಯ ಮಾಡುವ ಕೆಲಸ ಆಗುತ್ತಿದೆ. 120 ರೈತರಿಗೆ ನೋಟಿಸ್ ಕೊಟ್ಟಿದ್ದನ್ನು ಸಚಿವರು ಒಪ್ಪಿಕೊಂಡಿದ್ದಾರೆ, ಇದಕ್ಕೆ ಬಿಜೆಪಿ ಕಾರಣವೇ, ತಮ್ಮ ಪಕ್ಷ ಈ ವಿಷಯವನ್ನು ಗಂಭೀರವಾಗಿ ತೆಗೆದುಕೊಳ್ಳದಿದ್ದರೆ ಸರ್ಕಾರದ ಅಕ್ರಮದಿಂದ ನೂರಾರು ವರ್ಷಗಳಿಂದ ಉಳುಮೆ ಮಾಡುತ್ತಿದ್ದ ರೈತರು ಬೀದಿಗೆ ಬರಬೇಕಾಗುತ್ತಿತ್ತು ಎಂದು ಹೇಳಿದರು.




ಟಾಸ್ಕ್ ಫೋರ್ಸ್ ಮಾಡಿದ್ದೇವೆ, ಜಿಲ್ಲಾಧಿಕಾರಿಗಳಿಗೆ ಮನವಿ ಕೊಡಲಿ ಎಂಬ ಆಟವನ್ನು ಕಾಂಗ್ರೆಸ್ ಶುರು ಮಾಡಿದೆ. ಮಾಜಿ ಉಪಮುಖ್ಯಮಂತ್ರಿ ಮತ್ತು ಪಕ್ಷದ ಹಿರಿಯ ನಾಯಕ ಗೋವಿಂದ ಕಾರಜೋಳ ನೇತೃತ್ವದಲ್ಲಿ ಬಿಜೆಪಿ ತಂಡ ವಿಜಯಪುರ ಜಿಲ್ಲೆಯ ಎಲ್ಲಾ ತಾಲೂಕುಗಳಿಗೆ ಭೇಟಿ ನೀಡಿ, ರೈತರಲ್ಲಿ ಧೈರ್ಯ ತುಂಬುವ ಕೆಲಸ ಮಾಡುತ್ತಿದೆ.

ರಾಜ್ಯ ಕಾಂಗ್ರೆಸ್ ಸರ್ಕಾರ ರೈತರಿಗೆ ತೊಂದರೆ ಕೊಡುವ ಕೆಲಸ ಮಾಡುತ್ತಿದ್ದು, ಬಿಜೆಪಿ ರೈತರ ಪರ ಇದ್ದು, ಸಮಸ್ಯೆ ಪರಿಹಾರಕ್ಕೆ ಸಂಪೂರ್ಣ ಸಹಕಾರ ನೀಡುತ್ತೇವೆ. ಕಾನೂನಿನ ಸಹಾಯ ಸೇರಿ ಯಾವುದೇ ರೀತಿಯ ಸಹಕಾರ ನೀಡಲಿದೆ ಎಂದರು.

ಚನ್ನಪಟ್ಟಣ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಮೊಮ್ಮಗ ಇರಬಹುದು, ಅವರನ್ನು ಗೆಲ್ಲಿಸುವ ಕರ್ತವ್ಯ ನಮ್ಮೆಲ್ಲರದ್ದಾಗಿದೆ. ಈ ವಯಸ್ಸಿನಲ್ಲೂ ಮಾಜಿ ಪ್ರಧಾನಿ ದೇವೇಗೌಡರ ಉತ್ಸಾಹ ಮೆಚ್ಚಿಕೊಳ್ಳಬೇಕು, ಯುವಕರಿಗೂ ಪ್ರೇರಣೆಯಾಗಿದೆ. ಅವರು ಪ್ರಚಾರ ಮಾಡುತ್ತಾರೆಂದರೆ ಕಾಂಗ್ರೆಸ್‌ನವರಿಗೆ ಆತಂಕ, ದೇವೇಗೌಡರು ಬಂದರೆ ಕ್ಷೇತ್ರ ಗೆಲ್ಲಲು ಸಾಧ್ಯವಿಲ್ಲ ಎಂಬ ಸತ್ಯ ಅರಿವಾಗಿದೆ, ಅದಕ್ಕಾಗೇ ಮನಬಂದಂತೆ ಮಾತನಾಡುತ್ತಿದ್ದಾರೆ ಎಂದರು.

ಪರಿಶಿಷ್ಟ ಜಾತಿಗಳ ಒಳಮೀಸಲಾತಿ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಲ್ಲಿ ಪ್ರಾಮಾಣಿಕತೆ ಹಾಗೂ ಕಾಂತರಾಜ್ ವರದಿ ಕುರಿತು ಗಂಭೀರತೆ ಇದ್ದಿದ್ದರೆ ಬಹಳ ಹಿಂದೆಯೇ ಕ್ರಮ ಕೈಗೊಳ್ಳುತ್ತಿದ್ದರು. ಸಿದ್ದರಾಮಯ್ಯ ಮತ್ತು ಕಾಂಗ್ರೆಸ್ ರಾಜಕೀಯ ಲಾಭ ಪಡೆಯಲು ಈ ವಿಚಾರದಲ್ಲಿ ಗೊಂದಲ ಮೂಡಿಸುವ ಪ್ರಯತ್ನ ಮಾಡುತ್ತಿದೆ, ಮುಖ್ಯಮಂತ್ರಿ ಪ್ರಾಮಾಣಿಕತೆ ಹೊಂದಿಲ್ಲ ಎಂಬುದು ನನ್ನ ಭಾವನೆ, ಉಪಚುನಾವಣೆ ಹಿನ್ನೆಲೆಯಲ್ಲಿ ಒಳಮೀಸಲಾತಿ ಪ್ರಸ್ತಾಪ ಮಾಡುತ್ತಿದ್ದಾರೆಯೇ ಹೊರತು ಬದ್ಧತೆ ಇಲ್ಲ ಎಂದರು.

ಬಿ.ಇಡಿ ಕೋರ್ಸ್‌ಗೆ ಅರ್ಜಿ ಆಹ್ವಾನ



ಮೈಸೂರು: ಸರ್ಕಾರಿ ಶಿಕ್ಷಕ ಶಿಕ್ಷಣ ಮಹಾವಿದ್ಯಾಲಯದ ವತಿಯಿಂದ 2024–25ನೇ ಸಾಲಿನಲ್ಲಿ ಎರಡು ವರ್ಷದ ಬಿ.ಇಡಿ ಕೋರ್ಸಿನ ವ್ಯಾಸಂಗಕ್ಕಾಗಿ ರಾಜ್ಯದ ಸರ್ಕಾರಿ ಮತ್ತು ಮಾನ್ಯತೆ ಪಡೆದ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಬಿ.ಇಡಿ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳ ದಾಖಲಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು www.school education. karnata ka.gov.in ಮೂಲಕ ಅರ್ಜಿಯನ್ನು ನವೆಂಬರ್ 14ರೊಳಗೆ ಸಲ್ಲಿಸಬಹುದು. ವೆಬ್‌ಸೈಟ್‌ನಲ್ಲಿ ಜಿಲ್ಲಾವಾರು ಬಿ.ಇಡಿ ಶಿಕ್ಷಣ ಸಂಸ್ಥೆಗಳ ಪಟ್ಟಿ, ಅರ್ಹತೆ, ಮೀಸಲಾತಿ, ವಿವರ ಹಾಗೂ ಇತರೆ ಸೂಚನೆಗಳನ್ನು ನೀಡಲಾಗಿರುತ್ತದೆ. ಅಭ್ಯರ್ಥಿಗಳು ಕಡ್ಡಾಯವಾಗಿ ಅವುಗಳನ್ನು ಓದಿಕೊಂಡು ಆನ್‌ಲೈನ್ ಮೂಲಕ ಅರ್ಜಿಗಳನ್ನು ಕ್ರಮಬದ್ಧವಾಗಿ, ಪೂರ್ಣವಾಗಿ ಭರ್ತಿ ಮಾಡುವ ಮೂಲಕ ಅನುಕೂಲ ಪಡೆಯಬಹುದು. ಮಾಹಿತಿಗೆ ದೂ.ಸಂ: 0821–2420764 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ರೋಜ್ಗಾರ್ ಮೇಳದಲ್ಲಿ ಮೈಸೂರಿನ 172 ಅಭ್ಯರ್ಥಿಗಳಿಗೆ ಕೇಂದ್ರ ಸಚಿವ ಸೋಮಣ್ಣ ನೇಮಕಾತಿ ಪತ್ರ ವಿತರಣೆ

ಮೈಸೂರು,ಅ.29(ಆರ್‌ಕೆ)– ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ (ಎಐಐಎಸ್‌ಹೆಚ್)ಯ ನಾಲೆಡ್ಜ್ ಪಾರ್ಕ್ ಸಭಾಂಗಣದಲ್ಲಿ ಇಂದು ಆಯೋಜಿಸಿದ್ದ ರೋಜ್ಗಾರ್ ಮೇಳದಲ್ಲಿ ಕೇಂದ್ರದ ರೈಲ್ವೇ ಇಲಾಖೆ ರಾಜ್ಯ ಸಚಿವ ವಿ. ಸೋಮಣ್ಣ ವಿವಿಧ ಇಲಾಖೆಗಳಿಗೆ ಆಯ್ಕೆಯಾಗಿರುವ 172 ಮಂದಿಗೆ ನೇಮಕಾತಿ ಪತ್ರಗಳನ್ನು ವಿತರಿಸಿದರು.

ಅಂಚೆ ಇಲಾಖೆ ಆಯೋಜಿಸಿದ್ದ ಮೇಳ ಉದ್ಘಾಟಿಸಿ ಮಾತನಾಡಿದ ಸಚಿವರು, ಪ್ರಧಾನಿ ನರೇಂದ್ರ ಮೋದಿ ಅವರು ದೇಶದ 40 ಸ್ಥಳಗಳಲ್ಲಿ ನಡೆಯುತ್ತಿರುವ ರೋಜ್ಗಾರ್ ಮೇಳ ಉದ್ಘಾಟಿಸಿದ್ದು, 51,000 ಮಂದಿ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ವಿತರಣೆಗೆ ಚಾಲನೆ ನೀಡಿದ್ದಾರೆ ಎಂದರು.

2022ರ ಅಕ್ಟೋಬರ್ ಮಾಹೆಯಲ್ಲಿ ರಾಷ್ಟ್ರೀಯ ರೋಜ್ಗಾರ್ ಯೋಜನೆ ಜಾರಿಗೆ ಇದುವರೆಗೂ 14 ಲಕ್ಷ ಯುವಕ–ಯುವತಿಯರಿಗೆ ಉದ್ಯೋಗ ನೀಡಲಾಗಿದೆ. ರೈಲ್ವೇ ಇಲಾಖೆಯಲ್ಲಿ 2014ರಿಂದೀಚೆಗೆ ಮಿಷನ್ ಮೋಡ್ ಯೋಜನೆಯಡಿ 5.2 ಲಕ್ಷ ಉದ್ಯೋಗ ಸೃಷ್ಟಿಸಲಾಗಿದ್ದು, ಇದರಿಂದ ಅರ್ಹರು, ಪ್ರತಿಭಾವಂತರಿಗೆ ಉದ್ಯೋಗ ಕಲ್ಪಿಸಲಾಗಿದೆ ಎಂದು ಸಚಿವರು ನುಡಿದರು.



ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ ಸಭಾಂಗಣದಲ್ಲಿ ಆಯೋಜಿಸಿದ್ದ ರೋಜ್ಗಾರ್ ಮೇಳದಲ್ಲಿ ಕೇಂದ್ರದ ರೈಲ್ವೆ ಇಲಾಖೆ ರಾಜ್ಯ ಸಚಿವ ವಿ.ಸೋಮಣ್ಣ ಅಭ್ಯರ್ಥಿಗಳಿಗೆ ವಿವಿಧ ಇಲಾಖೆಗಳ ನೇಮಕಾತಿ ಪತ್ರ ವಿತರಿಸಿದರು. ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಟಿ.ಎಸ್.ಶ್ರೀವತ್ಸ, ಡಿವಿಷನಲ್ ರೈಲ್ವೇ ಮ್ಯಾನೇಜರ್ ಶಿಲ್ಪಿ ಅಗರವಾಲ್, ಆಯಿಷ್ ನಿರ್ದೇಶಕಿ ಡಾ.ಎಂ.ಪುಷ್ಪಾವತಿ, ಅಂಚೆ ಸೇವೆಗಳ ನಿರ್ದೇಶಕ ಸಂದೇಶ ಮಹದೇವಪ್ಪ ಹಾಗೂ ಇತರರು ಚಿತ್ರದಲ್ಲಿದ್ದಾರೆ.

ಪ್ರಸಕ್ತ ಸಾಲಿನಲ್ಲಿ ರೈಲ್ವೇ ಇಲಾಖೆಯು 60,000 ಹುದ್ದೆಗಳನ್ನು ಭರ್ತಿ ಮಾಡಲಿದ್ದು, ಕನ್ನಡದಲ್ಲೂ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಿ ಕರ್ನಾಟಕದ ಯುವಕ–ಯುವತಿಯರಿಗೂ ಉದ್ಯೋಗ ಸಿಗುವಂತೆ ಮಾಡಲಾಗಿದೆ ಎಂದು ಸೋಮಣ್ಣ ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು 2014ರಿಂದೀಚೆಗೆ ದೇಶವನ್ನು ಅಭಿವೃದ್ಧಿ ಪಥದಲ್ಲಿ ಮುಂದುವರಿಸಿದ್ದು, 2047ರ ವೇಳೆಗೆ 'ವಿಕಸಿತ ಭಾರತ'ವನ್ನಾಗಿ ಪರಿವರ್ತಿಸುವ ಕನಸು ಕಂಡಿದ್ದಾರೆ ಎಂದರು.

ರೈಲ್ವೇ, ಅಂಚೆ, ಆಯಿಷ್‌ನಂತಹ 100 ವರ್ಷದ ಹಳೆಯ ಸಂಸ್ಥೆ, ಇಲಾಖೆಗಳು ಮೈಸೂರಿನ ಅರಸರು ಆರಂಭಿಸಿದ್ದು, ಇಂದಿಗೂ ಕೇಂದ್ರ ಸರ್ಕಾರ ಅವುಗಳನ್ನು ಮುಂದುವರೆಸಿಕೊಂಡು ಬಂದಿವೆ. ಪ್ರಧಾನ ಮಂತ್ರಿಗಳು ಮುಂದಿನ ತಲೆಮಾರಿಗೆ ಏಕತೆ, ಸಮಗ್ರತೆ, ಸುಭದ್ರತೆಗಾಗಿ ಶ್ರೇಷ್ಠ ಭಾರತ ನಿರ್ಮಾಣದ ಮೂಲಕ ಭವ್ಯ ಭಾರತಕ್ಕೆ ಅಡಿಪಾಯ ಹಾಕಿದ್ದಾರೆ ಎಂದು ಅವರು ತಿಳಿಸಿದರು.

ಶಾಸಕ ಟಿ.ಎಸ್. ಶ್ರೀವತ್ಸ, ಪೋಸ್ಟ್ ಮಾಸ್ಟರ್ ಜನರಲ್ ಡಾ. ಚಂದ್ರಶೇಖರ್ ರಕುಮನು, ಅಂಚೆ ಇಲಾಖೆ ನಿರ್ದೇಶಕ ಸಂದೇಶ್ ಮಹದೇವಪ್ಪ, ರೈಲ್ವೇ ಡಿವಿಷನಲ್ ಮ್ಯಾನೇಜರ್ ಶಿಲ್ಪಿ ಅಗರವಾಲ್, ಆಯಿಷ್ ನಿರ್ದೇಶಕಿ ಡಾ. ಪುಷ್ಪಾವತಿ ಹಾಗೂ ಇತರರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಕ್ಯೂಬಾ ಮೇಲೆ ಅಮೆರಿಕ ಹೇರಿರುವ ದಿಗ್ಬಂಧನ ಖಂಡಿಸಿ ಸಿಐಟಿಯು ಪ್ರತಿಭಟನೆ



ಮೈಸೂರಿನ ಹಳೆ ಡಿಸಿ ಕಚೇರಿ ಬಳಿ ಕ್ಯೂಬಾ ದೇಶದ ಮೇಲೆ ಅಮೆರಿಕ ಹೇರಿರುವ ದಿಗ್ಬಂಧನ ಖಂಡಿಸಿ ಸಿಐಟಿಯು ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಅ.29(ಜಿಎ)–ಕ್ಯೂಬಾ ದೇಶದ ಮೇಲೆ ಅಮೆರಿಕ ಹೇರಿರುವ ಅಮಾನವೀಯ ದಿಗ್ಬಂಧನ ಖಂಡಿಸಿ ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್ (ಸಿಐಟಿಯು) ವತಿಯಿಂದ ಹಳೆ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಸಾಮ್ರಾಜ್ಯಶಾಹಿ ಅಮೆರಿಕ ಸಮಾಜವಾದಿ ತತ್ವದ ಅಡಿಯಲ್ಲಿರುವ ಕ್ಯೂಬಾ ದೇಶದ ಮೇಲೆ ಅಮಾನವೀಯ ದಿಗ್ಬಂಧನ ಹೇರಿದೆ. ಈ ಬಗ್ಗೆ ವಿಶ್ವಸಂಸ್ಥೆಯ ಜನರಲ್ ಕೌನ್ಸಿಲ್‌ನಲ್ಲಿ ಚರ್ಚೆ ನಡೆಯುತ್ತಿದೆ. 31 ವರ್ಷಗಳ ಹಿಂದೆ ವಿಶ್ವಸಂಸ್ಥೆಯ ಜನರಲ್ ಕೌನ್ಸಿಲ್ ಕ್ಯೂಬಾ ದೇಶದ ಮೇಲೆ ಅಮೆರಿಕ ಹೇರಿರುವ ಆರ್ಥಿಕ, ವಾಣಿಜ್ಯ ಹಾಗೂ ಹಣಕಾಸಿನ ನಿರ್ಬಂಧ ತೆಗೆದು ಹಾಕಬೇಕು ಎಂದು ಹೇಳಿದ್ದರೂ ಇದಕ್ಕೆ ಯಾವುದೇ ಮಾನ್ಯತೆ ನೀಡದ ಅಮೆರಿಕ ಎಲ್ಲಾ ರೀತಿಯ ದಿಗ್ಬಂಧನ ಮುಂದುವರೆಸುತ್ತಿರುವುದು ಖಂಡನೀಯ ಎಂದು ಪ್ರತಿಭಟನಾಕಾರರು ಕಿಡಿಕಾರಿದರು.

ಕ್ಯೂಬಾ ದೇಶ ಇಂದು ವಿದ್ಯುತ್, ಕೃಷಿ, ಹಣಕಾಸು, ಬ್ಯಾಂಕಿಂಗ್ ವ್ಯವಹಾರದ ತೀವ್ರ ಬಿಕ್ಕಟ್ಟು ಎದುರಿಸುತ್ತಿದೆ. ಇದರಿಂದ ದೇಶದ ಆರ್ಥಿಕ ವ್ಯವಸ್ಥೆ ಮೇಲೆ ಪರಿಣಾಮ ಬೀರಿದ್ದು, ಜನರು ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದಾರೆ. ವಿದ್ಯುತ್, ಕೃಷಿ, ಆರೋಗ್ಯ ಹಾಗೂ ತೈಲ ಕ್ಷೇತ್ರಗಳ ಮೇಲೆ ಹೇರಿರುವ ವಿಪರೀತ ದಿಗ್ಬಂಧನದಿಂದ ಕ್ಯೂಬಾ ಜನರ ಬದುಕು ಅಯೋಮಯವಾಗಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕ್ಯೂಬಾ ಮೇಲೆ ಅಮೆರಿಕ ಹೇರಿರುವ ದಿಗ್ಬಂಧನದ ವಿರುದ್ಧ ಗಟ್ಟಿ ದನಿಯಲ್ಲಿ ಮಾತನಾಡಬೇಕು. ದೇಶದ ಹಾಗೂ ಜಿಲ್ಲೆಯ ದುಡಿಯುವ ವರ್ಗ ಕ್ಯೂಬಾ ಜನತೆಯೊಂದಿಗೆ ದೃಢವಾಗಿ ನಿಲ್ಲುತ್ತಾರೆ ಎಂದು ಭರವಸೆ ನೀಡಿದರು.

ಪ್ರತಿಭಟನೆಯಲ್ಲಿ ಪ್ರಧಾನ ಕಾರ್ಯದರ್ಶಿ ಎನ್.ಕೆ.ಬಾಲಾಜಿರಾವ್, ಜಿ.ಜಯರಾಂ, ಮಹದೇವ, ರಾಘವೇಂದ್ರ, ಸುಬ್ರಹ್ಮಣ್ಯ ಸೇರಿದಂತೆ ಹಲವರು ಭಾಗವಹಿಸಿದ್ದರು.

ಬದಲಾದ ಜೀವನ ಶೈಲಿ, ಆಹಾರ ಪದ್ಧತಿಯಿಂದ ಆರೋಗ್ಯ ಸಮಸ್ಯೆ ಉಲ್ಬಣ

●ಮೈಸೂರು ಜಿಪಂ ಸಿಇಒ ಕೆ.ಎಂ. ಗಾಯತ್ರಿ ಆತಂಕ ●ಸೂಕ್ತ ಕಾಲಕ್ಕೆ ಆರೋಗ್ಯ ತಪಾಸಣೆಗೆ ಸಲಹೆ

ಮೈಸೂರು, ಅ.29(ಎಂಟಿವೈ)– ಕೆಲಸದ ಒತ್ತಡದೊಂದಿಗೆ ಬದಲಾಗುತ್ತಿರುವ ಜೀವನ ಶೈಲಿ ಹಾಗೂ ಆಹಾರ ಪದ್ಧತಿಯಿಂದಾಗಿ ವಿವಿಧ ಬಗೆಯ ಆರೋಗ್ಯ ಸಮಸ್ಯೆಗಳು ಕಾಡುತ್ತಿವೆ. ಕಾಲ ಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಂಡು ಆರೋಗ್ಯ ಕಾಪಾಡಿಕೊಳ್ಳುವಂತೆ ಮೈಸೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ (ಸಿಇಒ) ಕೆ.ಎಂ. ಗಾಯತ್ರಿ ಸಲಹೆ ನೀಡಿದ್ದಾರೆ.

ಮೈಸೂರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಂಗಳವಾರ ಆಯೋಜಿಸಿದ್ದ 'ವಿಶ್ವ ಮಾನಸಿಕ ಆರೋಗ್ಯ ದಿನ' ಹಾಗೂ ಪಿಡಿಒ ಮತ್ತು ಜಿ.ಪಂ ಸಿಬ್ಬಂದಿಗಳಿಗಾಗಿ ಆಯೋಜಿಸಿದ್ದ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಸಾಕಷ್ಟು ಜನರಲ್ಲಿ ಚಿಕ್ಕ ವಯಸ್ಸಿಗೆ ವಿವಿಧ ಬಗೆಯ ಅನಾರೋಗ್ಯ ಸಮಸ್ಯೆ ಕಾಡುತ್ತಿದೆ. ಇದಕ್ಕೆ ಬದಲಾದ ಜೀವನ ಶೈಲಿ, ಆಹಾರ ಪದ್ಧತಿ ಹಾಗೂ ಕೆಲಸದಲ್ಲಿ ಉಂಟಾಗುವ ಒತ್ತಡವೂ ಕಾರಣವಾಗಿದೆ. ಈ ಹಿನ್ನೆಲೆಯಲ್ಲಿ ವರ್ಷಕ್ಕೊಮ್ಮೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಕೆಲವರು ಸಮಯವಿಲ್ಲ ಎಂದು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಲು ಹಿಂದೇಟು ಹಾಕಿದರೆ, ಮತ್ತೆ ಕೆಲವರು ಅನಾರೋಗ್ಯ ಸಮಸ್ಯೆ ಬಹಿರಂಗವಾಗುತ್ತದೆ ಎಂಬ ಆತಂಕದಿಂದ ತಪಾಸಣೆ ಮಾಡಿಸಿಕೊಳ್ಳುವುದಿಲ್ಲ. ಈ ಹಿನ್ನೆಲೆಯಲ್ಲಿ ಯಾರೂ ನಿರ್ಲಕ್ಷಿಸದೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಹೇಳಿದರು.



ಮೈಸೂರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯೋಜಿಸಿದ್ದ 'ವಿಶ್ವ ಮಾನಸಿಕ ಆರೋಗ್ಯ ದಿನ' ಕಾರ್ಯಕ್ರಮದಲ್ಲಿ ಡಿಹೆಚ್‌ಒ ಡಾ.ಪಿ.ಕುಮಾರಸ್ವಾಮಿ ಮಾತನಾಡಿದರು.

ಆರೋಗ್ಯ ತಪಾಸಣೆ ಮಾಡಿಸಿಕೊಂಡರೆ ಅನಾರೋಗ್ಯದ ಸಮಸ್ಯೆ ಇದ್ದರೆ ಬೇಗ ಪತ್ತೆ ಮಾಡಿ, ಚಿಕಿತ್ಸೆ ಪಡೆದುಕೊಂಡು ಗುಣಪಡಿಸಿಕೊಳ್ಳಬಹುದು. ನಿರ್ಲಕ್ಷಿಸಿದಷ್ಟು ಅನಾರೋಗ್ಯ ಸಮಸ್ಯೆ ಉಲ್ಬಣಗೊಳ್ಳುತ್ತಲೇ ಹೋಗುತ್ತದೆ. ದೈಹಿಕವಾಗಿ ಸಣ್ಣಪುಟ್ಟ ಸಮಸ್ಯೆಗಳು ಕಾಡಿದರೂ ವೈದ್ಯರ ಬಳಿ ತೆರಳಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಅಧಿಕಾರಿ ವರ್ಗ, ಸಿಬ್ಬಂದಿಗೆ ಕೆಲಸದಲ್ಲಿ ಒತ್ತಡ ಸಾಮಾನ್ಯ. ಆ ಒತ್ತಡವನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಇಲ್ಲದಿದ್ದರೆ ಖಿನ್ನತೆಗೆ ಒಳಗಾಗುವ ಸಾಧ್ಯತೆ ಇರುತ್ತದೆ. ಸಾಕಷ್ಟು ಮಂದಿ ಅಧಿಕಾರಿಗಳು ಒತ್ತಡಕ್ಕೆ ಒಳಗಾಗಿ ಖಿನ್ನತೆ ಅನುಭವಿಸುತ್ತಿದ್ದಾರೆ. ಕೆಲವರು ಒತ್ತಡ ಸಹಿಸಲಾಗದೇ ಸ್ವಯಂ ನಿವೃತ್ತಿ ಪಡೆದುಕೊಳ್ಳಲು ಮುಂದಾಗುತ್ತಿರುವ ಸಾಕಷ್ಟು ಉದಾಹರಣೆ ನಮ್ಮ ಮುಂದೆ ಇದೆ. ಈ ನಿಟ್ಟಿನಲ್ಲಿ ಎಲ್ಲಾ ಅಧಿಕಾರಿಗಳು, ಪಿಡಿಒ ಸೇರಿದಂತೆ ವಿವಿಧ ಇಲಾಖೆಯ ಸಿಬ್ಬಂದಿ ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಗಮನ ಹರಿಸಬೇಕು. ನೀವು ಆರೋಗ್ಯದಿಂದ ಕೂಡಿದ್ದರೆ, ಸಾರ್ವಜನಿಕರ ಸೇವೆಯನ್ನು ಪರಿಣಾಮಕಾರಿಯಾಗಿ ಮಾಡಬಹುದು. ಈ ಉದ್ದೇಶದಿಂದ ಪಿಡಿಒಗಳಿಗಾಗಿ ಇಂದು ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ ಎಂದರು.

ಜಿಲ್ಲಾ ಕುಟುಂಬ ಕಲ್ಯಾಣ ಇಲಾಖೆ ಯೋಜನಾಧಿಕಾರಿ ಪ್ರಭುಸ್ವಾಮಿ ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಒಬ್ಬ ವ್ಯಕ್ತಿಗೆ ಮಾನಸಿಕ ಒತ್ತಡ ಎಂಬುದು ಒಂದು ರೀತಿಯ ಕಾಯಿಲೆ ಇದ್ದಂತೆ. ಕರ್ತವ್ಯ ನಿರತ ಅಧಿಕಾರಿಗಳಿಗೆ ಈ ರೀತಿಯ ಮಾನಸಿಕ ಒತ್ತಡ ನಿರ್ವಹಣಾ ಕಾರ್ಯಾಗಾರದ ಅವಶ್ಯಕತೆ ಇದೆ. ಪ್ರತಿಯೊಬ್ಬರಿಗೂ ಪ್ರತಿಯೊಂದು ಕೆಲಸ ಮಾಡುವಾಗಲೂ ಕೆಲಸದ ಒತ್ತಡ ಇದ್ದೇ ಇರುತ್ತದೆ. ಸ್ವಾತಂತ್ರ್ಯ ಪೂರ್ವ ಮತ್ತು ನಂತರದ ಕಾಲಮಾನದಲ್ಲಿ ಭಾರತದಲ್ಲಿ ನಿರೀಕ್ಷಿತಾ ಜೀವಿತಾವಧಿ, ಜನನ ದರ, ಮರಣ ದರಗಳ ಹೋಲಿಕೆ ಮಾಡಿದಲ್ಲಿ ಪ್ರಸ್ತುತ ದಿನಗಳಲ್ಲಿ ನಾವು ಉತ್ತಮ ಸ್ಥಾನದಲ್ಲಿದ್ದೇವೆ. ಭಾರತದಲ್ಲಿ 1941– 1947ರ ಅವಧಿಯಲ್ಲಿ ಸರಾಸರಿ ಜೀವಿತಾವಧಿ 32 ವರ್ಷವಿತ್ತು, ಇಂದು 70 ವರ್ಷ ಆಗಿದೆ. ಇದು ಉತ್ತಮ ರೀತಿಯ ಧನಾತ್ಮಕ ಬೆಳವಣಿಗೆಯಾಗಿದೆ ಎಂದರು. ಕಾರ್ಯಕ್ರಮದಲ್ಲಿ ಜಿ.ಪಂ. ಉಪ ಕಾರ್ಯದರ್ಶಿ ಕೃಷ್ಣಂರಾಜು, ಸಿಇಒ ಸಿದ್ದಲಿಂಗಮ್ಮ, ಡಾ.ಸಿರಾಜ್ ಅಹಮದ್, ಡಾ.ಬೃಂದಾ ಸೇರಿದಂತೆ ವಿವಿಧ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಇನ್ನಿತರರು ಉಪಸ್ಥಿತರಿದ್ದರು.

ಮಾನಸಿಕ ಆರೋಗ್ಯ ಕಾಪಾಡಿಕೊಳ್ಳುವುದು ಅವಶ್ಯ: ಡಿಹೆಚ್‌ಒ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಪಿ.ಕುಮಾರಸ್ವಾಮಿ ಮಾತನಾಡಿ, ಈ ಹಿಂದೆ ಸಾಂಕ್ರಾಮಿಕ ರೋಗಗಳಾದ ಮಲೇರಿಯಾ, ಪ್ಲೇಗ್, ಕಾಲರ ಹಾಗೂ ನೀರಿನಿಂದ ಬರುವ ರೋಗಗಳ ಸಂಖ್ಯೆ ಹೆಚ್ಚಾಗಿತ್ತು. ಆದರೆ ಕಾಲ ಕ್ರಮೇಣ ಕೈಗೊಂಡ ಕಟ್ಟುನಿಟ್ಟಿನ ಕ್ರಮದಿಂದಾಗಿ ಸಾಂಕ್ರಾಮಿಕ ರೋಗಗಳು ಶೇ.95ರಷ್ಟು ಕಡಿಮೆಯಾಗಿವೆ. ಈ ಕಾರಣದಿಂದ ಈಗ ಒಂದು–ಎರಡು ಪ್ರಕರಣ ದಾಖಲಾದರೂ ರಾಜ್ಯ ಮತ್ತು ರಾಷ್ಟ್ರದ ಗಮನ ಸೆಳೆಯುತ್ತದೆ. ಈಗ ಸಾಂಕ್ರಾಮಿಕ ಹಾಗೂ ಸಾಂಕ್ರಾಮಿಕವಲ್ಲದ ರೋಗಗಳು ಜನರನ್ನು ಕಾಡುವಂತಹ ಸ್ಥಿತಿ ನಿರ್ಮಾಣವಾಗಿದೆ.

ಡೆಂಗ್ಯೂ, ಕಾಲರ, ಮಲೇರಿಯಾ ರೋಗದೊಂದಿಗೆ ಸಾಂಕ್ರಾಮಿಕವಲ್ಲದ ರೋಗಗಳಾದ ಡಯಾಬಿಟಿಸ್, ಕ್ಯಾನ್ಸರ್, ಹೈಪರ್ ಟೆನ್ಷನ್ಸ್, ಆತ್ಮಹತ್ಯೆ, ಅಪಘಾತ ಪ್ರಕರಣ ಹೆಚ್ಚಾಗುತ್ತಿದೆ. ಇಂತಹ ಸಂದರ್ಭ ಕಾಲ ಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು ಮುಖ್ಯ. ಮಾನಸಿಕ ಆರೋಗ್ಯ ಕಾಪಾಡಿಕೊಳ್ಳುವುದು ಮುಖ್ಯ. ಈ ಹಿಂದೆ 40, 50 ವರ್ಷ ಮೇಲ್ಪಟ್ಟವರಿಗೆ ಬರುತ್ತಿದ್ದ ಖಾಯಿಲೆಗಳು ಈಗ ಚಿಕ್ಕ ವಯಸ್ಸಿನವರಿಗೆ ಬರುತ್ತಿವೆ. ಇದಕ್ಕೆ ಒತ್ತಡವೂ ಕಾರಣ. ಹಾಗಾಗಿ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು.

ಆರೋಗ್ಯ ಕಾರ್ಯಕ್ರಮಗಳನ್ನು ಗ್ರಾಮ ಮಟ್ಟದಲ್ಲಿ ಪರಿಣಾಮಕಾರಿಯಾಗಿ ನಡೆಸಬೇಕು. ಜಿಲ್ಲೆಯಲ್ಲಿ 35 ಲಕ್ಷಕ್ಕೂ ಹೆಚ್ಚು ಜನರಿದ್ದಾರೆ. ಮಾನವ ಸಂಪನ್ಮೂಲವನ್ನು ಆರೋಗ್ಯವಂತರಾಗಿ ಬೆಳೆಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಹಲವು ಕಾರ್ಯಕ್ರಮ ರೂಪಿಸಿದೆ. ಆ ಕಾರ್ಯಕ್ರಮಗಳನ್ನು ಗ್ರಾಮ ಮಟ್ಟದಲ್ಲಿ ಪರಿಣಾಮಕಾರಿಯಾಗಿ ನಡೆಸುವ ಜವಾಬ್ದಾರಿ ಗ್ರಾ.ಪಂ.ದಾಗಿರುತ್ತದೆ. ಪಿಡಿಒ, ಗ್ರಾ.ಪಂ. ಕಾರ್ಯದರ್ಶಿಗಳೂ ಸೇರಿದಂತೆ ಸ್ಥಳೀಯ ಸಂಸ್ಥೆಗಳು ಸಮರ್ಪಕವಾಗಿ ನೀಡುವ ಸಹಕಾರದಿಂದ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಪರಿಣಾಮಕಾರಿಯಾಗಿ ಆರೋಗ್ಯ ಸೇವೆ ಒದಗಿಸುತ್ತವೆ ಎಂದು ತಿಳಿಸಿದರು.

ಪ್ರಸ್ತುತ ಸಂದರ್ಭದಲ್ಲಿ ಆರೋಗ್ಯ ಕ್ಷೇತ್ರ ಸಾಕಷ್ಟು ಸಾಧನೆ ಮಾಡಿದೆ. ಕ್ಯಾನ್ಸರ್‌ನಂತಹ ಮಾರಣಾಂತಿಕ ರೋಗ 1, 2, 2ಎ ಹಂತದಲ್ಲಿದ್ದರೂ ಸೂಕ್ತ ಚಿಕಿತ್ಸೆ ನೀಡಿ ಗುಣಪಡಿಸುವ ನಿಟ್ಟಿನಲ್ಲಿ ಚಿಕಿತ್ಸಾ ಕ್ರಮದಲ್ಲಿ ಪ್ರಗತಿ ಸಾಧಿಸಿದೆ. ಓರಿಯೆಂಟೆಡ್ ಸ್ಕ್ರೀನಿಂಗ್ ವ್ಯವಸ್ಥೆ ಮಾಡಲಾಗುತ್ತಿದೆ. ಸಾಕಷ್ಟು ಸುಧಾರಣೆಗಳಾಗಿದ್ದು, ಜನ ಆರೋಗ್ಯ ಕಾಪಾಡಿಕೊಳ್ಳಲು ತಪಾಸಣೆಗೆ ಒಳಗಾಗಬೇಕು ಎಂದು ಡಿಹೆಚ್‌ಒ ಸಲಹೆ ನೀಡಿದರು.

ರಾಜ್ಯ ಮಟ್ಟದ ರಾಜ್ಯೋತ್ಸವ ಪ್ರಶಸ್ತಿಯಂತೆ ಜಿಲ್ಲಾ ಮಟ್ಟದಲ್ಲೂ ಪ್ರಶಸ್ತಿ ನೀಡಲು ಮನವಿ



ಎನ್.ಆರ್.ನಾಗೇಶ್

ಮೈಸೂರು,ಅ.29(ಜಿಎ)–ರಾಜ್ಯ ಮಟ್ಟದ ರಾಜ್ಯೋತ್ಸವ ಪ್ರಶಸ್ತಿಯಂತೆ ಜಿಲ್ಲಾಮಟ್ಟದಲ್ಲಿಯೂ ನೀಡಬೇಕು ಎಂದು ಮೈಸೂರು ನಗರ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗದ ಅಧ್ಯಕ್ಷ ಎನ್.ಆರ್.ನಾಗೇಶ್ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಸಮಾರಂಭದಲ್ಲಿ ಪ್ರಶಸ್ತಿ ಪುರಸ್ಕೃತರಿಗೆ ಗೌರವಿಸುವ ವೇಳೆ ಅವರಿಗೆ ಹಾರ, ಶಾಲು, ಪೇಟ, ತಾಂಬೂಲ, ಸರ್ಟಿಫಿಕೇಟ್ ಕೊಟ್ಟು ಗೌರವಿಸುತ್ತಿರುವುದು ಸಂತೋಷ. ಆದರೆ ರಾಜ್ಯ ಮಟ್ಟದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಿಗೆ ನೀಡುವ ಗೌರವ ಸಮರ್ಪಣೆ ಜೊತೆಗೆ ಸಹಾಯಧನ, ಸರ್ಕಾರದ ಚಿಹ್ನೆ ಇರುವ ಚಿನ್ನದ ಪದಕ ಕೊಡುತ್ತಿರುವಂತೆ ಸರ್ಕಾರವು ಜಿಲ್ಲಾ ಮಟ್ಟದಲ್ಲೂ ಕೂಡ ಸಹಾಯಧನದ ಜೊತೆಗೆ ಬೆಳ್ಳಿ ಪದಕ ನೀಡಬೇಕು. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಕನ್ನಡ–ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ಎಸ್.ತಂಗಡಗಿ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಜಿಲ್ಲಾಧಿಕಾರಿ ಮುಖಾಂತರ ಮನವಿ ಸಲ್ಲಿಸುತ್ತೇವೆ ಎಂದು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ನ.1ರಂದು ಕನ್ನಡ ರಾಜ್ಯೋತ್ಸವ ಸಮಾರಂಭ



ಮೈಸೂರು, ಅ.29–ಜಿಲ್ಲಾಡಳಿತ ವತಿಯಿಂದ ಕನ್ನಡ ರಾಜ್ಯೋತ್ಸವವನ್ನು ನ.1ರಂದು ಬೆಳಗ್ಗೆ 9 ಗಂಟೆಗೆ ಓವಲ್ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ. ಸಮಾಜ ಕಲ್ಯಾಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಧ್ವಜಾರೋಹಣ ಮಾಡಲಿದ್ದು, ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ ಅಧ್ಯಕ್ಷತೆ ವಹಿಸಲಿದ್ದಾರೆ.

ಪಶುಸಂಗೋಪನೆ, ರೇಷ್ಮೆ ಸಚಿವ ಕೆ.ವೆಂಕಟೇಶ್, ಅರಣ್ಯ, ವಸತಿ ಮತ್ತು ವಿಹಾರ ಧಾಮಗಳ ನಿಗಮದ ಅಧ್ಯಕ್ಷ, ಶಾಸಕ ಅನಿಲ್‌ಕುಮಾರ್, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ, ಶಾಸಕ ರಮೇಶ್ ಬಂಡಿಸಿದ್ದೇಗೌಡ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರ್‌ನಾಥ್, ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ.ಮಾನಸ ಗೌರವ ಉಪಸ್ಥಿತರಿರಲಿದ್ದಾರೆ. ಸಂಸದರಾದ ಯದುವೀರ್ ಒಡೆಯರ್, ಸುನಿಲ್ ಬೋಸ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಶಾಸಕರಾದ ತನ್ವೀರ್ ಸೇಠ್, ಜಿ.ಟಿ ದೇವೇಗೌಡ, ರವಿಶಂಕರ್, ಟಿ.ಎಸ್.ಶ್ರೀವತ್ಸ, ದರ್ಶನ್ ಧ್ರುವನಾರಾಯಣ್, ಜಿ.ಡಿ.ಹರೀಶ್‌ಗೌಡ ಹಾಗೂ ವಿಧಾನಪರಿಷತ್ ಸದಸ್ಯರಾದ ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ.ಮಾದೇಗೌಡ, ಯತೀಂದ್ರ.ಎಸ್ ಮತ್ತು ಕೆ.ವಿವೇಕಾನಂದ ಸಮಾರಂಭದ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಹಾಗೂ ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರಾಧಿಕಾರದ ಅಧ್ಯಕ್ಷ ಮರಿಸ್ವಾಮಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ರಾಜ್ಯದ ಮೇಲೆ ಹಿಂದಿ ಹೇರಿಕೆ ಖಂಡಿಸಿ ಕನ್ನಡಪರ ಸಂಘಟನೆಗಳಿಂದ ಪ್ರತಿಭಟನೆ



ಮೈಸೂರಿನ ಬಸವ ಪುತ್ಥಳಿ ಮುಂಭಾಗ ಕನ್ನಡ ಸಂಘಟನೆಗಳ ಮುಖಂಡರು, ಹಿಂದಿ ಹೇರಿಕೆ ಖಂಡಿಸಿ ಪ್ರತಿಭಟನೆ ನಡೆಸಿದರು.

ಮೈಸೂರು, ಅ.29(ಜಿಎ)–ರಾಜ್ಯದ ಮೇಲೆ ಹಿಂದಿ ಹೇರಿಕೆ ಮಾಡುತ್ತಿರುವ ಕೇಂದ್ರ ಸರ್ಕಾರದ ನಡೆ ಖಂಡಿಸಿ ಕನ್ನಡಪರ ಸಂಘಟನೆಗಳ ಮುಖಂಡರು ಗನ್ ಹೌಸ್ ಬಳಿ ಇರುವ ಬಸವೇಶ್ವರ ಪುತ್ಥಳಿ ಮುಂಭಾಗ ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ಸಾಹಿತಿ ಬನ್ನೂರು ಕೆ.ರಾಜು, ರಾಜ್ಯಗಳ ಮೇಲೆ ಹಿಂದಿ ಹೇರಿಕೆ ನಿನ್ನೆ ಮೊನ್ನೆಯದಲ್ಲ. ಹಿಂದಿನಿಂದಲೂ ಕೇಂದ್ರ ಸರ್ಕಾರಗಳು ಈ ರೀತಿಯ ರಾಜ್ಯ ವಿರೋಧಿ ನಡೆ ಅನುಸರಿಸುತ್ತಿವೆ. ದಕ್ಷಿಣ ರಾಜ್ಯಗಳನ್ನು ಕಡೆಗಣಿಸುತ್ತಾ, ಕೇವಲ ಉತ್ತರ ರಾಜ್ಯಗಳು ಮಾತ್ರ ಶ್ರೇಷ್ಠ ಎಂದು ಬಿಂಬಿಸಲಾಗುತ್ತಿದೆ. ಇದರಿಂದಾಗಿ ಪ್ರಾದೇಶಿಕ ಭಾಷೆಗಳು ಕಡೆಗಣನೆಗೆ ಒಳಗಾಗಿವೆ. ಭಾರತ ಒಕ್ಕೂಟ ವ್ಯವಸ್ಥೆಯನ್ನು ಒಳಗೊಂಡಿರುವುದರಿಂದ ಎಲ್ಲಾ ರಾಜ್ಯಗಳನ್ನು ಒಟ್ಟಿಗೆ ಕೊಂಡೊಯ್ಯುವ ಕೆಲಸ ಮಾಡಬೇಕು ಎಂದು ಆಗ್ರಹಿಸಿದರು.

ಕೇವಲ ಹಿಂದಿ ಮಾತ್ರ ರಾಷ್ಟ್ರ ಭಾಷೆಯಲ್ಲ ರಾಷ್ಟ್ರದ ಎಲ್ಲಾ ಭಾಷೆಗಳು ರಾಷ್ಟ್ರೀಯ ಭಾಷೆಗಳೆ. ಕನ್ನಡ ಹಿಂದಿಗಿಂತಲೂ ಪ್ರಾಚೀನ ಭಾಷೆಯಾಗಿದ್ದು, ಕನ್ನಡವೇ ರಾಷ್ಟ್ರಭಾಷೆಯಾಗಬೇಕು. ಆದರೆ, ಕೇಂದ್ರ ಸರ್ಕಾರಗಳು ಕನ್ನಡವನ್ನು ಕಡೆಗಣಿಸಿವೆ. ಬ್ಯಾಂಕ್ ಸೇರಿದಂತೆ ಹಲವು ಕ್ಷೇತ್ರಗಳ ಉದ್ಯೋಗದಲ್ಲಿ ಕನ್ನಡಿಗರಿಗೆ ಉದ್ಯೋಗ ಸಿಗದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಪ್ರಾದೇಶಿಕ ಅಸಮಾನತೆ ನಿರ್ಮಾಣವಾಗುತ್ತಿದ್ದು, ಜನ ದಂಗೆ ಎದ್ದು ರಕ್ತಕ್ರಾಂತಿಯಾದರೂ ಅಚ್ಚರಿಯಿಲ್ಲ. ಹೀಗಾಗಿ ಪ್ರಧಾನಿ ಮೋದಿ ಅವರು ಇದಕ್ಕೆ ಆಸ್ಪದ ಕೊಡದೆ ರಾಜ್ಯದ ಮೇಲೆ ಹಿಂದಿ ಹೇರಿಕೆ ಹಿಂಪಡೆಯಬೇಕು. ಪ್ರಾದೇಶಿಕ ಭಾಷೆಗಳಿಗೂ ಮಹತ್ವ ನೀಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಕನ್ನಡಪರ ಹೋರಾಟಗಾರರಾದ ಪ್ರೊ.ಪಿ.ವಿ.ನಂಜರಾಜೇ ಅರಸ್, ಡಿ.ಪಿ.ಕೆ.ಪರಮೇಶ್ವರ್, ಯಮುನಾ, ಅರವಿಂದ ಶರ್ಮ, ಚಂದ್ರಶೇಖರ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಪಟಾಕಿ ಸಂಬಂಧ ಸಾರ್ವಜನಿಕರಲ್ಲಿ ಜಾಗೃತಿ ಜಾಥಾ...



ಮೈಸೂರಿನ ಶೇಷಾದ್ರಿಪುರಂ ಪದವಿ ಕಾಲೇಜು ವಿದ್ಯಾರ್ಥಿಗಳು ಹೆಬ್ಬಾಳು ಬಡಾವಣೆ ಮುಖ್ಯಬೀದಿಗಳಲ್ಲಿ ಪಟಾಕಿ ಸಿಡಿಸುವುದನ್ನು ಕೈಬಿಟ್ಟು, ಪರಿಸರ ಪ್ರೇಮಿಗಳಾಗುವಂತೆ ಜಾಗೃತಿ ಜಾಥಾ ನಡೆಸಿ, ಮಂಚೇಗೌಡನಕೊಪ್ಪಲು ಸರ್ಕಲ್‌ನಲ್ಲಿ ಮಾನವ ಸರಪಳಿ ನಿರ್ಮಿಸಿದರು. ಈ ವೇಳೆ ಕಾಂಗ್ರೆಸ್ ಮುಖಂಡ ರವಿ ಮಂಚೇ ಗೌಡನಕೊಪ್ಪಲು ಇನ್ನಿತರರಿದ್ದರು.

ಉಚಿತ ತಾಂತ್ರಿಕ ಕೌಶಲಾಭಿವೃದ್ಧಿ ತರಬೇತಿಗೆ ಅರ್ಜಿ

ಮೈಸೂರು, ಅ.29–ಕರ್ನಾಟಕ ಸರ್ಕಾರದ ಎಐಟಿಟಿ, ಎಸ್.ಸಿ.ಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಕರ್ನಾಟಕ ರಾಜ್ಯದಲ್ಲಿ ವಾಸವಾಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅರ್ಹ ಯುವಕ ಯುವತಿಯರಿಂದ ಉದ್ಯೋಗ ಆಧಾರಿತ ಉಚಿತ ತಾಂತ್ರಿಕ ಕೌಶಲಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ನ.15 ಕೊನೆಯ ದಿನಾಂಕವಾಗಿದ್ದು, ವಿವಿಧ ತರಬೇತಿಗೆ ಬಿಇ, ಡಿಪ್ಲೊಮಾ, ಎಸ್‌ಎಸ್‌ಎಲ್‌ಸಿ, ಐಟಿಐ ವಿದ್ಯಾರ್ಹತೆ ಹೊಂದಿರುವ 16ರಿಂದ 45 ವರ್ಷದೊಳಗಿನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9945442654, 9945479700 ಅಥವಾ 9900864686ನ್ನು ಸಂಪರ್ಕಿಸಬಹುದು ಎಂದು ಜಿ.ಟಿ.ಟಿ.ಸಿ ಕೇಂದ್ರದ ಸಿ.ಒ.ಇ–ಸಂಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿನಾಯಕನಗರದಲ್ಲಿ ಪುನೀತ್ ಪುಣ್ಯಸ್ಮರಣೆ



ಮೈಸೂರಿನ ವಿನಾಯಕನಗರದಲ್ಲಿ ದಿವಂಗತ ನಟ ಪುನೀತ್ ರಾಜ್‌ಕುಮಾರ್ ಮೂರನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಮೈಸೂರು,ಅ.29–ಮೈಸೂರಿನ ವಿನಾಯಕನಗರದಲ್ಲಿ ದಿವಂಗತ ನಟ ಪುನೀತ್ ರಾಜ್‌ಕುಮಾರ್ 3ನೇ ಪುಣ್ಯಸ್ಮರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಪುನೀತ್ ರಾಜ್‌ಕುಮಾರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಮಾತನಾಡಿದ ಜೆಡಿಎಸ್ ಯುವ ಮುಖಂಡ ಹಾಗೂ ಮೈಸೂರು ಒಕ್ಕಲಿಗರ ಸಂಘದ ನಿರ್ದೇಶಕ ರವಿ, ಕನ್ನಡ ಚಿತ್ರರಂಗದ ಅಚ್ಚುಮೆಚ್ಚಿನ ನಾಯಕ ನಟ ಹಾಗೂ ಕನ್ನಡಿಗರೆಂದೂ ಮರೆಯಲಾಗದ ಮಾಣಿಕ್ಯ ಪುನೀತ್ ರಾಜ್‌ಕುಮಾರ್ ನಮ್ಮೊಂದಿಗೆ ಇಲ್ಲ ಅನ್ನೋದನ್ನ ಮೂರೂ ವರ್ಷವಾದರೂ ನಂಬಲಾಗುತ್ತಿಲ್ಲ. ಅಷ್ಟರಮಟ್ಟಿಗೆ ಪುನೀತ್ ರಾಜ್‌ಕುಮಾರ್ ನಮ್ಮನ್ನೆಲ್ಲ ಈಗಲೂ ಆವರಿಸಿಕೊಂಡಿದ್ದಾರೆ. ಅವರು ನಮ್ಮೊಂದಿಗೆ ಇಲ್ಲದಿದ್ದರೂ ಅವರ ಸಾಧನೆಗಳಲ್ಲಿ ನಮಗಿನ್ನೂ ಕಾಣುತ್ತಿದ್ದಾರೆ ಎಂದು ಹೇಳಿದರು.

ಜೆಡಿಎಸ್ ಮುಖಂಡ ಸೋಮು ಮಾತನಾಡಿ, ಪುನೀತ್ ರಾಜ್‌ಕುಮಾರ್ ಶರಣ ಗುಣವಾ ಮರಣದಲ್ಲಿ ಕಾಣು ಅನ್ನೋ ಮಾತಿಗೆ ಅನ್ವರ್ಥಕವಾಗಿದ್ದಾರೆ. ನಾವು ಸಹ ಅವರ ಸನ್ಮಾರ್ಗದಲ್ಲಿ ಮುನ್ನಡೆಯಬೇಕು. ಇದೇ ನಾವು ಅಗಲಿದ ಚೇತನ ಪುನೀತ್ ರಾಜ್‌ಕುಮಾರ್‌ಗೇ ಸಲ್ಲಿಸುವ ನಿಜವಾದ ಶ್ರದ್ಧಾಂಜಲಿ ಎಂದು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ಮುಖಂಡರಾದ ಸುರೇಶ್ ಕುಮಾರ್, ಮಂಜುನಾಥ್, ವಿಶ್ವನಾಥ್, ಶಿವಕುಮಾರ್, ಶ್ರೀಧರ್, ಮಹಾದೇವ ಮತ್ತಿತರರು ಉಪಸ್ಥಿತರಿದ್ದರು.

ದಸರೆಯಲ್ಲಿ ಮಂಗಳವಾದ್ಯ ಕಲಾವಿದರಿಗೆ ಅನ್ಯಾಯ

ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ಪ್ರತಿಭಟನೆ



ಮಂಗಳವಾದ್ಯ ಕಲಾವಿದರಿಗೆ ಆಗುತ್ತಿರುವ ಅನ್ಯಾಯ ಖಂಡಿಸಿ ಕರ್ನಾಟಕ ರಾಜ್ಯ ಸವಿತಾ ಮಂಗಳವಾದ್ಯ ಸಂಗೀತಗಾರರ ಜಿಲ್ಲಾ ಹಾಗೂ ತಾಲೂಕು ಸಂಘದಿಂದ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಅ.29(ಜಿಎ)–ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ರಾಜ್ಯದ ಮಂಗಳವಾದ್ಯ ಕಲಾವಿದರಿಗೆ ಆಗುತ್ತಿರುವ ಅನ್ಯಾಯ ಖಂಡಿಸಿ ಕರ್ನಾಟಕ ರಾಜ್ಯ ಸವಿತಾ ಮಂಗಳವಾದ್ಯ ಸಂಗೀತಗಾರರ ಜಿಲ್ಲಾ ಹಾಗೂ ತಾಲೂಕು ಸಂಘದಿಂದ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಪ್ರತಿಭಟನೆ ನಡೆಸಲಾಯಿತು.

ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ರಾಜ್ಯದ ಹಾಗೂ ಸ್ಥಳೀಯ ಕಲಾವಿದರಿಗೆ ಅವಕಾಶ ನೀಡದೆ ಅನ್ಯಾಯ ಮಾಡಲಾಗುತ್ತಿದೆ. ಯಾವುದೇ ವೇದಿಕೆಗಳಲ್ಲೂ ಅವಕಾಶ ಸಿಗುತ್ತಿಲ್ಲ. ಒಬ್ಬರಿಗೇ ಹಲವು ಕಾರ್ಯಕ್ರಮಗಳನ್ನು ನೀಡಲಾಗುತ್ತಿದೆ. ಉಳಿದ ಉತ್ತಮ ಕಲಾವಿದರು ಕಡೆಗಣನೆಗೆ ಒಳಗಾಗುತ್ತಿದ್ದಾರೆ. ಎಷ್ಟೇ ಅರ್ಜಿ ಹಾಕಿದರೂ ಅವಕಾಶ ಸಿಗುತ್ತಿಲ್ಲ. ಪ್ರತಿ ದಸರಾದಲ್ಲೂ ಇದೇ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ಕಿಡಿಕಾರಿದರು.

ಮುಂದಿನ ದಸರಾದಲ್ಲಿ ಸಮಸ್ಯೆ ಬಗೆಹರಿಸುತ್ತೇವೆ ಎಂದು ಭರವಸೆ ನೀಡುವ ಅಧಿಕಾರಿಗಳು ಮತ್ತೆ ಅದೇ ಕೆಲಸ ಮಾಡುತ್ತಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಅರಮನೆ ಅಧಿಕಾರಿಗಳ ಭ್ರಷ್ಟತನದಿಂದಾಗಿ ನಿಜವಾದ ಕಲಾವಿದರು ಅನ್ಯಾಯಕ್ಕೆ ಒಳಗಾಗುತ್ತಿದ್ದಾರೆ. ಹೀಗಾಗಿ ಮುಂದಿನ ದಸರಾದಲ್ಲಿ ಒಬ್ಬರಿಗೇ ಅವಕಾಶ ಕೊಡದೆ ಎಲ್ಲಾ ಕಲಾವಿದರಿಗೂ ಅವಕಾಶ ಮಾಡಿಕೊಡಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಕಲಾವಿದರಾದ ಎಸ್.ಪುಟ್ಟರಾಜು, ಎಂ.ಎನ್.ಶ್ರೀನಿವಾಸು, ನಾರಾಯಣ್, ಹರೀಶ್, ಕೃಷ್ಣ ಅಜಯ್, ಶ್ರೀಧರ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಅಸಮರ್ಥನೀಯ ಒಳ ಮೀಸಲಾತಿ ತಿರಸ್ಕರಿಸಿ; ಕಾಂತರಾಜು ಆಯೋಗದ ವರದಿ ಬಹಿರಂಗಗೊಳಿಸಿ

ಮೈಸೂರು ಜಿಲ್ಲಾ ಕುಳುವ ಮಹಾಸಂಘ ಆಗ್ರಹ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕುಳುವ ಮಹಾಸಂಘದ ಅಧ್ಯಕ್ಷ ಡಿ.ಎನ್.ಮುತ್ತುರಾಜು ಮಾತನಾಡಿದರು.

ಮೈಸೂರು, ಅ.29(ಜಿಎ)– ಅಸಮರ್ಥನೀಯ ಹಾಗೂ ಅತಾರ್ಕಿಕ ದತ್ತಾಂಶಗಳನ್ನು ಆಧರಿಸಿದ ಪರಿಶಿಷ್ಟ ಜಾತಿಯ ಒಳಮೀಸಲಾತಿ ವರ್ಗೀಕರಣವನ್ನು ತಿರಸ್ಕರಿಸುವಂತೆ ಹಾಗೂ ಕಾಂತರಾಜು ಆಯೋಗದ ವರದಿಯನ್ನು ಬಹಿರಂಗಪಡಿಸುವಂತೆ ಮೈಸೂರು ಜಿಲ್ಲಾ ಕುಳುವ ಮಹಾಸಂಘದ ಅಧ್ಯಕ್ಷ ಡಿ.ಎನ್. ಮುತ್ತುರಾಜು ಆಗ್ರಹಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪರಿಶಿಷ್ಟ ಜಾತಿಯ ಒಳಮೀಸಲಾತಿ (ವರ್ಗೀಕರಣ) ಕುರಿತು ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯದ ಸಪ್ತ ಪೀಠವು ತೀರ್ಪು ನೀಡಿದ್ದು ಸರಿಯಷ್ಟೆ, ಈ ಬಗ್ಗೆ ರಾಜ್ಯ ಸರ್ಕಾರ ಪರಿಶಿಷ್ಟ ಜಾತಿಯ ಒಳಮೀಸಲಾತಿ ಕುರಿತಾಗಿ ಅವೈಜ್ಞಾನಿಕ, ಅತಾರ್ಕಿಕ ಹಾಗೂ ಅಸಮರ್ಥನೀಯ ದತ್ತಾಂಶಗಳನ್ನು ಆಧರಿಸಿ ಒಳಮೀಸಲಾತಿ ವರ್ಗೀಕರಣಕ್ಕೆ ಮುಂದಾಗಿರುವುದು ಸಾಮಾಜಿಕ ನ್ಯಾಯದ ಕಗ್ಗೊಲೆಯಾಗಿದೆ ಎಂದು ತಿಳಿಸಿದರು.

ಪರಿಶಿಷ್ಟ ಜಾತಿಯ 101 ಸಮುದಾಯಗಳ ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯ ಪ್ರಾತಿನಿಧ್ಯ ಕುರಿತಾದ ಸಮಗ್ರ ಹಾಗೂ ವಸ್ತುನಿಷ್ಠ ಅಂಕಿ–ಅಂಶಗಳ ಕೊರತೆ ಇದ್ದು, ಈ ಬಗ್ಗೆ ವೈಜ್ಞಾನಿಕ ಅಧ್ಯಯನ ಕೈಗೊಳ್ಳದೆ, ಕೆಲವು ಪಟ್ಟಭದ್ರ ಹಿತಾಸಕ್ತಿಗಳ ಒತ್ತಡಕ್ಕೆ ಮಣಿದು ಏಕಾಏಕಿ ಒಳಮೀಸಲಾತಿ ವರ್ಗೀಕರಣ ಕುರಿತಾಗಿ ಏಕಪಕ್ಷೀಯ ನಿರ್ಧಾರಗಳನ್ನು ಕೈಗೊಳ್ಳಲು ಹೊರಟಿರುವ ರಾಜ್ಯ ಸರ್ಕಾರದ ನಡೆಯನ್ನು ಮೈಸೂರು ಜಿಲ್ಲಾ ಕುಳುವ ಮಹಾಸಂಘವು ತೀವ್ರವಾಗಿ ಖಂಡಿಸುತ್ತದೆ ಎಂದು ಹೇಳಿದರು.

ಪರಿಶಿಷ್ಟ ಜಾತಿಗಳ ನಡುವೆ ಒಳಮೀಸಲಾತಿ ಕಲ್ಪಿಸಲು ರಾಜ್ಯದಲ್ಲಿ 101 ಪರಿಶಿಷ್ಟ ಜಾತಿಗಳ ನಡುವಿನ ಮೀಸಲಾತಿ ಹಂಚಿಕೆ ಕುರಿತಾದ ಸಮಗ್ರ ಸಾಮಾಜಿಕ, ಶೈಕ್ಷಣಿಕ, ಔದ್ಯೋಗಿಕ ಹಾಗೂ ರಾಜಕೀಯ ಕ್ಷೇತ್ರಗಳಲ್ಲಿ ಪ್ರಾತಿನಿಧ್ಯವನ್ನು ಖಾತ್ರಿಪಡಿಸಲು ಸಮರ್ಥನೀಯ ಹಾಗೂ ವೈಜ್ಞಾನಿಕ ದತ್ತಾಂಶಗಳನ್ನು ಕ್ರೋಢಿಕರಿಸಿ, ವಿಶ್ಲೇಷಿಸಿ ತಜ್ಞರ ವರದಿಯನ್ನು ಪಡೆದುಕೊಳ್ಳದ ಹೊರತು, ಸರ್ಕಾರವು ಯಾವುದೇ ಕ್ರಮವನ್ನು ಕೈಗೊಳ್ಳದಂತೆ ರಾಜ್ಯದ ದಮನಿತ ಹಾಗೂ ಅವಕಾಶವಂಚಿತ ಅಲೆಮಾರಿ ಕೊರಮ–ಕೊರಚ–ಕೊರವ ಸಮುದಾಯಗಳ ಪರವಾಗಿ ಮೈಸೂರು ಜಿಲ್ಲಾ ಕುಳುವ ಮಹಾಸಂಘವು ಈ ಮೂಲಕ ಸರ್ಕಾರವನ್ನು ಒತ್ತಾಯಿಸುತ್ತದೆ ಎಂದರು.

ಪ್ರಧಾನ ಕಾರ್ಯದರ್ಶಿ ಮೋಹನ್ ಕಾಯಕ ಮಾತನಾಡಿ, 2011ರ ಜನಗಣತಿ ಆಧರಿಸಿ ಒಳಮೀಸಲಾತಿ ವರ್ಗೀಕರಣ ಮಾಡಿರುವುದು ಸರಿಯಲ್ಲ. ಇದರಿಂದ ಅವಕಾಶ ವಂಚಿತ ಕೊರಮ, ಕೊರಚ ಸಮುದಾಯಗಳಿಗೆ ಅನ್ಯಾಯವಾಗಲಿದೆ. ಅಲ್ಲದೇ ಜಾತಿಗಣತಿ ವರದಿಯನ್ನು ಬಹಿರಂಗಗೊಳಿಸಿದ ನಂತರ ಜಾತಿಗಣತಿ ಜಾರಿಗೊಳಿಸಲು ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.

ಕಾರ್ಯಾಧ್ಯಕ್ಷ ಪಿ.ನಾಗರಾಜು ಮಾತನಾಡಿ, ಪರಿಶಿಷ್ಟ ಜಾತಿಯ ಅಲೆಮಾರಿ ಕೊರಮ, ಕೊರಚ ಸಮುದಾಯಗಳು ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಕ್ಷೇತ್ರದಲ್ಲಿ ಅವಕಾಶವಿಲ್ಲದೆ ತಬ್ಬಲಿಯಾಗಿದೆ. ಹಾಗಾಗಿ ಒಳಮೀಸಲಾತಿ ವರ್ಗೀಕರಣ ಪಾರದರ್ಶಕವಾಗಿರಬೇಕು. ಪ್ರಸ್ತುತ ಜನಸಂಖ್ಯೆಗೆ ಆದಾರವಾಗಿ ಒಳಮೀಸಲಾತಿ ಹಂಚಿಕೆಯಾಗಬೇಕು ಎಂದು ರಾಜ್ಯ ಸರ್ಕಾರ ಹಾಗೂ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿಗಳ ಆಯೋಗಕ್ಕೆ ಮನವಿ ಮಾಡುತ್ತೇವೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮೈಸೂರು ಜಿಲ್ಲಾ ಕುಳುವ ಮಹಾಸಂಘದ ಜಂಟಿ ಕಾರ್ಯದರ್ಶಿ ಎನ್.ರವಿಕುಮಾರ್, ಸಂಘಟನಾ ಕಾರ್ಯದರ್ಶಿ ಕೃಷ್ಣಪ್ಪ, ಹೆಚ್.ಡಿ.ಕೋಟೆ ತಾಲೂಕು ಅಧ್ಯಕ್ಷ ಪುರುಷೋತ್ತಮ್ ಉಪಸ್ಥಿತರಿದ್ದರು.

ಕೆ.ಆರ್.ಪೇಟೆಯ ಮಳೆ ಹಾನಿ ಪ್ರದೇಶಕ್ಕೆ ಶಾಸಕ ಮಂಜು ಭೇಟಿ

ಮಳೆ ಹಾನಿ ಬಗ್ಗೆ ಅಂದಾಜು ಪಟ್ಟಿ ಸಲ್ಲಿಸಲು ಸೂಚನೆ, ಜನರಿಂದ ಅಹವಾಲು ಸ್ವೀಕರಿಸಿದ ಶಾಸಕರು

ಕೆ.ಆರ್.ಪೇಟೆ,ಅ.29– ಭಾರೀ ಮಳೆಯಿಂದಾಗಿ ಹಾನಿಗೊಳಗಾದ ಪ್ರದೇಶಗಳಿಗೆ ಶಾಸಕ ಎಚ್.ಟಿ.ಮಂಜು ಅಧಿಕಾರಿಗಳೊಂದಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಶಾಸಕ ಹೆಚ್.ಟಿ.ಮಂಜು, ತಹಸೀಲ್ದಾರ್, ತಾಲೂಕು ಪಂಚಾಯತಿ ಇಓ, ಕೃಷಿ, ತೋಟಗಾರಿಕೆ, ಸಣ್ಣ ನೀರಾವರಿ, ಲೋಕೋಪಯೋಗಿ, ವಿದ್ಯುತ್ ಇಲಾಖೆ ಸೇರಿದಂತೆ ಹಲವು ಇಲಾಖೆಯ ಅಧಿಕಾರಿಗಳೊಂದಿಗೆ ಕೈಗೋನಹಳ್ಳಿ, ಸಾರಂಗಿ, ಶ್ಯಾರಹಳ್ಳಿ, ಹಲಸಿನಹಳ್ಳಿ, ಹಳೆ ಅತ್ತಿಗುಪ್ಪೆ, ಹೊಸಹಳ್ಳಿ, ಸಂತೇಬಾಚಹಳ್ಳಿ, ಹುಬ್ಬನಹಳ್ಳಿ, ಲೋಕನಹಳ್ಳಿ, ಅಘಲಯ, ದೊಡ್ಡಸೋಮನಹಳ್ಳಿ, ಮಾಳಗೂರು, ಮಾದಿಹಳ್ಳಿ, ಅಂಕನಹಳ್ಳಿ, ದೇವರಹಳ್ಳಿ, ಚೌಡೇನಹಳ್ಳಿ ಮುಂತಾದ ಪ್ರದೇಶಗಳಿಗೆ ಭೇಟಿ ನೀಡಿ ನೆರೆ ಪೀಡಿತ ಸ್ಥಳಗಳನ್ನು ಖುದ್ದು ವೀಕ್ಷಿಸಿದರು.

ಬೆಳೆ ಹಾನಿ, ಸೇತುವೆ ಹಾನಿ, ರಸ್ತೆ ಹಾನಿ, ಭೂಕುಸಿತದಿಂದ ಉಂಟಾಗಿರುವ ನಷ್ಟದ ಕುರಿತು ಅಂದಾಜು ಪಟ್ಟಿ ತಯಾರಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು. ಜೊತೆಗೆ ಸಾರ್ವಜನಿಕರು ಹಾಗೂ ರೈತರ ಅಹವಾಲು ಆಲಿಸಿದರು.







ಕೆಲ ದಿನಗಳಿಂದ ತಾಲೂಕಿನಲ್ಲಿ ಸುರಿಯುತ್ತಿರುವ ವ್ಯಾಪಕ ಮಳೆಯಿಂದಾಗಿ ಹಾನಿಯಾದ ಪ್ರದೇಶಗಳಿಗೆ ಶಾಸಕ ಎಚ್.ಟಿ.ಮಂಜು ಅಧಿಕಾರಿಗಳೊಂದಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ತಹಸೀಲ್ದಾರ್ ಅಶೋಕ್, ಇಓ ಸುಷ್ಮಾ ಇತರರು ಇದ್ದರು. ಬಲ ಚಿತ್ರದಲ್ಲಿ ಬೈಕ್ ಏರಿ ಮಳೆ ಹಾನಿ ಪ್ರದೇಶ ವೀಕ್ಷಣೆ ಮಾಡಿದ ಶಾಸಕ ಹೆಚ್.ಟಿ.ಮಂಜು ಮತ್ತು ತಹಸೀಲ್ದಾರ್ ಅಶೋಕ್ ಅವರನ್ನು ಕಾಣಬಹುದು.

ಬೈಕ್‌ನಲ್ಲಿ ಮಳೆ ಹಾನಿ ಪ್ರದೇಶಗಳ ವೀಕ್ಷಣೆ: ಮಳೆ ಹಾನಿ ವೀಕ್ಷಣೆ ವೇಳೆ ವಿಪರೀತ ಮಳೆಯಿಂದ ರಸ್ತೆಗಳು ಹಾಳಾಗಿರುವುದರಿಂದ ಕಾರಿನಲ್ಲಿ ಹೋಗಲಾಗದೆ ಮಳೆಹಾನಿ ಪ್ರದೇಶಗಳಾದ ಹೊಸಹಳ್ಳಿ, ಸಂತೇಬಾಚಹಳ್ಳಿ ಕೆರೆ ಅಚ್ಚುಕಟ್ಟು ಪ್ರದೇಶಗಳಿಗೆ ಶಾಸಕ ಮಂಜು, ತಹಸೀಲ್ದಾರ್ ಅವರೊಂದಿಗೆ ಬೈಕ್‌ನಲ್ಲಿ ಹೋಗಿ ನೀರಿನ ಪ್ರವಾಹದಿಂದ ಕೊಚ್ಚಿ ಹೋಗಿರುವ ಬೆಳೆಗಳು, ಜಮೀನುಗಳು, ಸಂಪರ್ಕ ಸೇತುವೆಗಳು, ಕೆರೆಕೋಡಿಗಳನ್ನು ವೀಕ್ಷಿಸಿ ರೈತರ ಮೆಚ್ಚುಗೆಗೆ ಪಾತ್ರರಾದರು.

ರೈತ ಕೊಚ್ಚಿ ಹೋಗಿದ್ದ ಸ್ಥಳಕ್ಕೆ ಭೇಟಿ: ಕಳೆದ ವರ್ಷ ರೈತ ನೀರಿನ ಪ್ರವಾಹಕ್ಕೆ ಸಿಲುಕಿ ಬೈಕ್ ಸಮೇತ ಕೊಚ್ಚಿ ಹೋಗಿದ್ದ ಕಿಕ್ಕೇರಿ ಹೋಬಳಿಯ ಚೌಡೇನಹಳ್ಳಿ ಗ್ರಾಮದ ಮೂಡಲ ಹಳ್ಳದ ಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲಿಸಿದ ನಂತರ ಶಿಥಿಲಗೊಂಡಿರುವ ಸೇತುವೆಯನ್ನು ವೀಕ್ಷಿಸಿದ ಶಾಸಕ ಮಂಜು ಕೂಡಲೇ ಸರ್ಕಾರ ಚೌಡೇನಹಳ್ಳಿ ಗ್ರಾಮದ ಬಳಿ ವೈಜ್ಞಾನಿಕ ಸೇತುವೆ ನಿರ್ಮಾಣಕ್ಕೆ ಅಗತ್ಯ ಅನುದಾನ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು. ಇಲ್ಲದಿದ್ದರೆ ಗ್ರಾಮಸ್ಥರೊಂದಿಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಕಚೇರಿಯ ಮುಂದೆ ಧರಣಿ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಸರ್ಕಾರದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ: ಈ ವೇಳೆ ಮಾತನಾಡಿದ ಶಾಸಕ ಹೆಚ್.ಟಿ ಮಂಜು ನಾನು ಬಹಳ ಸಂಕಷ್ಟದ ಪರಿಸ್ಥಿತಿಯಲ್ಲಿ ಶಾಸಕನಾಗಿದ್ದೇನೆ. ರಾಜ್ಯ ಸರ್ಕಾರವು ವಿರೋಧ ಪಕ್ಷಗಳ ಶಾಸಕರಿರಲಿ, ಆಡಳಿತ ಪಕ್ಷದ ಶಾಸಕರಿಗೂ ಅನುದಾನ ನೀಡದೇ ಇರುವಷ್ಟು ಆರ್ಥಿಕ ಪರಿಸ್ಥಿತಿ ಕುಂಠಿತಗೊಂಡಿದೆ ಎಂದು ಆರೋಪಿಸಿದರು.

ಈ ವೇಳೆ ತಹಸೀಲ್ದಾರ್ ಡಾ.ಎಸ್.ಯು. ಅಶೋಕ್, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆ.ಸುಷ್ಮಾ, ಹೇಮಾವತಿ ಜಲಾಶಯ ಯೋಜನೆಯ ತಾಲೂಕು ಕಾರ್ಯಪಾಲಕ ಇಂಜಿನಿಯರ್ ಆನಂದ್, ಸಣ್ಣ ನೀರಾವರಿ ಇಲಾಖೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ನಿರ್ಮಲೇಶ್, ತೋಟಗಾರಿಕಾ ಇಲಾಖೆ ಸಹಾಯಕ ನಿರ್ದೇಶಕ ಡಾ.ಲೋಕೇಶ್, ಸಹಾಯಕ ಕೃಷಿ ನಿರ್ದೇಶಕ ಸಂತೋಷ್ ಕುಮಾರ್, ಪಟ್ಟಣ ಪೊಲೀಸ್ ಠಾಣೆ ಸಬ್‌ಇನ್ಸ್‌ಪೆಕ್ಟರ್ ಕೆನವೀನ್ ಅವರುಗಳು ಭಾಗವಹಿಸಿದ್ದರು.

ಕೆರೆಗೆ ಬಾಗೀನ ಅರ್ಪಣೆ

ಸತತ ನಾಲ್ಕು ವರ್ಷಗಳಿಂದ ಚನ್ನರಾಯಪಟ್ಟಣ ತಾಲೂಕಿನ ಏತ ನೀರಾವರಿಯಿಂದ ಭರ್ತಿಯಾಗುತ್ತಿರುವ ಹಳೆ ಅತ್ತಿಗುಪ್ಪೆ ಕೆರೆಗೆ ಶಾಸಕ ಹೆಚ್.ಟಿ. ಮಂಜು ಅವರು ಸ್ಥಳೀಯ ಗ್ರಾಮಸ್ಥರೊಂದಿಗೆ ಗಂಗಾಪೂಜೆ ನೆರವೇರಿಸಿ, ಭಾಗೀನ ಅರ್ಪಿಸಿದರು. ಇದೇ ವೇಳೆ ತಾಲೂಕಿನಲ್ಲಿ ಉತ್ತಮ ಮಳೆ ಬೆಳೆಯಾಗಿ ರೈತರು ಸಮೃದ್ಧಿಯಿಂದ ಜೀವನ ನಡೆಸುವಂತಾಗಲಿ ಎಂದು ಪ್ರಾರ್ಥಿಸಿದರು. ಜೊತೆಗೆ ಹಳೆ ಅತ್ತಿಗುಪ್ಪೆ ಕೆರೆಗೆ ಏತ ನೀರಾವರಿ ಮೂಲಕ ದಮ್ಮನಿಂಗಲ ಭಾಗದಿಂದ ನೀರು ತುಂಬಿಸಿ ಕೊಡುತ್ತಿರುವ ಶ್ರವಣಬೆಳಗೊಳ ಶಾಸಕ ಸಿ.ಎನ್.ಬಾಲಕೃಷ್ಣ ಅವರಿಗೆ ಕೆ.ಆರ್.ಪೇಟೆ ತಾಲೂಕಿನ ಪರವಾಗಿ ಕೃತಜ್ಞತೆಗಳನ್ನು ಸಲ್ಲಿಸುವುದಾಗಿ ತಿಳಿಸಿದರು.

ಅನ್ಯರಿಗೆ ಅಧ್ಯಕ್ಷ ಸ್ಥಾನ ಕೊಟ್ಟರೆ ಕಸಾಪ ಸಮ್ಮೇಳನ ಸಾಹಿತ್ಯ ಸಮ್ಮೇಳನವಾಗಿ ಉಳಿಯುವುದಿಲ್ಲ



ಮಂಡ್ಯ,ಅ.29– ಯಾರಿಗೆ ಬೇಕೋ ಅವರಿಗೆ ಸಮ್ಮೇಳನಾಧ್ಯಕ್ಷ ಸ್ಥಾನ ಸಿಗುವಂತಾದರೆ ಅಧ್ಯಕ್ಷ ಸ್ಥಾನದ ಗೌರವ ಯಾರಿಗೆ ಬೇಡ ಎನ್ನುವಂತಾಗುತ್ತದೆ. ಹೀಗಾದರೆ ಸಾಹಿತಿಗಳು ಸಮ್ಮೇಳನಾಧ್ಯಕ್ಷರಾಗಲು ಅವಕಾಶ ಸಿಗುವುದಿಲ್ಲ. ಜೊತೆಗೆ ಸಮ್ಮೇಳನವು ಸಾಹಿತ್ಯ ಸಮ್ಮೇಳನವಾಗಿ ಉಳಿಯುವುದಲ್ಲ ಎಂದು ಖ್ಯಾತ ವಾಗ್ಮಿ ಹಾಗೂ ಸಾಹಿತಿ ಪ್ರೊ.ಕೃಷ್ಣೇಗೌಡ ಅಭಿಪ್ರಾಯಿಸಿದರು.

ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ವಾರದ ಸಾಹಿತ್ಯ ಅತಿಥಿ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸಮ್ಮೇಳನಾಧ್ಯಕ್ಷರ ಪದವಿ ಸಾಹಿತ್ಯೇತರರಿಗೆ ನೀಡಬೇಕಾಗಿ ಬಂದಲ್ಲಿ ಮೊದಲು ರಾಜಕೀಯದ ಎಲ್ಲ ಪಕ್ಷದವರಿಗೂ ನೀಡಬೇಕಾಗುತ್ತದೆ. ತದನಂತರ ಉದ್ಯಮಿಗಳು ಸೇರಿದಂತೆ ಸಮಾಜದ ಎಲ್ಲ ವರ್ಗದವರೂ ಕೇಳಲಾರಂಭಿಸುತ್ತಾರೆ ಎಂದು ಎಚ್ಚರಿಸಿದರು.

ಸಮ್ಮೇಳನಾಧ್ಯಕ್ಷರ ಆಯ್ಕೆಗೆ ಸಾಹಿತ್ಯೇತರರ ಪರಿಗಣನೆಯ ವಿವಾದ ಆರಂಭ ಮಾಡಿದ್ದೇ ಕೇಂದ್ರ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಬಾಯಿಂದ ಆದರೆ ನಂತರ ಅವರು ನನ್ನಿಂದಲ್ಲ. ಆದರೆ ಈ ರೀತಿಯ ವಾದವಿದೆ ಎಂದು ಸಮಜಾಯಿಷಿ ನೀಡಿದರು. ಸಾಹಿತ್ಯ ಸಮ್ಮೇಳನದಲ್ಲಿ ಸಾಹಿತ್ಯೇತರರು ಇರಬೇಕು. ಆದರೆ ದೊಡ್ಡ ಪರಂಪರೆಯುಳ್ಳ ಸಾಹಿತ್ಯ ಸಮ್ಮೇಳನವು ಸಾಹಿತಿಗಳದ್ದು ಎಂಬುದನ್ನು ಅರಿಯಬೇಕು ಎಂದು ಸಲಹೆ ನೀಡಿದರು.

ಪರಿಷತ್ ಅಧ್ಯಕ್ಷರು ಸಾಹಿತ್ಯೇತರರು ಸಮ್ಮೇಳನಾಧ್ಯಕ್ಷರಾಗಿ ಆಯ್ಕೆ ಸಂಬಂಧ ಆಡಿದ ಮಾತುಗಳು ಅರಿವಿಲ್ಲದೇ ಹೀಗೂ ಆಗಬಹುದೇ, ಚರ್ಚೆಗೆ ಅವಕಾಶ ನೀಡುವ ದೃಷ್ಟಿಯಿಂದ ಹೇಳಿದ್ದರೆ ಕ್ಷಮ್ಯವಿದೆ. ಆದರೆ ಸಾಹಿತಿಗಳನ್ನು ಸಮ್ಮೇಳನಾಧ್ಯಕ್ಷ ಸ್ಥಾನದಿಂದ ತಪ್ಪಿಸಬೇಕೆಂದು ಬೇಕಂತಲೇ ಮಾತನಾಡಿದ್ದರೆ ಅದು ತಪ್ಪು. ಸಾಹಿತ್ಯ ಎಂಬುದು ಸಮಾಜವನ್ನು ಒಳಗೊಳ್ಳಬೇಕು. ಸಮಾಜದ ಎಲ್ಲರೂ ಸಾಹಿತ್ಯದ ಭಾಗ ಎಂಬುದು ಪ್ರಾರಂಭವಾಗಿದೆ ಎಂದರು. ಸಂವಾದದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಬಿ.ಪಿ.ಪ್ರಕಾಶ್, ಪ್ರಧಾನ ಕಾರ್ಯದರ್ಶಿ ಆನಂದ್, ಮಾಜಿ ಅಧ್ಯಕ್ಷ ಕೆ.ಸಿ.ಮಂಜುನಾಥ್ ಇದ್ದರು.

ವಸಂತಮ್ಮ ನಿಧನ



ಭಾರತೀನಗರ, ಅ.29– ಇಲ್ಲಿಗೆ ಸಮೀಪದ ಮೆಳ್ಳಹಳ್ಳಿ ಗ್ರಾಮದ ನಿವೃತ್ತ ಶಿಕ್ಷಕ ಬಿ.ಸಿದ್ದಯ್ಯ ಅವರ ಧರ್ಮಪತ್ನಿ ಎಂ.ವಸಂತಮ್ಮ(63) ಸೋಮವಾರ ನಿಧನರಾದರು.

ಮೃತರು ಪತಿ, ಓರ್ವ ಪುತ್ರಿ, ಪುತ್ರ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಮೃತರ ಪುತ್ರಿ ಅಮೇರಿಕಾದಲ್ಲಿದ್ದು ಅಲ್ಲಿಂದ ಬರಬೇಕಾಗಿರುವುದರಿಂದ ಬುಧವಾರ(ಅ.30) ಮಧ್ಯಾಹ್ನ 1 ಗಂಟೆಗೆ ಅಂತ್ಯಕ್ರಿಯೆಯನ್ನು ಸ್ವಗ್ರಾಮವಾದ ಬೊಪ್ಪಸಮುದ್ರದ ಗ್ರಾಮದಲ್ಲಿ ನೆರವೇರಿಸಲಾಗುವುದು ಎಂದು ಕುಟುಂಬ ಮೂಲಗಳು ತಿಳಿಸಿವೆ.

ಸರ್ಕಾರಿ ನೌಕರರ ಚುನಾವಣೆಯಲ್ಲಿ ಮಂಜುನಾಥ್ ಬಣಕ್ಕೆ ಗೆಲುವು



ನಾಗಮಂಗಲ: ರಾಜ್ಯ ಸರ್ಕಾರಿ ನೌಕರರ ಸಂಘದ ನಿರ್ದೇಶಕರ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳ ವಿಭಾಗದ ಜಿಲ್ಲಾಧ್ಯಕ್ಷ ಜೆ.ವೈ ಮಂಜುನಾಥ್ ತಂಡದ ಅಭ್ಯರ್ಥಿಗಳು ಜಯಭೇರಿ ಬಾರಿಸಿದ್ದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಜಿ ಅಧ್ಯಕ್ಷ ಸಿ.ಜೆ ಕುಮಾರ್ ನೇತೃತ್ವದ ತಂಡ ಸೋಲು ಅನುಭವಿಸಿದೆ.

ಮಂಜುನಾಥ್ ತಂಡದಿಂದ ಸ್ಪರ್ಧಿಸಿದ್ದ ಮಂಜುನಾಥ್, ಚಂದ್ರಮೌಳಿ, ವಿನಯ್ ಡಿ.ಕೆ, ಸರ್ಕಾರಿ ಪದವಿ ಪೂರ್ವ ಕಾಲೇಜು ಸುರೇಶ್ ವೈ, ನ್ಯಾಯಾಂಗ ಇಲಾಖೆ ಗಿರೀಶ್.ಕೆ.ಎಸ್, ಲೋಕೋಪಯೋಗಿ ಇಲಾಖೆಯ ಪಾಲಾಕ್ಷ ಪಂಚಾಯತ್ ರಾಜ್ ಇಂಜಿನಿಯರಿಂಗ್ ಹಾಗೂ ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಕರಣ ಇಲಾಖೆ ಹಿಂದುಳಿದ ಹಾಗೂ ಅಲ್ಪಸಂಖ್ಯಾತರ ಇಲಾಖೆ ಕುಮಾರ್ ಎ.ಎನ್ ಮೂಲಕ ನಿರ್ದೇಶಕರ ಸ್ಥಾನಕ್ಕೆ ಆಯ್ಕೆಯಾದರು.

34 ನಿರ್ದೇಶಕರ ಸ್ಥಾನಗಳ ಪೈಕಿ 7 ಸ್ಥಾನಗಳಿಗೆ ಚುನಾವಣೆ ನಡೆಯಿತು. ಉಳಿದ 27 ನಿರ್ದೇಶಕರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. 7 ಮಂದಿ ಅಭ್ಯರ್ಥಿಗಳು ಚುನಾವಣೆಗೆ ಸ್ಪರ್ಧಿಸಿದ್ದರು 990 ಮಂದಿ ಮತದಾರರು ತಮ್ಮ ಹಕ್ಕನ್ನು ಚಲಾಯಿಸಿದರು.

ಚುನಾವಣಾಧಿಕಾರಿಯಾಗಿ ಶಿವರಾಜು ಕರ್ತವ್ಯ ನಿರ್ವಹಿಸಿದ್ದರು. ನ.16ರಂದು ಅಧ್ಯಕ್ಷ ಚುನಾವಣೆ ಇದ್ದು ಕಾರ್ಯಕಾರಿಣಿ ಸಭೆಯಲ್ಲಿ ನಿರ್ದೇಶಕರ ಅಭಿಪ್ರಾಯದ ಮೇರೆಗೆ ಅವಿರೋಧವಾಗಿ ಅಧ್ಯಕ್ಷರನ್ನು ಆಯ್ಕೆ ಮಾಡಲಾಗುವುದು ಎಂದು ಜಿಲ್ಲಾಧ್ಯಕ್ಷ ಮಂಜುನಾಥ್ ತಿಳಿಸಿದರು.

ಸರ್ಕಾರಿ ನೌಕರರ ಸಂಘಕ್ಕೆ ಆಯ್ಕೆ

ಪಾಂಡವಪುರ,ಅ.29– ತಾಲೂಕು ಸರಕಾರಿ ನೌಕರರ ಸಂಘದ ನೂತನ ಆಡಳಿತ ಮಂಡಳಿಯ 31 ನಿರ್ದೇಶಕ ಸ್ಥಾನಗಳ ಪೈಕಿ 4 ನಿರ್ದೇಶಕ ಸ್ಥಾನಗಳಿಗೆ ಸೋಮವಾರ ನಡೆದ ಚುನಾವಣೆಯಲ್ಲಿ ಶಿಕ್ಷಕ ಗಡ್ಡ ಚಂದ್ರಶೇಖರ್ ಬಣದ ಯುವರಾಜ್.ಕೆ, ಎ.ಬಿ.ಕರುಣಕುಮಾರ್ ಹಾಗೂ ಮಂಜುನಾಥ್ ಬಣದ ಎಂ.ಡಿ.ಕುಮಾರ್, ಎಸ್.ಎನ್. ಕೆಂಪೇಗೌಡ ಚುನಾಯಿತರಾದರು.

ಸರಕಾರಿ ನೌಕರರ ಸಂಘಕ್ಕೆ ವಿವಿಧ ಇಲಾಖೆಗಳಿಂದ ಆಯ್ಕೆಯಾಗುವ ನಿರ್ದೇಶಕ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ 31 ಸ್ಥಾನಗಳಲ್ಲಿ 27 ಮಂದಿ ಅವಿರೋಧವಾಗಿ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ. ಪ್ರಾಥಮಿಕ ಶಾಲೆಗಳ ಶಿಕ್ಷಕರ ಕ್ಷೇತ್ರದ ನಾಲ್ಕು ನಿರ್ದೇಶಕ ಸ್ಥಾನಗಳಿಗೆ ಎಂಟು ನಾಮಪತ್ರಗಳು ಸಲ್ಲಿಕೆಯಾದ ಹಿನ್ನೆಲೆಯಲ್ಲಿ 4 ನಿರ್ದೇಶಕ ಸ್ಥಾನಗಳಿಗೆ ಚುನಾವಣಾಧಿಕಾರಿ ನಿವೃತ್ತ ಪ್ರೌಢಶಾಲಾ ಶಿಕ್ಷಕ ಎಚ್.ಸಿ. ಶಿವಪ್ಪ ಅವರು ಸೋಮವಾರ ಮತದಾನ ನಡೆಸಿದರು. ಚುನಾವಣಾ ಕಣದಲ್ಲಿ ಶಿಕ್ಷಕ ಗಡ್ಡ ಚಂದ್ರಶೇಖರ್ ಬಣದ ಕರುಣಕುಮಾರ್ ಎಂ.ಬಿ., ಕೀರ್ತಿ.ಬಿ.ವಿ, ಯುವರಾಜ್ ಕೆ., ವಿಜಯಕುಮಾರ್ ಎಂ.ಕೆ. ಮತ್ತು ಶಿಕ್ಷಕ ಮಂಜುನಾಥ್ ಬಣದಿಂದ ಕುಮಾರ್.ಎಂ.ಡಿ., ಕೆಂಪೇಗೌಡ ಎಸ್.ಎನ್., ನಾಗೇಗೌಡ ಬಿ.ಎಂ., ಪುಟ್ಟರಾಜೇಗೌಡ ಕೆ.ಎಂ. ಸ್ಪರ್ಧಿಸಿದ್ದರು. ಪ್ರಾಥಮಿಕ ಶಾಲೆಗಳ ಶಿಕ್ಷಕರ ಕ್ಷೇತ್ರದಲ್ಲಿ ಒಟ್ಟು 436 ಮತಗಳಿದ್ದು ಚುನಾವಣೆಯಲ್ಲಿ 430 ಮತಗಳು ಚಲಾವಣೆಗೊಂಡವು. ನಂತರ ನಡೆದ ಮತ ಎಣಿಕೆ ಪ್ರಕ್ರಿಯೆಯಲ್ಲಿ ಯುವರಾಜ್.ಕೆ–262, ಕುಮಾರ್.ಎಂ.ಡಿ–246, ಕುರುಣಕುಮಾರ್–239 ಹಾಗೂ ಕೆಂಪೇಗೌಡ ಎಸ್.ಎನ್.–239 ಮತಗಳನ್ನು ಪಡೆದು ಗೆಲುವು ಸಾಧಿಸಿದರು. ಇದರಲ್ಲಿ 2 ಮತಗಳ ತಿರಸ್ಕೃತಗೊಂಡಿವೆ ಎಂದು ಚುನಾವಣಾಧಿಕಾರಿ ಎಚ್.ಸಿ.ಶಿವಪ್ಪ ಘೋಷಿಸಿದರು. ಎರಡು ಬಣದಿಂದಲೂ ಇಬ್ಬರು ಅಭ್ಯರ್ಥಿಗಳು ಚುನಾಯಿತರಾದ ಹಿನ್ನೆಲೆಯಲ್ಲಿ ಎರಡು ಬಣದವರು ಸಂಭ್ರಮಾಚರಣೆ ಮಾಡಲಿಲ್ಲ.

ಇಂದು ಸಭೆ

ಮಂಡ್ಯ,ಅ.29–ಮಂಡ್ಯ ನಗರಕ್ಕೆ ಸಂಬಂಧಿಸಿದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಚರ್ಚಿಸಲು ವಿವಿಧ ಇಲಾಖೆಗಳ ಸಭೆಯನ್ನು ನಾಳೆ (ಅ.30) ಬೆಳಿಗ್ಗೆ 11 ಗಂಟೆಗೆ ಮಂಡ್ಯ ನಗರಸಭೆ ಕಾರ್ಯಾಲಯದ ಶ್ರೀ ಧರಣಪ್ಪ ಸಭಾಂಗಣದಲ್ಲಿ ಕರೆಯಲಾಗಿದೆ ಎಂದು ಮಂಡ್ಯ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇ ಪುಟದಿಂದ

ಕನ್‌ಸ್ಟ್ರಕ್ಷನ್ಸ್ ಮೇಲೆ ದಾಳಿ

ನಂತರ ಅವುಗಳನ್ನು ತಮ್ಮ ಕಚೇರಿಯಲ್ಲಿ ಕೂಲಂಕುಶವಾಗಿ ಪರಿಶೀಲನೆ ಮಾಡಿದ ಬಳಿಕ ತನಿಖೆ ವ್ಯಾಪ್ತಿಯನ್ನು ಮತ್ತಷ್ಟು ವಿಸ್ತರಿಸುತ್ತಾರೆ. ಆದರೆ ಎಂಎಂಜಿ ಕನ್‌ಸ್ಟ್ರಕ್ಷನ್‌ನಲ್ಲಿ ಎರಡನೇ ದಿನವೂ ರಾತ್ರಿ ಬಹುಹೊತ್ತಿನವರೆಗೂ ದಾಖಲೆ ಶೋಧನೆ ಹಾಗೂ ಪರಿಶೀಲನೆ ನಡೆಸಿದ್ದಾರೆ.

ಅಕ್ರಮದ ಜಾಡು ಹಿಡಿದಿರುವ ಇಡಿ ಅಧಿಕಾರಿಗಳು, ಎಲ್ಲಾ ರೀತಿಯಲ್ಲೂ ದಾಖಲೆಗಳನ್ನು ಹೆಕ್ಕಿ ತೆಗೆಯುವ ಪ್ರಯತ್ನ ನಡೆಸಿದ್ದಾರೆ.

ಜಯರಾಂ ಮತ್ತು ಆತನ ಕಚೇರಿ ಸಿಬ್ಬಂದಿಯ ಪಾನ್ ಹಾಗೂ ಆಧಾರ್ ಕಾರ್ಡ್ ಆಧರಿಸಿ, ಹಣಕಾಸು ವಹಿವಾಟಿನ ಮೂಲಕ್ಕಿಳಿದಿದ್ದಾರೆ. ಎರಡು ದಿನಗಳ ನಿರಂತರ ಶೋಧ ಕಾರ್ಯ ನಡೆದಿರುವುದರಿಂದ ಭಾರೀ ಅಕ್ರಮವೇ ನಡೆದಿರಬಹುದು ಎಂಬ ಚರ್ಚೆ ಶುರುವಾಗಿದೆ.

ನೋಂದಣಿ ಮೇಲೂ ಕಣ್ಣು: ಇದೇ ವೇಳೆ ಮುದ್ರಾಂಕ ಇಲಾಖೆಯ ಜಿಲ್ಲಾ ನೋಂದಣಾಧಿಕಾರಿ ಕಚೇರಿಗೂ ಭೇಟಿ ನೀಡಿ, ಮುಡಾದ ಶೇಕಡ 50:50 ಅನುಪಾತದ ನಿವೇಶನಗಳ ನೋಂದಣಿಗೆ ಸಂಬಂಧಿಸಿದಂತೆ ತಮಗೆ ಕೆಲವು ದಾಖಲಾತಿಗಳನ್ನು ನೀಡುವಂತೆ ಸೂಚಿಸಿದ್ದಾರೆ. ಇದರಿಂದ ಮೈಸೂರು ನಗರದಲ್ಲಿರುವ ಎಲ್ಲಾ ಉಪ ನೋಂದಣಾಧಿಕಾರಿ ಕಚೇರಿಯ ಸಿಬ್ಬಂದಿ, ಇಂದು ಬೆಳಿಗ್ಗೆಯಿಂದಲೂ ಇಡಿ ಕೇಳಿರುವ ದಾಖಲಾತಿಗಳನ್ನು ಸಂಗ್ರಹಿಸುವ ಕಾರ್ಯದಲ್ಲಿ ಮಗ್ನರಾಗಿದ್ದರು ಎಂದು ತಿಳಿದುಬಂದಿದೆ.

ಜಯರಾಂನಿಂದ ನಿವೇಶನ ಖರೀದಿ ಮಾಡಿರುವವರಿಗೆ ಜ್ವರ!

ಎಂಎಂಜಿ ಕನ್‌ಸ್ಟ್ರಕ್ಷನ್ ಮೇಲೆ ಇಡಿ ದಾಳಿ ನಡೆಸಿರುವುದರಿಂದ ಜಯರಾಂನಿಂದ ಮುಡಾದ ಶೇಕಡ 50:50 ಅನುಪಾತದ ನಿವೇಶನಗಳ ಖರೀದಿ ಮಾಡಿರುವವರಿಗೆ ನಡುಕ ಶುರುವಾಗಿದೆ. ಇಡಿ ದಾಳಿ ವಿಚಾರ ತಿಳಿಯುತ್ತಿದ್ದಂತೆ ಜಯರಾಂನಿಂದ ನಿವೇಶನ ಖರೀದಿ ಮಾಡಿರುವ ಬಹಳಷ್ಟು ಮಂದಿ ಅವರ ಕಚೇರಿ ಬಳಿ ಆತಂಕದಿಂದ ಎಡತಾಕಿದ್ದಾರೆ. ಕಚೇರಿ ಬಳಿ ಕೆಲ ಕಾಲ ನಿಂತು, ಅಲ್ಲಿದ್ದವರನ್ನು ವಿಚಾರಿಸಿ ಹೋಗುತ್ತಿದ್ದ ದೃಶ್ಯ ಕಂಡುಬಂದಿತು. ಕಚೇರಿ ಬಳಿಗೆ ಬಂದಿದ್ದ ವ್ಯಕ್ತಿಯೊಬ್ಬರು ಪತ್ರಕರ್ತರೊಂದಿಗೆ ಮಾತನಾಡುತ್ತಾ, ನಮ್ಮ ಸ್ನೇಹಿತರು ಜಯರಾಂನಿಂದ ನಿವೇಶನ ಖರೀದಿ ಮಾಡಿದ್ದು, ಇಡಿ ದಾಳಿ ವಿಚಾರ ಗೊತ್ತಾಗಿ ಅಲ್ಲಿ ಏನು ನಡೆಯುತ್ತಿದೆ ಎಂದು ನೋಡಿಕೊಂಡು ಬರಲು ನನಗೆ ಹೇಳಿದ್ದರಿಂದ ಇಲ್ಲಿಗೆ ಬಂದಿದ್ದಾಗಿ ತಿಳಿಸಿದರು. ಸೆಟ್ಲ್‌ಮೆಂಟ್ ಡೀಡ್ ಮೂಲಕ ಬಹಳಷ್ಟು ಮಂದಿ ಜಯರಾಂನಿಂದ ನಿವೇಶನ ಖರೀದಿ ಮಾಡಿದ್ದಾರೆ. ಸೆಟ್ಲ್‌ಮೆಂಟ್ ಡೀಡ್‌ನಲ್ಲಿ ಆದಾಯ ತೆರಿಗೆ ಹಾಗೂ ಮುದ್ರಾಂಕ ಶುಲ್ಕ ಪಾವತಿ ಮಾಡದೆ ಸರ್ಕಾರಕ್ಕೆ ವಂಚನೆ ಮಾಡಿದ್ದಾರೆ. ಈ ಬಗ್ಗೆ ಇಡಿ ತನಿಖೆ ಮಾಡಿದರೆ ಪ್ರಕರಣದ ಸುರುಳಿ ನಮ್ಮನ್ನು ಸುತ್ತಿಕೊಳ್ಳಬಹುದೇ ಎಂಬ ಆತಂಕ ನಿವೇಶನ ಖರೀದಿದಾರರನ್ನು ಕಾಡಲಾರಂಭಿಸಿದೆ.

ಇಡಿ ವಶಕ್ಕೆ

ಗೊತ್ತಿಲ್ಲ. 50:50 ಅನುಪಾತದಲ್ಲಿ ಯಾವುದೇ ಅವ್ಯವಹಾರವನ್ನೂ ಮಾಡಿಲ್ಲ. ಸರ್ಕಾರದ ನಡಾವಳಿಯಲ್ಲಿ ಇರುವಂತೆಯೇ ನಿವೇಶನ ನೀಡಲಾಗಿದೆ. 2022 ಮತ್ತು 2023ರಲ್ಲಿ ನಡಾವಳಿ ಬದಲಾವಣೆ ಆಗಿದೆ ಎಂದು ತಿಳಿಸಿದ್ದರು ಎನ್ನಲಾಗಿದೆ.

ಈ ಮಧ್ಯೆ ಸುದ್ದಿ ಜಾಲತಾಣವೊಂದಕ್ಕೆ ನೀಡಿದ್ದ ಸಂದರ್ಶನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿಯವರು ನಿವೇಶನ ಪಡೆಯಲು ನಾನೇ ಅವರ ಮನವೊಲಿಸಿದ್ದೆ. ಅವರಿಗೆ ನಿವೇಶನ ಮಂಜೂರು ಮಾಡಿರುವುದರಲ್ಲಿ ತಪ್ಪೇ ಇಲ್ಲ ಎಂದು ಹೇಳಿಕೆ ನೀಡಿದ್ದನ್ನು ಇಡಿ ಗಂಭೀರವಾಗಿ ಪರಿಗಣಿಸಿದೆ ಎಂದು ಹೇಳಲಾಗುತ್ತಿದೆ.

ಅಕ್ರಮವಾಗಿ ನಿವೇಶನ ಪಡೆದವರ ಜೊತೆಗೆ ನಟೇಶ್ ಮತ್ತು ದಿನೇಶ್ ಕುಮಾರ್ ಮೇಲೂ ಕ್ರಮ ಕೈಗೊಳ್ಳಬೇಕು. 928 ನಿವೇಶನಗಳಲ್ಲಿ ಬಿಲ್ಡರ್ ಮಂಜುನಾಥ್, ಸಚಿವರೊಬ್ಬರ ಸಹೋದರನ ಮಗನಿಗೂ ಸೆಟಲ್ಮೆಂಟ್ ಡೀಡ್ ಮಾಡಿಕೊಟ್ಟಿದ್ದಾರೆ. ಈ ನಿವೇಶನಗಳ ಅಕ್ರಮ ಹಂಚಿಕೆಗೆ ಕಾರಣರಾದ ಈ ಇಬ್ಬರೂ ಮಾಜಿ ಆಯುಕ್ತರನ್ನೂ ಬಂಧಿಸಿ, ತನಿಖೆಗೆ ಒಳಪಡಿಸಬೇಕು ಎಂದು ದೂರುದಾರ ಸ್ನೇಹಮಯಿ ಕೃಷ್ಣ ಆಗ್ರಹಿಸಿದ್ದರು. ಮತ್ತೋರ್ವ ಸಾಮಾಜಿಕ ಕಾರ್ಯಕರ್ತ ಗಂಗರಾಜು ಇಡಿ ವಿಚಾರಣೆಗೆ ಹಾಜರಾಗಿದ್ದ ವೇಳೆ ಅನೇಕ ಮುಡಾ ಹಗರಣ ಸಂಬಂಧ ಹಲವು ಮಹತ್ವದ ಮಾಹಿತಿ ನೀಡಿರುವುದಾಗಿ ತಿಳಿಸಿದ್ದರು. ಮೈಸೂರಿನಲ್ಲಿ ಕಾರ್ತಿಕ್ ಬಡಾವಣೆ ಹೆಸರಿನಲ್ಲಿ ಲೇಔಟ್ ನಿರ್ಮಾಣ ಮಾಡಿದ್ದ ಮಂಜುನಾಥ್, 50:50 ಅನುಪಾತದಲ್ಲಿ ಸೈಟ್ ಹಂಚಿಕೆ ವೇಳೆ ಮುಡಾ ಅಧಿಕಾರಿಗಳಿಗೆ ಲಂಚ ಕೊಟ್ಟು ಸೈಟ್‌ಗಳನ್ನು ಕಬಳಿಸಿದ್ದಾರೆ ಎಂಬ ಆರೋಪದ ಬೆನ್ನಲ್ಲೆ ಅಧಿಕಾರಿಗಳಿಗೆ ಹಣ ಎಣಿಸಿಕೊಡುತ್ತಿದ್ದ ವಿಡಿಯೋ ಸಹ ವೈರಲ್ ಆಗಿತ್ತು.

ಮುಡಾ ನಿವೇಶನ ಹಂಚಿಕೆ ಅಕ್ರಮ ಆರೋಪ ಪ್ರಕರಣ ದಿನೇ ದಿನೆ ನಾನಾ ತಿರುವು ಪಡೆಯುತ್ತಿದೆ. ಲೋಕಾಯುಕ್ತ ಪೊಲೀಸರ ತನಿಖೆ ನಡುವೆಯೇ ಪ್ರಕರಣದಲ್ಲಿ ಇಡಿ ಪ್ರವೇಶಿಸಿರುವುದು ಹಲವರಲ್ಲಿ ನಡುಕ ಹುಟ್ಟಿಸಿದೆ. ಮುಡಾ ಕಚೇರಿ ಮೇಲೆ ದಿಢೀರ್ ದಾಳಿ ನಡೆಸಿ ಕಡತಗಳನ್ನೆಲ್ಲಾ ಜಾಲಾಡಿದ್ದ ಇಡಿ ಅಧಿಕಾರಿಗಳು, ಹಲವು ದಾಖಲೆಗಳೊಂದಿಗೆ ವಾಪಸ್ಸಾಗಿದ್ದರು. ಕೆಲ ದಿನಗಳಲ್ಲೇ ಮೈಸೂರು ಹಾಗೂ ಬೆಂಗಳೂರಿನ ಹಲವೆಡೆ ದಾಳಿ ನಡೆಸಿ, ಪರಿಶೀಲನೆ ನಡೆಸಲಾಗುತ್ತಿದೆ. ಮುಡಾದ ಮಾಜಿ ಆಯುಕ್ತರು, ಮುಖ್ಯಮಂತ್ರಿ ಸಿದ್ದರಾಮಯ್ಯ ನವರ ಆಪ್ತರು ಮಾತ್ರವಲ್ಲದೆ ಕನ್‌ಸ್ಟ್ರಕ್ಟರ್‌ಗಳು, ಡೆವಲಪರ್‌ಗಳು, ಮಧ್ಯವರ್ತಿಗಳ ಬೆನ್ನತ್ತಿದ್ದಾರೆ. ಯಾವ ಅಧಿಕಾರಿ ಹಾಗೂ ರಾಜಕಾರಣಿಗಳ ಮನೆ, ಕಚೇರಿಗಳ ಮೇಲೆ ಯಾವಾಗ ದಾಳಿ ನಡೆಯುತ್ತದೋ ಚರ್ಚೆ ಶುರುವಾಗಿದೆ. ಇಡಿ ಅಧಿಕಾರಿಗಳು ದಾಳಿ ನಡೆಸುವುದು ಹಾಗೂ ದಾಖಲೆ ಪರಿಶೀಲನೆಗಷ್ಟೇ ಸೀಮಿತವಾಗಿದ್ದಾರೆ. ಇದು ಭಯ ಹುಟ್ಟಿಸುವ ತಂತ್ರವಷ್ಟೇ ಎನ್ನುತ್ತಿರುವಾಗಲೇ ಇಡಿ ಅಧಿಕಾರಿಗಳು ಶಾಕ್ ನೀಡಿದ್ದಾರೆ. ಅದರಲ್ಲೂ ಡಾ.ಡಿ.ಬಿ.ನಟೇಶ್ ಅವರನ್ನು ವಶಕ್ಕೆ ಪಡೆದ ನಂತರ ಪ್ರಕರಣ ಮತ್ತಷ್ಟು ಗಂಭೀರವಾಗುತ್ತಿದೆ. ಈ ಮಧ್ಯೆ ಮುಡಾ ಮತ್ತೋರ್ವ ಮಾಜಿ ಆಯುಕ್ತ ದಿನೇಶ್ ಕುಮಾರ್ ನಿನ್ನೆಯಿಂದ ನಾಪತ್ತೆಯಾಗಿದ್ದಾರೆ.

ಏಕಸದಸ್ಯ ಆಯೋಗ ರಚನೆ

ಎಂಬ ನಿರ್ಧಾರಕ್ಕೆ ಬರಲಾಗಿದೆ ಎಂದರು. ಯಾವುದೇ ಪ್ರಾಯೋಗಿಕ ಡೇಟಾ ಇಲ್ಲ ಎಂದು ಕೆಲವರು ಅಭಿಪ್ರಾಯಪಟ್ಟಿದ್ದಾರೆ. ಎಸ್‌ಸಿಗಳ ಒಂದು ವಿಭಾಗ, ವಿಶೇಷವಾಗಿ 'ಎಸ್‌ಸಿ ಎಡ'ಕ್ಕೆ ಸೇರಿದ ಅನೇಕ ಸಮುದಾಯಗಳು ಇನ್ನೂ ಅಂಚಿನಲ್ಲಿರುವಾಗ ಕೆಲವು ಪ್ರಭಾವಿ ಉಪ–ಜಾತಿಗಳು ಮಾತ್ರ ಬಹುಪಾಲು ಪ್ರಯೋಜನಗಳನ್ನು ಕಸಿದುಕೊಳ್ಳುತ್ತಿವೆ ಎಂದು ಆರೋಪಿಸಿ ಆಂತರಿಕ ಮೀಸಲಾತಿಗೆ ಒತ್ತಾಯಿಸುತ್ತಿದ್ದಾರೆ ಎಂದರು.

ಈ ವಿಚಾರವನ್ನು ನಿನ್ನೆಯ ಸಚಿವ ಸಂಪುಟ ಸಭೆಯ ನಂತರ ಮಾಧ್ಯಮಗಳಿಗೆ ಸಂಕ್ಷಿಪ್ತವಾಗಿ ವಿವರಿಸಲಾಗಿದೆ. ಆದಾಗ್ಯೂ, ಕೆಲವು ಪತ್ರಿಕೆಗಳಲ್ಲಿ ಪ್ರಕಟಗೊಂಡಿರುವ ಸುದ್ದಿ ಉದ್ಯೋಗಾಕಾಂಕ್ಷಿಗಳಲ್ಲಿ ಗೊಂದಲಕ್ಕೆ ಕಾರಣವಾಗಿರುವುದು ನನ್ನ ಗಮನಕ್ಕೆ ಬಂದಿರುತ್ತದೆ. ಈಗಾಗಲೇ ಪ್ರಕಟಗೊಂಡಿರುವ ನೇಮಕಾತಿ ಅಧಿಸೂಚನೆಗಳಿಗೆ ಸಂಬಂಧಿಸಿದಂತೆ ಅರ್ಜಿ ಸಲ್ಲಿಸಿ, ಪರೀಕ್ಷೆಗೆ ತಯಾರಿ ನಡೆಸುತ್ತಿರುವವರು ಯಾವುದೇ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ. ಚಾಲ್ತಿಯಲ್ಲಿರುವ ನೇಮಕ ಪ್ರಕ್ರಿಯೆಗಳು ಮುಂದುವರಿಯಲಿದೆ. ಹೊಸ ನೇಮಕಾತಿ ಪ್ರಕ್ರಿಯೆಗಳಿಗೆ ಸಂಬಂಧಿಸಿದಂತೆ ಸೀಮಿತವಾಗಿ ಸಂಪುಟದಲ್ಲಿ ನಿರ್ಣಯ ಕೈಗೊಂಡಿದ್ದು, ಸರ್ಕಾರವು ಎಲ್ಲಾ ನೇಮಕಾತಿಗಳನ್ನು ಸ್ಥಗಿತಗೊಳಿಸಿಲ್ಲ ಎಂಬುದನ್ನು ಈ ಮೂಲಕ ಸ್ಪಷ್ಟಪಡಿಸುತ್ತಿದ್ದೇನೆ ಎಂದು ಹೇಳಿದ್ದಾರೆ.

ಪರಿಶೀಲನೆ ಅಂತ್ಯ

ದಾಖಲೆಗಳೊಂದಿಗೆ ರಾಕೇಶ್ ಪಾಪಣ್ಣ ಮನೆಯಿಂದ ಇಡಿ ತಂಡ ಮರಳಿತು. ಪರಿಶೀಲನೆ ವೇಳೆ ಮನೆಯವರ ಮೊಬೈಲ್‌ಗಳನ್ನು ವಶಕ್ಕೆ ಪಡೆದು, ಮನೆಯಿಂದ ಯಾರೂ ಹೊರಹೋಗದಂತೆ ಸೂಚನೆ ನೀಡಿದ್ದರು. ಈ ವೇಳೆ ರಾಕೇಶ್ ಪಾಪಣ್ಣ ಹಾಗೂ ಅವರ ತಂದೆ ಹಿನಕಲ್ ಪಾಪಣ್ಣ ಅವರಿಂದ ಕೆಲ ದಾಖಲೆಗಳಿಗೆ ಸಂಬಂಧಿಸಿದಂತೆ ಮಾಹಿತಿ ಪಡೆದರೆನ್ನಲಾಗಿದೆ. ಅವರು ಹೊಂದಿರುವ ಒಟ್ಟು ಆಸ್ತಿ, ಆ ಪೈಕಿ ವಂಶ ಪಾರಂಪರ್ಯವಾಗಿ ಬಂದ ಸ್ವತ್ತು, ಸ್ವಂತವಾಗಿ ಖರೀದಿಸಿದ್ದು, ರಾಕೇಶ್ ಪಾಪಣ್ಣ ಹೆಸರಿನಲ್ಲಿರುವ ಆಸ್ತಿಗಳು, ಕುಟುಂಬದವರ ಮಾಹಿತಿ, ಅವರುಗಳ ಸ್ವಾಧೀನಾನುಭವದಲ್ಲಿರುವ ಸ್ಥಿರಾಸ್ತಿಗಳ ಬಗ್ಗೆಯೂ ಮಾಹಿತಿ ಪಡೆದುಕೊಂಡರು ಎನ್ನಲಾಗಿದೆ.

ಹಾಗೆಯೇ ರಾಕೇಶ್ ಪಾಪಣ್ಣ, ತಂದೆ ಹಿನಕಲ್ ಪಾಪಣ್ಣ ಅವರಿಗೆ ಸೇರಿದ ಉದ್ಯಮ, ಅಂಗಡಿ–ಮುಂಗಟ್ಟು ಇನ್ನಿತರೆ ವ್ಯವಹಾರಗಳಿಗೆ ಸಂಬಂಧಿಸಿದ ದಾಖಲೆಗಳನ್ನೂ ಸಂಗ್ರಹಿಸಿ, ಅವರ ವಾಹನಗಳನ್ನು ಅಧಿಕಾರಿಗಳು ತಪಾಸಣೆ ನಡೆಸಿದರು ಎಂದು ಹೇಳಲಾಗಿದೆ. ಮನೆಯ ಸುತ್ತ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಿ, ಯಾರೂ ಒಳಗೆ–ಹೊರಗೆ ಓಡಾಡದಂತೆ ಕಟ್ಟೆಚ್ಚರ ವಹಿಸಲಾಗಿತ್ತು. ಮನೆಯ ಹೊರಗಡೆ ವಿಜಯನಗರ ಠಾಣೆ ಪೊಲೀಸರು ನಿಗಾ ವಹಿಸಿದ್ದರು. ಇಡಿ ದಾಳಿ ವಿಷಯ ತಿಳಿದು ರಾಕೇಶ್ ಪಾಪಣ್ಣ, ಹಿನಕಲ್ ಪಾಪಣ್ಣ ಅವರ ಬೆಂಬಲಿಗರು, ಸ್ನೇಹಿತರು, ಸಂಬಂಧಿಕರು ಮನೆ ಬಳಿ ಜಮಾಯಿಸಿ, ಕುತೂಹಲದಿಂದ ನೋಡುತ್ತಾ ನಿಂತಿದ್ದರು. ಶೇ.50:50ರ ಅನುಪಾತದಡಿ ಒಂದೇ ದಿನ 98 ಸಾವಿರ ಚದರಡಿ ವಿಸ್ತೀರ್ಣದ ನಿವೇಶನಗಳನ್ನು ಹಿಂದಿನ ಮುಡಾ ಆಯುಕ್ತ ಜಿ.ಟಿ. ದಿನೇಶ್ ಕುಮಾರ್ ಮಂಜೂರು ಮಾಡಿದ್ದರು.

10 ವರ್ಷದ ಹಿಂದೆ ಗಾರೆ ಕೆಲಸಗಾರ ಇಂದು ಕೋಟ್ಯಾಧಿಪತಿ

ರಾಜಕಾರಣಿ, ಅಧಿಕಾರಿಗಳಿಗೆ ಮಧ್ಯವರ್ತಿ?

ಮೈಸೂರು, ಬೆಂಗಳೂರು ಸೇರಿದಂತೆ ರಾಜ್ಯ ಮಟ್ಟದ ಪ್ರಭಾವಿ ರಾಜಕಾರಣಿಗಳು ಹಾಗೂ ಅಧಿಕಾರಿಗಳಿಗೆ ಜಯರಾಂ ಮಧ್ಯವರ್ತಿ ಎನ್ನಲಾಗುತ್ತಿದೆ. ಈ ಮಾಹಿತಿ ಇಡಿ ಅಧಿಕಾರಿಗಳಿಗೆ ದೊರೆತಿರುವ ಹಿನ್ನೆಲೆಯಲ್ಲಿ ಈ ದಾಳಿ ನಡೆಸಿರುವುದಾಗಿ ತಿಳಿದುಬಂದಿದೆ. ಕೆಲ ವರ್ಷದ ಹಿಂದೆ ಜಯರಾಂ ವಕ್ರತುಂಡ ಗೃಹ ನಿರ್ಮಾಣ ಸಹಕಾರ ಸಂಘವನ್ನು ಕೂಡ ನಡೆಸುತ್ತಿದ್ದರು. ಸಹಕಾರ ಸಂಘದ ಎಲ್ಲಾ ರೀತಿಯ ಅಧಿಕಾರವನ್ನು ಜಯರಾಂ ಹೊಂದಿದ್ದರು. ಮುಡಾದ ಹಿಂದಿನ ಆಯುಕ್ತ ಜಿ.ಟಿ.ದಿನೇಶ್‌ಕುಮಾರ್ ಮಂಜೂರಾತಿ ನೀಡಿದ್ದ ಶೇಕಡ 50:50 ಅನುಪಾತದ ನಿವೇಶನಗಳ ಮಾರಾಟ ವ್ಯವಹಾರದಲ್ಲಿ ಜಯರಾಂ ಮಧ್ಯವರ್ತಿಯಾಗಿದ್ದಾರೆ ಎನ್ನಲಾಗಿದೆ. ದಿನೇಶ್‌ಕುಮಾರ್ ಇವನ ಮೂಲಕವೇ ಅಕ್ರಮ ವ್ಯವಹಾರ ನಡೆಸಿದ್ದರು ಎನ್ನಲಾಗಿದೆ. ಬಹಳಷ್ಟು ರಾಜಕಾರಣಿಗಳು ಹಾಗೂ ಅಧಿಕಾರಿಗಳು ಜಯರಾಂ ಹೆಸರಿನಲ್ಲಿ ಮುಡಾದ ಶೇಕಡ 50:50 ಅನುಪಾತದ ನಿವೇಶನ ಪಡೆದು, ಈಗಾಗಲೇ ಬೇರೆಯವರಿಗೆ ಮಾರಾಟ ಮಾಡಿದ್ದಾರೆ ಎಂದು ತಿಳಿದು ಬಂದಿದೆ. ರಾಜಕಾರಣಿಗಳು ಹಾಗೂ ಅಧಿಕಾರಿಗಳ ಜೊತೆ ಜಯರಾಂ ಸಂಪರ್ಕ ಹೊಂದಿರುವುದು ಪರಿಶೀಲನೆ ವೇಳೆ ಇಡಿ ಅಧಿಕಾರಿಗಳ ಗಮನಕ್ಕೂ ಬಂದಿದೆ. ಇದರಿಂದ ಮುಂದಿನ ಇಡಿ ದಾಳಿ ಸರದಿ ಕೆಲವು ರಾಜಕಾರಣಿ ಹಾಗೂ ಅಧಿಕಾರಿಗಳಿಗೆ ವ್ಯಾಪಿಸಲಿದೆ ಎನ್ನಲಾಗುತ್ತಿದೆ.

ಅಯೋಧ್ಯೆಯಲ್ಲಿ ಅದ್ದೂರಿ ದೀಪಾವಳಿ: ಸರಯೂ ನದಿ ದಡದಲ್ಲಿ ಬೆಳಗಲಿದೆ 28 ಲಕ್ಷ ದೀಪ



ಅಯೋಧ್ಯೆ, ಅ.29– ಅಯೋಧ್ಯೆಯ ರಾಮ ಮಂದಿರದಲ್ಲಿ ರಾಮನ ಮೂರ್ತಿ ಪ್ರತಿಷ್ಠಾಪನೆ ಬಳಿಕ ನಡೆಯುತ್ತಿರುವ ಮೊದಲ ದೀಪಾವಳಿಯ ಆಚರಣೆಯನ್ನು ಅದ್ದೂರಿಯಾಗಿ ಹಮ್ಮಿಕೊಳ್ಳಲಾಗಿದ್ದು, ಹಬ್ಬದಂದು ನಗರದಲ್ಲಿ 28 ಲಕ್ಷ ದೀಪಗಳನ್ನು ಬೆಳಗಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅಯೋಧ್ಯೆಯಲ್ಲಿ ಎಂಟನೇ ದೀಪೋತ್ಸವಕ್ಕೆ ಅಂತಿಮ ಹಂತದ ಸಿದ್ಧತೆಗಳು ನಡೆಯುತ್ತಿವೆ. ಪೊಲೀಸ್ ಮತ್ತು ಪೌರಾಡಳಿತವು ಪೊಲೀಸ್ ಮಹಾ ನಿರ್ದೇಶಕ ಪ್ರಶಾಂತ್ ಕುಮಾರ್ ನೇತೃತ್ವದಲ್ಲಿ ಭದ್ರತಾ ಕ್ರಮಗಳನ್ನು ಕೈಗೊಂಡಿವೆ.

ದೀಪೋತ್ಸವದ ಅಂತಿಮ ಸಿದ್ಧತೆಗಳು ನಡೆಯುತ್ತಿವೆ. ದೀಪಗಳನ್ನು ಇಡುವ ಕಾರ್ಯ ನಡೆಯುತ್ತಿದೆ. ಲೇಸರ್, ಧ್ವನಿ ಮತ್ತು ಡ್ರೋನ್‌ಗಳ ಪೂರ್ವಭಾವಿ ಪ್ರದರ್ಶನ ಪ್ರಗತಿಯಲ್ಲಿದೆ ಎಂದು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಅವರ ಕಚೇರಿ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದೆ. ದೀಪೋತ್ಸವದಲ್ಲಿ ಪವಿತ್ರ ನಗರಿಯ ಧಾರ್ಮಿಕ, ಸಾಂಪ್ರದಾಯಿಕ ಮತ್ತು ಸಾಂಸ್ಕೃತಿಕ ಹಿನ್ನೆಲೆ ಪ್ರದರ್ಶಿಸುವ ಉದ್ದೇಶವಿದೆ. ಇದಕ್ಕಾಗಿ ಆರು ರಾಷ್ಟ್ರಗಳಾದ ಮ್ಯಾನ್ಮಾರ್, ನೇಪಾಳ, ಥಾಯ್ಲೆಂಡ್, ಮಲೇಷ್ಯಾ, ಕಾಂಬೋಡಿಯಾ ಕಲಾವಿದರ ಕಲಾ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ. ಉತ್ತರಾಖಂಡದ ರಾಮಲೀಲಾ ಪ್ರದರ್ಶನ, ವಿವಿಧ ರಾಜ್ಯಗಳ ಕಲಾವಿದರ ಕಲಾಪ್ರದರ್ಶನವೂ ಇರಲಿದೆ. ಹಬ್ಬದ ವೇಳೆ ಪಶು ಸಂಗೋಪನಾ ಇಲಾಖೆಯು 1,50,000 ಗೋ ದೀಪಗಳನ್ನು ಹಚ್ಚುವುದಾಗಿ ಹೇಳಿದೆ.

ಪರಿಸರ ಕಾಪಾಡುವ ದೃಷ್ಟಿಯಿಂದ ಹಾಗೂ ಕಲೆ ಉಂಟಾಗುವುದನ್ನು ತಪ್ಪಿಸಲು ವಿಶೇಷ ದೀಪಗಳನ್ನು ಬೆಳಗಲಾಗುತ್ತಿದೆ. ಅ.30ರಂದು 30,000ಕ್ಕೂ ಹೆಚ್ಚಿನ ಸ್ವಯಂಸೇವಕರು ಅಲಂಕಾರ ಕೆಲಸಕ್ಕೆ ನೆರವಾಗಲಿದ್ದಾರೆ. ಪೂರ್ಣ ಕಾರ್ಯಕ್ರಮದ ನೇರ ಪ್ರದರ್ಶನ ಟಿವಿ ಪರದೆಯಲ್ಲಿ ಬಿತ್ತರವಾಗಲಿದೆ. ಅಯೋಧ್ಯೆಯ ಹಲವು ಕಡೆ ಕಾರ್ಯಕ್ರಮ ವೀಕ್ಷಣೆಗೆ ಎಲ್‌ಇಡಿ ಪರದೆಗಳನ್ನು ಅಳವಡಿಸಲಾಗುತ್ತಿದೆ. ಇಡೀ ನಗರವನ್ನು ಹೂ ಹಾಗೂ ವಿದ್ಯುತ್ ದೀಪಗಳಿಂದ ಕಂಗೊಳಿಸುವಂತೆ ಮಾಡಲಾಗುತ್ತಿದೆ.

ಈ ಬಾರಿಯ ದೀಪೋತ್ಸವ ಅದ್ವಿತೀಯ ಹಾಗೂ ಅದ್ಭುತವಾಗಿರುತ್ತದೆ ಎಂದು ರಾಮಮಂದಿರದ ಮುಖ್ಯ ಅರ್ಚಕ ಆಚಾರ್ಯ ಸತ್ಯೇಂದ್ರ ದಾಸ್ ತಿಳಿಸಿದ್ದಾರೆ. ರಾಮಾಯಣ ನಡೆದ ಕಾಲಘಟ್ಟವಾದ ತ್ರೇತಾಯುಗದ ಮಾದರಿಯಲ್ಲಿ ಇಲ್ಲಿನ ಪರಿಸರ ಭಾಸವಾಗುವಂತೆ ಮಾಡಲು ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ. ಇತ್ತೀಚಿನ ದಿನಗಳಲ್ಲಿ ಸುಮಾರು ಒಂದು ಲಕ್ಷ ಜನರು ದರ್ಶನಕ್ಕೆ ಬರುತ್ತಿದ್ದಾರೆ ಎಂದು ಅಯೋಧ್ಯೆ ಮೇಯರ್ ತಿಳಿಸಿದ್ದಾರೆ.

ರಾಮನ ಮೂರ್ತಿ ಪ್ರತಿಷ್ಠಾಪನೆ ಬಳಿಕ ನಡೆಯುತ್ತಿರುವ ಈ ವರ್ಷದ ದೀಪೋತ್ಸವ ಕಾಣಲು ನಾವು ಕಾತರರಾಗಿದ್ದೇವೆ. ಇಲ್ಲಿನ ಪರಿಸರ ಅಲಂಕೃತಗೊಂಡಿದೆ. ಸ್ಥಳೀಯರಲ್ಲಿ ಉತ್ಸಾಹ ಕಾಣುತ್ತಿದೆ. ಈ ಸ್ಥಳದ ನಿವಾಸಿಯಾಗಿದ್ದಕ್ಕೆ ಹೆಮ್ಮೆ ಪಡುತ್ತೇನೆ ಎಂದು ಸ್ಥಳೀಯ ನಿವಾಸಿ ಪ್ರಜ್ವಲ್ ಸಿಂಗ್ ಹೇಳಿದ್ದಾರೆ.

ದೀಪಾವಳಿ ಐತಿಹಾಸಿಕವಾಗಿರಲಿದೆ: ಈ ಬಾರಿಯ ದೀಪಾವಳಿ ಐತಿಹಾಸಿಕ ಎನಿಸಿಕೊಳ್ಳಲಿದೆ. 500 ವರ್ಷಗಳ ಕಾಯುವಿಕೆ ನಂತರ ಬಾಲರಾಮನ ಜನ್ಮಸ್ಥಳ ಅಯೋಧ್ಯೆಯಲ್ಲಿ ಹಬ್ಬದ ದಿನ ಅಸಂಖ್ಯ ದೀಪಗಳು ಬೆಳಗಲಿವೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ರಾಮ ಮನೆಗೆ ಮರಳಿದ ದಿನವೇ ದೀಪಾವಳಿ. ಆದರೆ ರಾಮನ ಬರುವಿಕೆಯ ನಿರೀಕ್ಷೆ ಈ ಬಾರಿ 14 ವರ್ಷಗಳಲ್ಲಿ ಈಡೇರಲಿಲ್ಲ ಬದಲಿಗೆ 500 ವರ್ಷ ಕಾಯಬೇಕಾಯಿತು ಎಂದು ತಿಳಿಸಿದ್ದಾರೆ. ಸುಮಾರು 12850 ಕೋಟಿ ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದ ಅವರು ಆಯುಷ್ಮಾನ್ ಭಾರತ್ ಆರೋಗ್ಯ ವಿಮೆ ಯೋಜನೆಯನ್ನು 70 ವರ್ಷ ಹಾಗೂ ಅದನ್ನು ದಾಟಿದ ಎಲ್ಲ ಹಿರಿಯ ನಾಗರಿಕರಿಗೂ ವಿಸ್ತರಣೆ ಮಾಡಿ ಮಾತನಾಡಿದರು.

ರೈತರಿಗೆ ವಕ್ಫ್ ಬೋರ್ಡ್ ನೋಟಿಸ್: ಮಾಜಿ ಸಂಸದ ಪ್ರತಾಪ್ ಸಿಂಹ ಆಕ್ರೋಶ

ಮೈಸೂರು, ಅ. 29(ಆರ್‌ಕೆ)– ತಮ್ಮ ಸ್ವಾಧೀನದ ಭೂಮಿ ಉಳುಮೆ ಮಾಡುತ್ತಿರುವ ರೈತರಿಗೆ ವಕ್ಫ್ ಬೋರ್ಡ್ ನೋಟಿಸ್ ನೀಡುತ್ತಿರುವ ಕ್ರಮವನ್ನು ಮಾಜಿ ಸಂಸದ ಪ್ರತಾಪ್ ಸಿಂಹ ಪ್ರಶ್ನಿಸಿದ್ದಾರೆ.



ಪ್ರತಾಪ್ ಸಿಂಹ

ಮೈಸೂರಿನ ಜಲದರ್ಶಿನಿ ಅತಿಥಿಗೃಹದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದ ಅವರು, ಮುಸ್ಲಿಮರು ಕಂಡ ಕಂಡ ಭೂಮಿಯನ್ನೆಲ್ಲಾ ವಕ್ಫ್ ಆಸ್ತಿ ಎನ್ನುತ್ತಿದ್ದಾರಲ್ಲ, ಅದು ಅವರಿಗೆ ಯಾರಿಂದ ಬಂತು? ಅಕ್ಬರ್, ಔರಂಗಜೇಬ್, ಜಿನ್ನಾ ಅಥವಾ ಯಾರಾದರೂ ಸೌದಿಯ ಮುಲ್ಲಾಗಳು ಕೊಟ್ಟ ಆಸ್ತಿಗಳಾ ಎಂದು ಪ್ರಶ್ನಿಸಿದ್ದಾರೆ.

ಪ್ರತ್ಯೇಕ ಆಸ್ತಿಗಳು ಅವರಿಗೆ ಎಲ್ಲಿಂದ ಬಂದಿವೆ? ಬಳುವಳಿಯಾಗಿ ಬಂದಿದ್ದಾದರೂ ಯಾರಿಂದ? ಹುಣಸೂರಲ್ಲೂ ಗಣೇಶ ದೇವಾಲಯದ 17 ಎಕರೆ ಭೂಮಿ ನಮ್ಮದು ಎಂದು ವಕ್ಫ್ ಬೋರ್ಡ್ ಹೇಳುತ್ತಿದೆ, ಚಿಕ್ಕಮಗಳೂರಲ್ಲೂ ಇದೇ ಕಥೆಯಾಗಿದೆ. ಕಂಡ ಕಂಡವರ ಜಮೀನಿಗೆಲ್ಲಾ ಮುಲ್ಲಾಗಳು ನೋಟಿಸ್ ನೀಡಿ ಅವು ನಮ್ಮದು ಅಂತಿದ್ದಾರೆ. ಹಾಗಾದಲ್ಲಿ ವಕ್ಫ್ ಬೋರ್ಡ್ ಜಮೀನಿನಲ್ಲಿ ಮುಸ್ಲಿಮರಿಗೆ ಉಳುಮೆ ಮಾಡಲು ಅವಕಾಶ ಕೊಟ್ಟಿದ್ದೀರಾ? ಎಂದು ಪ್ರತಾಪ್ ಸಿಂಹ ಪ್ರಶ್ನಿಸಿದ್ದಾರೆ.

ನಮ್ಮ ದೇವಾಲಯ, ಮಠಗಳಲ್ಲಿ ಹಾಕುವಂತೆ ಎಂದಾದರೂ ಮಸೀದಿ, ಚರ್ಚ್‌ಗಳಲ್ಲಿ ಅನ್ನ ದಾಸೋಹ ವ್ಯವಸ್ಥೆ ಇದೆಯೇ? ಎಂದು ಪ್ರಶ್ನಿಸಿದರು.

ಸಿಎಂ ಸಿದ್ದರಾಮಯ್ಯರಿಗೆ ಮುಡಾ ಸಂಕಷ್ಟ ಎದುರಾದಾಗ ತಾಯಿ ಚಾಮುಂಡಿ, ಹಾಸನಾಂಬೆ ನೆನಪಾಗಿದ್ದಾರೆ. ಸಿಎಂಗೆ ಕಷ್ಟ ಬಂದಾಗ ಅವರ ಸಹಾಯಕ್ಕೆ ಬರುವುದು ನಮ್ಮ ದೇವಾನುದೇವತೆಗಳೇ ಹೊರತು, ಬೇರೆ ಧರ್ಮದವರಲ್ಲ. ಹಾಗಾಗಿ ಸಿದ್ದರಾಮಯ್ಯ ಈಗ ಹಿಂದೂಗಳ ವಿರುದ್ಧ ನಿಲುವು ತೆಗೆದುಕೊಳ್ಳುವುದಿಲ್ಲ ಎಂದುಕೊಂಡಿದ್ದೇನೆ ಎಂದು ಅವರು ತಿಳಿಸಿದ್ದಾರೆ.

ಮುಡಾ ಹಗರಣದ ತನಿಖೆಯನ್ನು ಇಡಿ ಆರಂಭಿಸಿದ ಮೇಲೆ ಮುಡಾ ಕ್ಲೀನ್ ಆಗಬಹುದೆಂಬ ನಂಬಿಕೆ ಬಂದಿದೆ. ಶೇ. 50:50ರ ಅನುಪಾತದಡಿ ಮಂಜೂರಾಗಿರುವ ಎಲ್ಲಾ ನಿವೇಶನಗಳನ್ನೂ ವಾಪಸ್ ಪಡೆಯಬೇಕು. ಉತ್ತಮ ನಗರಾಭಿವೃದ್ಧಿ ಪ್ರಾಧಿಕಾರವಾಗಬೇಕು ಎಂದು ಪತ್ರಕರ್ತರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದರು.

ಬಸನಗೌಡ ಪಾಟೀಲ್ ಯತ್ನಾಳ್ ಬಿಜೆಪಿ ನೇತಾರ. ಅವರೇ ವಕ್ಫ್ ಬೋರ್ಡ್ ಅಕ್ರಮದ ಬಗ್ಗೆ ಮೊದಲು ಧ್ವನಿ ಎತ್ತಿದ್ದು, ಮುಡಾ ಪ್ರಕರಣದ ನಂತರ ಸಿಎಂಗೆ ಈಗ ಹಿಂದೂ ಧರ್ಮದ ಮೇಲೆ ನಂಬಿಕೆ ಬಂದಂತಿದೆ ಎಂದ ಪ್ರತಾಪ್ ಸಿಂಹ, ನಮ್ಮ ದೇವರ ಮೇಲೆ ಸಿಎಂಗೆ ಭಕ್ತಿ ಬಂದಿದೆ. ನಾನೂ ಸಹ ಯತ್ನಾಳ್ ಜೊತೆಯಲ್ಲಿ ಪ್ರತಿಭಟನೆಗೆ ಕೈ ಜೋಡಿಸುತ್ತೇನೆ ಎಂದರು.

ಕರ್ನಾಟಕದಲ್ಲಿ ಕನ್ನಡಿಗ, ಕನ್ನಡ ಭಾಷೆಯೇ ಸಾರ್ವಭೌಮ

ಮೈಸೂರಿನ ಎಲ್ಲಾ ಅಂಗಡಿ, ಮಾಲ್‌ಗಳು, ವ್ಯಾಪಾರ ಮಳಿಗೆ, ಜಾಹೀರಾತು ಫಲಕಗಳಲ್ಲಿ ಶೇ.60 ಭಾಗ ಕನ್ನಡ ಭಾಷೆ ಕಡ್ಡಾಯಕ್ಕೆ ಒತ್ತಾಯ

ಮೈಸೂರು, ಅ.29(ಜಿಎ)–ಮೈಸೂರಿನಲ್ಲಿರುವ ಎಲ್ಲಾ ಅಂಗಡಿ, ವ್ಯಾಪಾರ ಮಳಿಗೆಗಳು, ಮಾಲ್‌ಗಳು, ಖಾಸಗಿ ಕಚೇರಿಗಳು, ಶಾಲಾ–ಕಾಲೇಜು ಹಾಗೂ ಜಾಹೀರಾತು ಫಲಕಗಳು ಹಾಗೂ ಎಲ್ಲಾ ರೀತಿಯ ನಾಮಫಲಕಗಳಲ್ಲಿ ಕನ್ನಡವನ್ನು ಶೇ.60 ಭಾಗ ಪ್ರಧಾನವಾಗಿ, ಕಡ್ಡಾಯವಾಗಿರಬೇಕು ಎಂದು ಒತ್ತಾಯಿಸಿ, ಮೈಸೂರು ನಗರ ಪಾಲಿಕೆ ಮುಂಭಾಗ ಕರ್ನಾಟಕ ಸೇನಾ ಪಡೆ ಮಂಗಳವಾರ ಪ್ರತಿಭಟನೆ ನಡೆಸಿತು.



ಮೈಸೂರು ನಗರಪಾಲಿಕೆ ಮುಂಭಾಗ ಕರ್ನಾಟಕ ಸೇನಾಪಡೆ ವತಿಯಿಂದ ಕನ್ನಡ ನಾಮಫಲಕ ಕಡ್ಡಾಯಗೊಳಿಸುವಂತೆ ಆಗ್ರಹಿಸಿ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಕರ್ನಾಟಕದಲ್ಲಿ ಕನ್ನಡಿಗನೇ, ಕನ್ನಡ ಭಾಷೆಯೇ ಸಾರ್ವಭೌಮ. ಕನ್ನಡ ನಾಡಿನಲ್ಲಿ ಮೊದಲು ಕನ್ನಡ ಭಾಷೆಯನ್ನು ಪ್ರಧಾನವಾಗಿ ಬಳಸಬೇಕು ಹಾಗೂ ಕನ್ನಡದಲ್ಲಿ ವ್ಯವಹರಿಸಬೇಕು. ಕನ್ನಡ ಭಾಷೆ ಕಲಿಯಬೇಕು. ಇಲ್ಲದಿದ್ದರೆ ನಾವು ಪಾಠ ಕಲಿಸಬೇಕಾಗುತ್ತದೆ. ಮೈಸೂರಿನಲ್ಲಿ ಶೇ.60ರಷ್ಟು ನಾಮಫಲಕಗಳು ಕನ್ನಡದಲ್ಲಿಯೇ ಇರಬೇಕು ಎಂದು ಈ ಕೂಡಲೇ ಮಹಾನಗರಪಾಲಿಕೆ ಕಟ್ಟುನಿಟ್ಟಾಗಿ ಆದೇಶ ಹೊರಡಿಸಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಎಲ್ಲಾ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಬಳಸಬೇಕು ಎನ್ನುವುದು ಹೊಸ ಕಾನೂನು ಅಲ್ಲ, ಆದರೂ ಕನ್ನಡ ಸಂಘಟನೆಗಳ ಹೋರಾಟದ ಮೇರೆಗೆ ರಾಜ್ಯ ಸರಕಾರ, ಈಗ ನಾಮಫಲಕಗಳಲ್ಲಿ ಶೇ.60 ಕನ್ನಡ ಕಡ್ಡಾಯ ಸುಗ್ರೀವಾಜ್ಞೆ ಹೊರಡಿಸಿದೆ, ಜತೆಗೆ ಹೈಕೋರ್ಟ್ ಸಹ ಬೆಂಗಳೂರಿನ ಎಲ್ಲಾ ಮಾಲ್, ಖಾಸಗಿ ಕಚೇರಿಗಳು ನಾಮಫಲಕಗಳಲ್ಲಿ ಕನ್ನಡವನ್ನು ಪ್ರಧಾನವಾಗಿ, ಕಡ್ಡಾಯವಾಗಿ ಶೇ.60 ರಷ್ಟು ಬಳಸಬೇಕೆಂದು ಆದೇಶಿಸಿದೆ. ಈ ಮಾದರಿಯಲ್ಲಿಯೇ ಮೈಸೂರು ನಗರ ಪಾಲಿಕೆ ಈ ಕೂಡಲೇ ಅಧಿಕಾರಿಗಳ ಹಾಗೂ ವಲಯ ಕಚೇರಿ ಸಹಾಯಕ ಆಯುಕ್ತರ ತುರ್ತು ಸಭೆ ಕರೆಯಬೇಕು ಎಂದು ಆಗ್ರಹಿಸಿದರು.

ಎಲ್ಲಾ ಅಂಗಡಿ, ಮಳಿಗೆ, ಮಾಲ್, ಶಾಲಾ ಕಾಲೇಜು, ಜಾಹೀರಾತು ಫಲಕಗಳಲ್ಲಿ ಕನ್ನಡ ಶೇ.60ರಷ್ಟು ಪ್ರಧಾನವಾಗಿ, ಕಡ್ಡಾಯವಾಗಿರಬೇಕೆಂದು, (ನಾಮಫಲಕಗಳಲ್ಲಿ ಕಡ್ಡಾಯವಾಗಿ ಮಾಲೀಕರ ಹೆಸರಿರಬೇಕೆಂದು) ಕನ್ನಡ ನಾಮಫಲಕ ಹಾಕದೇ ಇರುವವರ ಮೇಲೆ ಕಟ್ಟುನಿಟ್ಟಾದ ಕ್ರಮ ಕೈಗೊಂಡು ಸರ್ಕಾರದ ಸುಗ್ರೀವಾಜ್ಞೆಯ ಸುತ್ತೋಲೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಒತ್ತಾಯಿಸಿದರು.

ಕನ್ನಡ ಬಳಸದ ಮಳಿಗೆಗಳಿಗೆ ನೋಟಿಸ್ ನೀಡಿ, ಒಂದು ತಿಂಗಳ ಕಾಲಾವಕಾಶ ಕೊಡಬೇಕು. ಅವರು ಬದಲಾಗದಿದ್ದರೆ ಅವರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು. ಒಂದು ವೇಳೆ ಈ ಕೆಲಸ ನೀವು ಮಾಡದಿದ್ದರೆ, ಮತ್ತೆ ನಮ್ಮ ಸಂಘಟನೆ ಬೀದಿಗಿಳಿದು ಕನ್ನಡ ಬಳಸದ ನಾಮಫಲಕಗಳಿಗೆ ಮಸಿ ಬಳಿಯಲಾಗುವುದೆಂದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್‌ಗೌಡ, ಕೃಷ್ಣಯ್ಯ, ಪ್ರಭುಶಂಕರ್, ಪಿ.ಪ್ರಜೀಶ್, ವರಕೂಡು ಕೃಷ್ಣೇಗೌಡ, ಬೋಗಾದಿ ಸಿದ್ದೇಗೌಡ, ನಾಗರಾಜು, ಸಿಂಧುವಳ್ಳಿ ಶಿವಕುಮಾರ್, ಮಹದೇವಸ್ವಾಮಿ, ನಂದಕುಮಾರ್ ಗೌಡ, ಹನುಮಂತಯ್ಯ, ಮಂಜುಳ, ನೇಹ, ಭಾಗ್ಯಮ್ಮ, ಬೇಬಿ ರತ್ನ, ಎಳನೀರು ರಾಮಣ್ಣ, ರಾಮಕೃಷ್ಣೇಗೌಡ, ರಾಧಾಕೃಷ್ಣ, ರಘು ಅರಸ್, ಗುರುಮಲ್ಲಪ್ಪ, ಹರೀಶ್ ಮತ್ತಿತರರಿದ್ದರು.

ಮೈಸೂರು ಜಿಲ್ಲಾ ಆರೋಗ್ಯ–ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಆನೆಕಾಲು ರೋಗ ಶಿಬಿರ



ಆನೆಕಾಲು ರೋಗದ ಚಿಕಿತ್ಸಾ ಶಿಬಿರವನ್ನು ಚಾಮರಾಜ ಕ್ಷೇತ್ರದ ಇಂದಿರಾ ಗಾಂಧಿ ಬ್ಲಾಕ್‌ನ ರವಿ ಮಂಚೇಗೌಡನ ಕೊಪ್ಪಲು ಉದ್ಘಾಟಿಸಿದರು.

ಮೈಸೂರು, ಅ.29– ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಮೈಸೂರಿನ ಕುಂಬಾರಕೊಪ್ಪಲು ಆರೋಗ್ಯ ಕೇಂದ್ರದ ವತಿಯಿಂದ ಏರ್ಪಡಿಸಿದ್ದ ಆನೆಕಾಲು ರೋಗದ ಚಿಕಿತ್ಸಾ ಶಿಬಿರವನ್ನು ಚಾಮರಾಜ ಕ್ಷೇತ್ರದ ಇಂದಿರಾ ಗಾಂಧಿ ಬ್ಲಾಕ್‌ನ ರವಿ ಮಂಚೇಗೌಡನ ಕೊಪ್ಪಲು ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ವೈಜ್ಞಾನಿಕ ಯುಗದಲ್ಲಿ ಎಲ್ಲಾ ಕಾಯಿಲೆಗಳಿಗೂ ಸೂಕ್ತ ಚಿಕಿತ್ಸೆ ದೊರಕುತ್ತಿದೆ. ಇತ್ತೀಚಿನ ದಿನಗಳಲ್ಲಿ ಆನೆಕಾಲು ರೋಗಕ್ಕೂ ಕೂಡ ಚಿಕಿತ್ಸೆ ಇದೆ. ಸಾರ್ವಜನಿಕರು ಈ ರೋಗ ಪತ್ತೆಗೆ ರಕ್ತ ಸಂಗ್ರಹಿಸಿ, 9 ಗಂಟೆಯ ನಂತರ ಶಿಬಿರದಲ್ಲಿ ಮಾಹಿತಿ ಕೊಡಲಾಗುತ್ತಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು. ಇದೇ ವೇಳೆ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ಅಧಿಕಾರಿ ಡಾ.ರಮ್ಯ, ಮಹದೇಶ್ವರ ಬಡಾವಣೆಯ ಕಾಂಗ್ರೆಸ್ ಮುಖಂಡರಾದ ಮಹೇಶ್, ರೇಖಾ, ಉಷಾ, ಆರೋಗ್ಯ ಕೇಂದ್ರದ ವೈದ್ಯರು, ದಾದಿಯರು ಇದ್ದರು.

ಎಸ್‌ಸಿ, ಎಸ್‌ಟಿ ವಿದ್ಯಾರ್ಥಿಗಳಿಗೆ ಪ್ರವೇಶ, ಪರೀಕ್ಷಾ ಶುಲ್ಕಕ್ಕೆ ಒತ್ತಡ

ತರಗತಿ ಬಹಿಷ್ಕರಿಸಿ ಮಹಾರಾಣಿ ಪದವಿ ವಿದ್ಯಾರ್ಥಿಗಳು ದಿಢೀರ್ ಪ್ರತಿಭಟನೆ



ಮಹಾರಾಣಿ ಪದವಿ ವಿದ್ಯಾರ್ಥಿಗಳು ಕ್ರಾಫರ್ಡ್ ಹಾಲ್ ಮುಂಭಾಗ ಮಂಗಳವಾರ ದಿಢೀರ್ ಪ್ರತಿಭಟನೆ ನಡೆಸಿದರು.

ಮೈಸೂರು,ಅ.29(ಜಿಎ)–ಎಸ್‌ಸಿ, ಎಸ್‌ಟಿ ವಿದ್ಯಾರ್ಥಿಗಳಿಗೆ ಶೂನ್ಯ ಶುಲ್ಕ ತೆಗೆದು ಹಾಕಿ, ಪ್ರವೇಶ ಮತ್ತು ಪರೀಕ್ಷಾ ಶುಲ್ಕ ಪಾವತಿಸುವಂತೆ ಒತ್ತಾಯಿಸುತ್ತಿರುವುದನ್ನು ಖಂಡಿಸಿ ಎಐಡಿಎಸ್‌ಒ ವಿದ್ಯಾರ್ಥಿ ಸಂಘಟನೆ ನೇತೃತ್ವದಲ್ಲಿ ಮಹಾರಾಣಿ ಪದವಿ ವಿದ್ಯಾರ್ಥಿಗಳು ತರಗತಿಗಳನ್ನು ಬಹಿಷ್ಕರಿಸಿ ಕ್ರಾಫರ್ಡ್ ಹಾಲ್ ಮುಂಭಾಗ ದಿಢೀರ್ ಪ್ರತಿಭಟನೆ ನಡೆಸಿದರು.

ಕಳೆದ ವರ್ಷದವರೆಗೂ ಎಸ್‌ಸಿ, ಎಸ್‌ಟಿ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸುತ್ತಿರಲಿಲ್ಲ. ಆದರೆ ಈ ವರ್ಷ ಏಕಾಏಕಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ ಪಾವತಿಸುವಂತೆ ಒತ್ತಾಯ ಮಾಡಲಾಗುತ್ತಿದೆ. ಬಹುಪಾಲು ವಿದ್ಯಾರ್ಥಿಗಳಿಗೆ ಇಲ್ಲಿವರೆಗೆ ಸೂಕ್ತ ಸಮಯಕ್ಕೆ ವಿದ್ಯಾರ್ಥಿವೇತನ ಬಂದಿಲ್ಲ. ಹೀಗಾಗಿ ಶುಲ್ಕ ಕಟ್ಟಲು ಬಹಳ ಕಷ್ಟವಾಗಿದೆ. ಮಹಾರಾಣಿ ಕಾಲೇಜಿಗೆ ಸುತ್ತಮುತ್ತಲಿನ ಎಲ್ಲಾ ಹಳ್ಳಿಯ ಬಡ ವಿದ್ಯಾರ್ಥಿನಿಯರು ಬರುತ್ತಾರೆ. ಆದರೆ, ಸರ್ಕಾರ ಮತ್ತು ಮೈಸೂರು ವಿಶ್ವವಿದ್ಯಾನಿಲಯ ತನ್ನ ವ್ಯಾಪಾರಿ ಧೋರಣೆಯಿಂದ ವಿದ್ಯಾರ್ಥಿಗಳಿಂದ ಸುಲಿಗೆ ಮಾಡಲು ಪ್ರಯತ್ನಿಸುತ್ತಿದೆ ಎಂದು ಕಿಡಿಕಾರಿದರು.

ಯಾವುದೇ ಕಾಲಾವಕಾಶ ಕೊಡದೆ ದಿಢೀರನೆ ಪರೀಕ್ಷಾ ಶುಲ್ಕವನ್ನು ಕಟ್ಟಲು ತಿಳಿಸಿದ್ದಾರೆ. ಇದು ವಿದ್ಯಾರ್ಥಿಗಳ ಮೇಲೆ ಒತ್ತಡ ಉಂಟು ಮಾಡಿದೆ. ಹೀಗಾಗಿ ಕೂಡಲೇ ಎಸ್‌ಸಿ, ಎಸ್‌ಟಿ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ನೀಡಬೇಕು. ಬಡ ವಿದ್ಯಾರ್ಥಿಗಳಿಂದ ಶಿಕ್ಷಣ ಕಸಿದುಕೊಳ್ಳುವ ಈ ಧೋರಣೆ ಕೈಬಿಡಬೇಕು ಎಂದು ಆಗ್ರಹಿಸಿದರು. ಹಿಂದಿನಂತೆ ಎಸ್‌ಸಿ, ಎಸ್‌ಟಿ ವಿದ್ಯಾರ್ಥಿಗಳಿಗೆ ಶುಲ್ಕ ಕಟ್ಟಿಸಿಕೊಳ್ಳಬಾರದು. ತರಾತುರಿಯಲ್ಲಿ ನಡೆಸುತ್ತಿರುವ ಪದವಿ ಪರೀಕ್ಷೆಗಳನ್ನು ಮುಂದೂಡಬೇಕು. ಪರೀಕ್ಷಾ ಪ್ರವೇಶಾತಿ ಶುಲ್ಕದ ಏರಿಕೆ ಕೈಬಿಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷೆ ಚಂದ್ರಕಲಾ, ಕಾರ್ಯದರ್ಶಿ ನಿತಿನ್, ಉಪಾಧ್ಯಕ್ಷೆ ಸ್ವಾತಿ, ಪದಾಧಿಕಾರಿಗಳಾದ ಹೇಮ, ಚಂದ್ರಿಕಾ, ಅಂಜಲಿ, ಅಭಿಷೇಕ್ ವಿದ್ಯಾರ್ಥಿಗಳಾದ ಸಿಂಚನ, ರಂಜಿತ, ಚಂದನ, ನಿಕಿತ, ರಕ್ಷಿತ ಸೇರಿದಂತೆ ಹಲವರು ಭಾಗವಹಿಸಿದ್ದರು.

ಬೇಸಾಯದಲ್ಲಿ ಹನಿ, ತುಂತುರು ನೀರಾವರಿ ಮೂಲಕ ಅಧಿಕ ಲಾಭ

ಕೃಷಿ ಅಧಿಕಾರಿ ಎಂ.ಬಿ. ಮಂಜುಳಾ ಸಲಹೆ

ಮೈಸೂರು,ಅ.29–ತರಬೇತಿಯ ಮುಖ್ಯ ಉದ್ದೇಶ ಹೆಚ್ಚಿನ ರೈತರಿಗೆ ಹನಿ/ತುಂತುರು ನೀರಾವರಿ ಮತ್ತು ರಸಾವರಿ ಪದ್ಧತಿಗಳ ಅಳವಡಿಕೆ ಮತ್ತು ನಿರ್ವಹಣೆಯ ಬಗ್ಗೆ ಮಾಹಿತಿ ನೀಡುವುದರ ಮೂಲಕ ಬೇಸಾಯದಲ್ಲಿ ಖರ್ಚು ಕಡಿಮೆ ಮಾಡಿ ಅಧಿಕ ಲಾಭ ಪಡೆಯುವಂತೆ ಮಾಡಲಾಗುವುದು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಕೃಷಿ ಅಧಿಕಾರಿ ಎಂ.ಬಿ.ಮಂಜುಳಾ ತಿಳಿಸಿದರು.

ನಾಗನಹಳ್ಳಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ವತಿಯಿಂದ ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ನಂಜನಗೂಡು ತಾಲೂಕಿನ ಕಸಬಾ ಹೋಬಳಿಯ ಸೂರಹಳ್ಳಿಯಲ್ಲಿ ಆಯೋಜಿಸಿದ್ದ 'ಕೃಷಿ ಮತ್ತು ತೋಟಗಾರಿಕೆ ಬೆಳೆಯಲ್ಲಿ ಹನಿ, ತಂತುರು ನೀರಾವರಿ ಹಾಗೂ ರಸಾವರಿ ಪದ್ಧತಿಗಳ ಅಳವಡಿಕೆ' ಕುರಿತು ಒಂದು ದಿನದ ಹೊರಾಂಗಣ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ತೋಟಗಾರಿಕಾ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ಸಿದ್ದಪ್ಪ ಮಾತನಾಡಿ, ರೈತರು ಹನಿ, ತಂತುರು ನೀರಾವರಿ ಹಾಗೂ ರಸಾವರಿ ಪದ್ಧತಿಗಳನ್ನು ಅಳವಡಿಸಿಕೊಂಡು ಬಹುಬೆಳೆ ಪದ್ಧತಿಯನ್ನು ಅನುಸರಿಸಿದರೆ ಕಡಿಮೆ ಸಮಯದಲ್ಲಿ ಹೆಚ್ಚು ಪ್ರದೇಶಕ್ಕೆ ನೀರನ್ನು ಒದಗಿಸಿ ನೀರಾವರಿ ಪ್ರದೇಶದ ವಿಸ್ತೀರ್ಣವನ್ನು ಹೆಚ್ಚಿಸಿಕೊಳ್ಳುವುದರ ಜೊತೆಗೆ ಉತ್ತಮ ಆದಾಯವನ್ನು ಪಡೆಯಬಹುದು ಎಂದು ಸಲಹೆ ನೀಡಿದರು.

ನಂಜನಗೂಡು ತಾಲೂಕಿನ ಕಸಬಾ ಹೋಬಳಿಯ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಮಾಧುರಿ, ಬೆಳೆ ಸಮೀಕ್ಷೆ ಹಾಗೂ ಇಲಾಖಾ ಕಾರ್ಯಕ್ರಮಗಳ ಬಗ್ಗೆ ತಿಳಿಸಿದರು. ಪ್ರೀಮಿಯರ್ ಇರಿಗೇಷನ್ ಸಂಸ್ಥೆಯ ತಾಂತ್ರಿಕ ವ್ಯವಸ್ಥಾಪಕ ವಿಜಯ್‌ಕುಮಾರ್, ಏರಿಯಾ ಮ್ಯಾನೇಜರ್ ನಾಗೇಶ್, ಹನಿ ಮತ್ತು ತುಂತುರು ನೀರಾವರಿ ಹಾಗೂ ರಸಾವರಿ ಪದ್ಧತಿಗಳ ಅಳವಡಿಕೆ ಹಾಗೂ ನಿರ್ವಹಣೆ ಬಗ್ಗೆ ತಿಳಿಸಿ ಪ್ರಾತ್ಯಕ್ಷಿಕೆ ಮೂಲಕ ರೈತರಿಗೆ ಮನವರಿಕೆ ಮಾಡಿದರು. ಸೂರಹಳ್ಳಿಯ 55 ರೈತರು, ರೈತ ಮಹಿಳೆಯರು ಭಾಗವಹಿಸಿದ್ದರು.



ಸೂರಹಳ್ಳಿಯಲ್ಲಿ ರೈತರಿಗೆ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿತ್ತು.

ವಿದ್ಯಾರ್ಥಿಗಳಿಗೆ ಜಿಲ್ಲಾ, ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆ

ಮೈಸೂರು,ಅ.29–ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜಯಂತಿ ಅಂಗವಾಗಿ ವಿಜ್ಞಾನ ಮತ್ತು ತಂತ್ರಜ್ಞಾನ ಚಾಲಿತ ವಿಶ್ವವಿದ್ಯಾಲಯದಲ್ಲಿ ಗಾಂಧಿ ತತ್ವ ಸಿದ್ಧಾಂತಗಳ ಮಹತ್ವದ ಬಗ್ಗೆ ವಿಶ್ಲೇಷಿಸಿ ಪ್ರಬಂಧ ಬರೆಯಲು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಜಿಲ್ಲಾ ಮತ್ತು ರಾಜ್ಯಮಟ್ಟದ ಪ್ರಬಂಧ ಸ್ಪರ್ಧೆ ಏರ್ಪಡಿಸಲಾಗಿದೆ. ಆಸಕ್ತರು ಜಿಲ್ಲಾ ಮಟ್ಟದ ಸ್ಪರ್ಧೆಗೆ ಪ್ರಬಂಧವನ್ನು ಬರೆದು ಅ.30ರೊಳಗಾಗಿ kstaessay.kannada@gamil.com ಮತ್ತು kstaessay.english@gmail.com ಇ–ಮೇಲ್ ಮೂಲಕ ಕಳುಹಿಸಬಹುದು. ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ನ.12ರಂದು ಆಯೋಜಿಸಲಾಗುವ ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಸ್ಥಳದಲ್ಲೇ ಪ್ರಬಂಧವನ್ನು ಕನ್ನಡ ಮತ್ತು ಇಂಗ್ಲೀಷ್ ಪ್ರತ್ಯೇಕ ಭಾಷೆಗಳಲ್ಲಿ ಬರೆಯಬಹುದು. ಜಿಲ್ಲಾ ಮಟ್ಟದಲ್ಲಿ 'ಬಾಪೂಜಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ' ಹಾಗೂ ರಾಜ್ಯಮಟ್ಟದಲ್ಲಿ 'ವಿಜ್ಞಾನ ಮತ್ತು ತಂತ್ರಜ್ಞಾನ ಚಾಲಿತ ಪ್ರಪಂಚದಲ್ಲಿ ಗಾಂಧೀಜಿ ಚಿಂತನೆಗಳ ಪ್ರಸ್ತುತತೆ' ಎಂಬ ವಿಷಯದಲ್ಲಿ ಪ್ರಬಂಧ ಬರೆಯಬಹುದಾಗಿದ್ದು, ಬಹುಮಾನವನ್ನು ನ.14ರಂದು ವಿತರಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ: ಚಂದ್ರಶೇಖರ ಮೂರ್ತಿ ಮೊ.ಸಂ: 9686449019, 968691901 ದೂ.ಸಂ: 080–29721550, www.kstacademy.in ಮೂಲಕ ವೀಕ್ಷಿಸಬಹುದು.

ವಿಜಯಲಕ್ಷ್ಮಿ ಅವರಿಂದ ದೇವರನಾಮ ಸಂಕೀರ್ತನ



ವಿಜಯಲಕ್ಷ್ಮಿ

ಮೈಸೂರು,ಅ.29–ದೀಪಾವಳಿ ಮತ್ತು ಕನ್ನಡ ರಾಜ್ಯೋತ್ಸವದ ಅಂಗವಾಗಿ ನ.1ರಂದು ಸಂಜೆ 6.30ಕ್ಕೆ ವಿದುಷಿ ವಿದ್ವಾನ್ ವಿಜಯಲಕ್ಷ್ಮಿ ವಸಂತ್ (ಲಕ್ಷ್ಮೀ) ಅವರಿಂದ ಮೈಸೂರಿನ ದಟ್ಟಗಳ್ಳಿಯಲ್ಲಿರುವ ಶ್ರೀ ಮಹಾಲಕ್ಷ್ಮಿ ದೇವಸ್ಥಾನದಲ್ಲಿ ದೇವರನಾಮ ಸಂಕೀರ್ತನವನ್ನು ಏರ್ಪಡಿಸಲಾಗಿದೆ. ವಿದ್ವಾನ್ ಪ್ರೇರಣಾ ಪ್ರವೀಣ್–ವಯಲಿನ್ ಮತ್ತು ವಿದ್ವಾನ್ ಉದಯ್‌ಕುಮಾರ್–ಮೃದಂಗದ ಮೂಲಕ ವಿಜಯಲಕ್ಷ್ಮಿ ಅವರ ಹಾಡುಗಾರಿಕೆಗೆ ಸಾಥ್ ನೀಡಲಿದ್ದಾರೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ಗಂಡು ಮಕ್ಕಳ ಮೇಲಿನ ಲೈಂಗಿಕ ಶೋಷಣೆ ಕುರಿತು ಕಾರ್ಯಾಗಾರ

ರಾಜ್ಯದಲ್ಲಿ ಶೇ.52.92ರಷ್ಟು ಲೈಂಗಿಕ ಶೋಷಣೆಗಳು ಬೆಳಕಿಗೆ

ಮೈಸೂರು, ಅ.29(ಜಿಎ)–ಗಂಡು ಮಕ್ಕಳ ಮೇಲೆ ನಡೆಯುತ್ತಿರುವ ಲೈಂಗಿಕ ಶೋಷಣೆಗೆ ಸಂಬಂಧಿಸಿದಂತೆ ಮೈಸೂರಿನ ಒಡನಾಡಿ ಸಂಸ್ಥೆಯ ವತಿಯಿಂದ ನಗರ ಖಾಸಗಿ ಹೋಟೆಲ್‌ನಲ್ಲಿ ನಡೆದ ಎರಡು ದಿನಗಳ ಕಾರ್ಯಾಗಾರದಲ್ಲಿ ರಾಜ್ಯದಲ್ಲಿ ಶೇ.52.92ರಷ್ಟು ಮಂದಿ ಮೇಲೆ ಲೈಂಗಿಕ ಶೋಷಣೆ ನಡೆಯುತ್ತಿರುವ ವಿಚಾರ ಚರ್ಚೆಗೆ ಬಂದಿತು.



ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಒಡನಾಡಿ ಸಂಸ್ಥೆಯ ವತಿಯಿಂದ ಗಂಡು ಮಕ್ಕಳ ಮೇಲೆ ನಡೆಯುತ್ತಿರುವ ಲೈಂಗಿಕ ಶೋಷಣೆಗೆ ಸಂಬಂಧಿಸಿದಂತೆ ಕಾರ್ಯಾಗಾರ ಆಯೋಜಿಸಲಾಗಿತ್ತು.

ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಕೋಲ್ಕತ್ತದ ಟಿಂಕು ಖನ್ನಾ, ಜೋಯತ್ರಿ ಅವರು ಮಕ್ಕಳ ಹಕ್ಕುಗಳು, ಮಕ್ಕಳಿಗೆ ಸಂಬಂಧಿಸಿದ ಕಾನೂನುಗಳು, ಗಂಡು ಮಕ್ಕಳ ದುರ್ಬಲತೆಗಳು, ಅದಕ್ಕೆ ಸಂಬಂಧಿಸಿದ ಪರಿಹಾರೋಪಾಯಗಳು ಇವೆಲ್ಲವನ್ನು ಮಕ್ಕಳು ಅರ್ಥೈಸಿಕೊಳ್ಳುವಂತೆ ತಿಳಿಸಿಕೊಟ್ಟರು.

ಮಕ್ಕಳ ಮೇಲೆ ನಿರಂತರವಾಗಿ ಶೋಷಣೆಗಳು ನಡೆಯುತ್ತಿರುವ ದಿನಗಳಲ್ಲಿ ಈ ರೀತಿ ಕಾರ್ಯಾಗಾರಗಳು ಮಕ್ಕಳನ್ನು ಹೆಚ್ಚು ಮಾನಸಿಕ ಹಾಗೂ ದೈಹಿಕವಾಗಿ ಸದೃಢರನ್ನಾಗಿಸುತ್ತದೆ ಹಾಗೂ ಶೋಷಣೆಗೆ ಒಳಗಾಗದ ರೀತಿಯಲ್ಲಿ ಅವರಿಗೆ ಅರಿವು ಮೂಡಿಸುವುದು ಇದರ ಉದ್ದೇಶವಾಗಿತ್ತು.

ಈ ವೇಳೆ ಒಡನಾಡಿ ಸಂಸ್ಥೆಯ ಸ್ಟ್ಯಾನ್ಲಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಗಂಡು ಮಕ್ಕಳು ಹೆಚ್ಚಿನ ಪ್ರಮಾಣದಲ್ಲಿ ಲೈಂಗಿಕ ಶೋಷಣೆಗೆ ಒಳಗಾಗುತ್ತಿರುವುದು ಕಂಡು ಬಂದಿದ್ದು, ಅದರಲ್ಲೂ ಮುಖ್ಯವಾಗಿ ಕರ್ನಾಟಕ ರಾಜ್ಯದಲ್ಲಿ ಶೇ.52.92ರಷ್ಟು ಪ್ರಕರಣಗಳು ಆರ್.ಟಿ.ಐ ಅಡಿಯಲ್ಲಿ ಬೆಳಕಿಗೆ ಬಂದಿರುವುದು ಆತಂಕಕಾರಿಯಾದ ವಿಷಯವಾಗಿದ್ದು, ಇದು ಒಡನಾಡಿ ಸಂಸ್ಥೆಯು ನಡೆಸಿರುವ ಸಂಶೋಧನೆಯಿಂದ ತಿಳಿದು ಬಂದಿದೆ ಎಂದರು.

ಪರಶು ಮಾತನಾಡಿ, ಗಂಡು ಮಕ್ಕಳು ಶೋಷಣೆಗೆ ಒಳಗಾಗುತ್ತಿದ್ದು, ಈ ವಿಚಾರವನ್ನು ಯಾರೊಂದಿಗೂ ಹೇಳಿಕೊಳ್ಳದ ಪರಿಸ್ಥಿತಿ ನಿರ್ಮಾಣವಾಗಿ ಮನೆ ಬಿಟ್ಟು ಓಡಿ ಹೋಗುವುದು, ವಿದ್ಯಾಭ್ಯಾಸವನ್ನು ಅರ್ಧಕ್ಕೆ ನಿಲ್ಲಿಸುವುದು, ಯಾರ ಮೇಲೂ ವಿಶ್ವಾಸ ಇಲ್ಲದೆ, ನೋವಿನಲ್ಲೇ ನರಳುವಂತಾಗಿದೆ. ಗಂಡು ಎಂಬ ಕಾರಣಕ್ಕೆ ನಡೆದಿರುವ ದೌರ್ಜನ್ಯವನ್ನು ಯಾರೊಂದಿಗೂ ಹಂಚಿಕೊಳ್ಳುವಂತಿಲ್ಲ ಎಂಬ ಹಪಾಹಪಿತನ ಕಂಡುಬರುತ್ತಿದೆ. ಅದೇ ರೀತಿಯಾಗಿ ಹೆಣ್ಣು ಮಕ್ಕಳು ಸಹ ಲೈಂಗಿಕ ಶೋಷಣೆಗೆ ಒಳಗಾಗುತ್ತಿದ್ದು, ಇವೆಲ್ಲವನ್ನು ಗಮನಿಸುತ್ತಾ ಹೋದರೆ ಸ್ವಸ್ಥ ಸಮಾಜವನ್ನು ಕಾಣಬೇಕಾದಂತಹ ಈ ವ್ಯವಸ್ಥೆಯಲ್ಲಿ ಮಕ್ಕಳ ಮೇಲಾಗುತ್ತಿರುವ ಶೋಷಣೆಗಳು ನಿಜಕ್ಕೂ ವಿಪರ್ಯಾಸ ಎಂದು ಬೇಸರ ವ್ಯಕ್ತಪಡಿಸಿದರು.

ಕಾರ್ಯಾಗಾರದಲ್ಲಿ ಫ್ರೀ ಎ ಗರ್ಲ್ ಪ್ರೋಗ್ರಾಂ ಮ್ಯಾನೇಜರ್ ಪ್ರಜ್ಞಾ ಡೊಲಾರೆ, ವಸತಿ ಮೇಲ್ವಿಚಾರಕರಾದ ಶೃತಿ, ಮಹೇಂದ್ರ, ಶಿವರಂಜಿನಿ, ಗ್ರಂಥಪಾಲಕರಾದ ಜ್ಯೋತಿ ಹಾಗೂ ರಕ್ಷಣಾ ತಂಡದ ಸಿಬ್ಬಂದಿಗಳಾದ ಪ್ರದೀಪ್, ಸುಮ, ಬಾಲುಕುಮಾರ್, ಶಶಾಂಕ್ ಇತರರು ಭಾಗವಹಿಸಿದ್ದರು.

ದೇಶ - ವಿದೇಶ

ಮಂಗಳ ಗ್ರಹದ ಮೇಲೆ ಹಸಿರು ಪ್ರದೇಶ: ಜೀವಕಳೆ ಶಂಕೆ

ಹೊಸದಿಲ್ಲಿ: ಮಂಗಳ ಗ್ರಹದ ಮೇಲೆ ಜೀವಸೃಷ್ಟಿಯ ಬಗ್ಗೆ ಮತ್ತಷ್ಟು ಕುತೂಹಲಕರ ಮಾಹಿತಿ ಲಭ್ಯವಾಗಿದೆ. ನಾಸಾದ ಪರ್ಸೀವರೆನ್ಸ್ ನೌಕೆ ಮಂಗಳನ ನೆಲದ ಮೇಲೆ 5 ಸೆಂ.ಮೀ. ಅಗಲದ ಹಸಿರು ಪ್ರದೇಶವನ್ನು ಗುರುತಿಸಿದೆ ಎಂದು ನಾಸಾ ಹೇಳಿದೆ.



ಭೂಮಿಯಲ್ಲಿರುವ "ರೆಡ್ ಬೆಲ್ಟ್' ವಲಯದಲ್ಲೂ ಭೌತಿಕ ಬದಲಾವಣೆಯಿಂದ ಇಂತಹ ಹಸಿರು ಪ್ರದೇಶ ಕಾಣಿಸಿಕೊಳ್ಳುತ್ತದೆ. ಹೀಗಾಗಿ ಮಂಗಳನ ಮೇಲೂ ಜೀವ ಸೃಷ್ಟಿ ಇತ್ತು. ಮುಂದೆ ಅದು ಸಾಧ್ಯವಿದೆ ಎಂಬ ವಿಜ್ಞಾನಿಗಳ ವಾದಕ್ಕೆ ಮತ್ತಷ್ಟು ಪುಷ್ಟಿ ದೊರಕಿದಂತಾಗಿದೆ. ಮಂಗಳಗ್ರಹದ ಮೇಲಿರುವ ಪರ್ಸೀವರೆನ್ಸ್ ನೌಕೆ ವಿಶೇಷವಾದ ಕಲ್ಲುಗಳಿಂದ ಕೂಡಿದ್ದ ಪ್ರದೇಶದಲ್ಲಿ ಉತ್ಖನನ ನಡೆಸುವಾಗ 5 ಸೆಂ.ಮೀ. ಅಗಲದ ಹಸಿರು ಪ್ರದೇಶ ಪತ್ತೆಯಾಗಿದೆ. ಇದರ ಸುತ್ತಲೂ ಬಿಳಿ, ಕಪ್ಪು ಬಣ್ಣದ ಪ್ರದೇಶಗಳನ್ನೂ ಗುರುತಿಸಲಾಗಿದೆ. ಈ ಹಸಿರು ಬಣ್ಣದ ಬಗ್ಗೆ ಹೆಚ್ಚಿನ ಅಧ್ಯಯನ ನಡೆಯಬೇಕಿದೆ. ಆಗ ಮಾತ್ರ ಏನಿದು? ಯಾಕೆ ರಚನೆಯಾಗಿದೆ ಎಂಬ ಮಾಹಿತಿ ದೊರಕುತ್ತದೆ ಎಂದು ವಿಜ್ಞಾನಿಗಳು ಹೇಳಿದ್ದಾರೆ.

ಶ್ವೇತಭವನದಲ್ಲಿ ದೀಪಾವಳಿ ಆಚರಣೆ

ವಾಷಿಂಗ್ಟನ್: ಅಮೆರಿಕ ಅಧ್ಯಕ್ಷ ಜೋ ಬೈಡನ್ ಶ್ವೇತ ಭವನದಲ್ಲಿ ಸೋಮವಾರ ದೀಪಾವಳಿ ಆಚರಣೆ ಆಯೋಜಿಸಿದ್ದರು.



ಕಾರ್ಯಕ್ರಮದಲ್ಲಿ ದೇಶದಲ್ಲಿನ ಕಾಂಗ್ರೆಸಿಗರು, ಅಧಿಕಾರಿಗಳು ಮತ್ತು ಕಾರ್ಪೊರೇಟ್ ಅಧಿಕಾರಿಗಳು ಸೇರಿದಂತೆ 600ಕ್ಕೂ ಹೆಚ್ಚು ಅನಿವಾಸಿ ಭಾರತೀಯರು ಪಾಲ್ಗೊಂಡಿದ್ದರು. ಸಂಪ್ರದಾಯದಂತೆ ಬೈಡನ್ ಭಾಷಣಕ್ಕೂ ಮುನ್ನ ಬ್ಲೂ ರೂಮ್‌ನಲ್ಲಿ ದೀಪವನ್ನು ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಬೈಡನ್, 'ಶ್ವೇತಭವನದಲ್ಲಿ ಅತಿದೊಡ್ಡ ದೀಪಾವಳಿ ಆಚರಣೆ ಆಯೋಜಿಸಿರುವುದಕ್ಕೆ ಹೆಮ್ಮೆಯಿದೆ' ಎಂದು ಹೇಳಿದರು.

ಇದೇ ಸಂದರ್ಭ, ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ನಾಸಾ ಗಗನಯಾತ್ರಿ ಮತ್ತು ನಿವೃತ್ತ ನೌಕಾಪಡೆಯ ಕ್ಯಾಪ್ಟನ್ ಸುನಿತಾ ವಿಲಿಯಮ್ಸ್ ಅವರ ವೀಡಿಯೋ ಸಂದೇಶವನ್ನು ಪ್ರಸ್ತುತಪಡಿಸಲಾಯಿತು.

ಚುನಾವಣಾ ಪ್ರಚಾರದಲ್ಲಿ ನಿರತರಾಗಿರುವ ಕಾರಣ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಮತ್ತು ಪ್ರಥಮ ಮಹಿಳೆ ಡಾ.ಜಿಲ್ ಬೈಡನ್ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿಲ್ಲ.

ಒಂದು ದಿನದಲ್ಲಿ ಯಾವ ಮಾಲಿನ್ಯವೂ ಆಗಲ್ಲ... ಪಟಾಕಿ ಹೊಡೆಯಿರಿ...!

ಚೆನ್ನೈ: ದೀಪಾವಳಿ ಹಬ್ಬಕ್ಕೆ ಪಟಾಕಿ ಹೊಡೆಯಿರಿ... ಒಂದು ದಿನದಲ್ಲಿ ಯಾವ ಮಾಲಿನ್ಯವೂ ಆಗಲ್ಲ ಎಂದು ಪರಿಸರ ಹೋರಾಟಗಾರರ 'ಪಟಾಕಿ ನಿಷೇಧ' ಅಭಿಯಾನದ ನಡುವೆಯೇ ತಮಿಳುನಾಡು ಬಿಜೆಪಿ ನಾಯಕ ಕೆ.ಅಣ್ಣಾಮಲೈ ಇದಕ್ಕೆ ವ್ಯತಿರಿಕ್ತವಾಗಿ ಸಾಕಷ್ಟು ಪಟಾಕಿ ಹೊಡೆಯುವಂತೆ ಕರೆ ನೀಡಿದ್ದಾರೆ.



ಪಟಾಕಿ ಉದ್ಯಮದಲ್ಲಿ ತೊಡಗಿರುವ ಕಾರ್ಮಿಕರ ಕಲ್ಯಾಣವನ್ನು ಗಮನದಲ್ಲಿಟ್ಟುಕೊಂಡು ದೀಪಾವಳಿಯಂದು ಪಟಾಕಿ ಖರೀದಿಸಿ, ಸಿಡಿಸುವಂತೆ ಮನವಿ ಮಾಡಿದ್ದಾರೆ. ಈ ಬಗ್ಗೆ ಎಕ್ಸ್‌ನಲ್ಲಿ ವಿಡಿಯೊವನ್ನು ಪೋಸ್ಟ್ ಮಾಡಿರುವ ಅವರು, ವಾತಾವರಣಕ್ಕೆ ಇಂಗಾಲ ಹೊರಸೂಸುವಿಕೆಯಲ್ಲಿ ಭಾರತ 125ನೇ ಸ್ಥಾನದಲ್ಲಿದೆ, ಯುಎಸ್ 16, ಚೀನಾ 25ನೇ ಸ್ಥಾನದಲ್ಲಿವೆ. ಸುಮಾರು 8 ಲಕ್ಷ ಜನ ನೇರವಾಗಿ, ಪರೋಕ್ಷವಾಗಿ ಪಟಾಕಿ ಉದ್ಯಮದೊಂದಿಗೆ ಸಂಪರ್ಕ ಹೊಂದಿದ್ದಾರೆ. ನಾವು ಅವರ ಸಂತೋಷಕ್ಕಾಗಿ ಪಟಾಕಿಗಳನ್ನು ಖರೀದಿಸಿ ಏಕೆ ಸಿಡಿಸಬಾರದು ಎಂದು ಪ್ರಶ್ನಿಸಿದ್ದಾರೆ. ಆದರೆ ಪಟಾಕಿ ಸಿಡಿಸುವಾಗ ಜಾಗರೂಕರಾಗಿರಿ, ಯಾವುದೇ ತೊಂದರೆಯಾಗದಂತೆ ಎಚ್ಚರ ವಹಿಸಿ. ಈ ದೀಪಾವಳಿ ಹಬ್ಬ ಪ್ರತಿಯೊಬ್ಬರ ಬಾಳಿನಲ್ಲಿ ಬೆಳಕು ಚೆಲ್ಲಲಿ ಎಂದು ಅಣ್ಣಾಮಲೈ ಹೇಳಿದ್ದಾರೆ.

ಸೇನಾ ನೆಲೆ ಮೇಲೆ ದಾಳಿ: 40 ಯೋಧರ ಸಾವು

ದಕಾರ್: ಮಧ್ಯ ಆಫ್ರಿಕಾದ ಚಾಡ್ ದೇಶದ ಲೇಕ್ ಪ್ರಾಂತ್ಯದಲ್ಲಿ ಮಿಲಿಟರಿ ನೆಲೆಯ ಮೇಲೆ ನಡೆದ ದಾಳಿಯಲ್ಲಿ ಸುಮಾರು 40 ಯೋಧರು ಸಾವನ್ನಪ್ಪಿರುವುದಾಗಿ ಅಧ್ಯಕ್ಷರ ವಕ್ತಾರರು ಹೇಳಿದ್ದಾರೆ.



ದೇಶದ ಪಶ್ಚಿಮ ಭಾಗದಲ್ಲಿರುವ ನೌಬೋವಾ ಎಂಬ ಸೇನಾ ನೆಲೆಯ ಮೇಲೆ ಸೋಮವಾರ ನಸುಕಿನ ಜಾವ ಏಕಾಏಕಿ ದಾಳಿ ಮಾಡಿದ ಬೋಕೊ ಹರಾಮ್ ಉಗ್ರರು ಮನಸೋ ಇಚ್ಛೆ ಗುಂಡಿನ ದಾಳಿ ನಡೆಸಿದ್ದು, ಘಟನೆಯಲ್ಲಿ ಯುನಿಟ್ ಕಮಾಂಡರ್ ಕೂಡ ಮೃತಪಟ್ಟಿದ್ದಾರೆ.

ಘಟನೆ ಬಗ್ಗೆ ಆಘಾತ ವ್ಯಕ್ತಪಡಿಸಿರುವ ಚಾಡ್ ಅಧ್ಯಕ್ಷ ಮಹಮತ್ ಇಡ್ರಿಸ್ ಡೆಬಿ ಇಟ್ನೊ ಅವರು ಘಟನಾ ಸ್ಥಳಕ್ಕೆ ದೌಡಾಯಿಸಿದ್ದರು. 'ನಮ್ಮ ಮೇಲೆ ದಾಳಿ ಮಾಡಿದ ಉಗ್ರರನ್ನು ಪ್ರತಿ ದಾಳಿ ಮಾಡಿ ಹತ್ಯೆ ಮಾಡಿದ್ದೇವೆ. ಸ್ಥಳದಲ್ಲಿ ಪರಿಸ್ಥಿತಿ ಸಹಜ ಸ್ಥಿತಿಗೆ ಬಂದಿದೆ ಎಂದು ತಿಳಿಸಿದ್ದಾರೆ. ಪಕ್ಕದ ನೈಜೀರಿಯಾ ಜೊತೆ ಗಡಿ ಸಂಘರ್ಷ ಹೊಂದಿರುವ ಚಾಡ್ ಮೇಲೆ ನೈಜಿರಿಯಾ ಮೂಲದ ಬೊಕೊ ಹರಾಮ್ ಉಗ್ರರು ಕೆಂಗೆಣ್ಣು ಬೀರಿದ್ದಾರೆ ಎನ್ನಲಾಗಿದೆ.

ಸಲ್ಮಾನ್‌ಖಾನ್, ಬಾಬಾ ಸಿದ್ದಿಕಿ ಮಗನಿಗೆ ಕೊಲೆ ಬೆದರಿಕೆ ಹಾಕಿದ್ದವನ ಬಂಧನ

ಮುಂಬೈ: ಭೂಗತ ಪಾತಕಿ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ನಿಂದ ಪ್ರಾಣಭೀತಿ ಎದುರಿಸುತ್ತಿರುವ ಬಾಲಿವುಡ್ ನಟ ಸಲ್ಮಾನ್ ಖಾನ್ ಹಾಗೂ ಇತ್ತೀಚೆಗೆ ಹತ್ಯೆಗೀಡಾಗಿದ್ದ ಎನ್‌ಸಿಪಿ ನಾಯಕ ಬಾಬಾ ಸಿದ್ದಿಕಿ ಮಗ ಝೀಷನ್ ಸಿದ್ದಿಕಿಗೆ ಕೊಲೆ ಬೆದರಿಕೆ ಹಾಕಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.



ಬಾಬಾ ಸಿದ್ದಿಕ್ ಅವರ ಪುತ್ರ ಝೀಶಾನ್ ಸಿದ್ದಿಕಿ ಮತ್ತು ಬಾಲಿವುಡ್ ನಟ ಸಲ್ಮಾನ್ ಖಾನ್ ಅವರಿಗೆ ಜೀವ ಬೆದರಿಕೆ ಹಾಕಿದ ಪ್ರಕರಣಕ್ಕೆ ಸಂಬಂಧಿಸಿ ಮುಂಬೈ ಪೊಲೀಸರು ಮಂಗಳವಾರ ನೋಯ್ಡಾದಲ್ಲಿ 20 ವರ್ಷದ ಓರ್ವ ಯುವಕನನ್ನು ಬಂಧಿಸಿದ್ದಾರೆ. ಮೂಲಗಳ ಪ್ರಕಾರ ಅ.25ರ ಸಂಜೆ ಬಾಂದ್ರಾ ಪೂರ್ವ ಕ್ಷೇತ್ರದ ಅಜಿತ್ ಪವಾರ್ ನೇತೃತ್ವದ ಎನ್‌ಸಿಪಿ ಶಾಸಕ ಜೀಶನ್ ಸಿದ್ದಿಕ್ ಕಚೇರಿಗೆ ಕರೆ ಮಾಡಿ ಜೀವ ಬೆದರಿಕೆ ಹಾಕಿದ್ದ. ಈ ಕುರಿತು ಮುಂಬೈ ಪೊಲೀಸರಿಗೆ ದೂರು ನೀಡಲಾಗಿತ್ತು. ತನಿಖೆ ನಡೆಸಿದ ಪೊಲೀಸರು ಇಂದು ನೋಯ್ಡಾದಲ್ಲಿ ಮೊಹಮ್ಮದ್ ತಯ್ಯಬ್ ಅಲಿಯಾಸ್ ಗುರ್ಫಾನ್(20) ಎಂಬಾತನನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಪ್ರಾಥಮಿಕ ವಿಚಾರಣೆ ವೇಳೆ ಆರೋಪಿ ನಟ ಸಲ್ಮಾನ್ ಖಾನ್, ಝೀಶಾನ್ ಸಿದ್ದಿಕಿ ಇಬ್ಬರಿಗೂ ಬೆದರಿಕೆ ಹಾಕಿರುವುದಾಗಿ ಒಪ್ಪಿಕೊಂಡಿದ್ದಾನೆ ಎನ್ನಲಾಗಿದೆ.

ನಮ್ಮ ನಡೆ ಹಸಿರೆಡೆಗೆ, ಗೋ ಗ್ರೀನ್ ಅಭಿಯಾನದಡಿ ವಿದ್ಯಾರ್ಥಿಗಳಿಂದ

ಸ್ವಚ್ಛ ದೀಪಾವಳಿ, ಸ್ವಸ್ಥ ದೀಪಾವಳಿ ಜಾಗೃತಿ



ಮಡಿಕೇರಿ ಸರ್ಕಾರಿ ಜೂನಿಯರ್ ಕಾಲೇಜಿನ ಪ್ರೌಢಶಾಲಾ ವಿಭಾಗದಲ್ಲಿ ಸ್ವಚ್ಛ ದೀಪಾವಳಿ, ಸ್ವಸ್ಥ ದೀಪಾವಳಿ–2024ರತ್ತ ನಮ್ಮ ಹೆಜ್ಜೆ ಎಂಬ ಪರಿಸರ ಜಾಗೃತಿ ಅಭಿಯಾನ ನಡೆಯಿತು.

ಮಡಿಕೇರಿ ಅ.29–ನಗರದ ಸರ್ಕಾರಿ ಜೂನಿಯರ್ ಕಾಲೇಜಿನ ಪ್ರೌಢಶಾಲಾ ವಿಭಾಗದಲ್ಲಿ ಇಕೋ ಕ್ಲಬ್, ಎನ್‌ಎಸ್‌ಎಸ್ ಘಟಕಗಳ ಸಹಯೋಗದೊಂದಿಗೆ ಮಂಗಳವಾರ ನಮ್ಮ ನಡೆ ಹಸಿರೆಡೆಗೆ, ಗೋ ಗ್ರೀನ್ ಅಭಿಯಾನದಡಿ ಸ್ವಚ್ಛ ದೀಪಾವಳಿ, ಸ್ವಸ್ಥ ದೀಪಾವಳಿ–2024ರತ್ತ ನಮ್ಮ ಹೆಜ್ಜೆ ಎಂಬ ಪರಿಸರ ಜಾಗೃತಿ ಮೂಡಿಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಕೊಡಗು ಪ್ರಾದೇಶಿಕ ಕಚೇರಿ, ಶಾಲಾ ಶಿಕ್ಷಣ ಇಲಾಖೆ, ರಾಷ್ಟ್ರೀಯ ಹಸಿರು ಪಡೆಯ ಇಕೋ ಕ್ಲಬ್ ಘಟಕ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ರಾಜ್ಯ ವಿಜ್ಞಾನ ಪರಿಷತ್ತಿನ ಕೊಡಗು ಜಿಲ್ಲಾ ಸಮಿತಿ ಹಾಗೂ ಎನ್‌ಎಸ್‌ಎಸ್ ಸಂಯುಕ್ತಾಶ್ರಯದಲ್ಲಿ ನಡೆದ ಅಭಿಯಾನದಲ್ಲಿ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಮಾಲಿನ್ಯಕಾರಿ ಪಟಾಕಿ ಸಿಡಿಸುವುದನ್ನು ಬಿಟ್ಟು ಪರಿಸರ ಸಂರಕ್ಷಣೆ ದೃಷ್ಟಿಯಿಂದ ಪರಿಸರ ಸ್ನೇಹಿ ಹಸಿರು ದೀಪಾವಳಿ ಆಚರಿಸುವುದಾಗಿ ಶಾಲಾ–ಕಾಲೇಜು ವಿದ್ಯಾರ್ಥಿಗಳು ಪ್ರತಿಜ್ಞೆ ಸ್ವೀಕರಿಸಿದರು.

ಹಸಿರು ದೀಪಾವಳಿ ಘೋಷಣೆ: ವಿದ್ಯಾರ್ಥಿಗಳು ಹಸಿರು ದೀಪಾವಳಿ ಆಚರಣೆ ಕುರಿತಂತೆ ಹಣತೆ ಬೆಳಗಿಸಿ, ದೀಪಾವಳಿ ಆಚರಿಸಿ, ಪಟಾಕಿ ತ್ಯಜಿಸಿ–ಮಾಲಿನ್ಯ ತಡೆಯಿರಿ, ಹಸಿರು ದೀಪಾವಳಿ–ಆಚರಿಸೋಣ ಬನ್ನಿ, ಹಸಿರು ದೀಪಾವಳಿ–ಪರಿಸರ ದೀಪಾವಳಿ ಎಂಬಿತ್ಯಾದಿ ಘೋಷಣೆಯೊಂದಿಗೆ ಪರಿಸರ ಜನಜಾಗೃತಿ ಮೂಡಿಸಿದರು.

ಹಸಿರು ದೀಪಾವಳಿ ಆಚರಣೆ ಕುರಿತ ಕರಪತ್ರ ಬಿಡುಗಡೆಗೊಳಿಸಿ ಮಾತನಾಡಿದ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಸಿ.ರಂಗಧಾಮಪ್ಪ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಪ್ರಾರ್ಥನಾ ವೇಳೆ ಮಾಲಿನ್ಯಕಾರಕ ಪಟಾಕಿಗಳನ್ನು ಸಿಡಿಸುವುದರಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವಂತೆ ಶಾಲಾ ಶಿಕ್ಷಣ ಇಲಾಖೆ ಸುತ್ತೋಲೆ ಹೊರಡಿಸಿದೆ. ಶಾಲೆಗಳಲ್ಲಿ ಇಕೋ ಕ್ಲಬ್‌ಗಳ ಮೂಲಕ ಜಾಗೃತಿ ಮೂಡಿಸಬೇಕು ಎಂದು ಸಲಹೆ ನೀಡಿದರು.

ಹಣತೆ (ಮಣ್ಣಿನ ದೀಪ) ಬೆಳಗಿಸಿ ಹಸಿರು ದೀಪಾವಳಿ ಆಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕೊಡಗು ಜಿಲ್ಲಾ ಸಂಸ್ಥೆಯ ಪ್ರಧಾನ ಆಯುಕ್ತ ಕೆ.ಟಿ.ಬೇಬಿ ಮ್ಯಾಥ್ಯೂ ಮಾತನಾಡಿ, ಪಟಾಕಿ ಸಿಡಿಸುವುದನ್ನು ತ್ಯಜಿಸಿ ಪರಿಸರ ಸಂರಕ್ಷಣೆಗಾಗಿ ದೀಪ ಬೆಳಗಿಸಿ ಮಾಲಿನ್ಯ ತಡೆಗಟ್ಟಲು ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ಕೊಡಗು ಜಿಲ್ಲಾ ಪರಿಸರ ಜಾಗೃತಿ ಅಭಿಯಾನ ಸಂಚಾಲಕ ಟಿ.ಜಿ.ಪ್ರೇಮಕುಮಾರ್ ಮಾತನಾಡಿದರು. ಬಿಇಈ ಬಿ.ಸಿ.ದೊಡ್ಡೇಗೌಡ ಹಸಿರು ದೀಪಾವಳಿ ಆಚರಣೆ ಕುರಿತ ಪ್ರತಿಜ್ಞಾ ವಿಧಿ ಬೋಧಿಸಿದರು. ವಿದ್ಯಾರ್ಥಿನಿ ಎಂ.ಎನ್.ರಕ್ಷಿತಾ ಹಸಿರು ದೀಪಾವಳಿ ಆಚರಣೆ ಅನಿಸಿಕೆ ವ್ಯಕ್ತಪಡಿಸಿದರು. ಶಿಕ್ಷಣ ಇಲಾಖೆ ಡಿವೈಪಿಸಿ ಎಂ.ಕೃಷ್ಣಪ್ಪ, ಬಿಆರ್‌ಸಿ ಕೆ.ಪಿ.ಗುರುರಾಜ್, ಜಿಲ್ಲಾ ಸ್ಕೌಟ್ಸ್ ಆಯುಕ್ತ ಜಿಮ್ಮಿ ಸಿಕ್ವೇರಾ, ಸಹ ಕಾರ್ಯದರ್ಶಿ ಬೊಳ್ಳಜಿರ ಬಿ. ಅಯ್ಯಪ್ಪ ತರಬೇತಿ ಆಯುಕ್ತ ಕೆಯು. ರಂಜಿತ್, ಬುಲ್ ಬುಲ್ ವಿಭಾಗದ ಮುಖ್ಯಸ್ಥೆ ಡೈಸಿ, ಪ್ರಾಂಶುಪಾಲ ಪಿ.ಆರ್.ವಿಜಯ್, ಉಪ ಪ್ರಾಂಶುಪಾಲೆ ಕೆ.ವಿ.ಶಶಿಕಲಾ, ಸಹ ಪ್ರಾಧ್ಯಾಪಕಿ ಡಾ.ಎನ್.ಪಿ.ಕಾವೇರಿ, ಬಿಆರ್‌ಪಿ ಐ.ಜೆ.ಜನೆಟ್, ಕೆ.ಯು.ರಂಜಿತ್ ಇದ್ದರು.

ಹಾಕಿ ಹಬ್ಬಕ್ಕೆ ಮುದ್ದಂಡ ಕುಟುಂಬಸ್ಥರು ತಯಾರಿ



ಮುದ್ದಂಡ ಕುಟುಂಬಸ್ಥರ ನಿಯೋಗ ಹಾಕಿ ಉತ್ಸವಕ್ಕೆ ಸಹಕಾರ ನೀಡುವಂತೆ ಸಂಸದ ಯದುವೀರ್ ಅವರಿಗೆ ಮನವಿ ಮಾಡಿತು.

ಮಡಿಕೇರಿ, ಅ.29–ಮುಂದಿನ ವರ್ಷ ನಡೆಯುವ ಕೊಡವ ಕುಟುಂಬಗಳ ನಡುವಿನ 25ನೇ ವರ್ಷದ ಪ್ರತಿಷ್ಠಿತ ಮುದ್ದಂಡ ಕಪ್ ಹಾಕಿ ಹಬ್ಬಕ್ಕೆ ಮುದ್ದಂಡ ಕುಟುಂಬಸ್ಥರು ಪೂರ್ವ ಭಾವಿ ತಯಾರಿಯಲ್ಲಿ ತೊಡಗಿದ್ದು, ಕುಟುಂಬದ ಪ್ರಮುಖರು ಹಾಕಿ ಉತ್ಸವ ಯಶಸ್ಸಿಗಾಗಿ ಜನಪ್ರತಿನಿಧಿಗಳ ಸಹಕಾರ ಕೋರಿದರು.

ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಎ.ಎಸ್. ಪೊನ್ನಣ್ಣ, ಡಾ.ಮಂತರ್ ಗೌಡ, ಮಾಜಿ ಶಾಸಕ ಕೆ.ಜಿ.ಬೋಪಯ್ಯ ಹಾಗೂ ವಿಧಾನ ಪರಿಷತ್ ಮಾಜಿ ಸದಸ್ಯೆ ಶಾಂತೆಯಂಡ ವೀಣಾ ಅಚ್ಚಯ್ಯ ಅವರನ್ನು ಭೇಟಿಯಾದ ಮುದ್ದಂಡ ಕುಟುಂಬಸ್ಥರ ನಿಯೋಗ 2025ರ ಏಪ್ರಿಲ್ ಮತ್ತು ಮೇನಲ್ಲಿ ನಡೆಯುವ ಮುದ್ದಂಡ ಕಪ್ ಹಾಕಿ ಉತ್ಸವಕ್ಕೆ ಅಗತ್ಯ ಸಹಕಾರ ನೀಡುವಂತೆ ಮನವಿ ಮಾಡಿತು.

ಮುದ್ದಂಡ ಕುಟುಂಬದ ಅಧ್ಯಕ್ಷ ಮುದ್ದಂಡ ಡಾಲಿ ತಿಮ್ಮಯ್ಯ, ಮುದ್ದಂಡ ಹಾಕಿ ಉತ್ಸವ ಸಮಿತಿ ಅಧ್ಯಕ್ಷ ಮುದ್ದಂಡ ರಶಿನ್ ಸುಬ್ಬಯ್ಯ, ಗೌರವಾಧ್ಯಕ್ಷ ಬಿ. ದೇವಯ್ಯ, ಕಾರ್ಯದರ್ಶಿ ಆದ್ಯ ತಿಮ್ಮಯ್ಯ, ಉಪಾಧ್ಯಕ್ಷ ಡೀನ್ ಬೋಪಣ್ಣ, ಅಶೋಕ್, ಜಂಟಿ ಕಾರ್ಯದರ್ಶಿ ಮುದ್ದಂಡ ರಂಜಿತ್ ಪೊನ್ನಪ್ಪ, ಕುಶಾಲಪ್ಪ, ರಾಯ್, ಕಿರಣ್ ಪೂಣಚ್ಚ, ಆದರ್ಶ್, ಬನ್ನಿ ಬೋಪಣ್ಣ ಮತ್ತಿತರರು ನಿಯೋಗದಲ್ಲಿದ್ದರು.

ಮಡಿಕೇರಿಯಲ್ಲಿ ಬಿಜೆಪಿಯಿಂದ ಏಕತೆಗಾಗಿ ಓಟ



ಮಡಿಕೇರಿಯಲ್ಲಿ ಕೊಡಗು ಜಿಲ್ಲಾ ಬಿಜೆಪಿ ವತಿಯಿಂದ ಏಕತೆಗಾಗಿ ಓಟ ನಡೆಯಿತು.

ಮಡಿಕೇರಿ, ಅ.29–ದೇಶದ ಉಕ್ಕಿನ ಮನುಷ್ಯ ಎಂದೇ ಖ್ಯಾತರಾಗಿದ್ದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮದಿನದ ಅಂಗವಾಗಿ ಕೊಡಗು ಜಿಲ್ಲಾ ಬಿಜೆಪಿ ವತಿಯಿಂದ ನಗರದಲ್ಲಿ 'ಏಕತೆಗಾಗಿ ಓಟ' ನಡೆಯಿತು.

ಕಾರ್ಯಪ್ಪ ವೃತ್ತದಿಂದ ಆರಂಭಗೊಂಡ ಏಕತೆಗಾಗಿ ಓಟ ರಾಜಸೀಟ್‌ನಲ್ಲಿ ಕೊನೆಗೊಂಡಿತು. ಈ ಸಂದರ್ಭ ಮಾಜಿ ಸ್ಪೀಕರ್ ಕೆ.ಜಿ.ಬೋಪಯ್ಯ ಹಾಗೂ ಮಾಜಿ ಶಾಸಕ ಅಪ್ಪಚ್ಚು ರಂಜನ್ ಮಾತನಾಡಿ, ದೇಶದ ಏಕತೆ ಮತ್ತು ಅಖಂಡತೆಗಾಗಿ ಸರ್ದಾರ್ ವಲ್ಲಭಭಾಯಿ ಪಟೇಲ್ ಕೊಡುಗೆ ಅಪಾರ. ದೇಶದ ಪ್ರತಿ ಪ್ರಜೆಯೂ ಸರ್ದಾರ್ ಪಟೇಲ್ ಅವರನ್ನು ಸ್ಮರಿಸಿಕೊಳ್ಳಬೇಕು ಎಂದು ಹೇಳಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಸುನೀಲ್ ಸುಬ್ರಮಣಿ, ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ, ಎಸ್‌ಸಿ ಮೋರ್ಚಾ ಜಿಲ್ಲಾಧ್ಯಕ್ಷ ಪಿ.ಎಂ.ರವಿ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಅನಿತಾ ಪೂವಯ್ಯ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಮಹೇಶ್ ತಿಮ್ಮಯ್ಯ, ನಗರಸಭೆ ಸದಸ್ಯರು, ಕಾರ್ಯಕರ್ತರು ಪಾಲ್ಗೊಂಡಿದ್ದರು.

ನಾಳೆಯಿಂದ ದೀಪಾವಳಿ ಉತ್ಸವ

ಸಿದ್ದಾಪುರ, ಅ.29– ಇತಿಹಾಸ ಪ್ರಸಿದ್ಧ ಅರೆಕಾಡು ಐದ್ರೋಡಮ್ಮ ಶ್ರೀ ಚಾಮುಂಡೇಶ್ವರಿ ದೇವಾಲಯದಲ್ಲಿ 16ನೇ ವರ್ಷದ ದೀಪಾವಳಿ ಉತ್ಸವ ಅ.31 ಹಾಗೂ ನ.1ರಂದು ನಡೆಯಲಿದೆ.

ಅ.31ರಂದು ಸಂಜೆ ಪುಷ್ಪಾಲಂಕಾರ, ದೀಪಾರಾಧನೆ ನಂತರ ವಿಶೇಷ ಪೂಜೆ ನಡೆಯಲಿದೆ. ರಾತ್ರಿ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ. ನ.1ರಂದು ಬೆಳಗ್ಗೆ ಕಳಶ ಪೂಜೆ, ಪುಷ್ಪಾರ್ಚನೆ, ಕುಂಕುಮಾರ್ಚನೆ, ಮಹಾಪೂಜೆ ನೆರವೇರಿಸಲಾಗುವುದು ಎಂದು ದೇವಾಲಯ ಅಧ್ಯಕ್ಷ ರವಿಕುಮಾರ್ ತಿಳಿಸಿದ್ದಾರೆ. ಮರಗೋಡುವಿನಿಂದ ಸಿದ್ದಾಪುರಕ್ಕೆ ತೆರಳುವ ಹೆದ್ದಾರಿಯ ಅರೆಕಾಡು ಗ್ರಾಮ ಪಂಚಾಯಿತಿಗೆ ಒಳಪಡುವ ಟಾಟಾ ಕಾಫಿ ಸಂಸ್ಥೆಯ ಬಲಜಿಗೆರೆಯಲ್ಲಿ ದೇವಾಲಯದಲ್ಲಿ ಪ್ರತಿ ವರ್ಷ ದೀಪಾವಳಿ ವಾರ್ಷಿಕೋತ್ಸವ ನಡೆಯಲಿದೆ. ಹಾಸನ, ಮೈಸೂರು, ಮಂಗಳೂರು ಮತ್ತು ಕೇರಳ, ತಮಿಳುನಾಡಿನಿಂದಲೂ ಹೆಚ್ಚಿನ ಭಕ್ತರು ಆಗಮಿಸಿ ಪೂಜೆ ಸಲ್ಲಿಸಲಿದ್ದಾರೆ.

ಉಮೇಶ್, ವಸಂತ್ ಕುಮಾರ್ ಅವಿರೋಧ ಆಯ್ಕೆ



ಕೊಡವ ಸೌಹಾರ್ದ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಅಧ್ಯಕ್ಷ ನೆಲ್ಲಮಕ್ಕಡ ಉಮೇಶ್ ಮುತ್ತಣ್ಣ ಹಾಗೂ ಉಪಾಧ್ಯಕ್ಷ ಚೇಂದಂಡ ವಸಂತ್ ಕುಮಾರ್ ಅವರನ್ನು ಅಭಿನಂದಿಸಲಾಯಿತು.

ವಿರಾಜಪೇಟೆ, ಅ.29–ವಿರಾಜಪೇಟೆ ಕೊಡವ ಸೌಹಾರ್ದ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಅಧ್ಯಕ್ಷರಾಗಿ ನೆಲ್ಲಮಕ್ಕಡ ಪಿ.ಉಮೇಶ್ ಮುತ್ತಣ್ಣ ಹಾಗೂ ಉಪಾಧ್ಯಕ್ಷರಾಗಿ ಚೇಂದಂಡ ವಸಂತ್ ಕುಮಾರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಘದ ಸಭಾಂಗಣದಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಪಿ.ಉಮೇಶ್ ಮುತ್ತಣ್ಣ ಹಾಗೂ ಚೇಂದಂಡ ವಸಂತ್ ಕುಮಾರ್ ಮಾತ್ರ ನಾಮಪತ್ರ ಸಲ್ಲಿಸಿದ್ದರು. ಆದ್ದರಿಂದ ಅವಿರೋಧ ಆಯ್ಕೆ ಘೋಷಣೆ ಮಾಡಲಾಯಿತು ಎಂದು ಚುನಾವಣಾಧಿಕಾರಿ ಸಂಜಯ್ ಕುರುಳುಪ್ಪೆ ತಿಳಿಸಿದ್ದಾರೆ. ಕಳೆದ ಐದು ವರ್ಷಗಳಿಂದ ಸಂಘ ಆಡಳಿತ ಮಂಡಳಿ, ಸದಸ್ಯರು, ಸಿಬ್ಬಂದಿ ಸಹಕಾರದಿಂದ ಉತ್ತಮವಾಗಿ ಮುನ್ನಡೆಯುತ್ತಿದೆ. ಬ್ಯಾಂಕಿಂಗ್ ಸೇವೆಯನ್ನು ಪಾರದರ್ಶಕವಾಗಿ ನಡೆಸಲಾಗುತ್ತಿದೆ. ಸಂಘ ಹಾಗೂ ಅಧ್ಯಕ್ಷ ಸ್ಥಾನಕ್ಕೆ ಚ್ಯುತಿ ಬಾರದ ರೀತಿ ಕಾರ್ಯ ನಿರ್ವಹಿಸುತ್ತೇನೆ ಎಂದು ಅಧ್ಯಕ್ಷ ಪಿ.ಉಮೇಶ್ ಮುತ್ತಣ್ಣ ತಿಳಿಸಿದರು. ಇದೇ ವೇಳೆ ನಿರ್ದೇಶಕರಾದ ನೆಲ್ಲ ಮಕ್ಕಡ ಸಿ.ಬೆಳ್ಯಪ್ಪ ನೆಲ್ಲಚಂಡ ಭೀಮಯ್ಯ, ಕಾಂಡಂಡ ಎಂ.ಚರ್ಮಣ, ಐನಂಡ ಪಿ.ಗಣಪತಿ, ಕೊಂಗಂಡ ಎ.ನಾಣಯ್ಯ, ವಾಂಚಿರ ಟಿ.ನಾಣಯ್ಯ, ಚೇಂದ್ರಿಮಾಡ ಕೆ.ನಂಜಪ್ಪ, ಬೊಳ್ಳೆಪಂಡ ಎಂ.ಸುರೇಶ್, ವಾಟೇರಿರ ಎಸ್. ಪೂವಯ್ಯ, ಕೇಳಪಂಡ ವಿಶ್ವನಾಥ್, ಪಟ್ಟಡ ದಿವ್ಯಾ, ಮೇಕೇರಿರ ಪಾಲಿ ಸುಬ್ರಮಣಿ, ಕಾಳೇಂಗಡ ಪಿ.ತಿಮ್ಮಯ್ಯ, ಪ್ರಭಾರ ಕಾರ್ಯ ನಿರ್ವಹಣಾಧಿಕಾರಿ ಪಟ್ಟಡ ಟೀನಾ ಉಪಸ್ಥಿತರಿದ್ದರು.

ಹತ್ಯೆ ಪ್ರಕರಣ ಭೇದಿಸಿದ ಪೊಲೀಸರಿಗೆ ಗೌರವ



ಉದ್ಯಮಿ ರಮೇಶ್ ಕುಮಾರ್ ಹತ್ಯೆ ಪ್ರಕರಣ ಭೇದಿಸಿದ ಸುಂಟಿಕೊಪ್ಪ ಠಾಣೆ ಪೊಲೀಸರನ್ನು ಗೌರವಿಸಲಾಯಿತು.

ಮಡಿಕೇರಿ, ಅ.29–ಸುಂಟಿಕೊಪ್ಪ ಸಮೀಪದ ಪನ್ಯ ತೋಟದ ಮಾರಿಗುಡಿ ಬಳಿಯ ಕಾಫಿ ತೋಟದಲ್ಲಿ ಸುಟ್ಟು ಕರಕಲಾದ ಸ್ಥಿತಿಯಲ್ಲಿ ಪತ್ತೆಯಾಗಿದ್ದ ಹೈದರಾಬಾದ್ ಮೂಲದ ಉದ್ಯಮಿ ರಮೇಶ್ ಕುಮಾರ್ ಹತ್ಯೆ ಪ್ರಕರಣವನ್ನು ಅತ್ಯಂತ ಕ್ಷಿಪ್ರಗತಿಯಲ್ಲಿ ಭೇದಿಸುವಲ್ಲಿ ಸುಂಟಿಕೊಪ್ಪ ಠಾಣೆ ಪೊಲೀಸರು ಯಶಸ್ವಿಯಾದ ಹಿನ್ನೆಲೆಯಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಗೌರವಿಸಲಾಯಿತು.

ಕಾರ್ಯಾಚರಣೆಯಲ್ಲಿ ಪಾಲ್ಗೊಂಡು ಸಾರ್ವಜನಿಕ ವಲಯದಲ್ಲಿ ಪ್ರಶಂಸೆಗೆ ಪಾತ್ರರಾದ ಸೋಮವಾರಪೇಟೆ ವೃತ್ತ ನಿರೀಕ್ಷಕ ಹಾಗೂ ಪ್ರಕರಣದ ತನಿಖಾಧಿಕಾರಿ ಮುದ್ದು ಮಹದೇವ, ಸುಂಟಿಕೊಪ್ಪ ಠಾಣಾಧಿಕಾರಿ ಹೆಚ್.ವಿ.ಚಂದ್ರಶೇಖರ್ ಮತ್ತು ಸಿಬ್ಬಂದಿಯನ್ನು ಸುಂಟಿಕೊಪ್ಪ ಮಿಡ್ ಸಿಟಿ ಮತ್ತು ಪನ್ಯ ಎಫ್‌ಸಿ ತಂಡದ ಸದಸ್ಯರು ಸನ್ಮಾನಿಸಿದರು. ವೃತ್ತ ನಿರೀಕ್ಷಕ ಮುದ್ದು ಮಹದೇವ, ಸುಂಟಿಕೊಪ್ಪ ಠಾಣಾಧಿಕಾರಿ ಹೆಚ್.ವಿ.ಚಂದ್ರಶೇಖರ್ ಮಾತನಾಡಿ, ಪ್ರಕರಣದ ಆರೋಪಿಗಳನ್ನು ಸೆರೆ ಹಿಡಿಯುವ ನಿಟ್ಟಿನಲ್ಲಿ ನಡೆದ ಯಶಸ್ವಿ ಕಾರ್ಯಾಚರಣೆ ಕುರಿತು ಅನುಭವ ಹಂಚಿಕೊಂಡರು. ಘಟನೆ ನಡೆದ ದಿನದಿಂದ ಪೊಲೀಸ್ ಸಿಬ್ಬಂದಿ ವ್ಯವಸ್ಥಿತ ರೀತಿ ತನಿಖೆಯ ಭಾಗವಾಗಿದ್ದರು. ಹೊರ ರಾಜ್ಯದಲ್ಲೂ ಯಶಸ್ವಿ ಕಾರ್ಯಾಚರಣೆ ನಡೆಸಿ ಪರಾರಿಯಾಗುತ್ತಿದ್ದ ಆರೋಪಿಗಳನ್ನು 128 ಕಿ.ಮೀ. ಬೆನ್ನಟ್ಟಿ ಹಿಡಿಯಲಾಗಿದೆ ಎಂದು ವಿವರಿಸಿದರು. ಈ ಸಂದರ್ಭ ಸುಂಟಿಕೊಪ್ಪ ಗ್ರಾಪಂ ಸದಸ್ಯ ಪ್ರಸಾದ್ ಕುಟ್ಟಪ್ಪ, ಪನ್ಯ ಎಫ್‌ಸಿ ತಂಡದ ಸದಸ್ಯರಾದ ತೇಜಸ್, ರವಿ, ಸತೀಶ್, ಪಂಚಾಯಿತಿ ಸಿಬ್ಬಂದಿ ಶ್ರೀನಿವಾಸ್, ಡೆನ್ ಮಿಡಿಯಾ ಸಂಸ್ಥೆಯ ಕಾರ್ತಿಕ್, ನವೀನ್, ರಮೇಶ್, ಪ್ರಸಾದ್, ಹೊನ್ನಪ್ಪ, ಸುಂದರ, ಐತ್ತಪ್ಪ, ವಸಂತ, ಚಿದ್ದು, ಗಣೇಶ, ಶಶಿ, ಪಾಂಡ್ಯನ್, ಶಾಂತಪ್ಪ ಹಾಗೂ ಶೇಖರ್ ಹಾಜರಿದ್ದರು.

ಕರುವಿನಗುಡ್ಡದ ಮಣ್ಣು ಲೂಟಿ ಆರೋಪಿಸಿ ಗ್ರಾಮಸ್ಥರ ಪ್ರತಿಭಟನೆ



ಮಲಾರಪಾಳ್ಯ ಗ್ರಾಮದ ಕರುವಿನಗುಡ್ಡದಲ್ಲಿ ಮಣ್ಣನ್ನು ಲೂಟಿ ಮಾಡಲಾಗುತ್ತಿದೆ ಎಂದು ಆರೋಪಿಸಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಯಳಂದೂರು, ಅ.29– ತಾಲೂಕಿನ ಮಲಾರಪಾಳ್ಯ ಗ್ರಾಮದ ಬಳಿಯ ಕರುವಿನಗುಡ್ಡದಲ್ಲಿ ಅಕ್ರಮವಾಗಿ ಮಣ್ಣನ್ನು ಲೂಟಿ ಮಾಡಲಾಗುತ್ತಿದೆ ಎಂದು ಆರೋಪಿಸಿ ಗ್ರಾಮಸ್ಥರು ಮಂಗಳವಾರ ಪ್ರತಿಭಟನೆ ನಡೆಸಿದರು.

ಮಾಂಬಳ್ಳಿ ಗ್ರಾಮದ ಮಹದೇವ, ಯರಿಯೂರಿನ ಸಿ.ರಾಜಣ್ಣ ಹಾಗೂ ಆಲ್ಕೆರೆ ಅಗ್ರಹಾರ ಗ್ರಾಮದ ರಂಗಸ್ವಾಮಿ ಅವರು ಇಲ್ಲಿನ ಸರ್ವೆ ನಂ.97ರ ಸರ್ಕಾರಿ ಕರುವಿನಗುಡ್ಡದ 49.28 ಎಕರೆಯಲ್ಲಿ 5 ಎಕರೆಗೂ ಹೆಚ್ಚು ಮಣ್ಣನ್ನು ಕಳೆದ ನಾಲ್ಕು ದಿನಗಳ ಹಿಂದೆ ಜೆಸಿಬಿ ಮೂಲಕ ತೆಗೆದು ಜಮೀನನ್ನು ಉಳುಮೆ ಮಾಡುತ್ತಿದ್ದಾರೆ. ಇದನ್ನು ಪ್ರಶ್ನಿಸಿದವರಿಗೆ ಬೆದರಿಕೆ ಒಡ್ಡಿದ್ದಾರೆ ಎಂದು ಆರೋಪಿಸಿದರು.

ಈ ಗುಡ್ಡದಲ್ಲಿ ಅನಾದಿ ಕಾಲದಿಂದಲೂ ಗೌಡಹಳ್ಳಿ, ಮಲಾರಪಾಳ್ಯ, ಆಲ್ಕೆರೆ ಅಗ್ರಹಾರ ಸೇರಿದಂತೆ ಮತ್ತಿತರ ಗ್ರಾಮದ ಹೈನುಗಾರರು, ಕುರಿ, ಮೇಕೆ ಸಾಕುದಾರರು ಜಾನುವಾರುಗಳನ್ನು ಮೇಯಿಸುತ್ತಿದ್ದಾರೆ. ಆದರೆ, ಇದ್ದಕ್ಕಿದ್ದಂತೆ ನಾಲ್ಕು ದಿನಗಳ ಹಿಂದೆ ಈ ಮೂವರು ರಾತ್ರೋ ರಾತ್ರಿ ಜೆಸಿಬಿ ಹಾಗೂ ಟ್ರ್ಯಾಕ್ಟರ್ ಮೂಲಕ ಮಣ್ಣನ್ನು ತೆಗೆದಿದ್ದಾರೆ. ಅಲ್ಲದೆ, ಭೂಮಿ ಹದ ಮಾಡಿ ವ್ಯವಸಾಯ ಮಾಡಲು ಸಿದ್ಧತೆ ಮಾಡಿಕೊಂಡಿದ್ದಾರೆ. ಕೂಡಲೇ ಇವರ ವಿರುದ್ಧ ಕಾನೂನು ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ಸ್ಥಳಕ್ಕೆ ಅಧಿಕಾರಿಗಳ ಭೇಟಿ: ಕಂದಾಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿದರು. ಉಪತಹಸೀಲ್ದಾರ್ ಮದೇಶ್ ಮಾತನಾಡಿ, ಈ ಗುಡ್ಡ ಸರ್ಕಾರಿ ಜಾಗವಾಗಿದೆ. ಇದನ್ನು ಯಾರೇ ಒತ್ತುವರಿಯಾಗಲಿ, ಮಣ್ಣನ್ನಾಗಲಿ ಕಬಳಿಸುವಂತಿಲ್ಲ. ಅಕ್ರಮವಾಗಿ ಮಣ್ಣನ್ನು ಲೂಟಿ ಮಾಡಿದವರ ವಿರುದ್ಧ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು. ನಂತರ ಪ್ರತಿಭಟನೆ ಹಿಂಪಡೆಯಲಾಯಿತು.

ರಾಜಸ್ವ ನಿರೀಕ್ಷಕ ರಮೇಶ್, ಗ್ರಾಮ ಲೆಕ್ಕಾಧಿಕಾರಿಗಳಾದ ಶರತ್ ನಂದಾ, ಪ್ರವೀಣ್, ಗ್ರಾಮದ ಮುಖಂಡರಾದ ಆರ್.ಪುಟ್ಟಬಸವಯ್ಯ, ಶಿವನಂಜಯ್ಯ, ಶಿವರುದ್ರಪ್ಪ, ಎಸ್. ಪುಟ್ಟಸ್ವಾಮಿ, ಎನ್.ನಿಂಗರಾಜು, ರೇಚಣ್ಣ ಎಸ್., ಸತೀಶ್, ಶಿವನಂಜ. ಆರ್.ಕುಮಾರ, ನಂಜಯ್ಯ, ಎನ್.ಮಲ್ಲು, ಬಂಗಾರನಾಯಕ, ಸೋಮಣ್ಣ, ಆರ್.ರಂಗಯ್ಯ, ಆರ್.ರಾಜೇಶ್, ನೀಲಯ್ಯ, ಶಿವರುದ್ರಪ್ಪ, ಬಸವಣ್ಣ ಸತೀಶ್ ಹಾಜರಿದ್ದರು.

ಹಿರಿಯರಿಗೆ ನೆಮ್ಮದಿ ಜೀವನ ನೀಡಿ

ಹಿರಿಯ ನಾಗರಿಕರ ದಿನಾಚರಣೆಯಲ್ಲಿ ಶಾಸಕ ಸಿ.ಪುಟ್ಟರಂಗಶೆಟ್ಟಿ



ಚಾಮರಾಜನಗರ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಆಯೋಜಿಸಿದ್ದ ಹಿರಿಯ ನಾಗರಿಕರ ದಿನಾಚರಣೆಯಲ್ಲಿ ಸಾಧನೆಗೈದ ಹಿರಿಯ ಜೀವಗಳನ್ನು ಸನ್ಮಾನಿಸಲಾಯಿತು.

ಚಾಮರಾಜನಗರ, ಅ.29–ಹಿರಿಯರಿಗೆ ನೆಮ್ಮದಿ ಜೀವನ ಕಟ್ಟಿಕೊಡುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ತಿಳಿಸಿದರು.

ನಗರದ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರು, ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಸ್ಥಳೀಯ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಹಿರಿಯ ನಾಗರಿಕರಿಗೆ ಗೌರವ ನೀಡುವ ಸಲುವಾಗಿ ವಿಶ್ವ ಹಿರಿಯ ನಾಗರಿಕರ ದಿನ ಆಚರಿಸಲಾಗುತ್ತಿದೆ. ಹಿರಿಯ ನಾಗರಿಕರು ದೇಶದ ಸಂಸ್ಕೃತಿಯ ಪಳೆಯುಳಿಕೆಯಾಗಿದ್ದು, ಅವರಿಂದ ನಾವು ಕಲಿಯಬೇಕಿರುವುದು, ಜೀವನದಲ್ಲಿ ಅಳವಡಿಸಿಕೊಳ್ಳುವುದು ಬಹಳಷ್ಟು ಅಂಶಗಳಿವೆ. ಹಿರಿಯರ ಅನುಭವ ನಮಗೆ ದಾರಿದೀಪವಾಗಿದೆ. ಮಕ್ಕಳನ್ನು ಉತ್ತಮ ನಾಗರಿಕರನ್ನಾಗಿಸುವ ತಂದೆ–ತಾಯಿ, ಪೋಷಕರ ತ್ಯಾಗವನ್ನು ಅರಿತು ನಾವೆಲ್ಲರೂ ಮುನ್ನಡೆಯಬೇಕು ಎಂದರು.

ಹಿರಿಯ ನಾಗರಿಕರಿಗೆ ಸಾಕಷ್ಟು ಸಮಸ್ಯೆಗಳಿವೆ. ಜೀವನ ಭದ್ರತೆಯ ಗೊಂದಲಗಳಿವೆ. ಅವುಗಳನ್ನು ನಿವಾರಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರು ವೃದ್ಧರನ್ನು ಗೌರವಿಸಿ ಆಧರಿಸಬೇಕು. ಹಿರಿಯ ನಾಗರಿಕರ ಸಮಸ್ಯೆಗಳನ್ನು ಮನಗಂಡಿರುವ ಸರ್ಕಾರ ಅವರ ಶ್ರೇಯೋಭಿವೃದ್ಧಿಗಾಗಿ ಪಿಂಚಣಿ, ವೃದ್ಧಾಪ್ಯ ವೇತನ, ಮಾಸಾಶನ ಸೇರಿದಂತೆ ಹಲವಾರು ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ. ಹಿರಿಯರು ಅವುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನಾ ಮಾತನಾಡಿ, ಹಿರಿಯರ ಮಾರ್ಗದರ್ಶನದಡಿ ಎಲ್ಲರು ನಡೆಯಬೇಕು. ಹಿರಿಯ ನಾಗರಿಕರ ಸೇವಾ ಮನೋಭಾವ ಜಾಗೃತಿಯನ್ನು ಮಕ್ಕಳಲ್ಲಿ ಮೂಡಿಸಬೇಕಾಗಿದೆ. ಹಿರಿಯರ ಉತ್ತಮ ವಿಚಾರಧಾರೆಗಳನ್ನು ಮಕ್ಕಳಲ್ಲಿ ತುಂಬಬೇಕು. ಅವಿಭಕ್ತ ಕುಟುಂಬಗಳು ನಮ್ಮಲ್ಲಿ ಕೆಲವೆಡೆ ಇನ್ನೂ ಜೀವಂತವಾಗಿರುವುದಕ್ಕೆ ಹಿರಿಯರ ಮಾರ್ಗದರ್ಶನವೇ ಸಾಕ್ಷಿ. ಸಾಮಾಜಿಕ ಪ್ರಜ್ಞೆ ಅರಿವಿಗಾಗಿ ಹಿರಿಯ ನಾಗರಿಕರ ಅನುಭವ ನಮಗೆ ಮುಖ್ಯವಾಗಿದೆ ಎಂದರು.

ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಜಿಲ್ಲಾಧ್ಯಕ್ಷ ಹೆಚ್.ವಿ. ಚಂದ್ರು ಮಾತನಾಡಿ, ವೃದ್ಧರು ಮಕ್ಕಳಷ್ಟೇ ಮುಗ್ಧರು ಹೌದು. ಹೆಚ್ಚು ಶಿಕ್ಷಣ ಪಡೆದವರು, ಉನ್ನತ ಹುದ್ದೆಗಳಲ್ಲಿರುವವರು ಹಿರಿಯರನ್ನು ಗೌರವದಿಂದ ನಡೆಸಿಕೊಳ್ಳದೆ ವೃದ್ಧಾಶ್ರಮಕ್ಕೆ ದೂಡುತ್ತಿರುವುದು ಇಂದು ಸರ್ವೇಸಮಾನ್ಯ ಸಂಗತಿಯಾಗಿದೆ. ಇದು ಸಾಮಾಜಿಕ ಅಸಮತೋಲನಕ್ಕೂ ಕಾರಣವಾಗಲಿದೆ. ಹಿರಿಯರ ಸಂಸ್ಕಾರ ಸದಾಕಾಲಕ್ಕೂ ಪ್ರತಿಯೊಬ್ಬರಿಗೂ ಬೇಕಾಗಿದೆ ಎಂದು ತಿಳಿಸಿದರು.

ಇದೇ ವೇಳೆ ಹಿರಿಯ ನಾಗರಿಕರ ಕಲ್ಯಾಣ ಕ್ಷೇತ್ರದಲ್ಲಿ ಸಾಧನೆಗೈದ ಹಿರಿಯ ಜೀವಗಳಿಗೆ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಲಾಯಿತು. ಹಿರಿಯ ನಾಗರಿಕರು ಹಾಗೂ ವಿಕಲಚೇತನರಿಗೆ ಏರ್ಪಡಿಸಿದ್ದ ಆಟೋಟ ಸ್ಪರ್ಧೆಗಳ ವಿಜೇತರಿಗೆ ನಗದು ಬಹುಮಾನ ನೀಡಲಾಯಿತು. ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಪಿ.ಲಕ್ಷ್ಮೀ, ಹಿರಿಯ ನಾಗರಿಕರ ಸಬಲೀಕರಣ ಹಾಗೂ ವಿಕಲಚೇತನರ ಕಲ್ಯಾಣಾಧಿಕಾರಿ ಸಕಲೇಶ್ವರ, ನಿವೃತ್ತ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ನಾಗೇಶ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಸಾರ್ವಜನಿಕರು ಕಚೇರಿಗೆ ಅಲೆಯದಂತೆ ನೋಡಿಕೊಳ್ಳಿ



ಚಾಮರಾಜನಗರ ತಾಪಂ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನೆ ಸಭೆಯಲ್ಲಿ ಶಾಸಕ ಹೆಚ್.ಎಂ.ಗಣೇಶ ಪ್ರಸಾದ್ ಮಾತನಾಡಿದರು.

ಚಾಮರಾಜನಗರ, ಅ.29–ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ, ಅವರು ಕಚೇರಿಗಳಿಗೆ ಅಲೆಯದಂತೆ ನೋಡಿಕೊಳ್ಳುವುದು ನಿಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಗುಂಡ್ಲುಪೇಟೆ ಶಾಸಕ ಹೆಚ್.ಎಂ. ಗಣೇಶಪ್ರಸಾದ್ ಅಧಿಕಾರಿಗಳಿಗೆ ತಿಳಿಸಿದರು.

ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಗುಂಡ್ಲುಪೇಟೆ ಕ್ಷೇತ್ರದ 6 ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿದ ಅವರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಅರ್ಜಿಗಳನ್ನು ಕಾನೂನಾತ್ಮಕವಾಗಿ ವಿಲೇವಾರಿ ಮಾಡುವ ಮೂಲಕ ಅರ್ಜಿದಾರರು ಪದೇ ಪದೇ ಕಚೇರಿಗೆ ಅಲೆಯದಂತೆ ನೋಡಿಕೊಳ್ಳಬೇಕು. ಕಾನೂನು ಮೀರಿ ಕೆಲಸ ಮಾಡಬೇಡಿ ಎಂದು ತಾಕೀತು ಮಾಡಿದರು.

ಪಂಚಾಯಿತಿ ವ್ಯಾಪ್ತಿಯಲ್ಲಿ ಆಯಾ ಗ್ರಾಮಗಳ ಸರ್ಕಾರಿ ಜಾಗ ಗುರುತಿಸಿ ಕಸವಿಲೇವಾರಿ ಘಟಕಗಳ ನಿರ್ಮಾಣಕ್ಕೆ ಕ್ರಮ ವಹಿಸಬೇಕು. ಕಂದಾಯ ಇಲಾಖೆ ಅಧಿಕಾರಿಗಳು ಘಟಕ ಸ್ಥಾಪಸಲು ಒಂದು ವಾರದೊಳಗೆ ಜಾಗ ಗುರುತಿಸಬೇಕು. ಜಲಜೀವನ ಮಿಷನ್ ಯೋಜನಡಿ ಈಗಾಗಲೇ ಮನೆಮನೆ ನಳ ಸಂಪರ್ಕ ಕಲ್ಪಿಸಿದ್ದು, ಓವರ್‌ಹೆಡ್ ಟ್ಯಾಂಕ್ ಮೂಲಕ ಗ್ರಾಮದ ಎಲ್ಲಾ ಮನೆಗಳಿಗೂ ನೀರು ತಲುಪುವಂತೆ ಪ್ರಾಯೋಗಿಕವಾಗಿ ಗ್ರಾಪಂ ಸದಸ್ಯರು, ಪಿಡಿಓಗಳ ಸಮ್ಮುಖದಲ್ಲಿ ಪರಿಶೀಲಿಸಬೇಕು ಎಂದು ಇಂಜಿನಿಯರ್ ಜಗದೀಶ್‌ಗೆ ಸೂಚಿಸಿದರು.

ರಾತ್ರಿ ವೇಳೆ ನಿರಂತರ ವಿದ್ಯುತ್ ಕಡಿತಗೊಳಿಸಬೇಡಿ, ಇದರಿಂದ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತದೆ. ಉದ್ದೇಶ ಪೂರ್ವಕವಾಗಿ ವಿದ್ಯುತ್ ಕಡಿತಗೊಳಿಸಿದರೆ, ನನಗೆ ದೂರು ಹೆಚ್ಚು ಬರುತ್ತವೆ. ಹೀಗಾಗಿ ಲೈನ್ ಸಮಸ್ಯೆ ಬಗೆಹರಿಸಿಕೊಂಡು ಅದಷ್ಟು ಸೇವೆ ನೀಡಬೇಕು ಎಂದು ಸೆಸ್ಕ್ ಅಧಿಕಾರಿಗಳಿಗೆ ತಿಳಿಸಿದರು. ಸಭೆಯಲ್ಲಿ ಗ್ರಾಪಂ ಆಡಳಿತಾಧಿಕಾರಿ ವಿ.ದೀಪಾ, ತಾಪಂ ಕಾರ್ಯ ನಿರ್ವಾಹಕಾಧಿಕಾರಿ ಎಸ್.ಪೂರ್ಣಿಮಾ, ನರೇಗಾ ಸಹಾಯಕ ನಿರ್ದೇಶಕ ಪ್ರಕಾಶ್, ಸಹಾಯಕ ಲೆಕ್ಕಾಧಿಕಾರಿ ಪ್ರಭುಸ್ವಾಮಿ, ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

ಹಸಿರು ಪಟಾಕಿ ಮಾತ್ರ ಬಳಸಲು ಜಿಲ್ಲಾಧಿಕಾರಿ ಸೂಚನೆ

ಚಾಮರಾಜನಗರ, ಅ.29–ಹಸಿರು ಪಟಾಕಿ ಮಾತ್ರ ಸಿಡಿಸಿ, ಪರಿಸರ ಸ್ನೇಹಿ ದೀಪಾವಳಿ ಹಬ್ಬ ಆಚರಿಸಲು ಜಿಲ್ಲಾಧಿಕಾರಿ ಶಿಲ್ಪಾನಾಗ್ ಸೂಚಿಸಿದ್ದಾರೆ. ನ್ಯಾಯಾಲಯ ನಿರ್ದೇಶನದಂತೆ ರಾತ್ರಿ 8 ರಿಂದ 10 ಗಂಟೆವರೆಗೆ ಮಾತ್ರ ಪಟಾಕಿ ಸಿಡಿಸಬೇಕು. ಉಳಿದ ಸಮಯದಲ್ಲಿ ಪಟಾಕಿಗಳನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಹಸಿರು ಪಟಾಕಿಗಳನ್ನು ಹೊರತುಪಡಿಸಿ ಉಳಿದ ಯಾವುದೇ ಪಟಾಕಿಗಳ ಮಾರಾಟ ಹಾಗೂ ಬಳಕೆ ಮಾಡುವಂತಿಲ್ಲ. ಪಟಾಕಿ ಮಾರಾಟಗಾರರು ಹಾಗೂ ಗೋದಾಮುಗಳ ಮಾಲೀಕರು ಸಂಬಂಧಪಟ್ಟ ಇಲಾಖೆಗಳಿಂದ ಅನುಮತಿ ಪಡೆಯಬೇಕು. ಎಲ್ಲಾ ಹಸಿರು ಪಟಾಕಿ ಹಾಗೂ ಅವುಗಳ ಪ್ಯಾಕೆಟ್ ಮೇಲೆ ಹಸಿರು ಪಟಾಕಿ ಚಿಹ್ನೆ ಹಾಗೂ ಕ್ಯೂಆರ್ ಕೋಡ್ ಇರುತ್ತದೆ. ಕಡಿಮೆ ಮಾಲಿನ್ಯ ಉಂಟುಮಾಡುವ ಪಟಾಕಿಗಳನ್ನು ಮಾತ್ರ ಮಾರಾಟ ಮಾಡಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ವಿಶೇಷಚೇತನ ಏಕಾಂಗಿ ಪ್ರತಿಭಟನೆ



ಮದ್ದೂರು ಗ್ರಾಪಂ ಎದುರು ವಿಶೇಷಚೇತನ ಬಸವಣ್ಣ ಏಕಾಂಗಿಯಾಗಿ ಪ್ರತಿಭಟನೆ ನಡೆಸಿದರು.

ಯಳಂದೂರು, ಅ.29–ತಾಲೂಕಿನ ಬೂದಿತಿಟ್ಟು ಗ್ರಾಮದಲ್ಲಿ ಅನಧಿಕೃತವಾಗಿ ಶೌಚಗೃಹ ನಿರ್ಮಿಸಲಾಗುತ್ತಿದೆ ಎಂದು ಆರೋಪಿಸಿ ಗ್ರಾಮದ ವಿಶೇಷಚೇತನ ಬಸವಣ್ಣ ಮದ್ದೂರು ಗ್ರಾಮ ಪಂಚಾಯಿತಿ ಕಚೇರಿ ಎದುರು ಮಂಗಳವಾರ ಏಕಾಂಗಿಯಾಗಿ ಪ್ರತಿಭಟನೆ ನಡೆಸಿದರು.

ಗ್ರಾಮದ ಲಿಂಗಾಯತರ ಬಡಾವಣೆಯಲ್ಲಿ ಬಿ.ಜಿ. ಮಹೇಶ್ ಅನಧಿಕೃತವಾಗಿ ಶೌಚಗೃಹ ನಿರ್ಮಿಸುತ್ತಿದ್ದಾರೆ. ಈ ಬಗ್ಗೆ ಗ್ರಾಪಂಗೆ ದೂರು ಸಲ್ಲಿಸಲಾಗಿತ್ತು. ಆದರೆ, ಪಿಡಿಓ ಯಾವುದೇ ಕ್ರಮ ವಹಿಸಿಲ್ಲ. ಈಗಾಗಲೇ ಕಟ್ಟಡ ನಿರ್ಮಾಣ ಬಹುತೇಕ ಮುಗಿದಿದೆ ಎಂದು ಆರೋಪಿಸಿದರು.

ನಂತರ ನರೇಗಾ ಸಹಾಯಕ ನಿರ್ದೇಶಕ ಕೆ.ಎಂ.ರವೀಂದ್ರ ಶೌಚಗೃಹ ನಿರ್ಮಾಣ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿದರು. ಕೂಡಲೇ ಈ ಕಟ್ಟಡದ ಸುತ್ತಲಿನವರಿಗೆ ನೋಟಿಸ್ ನೀಡಿ, ಅಳತೆ ಮಾಡಿ. ಇದು ಅನಧಿಕೃತ ಎಂದು ಕಂಡುಬಂದಲ್ಲಿ ಸೂಕ್ತ ಕ್ರಮ ವಹಿಸಬೇಕು. ಈ ಕೆಲಸವನ್ನು ವಾರದೊಳಗೆ ಪೂರ್ಣಗೊಳಿಸಬೇಕು ಎಂದು ಪಿಡಿಓ ನಟರಾಜುಗೆ ಸೂಚನೆ ನೀಡಿದರು.

ದೊಡ್ಡಗಾಜನೂರಿನಲ್ಲಿ ಪುನೀತ್ ರಾಜ್‌ಕುಮಾರ್‌ಗೆ ನಮನ...



ಚಾಮರಾಜನಗರ ಸಮೀಪದ ದೊಡ್ಡಗಾಜನೂರಿನ ಡಾ.ರಾಜಕುಮಾರ್ ಅವರ ಹಳೇ ಮನೆ ಮುಂಭಾಗ ಚಾಮರಾಜನಗರ ಈಶ್ವರಿ ಸೋಷಿಯಲ್ ಟ್ರಸ್ಟ್ ವತಿಯಿಂದ ಏರ್ಪಡಿಸಿದ್ದ ಗೀತಗಾಯನ ಕಾರ್ಯಕ್ರಮದಲ್ಲಿ ಪುನೀತ್ ರಾಜ್‌ಕುಮಾರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮೂಲಕ ನಮನ ಸಲ್ಲಿಸಲಾಯಿತು. ವಾಣಿಜ್ಯ ತೆರಿಗೆ ಇಲಾಖೆ ಉಪ ಆಯುಕ್ತ ಹಸಿಬುಲ್ಲ ಬೇಗ್, ಗಾಜನೂರಿನ ಗೋಪಾಲ್, ಈಶ್ವರಿ ಸೋಷಿಯಲ್ ಟ್ರಸ್ಟ್‌ನ ಸಿ.ಎಂ.ವೆಂಕಟೇಶ್, ಡಾ.ಸುಗಂಧರಾಜ್, ಆರ್.ಮಹೇಂದ್ರ, ವಿ.ಮಯೂರ, ರವಿಸಂತು, ಮುಡಿಗುಂಡಮೂರ್ತಿ, ಉಮ್ಮತ್ತೂರು ಚಂದ್ರು, ಪ್ರೀತಿ, ಆದರ್ಶ, ದೊರೆ, ನಾಗೇಂದ್ರ, ಸಿ.ಎಂ.ನರಸಿಂಹಮೂರ್ತಿ ಇದ್ದರು.

ಎಲ್ಲಾ ಪರೀಕ್ಷೆಗಳಿಗೆ ಆಧಾರ್ ಲಿಂಕ್ ಕಡ್ಡಾಯ; ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರಸ್ತಾವನೆ

ಬೆಂಗಳೂರು, ಅ.29– ಮುಂದಿನ ವರ್ಷದಿಂದ ಎಲ್ಲಾ ವೃತ್ತಿಪರ ಕೋರ್ಸ್‌ಗಳ ನೋಂದಣಿಯನ್ನು ವಿದ್ಯಾರ್ಥಿಗಳ ಆಧಾರ್‌ನೊಂದಿಗೆ ಲಿಂಕ್ ಮಾಡಲಾಗುವುದು ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ಪ್ರಸ್ತಾಪಿಸಿದೆ.

ಸೀಟ್ ಬ್ಲಾಕಿಂಗ್ ದಂಧೆಯನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಪ್ರಾಧಿಕಾರವು ಇಂಥದೊಂದು ಕ್ರಮಕ್ಕೆ ಮುಂದಾಗಿದೆ. ಕೆಇಎ ಈ ಪ್ರಸ್ತಾವನೆಯನ್ನು ಈಗಾಗಲೇ ಇ–ಆಡಳಿತ ಇಲಾಖೆಗೆ ಸಲ್ಲಿಸಿದೆ. ಇ–ಆಡಳಿತ ಇಲಾಖೆಯು ನಮ್ಮ ಪ್ರಸ್ತಾವನೆಗೆ ಪರವಾಗಿದೆ ಮತ್ತು ಅವರು ಅನುಮೋದನೆಗಾಗಿ ಭಾರತ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಿದೆ. ಶೀಘ್ರದಲ್ಲೇ ಅನುಮೋದನೆಗಾಗಿ ಕಾಯುತ್ತಿದ್ದೇವೆ ಎಂದು ಕೆಇಎ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ಮಾಧ್ಯಮಕ್ಕೆ ತಿಳಿಸಿದ್ದಾರೆ.

ನೋಂದಣಿಯಲ್ಲಿ ಯಾವುದೇ ವಂಚನೆಯನ್ನು ತಡೆಗಟ್ಟಲು ಮತ್ತು ವಿದ್ಯಾರ್ಥಿಗಳು ತಮ್ಮ ಮೊಬೈಲ್ ಫೋನ್‌ಗಳಲ್ಲಿಯೇ ಪರೀಕ್ಷೆಗೆ ಸಂಬಂಧಿಸಿದ ಮಾಹಿತಿಯನ್ನು ಪಡೆಯಲು ಅನುಕೂಲವಾಗುವಂತೆ ಆಧಾರ್–ಲಿಂಕ್ಡ್ ನೋಂದಣಿಯನ್ನು ಪ್ರಸ್ತಾಪಿಸಲಾಗಿದೆ ಎಂದು ಅವರು ಹೇಳಿದರು.

ವಿವಿಧ ಇಲಾಖೆಗಳಿಗೆ ಕೆಇಎ ನಡೆಸುವ ನೇಮಕಾತಿ ಪರೀಕ್ಷೆಗಳಿಗೂ ಆಧಾರ್ ಲಿಂಕ್ ಮಾಡಿದ ನೋಂದಣಿಯನ್ನು ಪರಿಚಯಿಸುವ ಯೋಜನೆಯೂ ಇದೆ ಎಂದು ಪ್ರಸನ್ನ ತಿಳಿಸಿದ್ದಾರೆ. ಎಂಜಿನಿಯರಿಂಗ್ ಸೀಟು ಹಂಚಿಕೆಯ ಎಲ್ಲಾ ಸುತ್ತುಗಳು ಪೂರ್ಣಗೊಂಡ ನಂತರ ಕರ್ನಾಟಕ ಸಾಮಾನ್ಯ ಪ್ರವೇಶ ಪರೀಕ್ಷೆ (ಕೆಸಿಇಟಿ) ಕೋಟಾದಡಿ ಸೀಟ್ ಬ್ಲಾಕಿಂಗ್ ಹಗರಣ ಬೆಳಕಿಗೆ ಬಂದ ಹಿನ್ನೆಲೆಯಲ್ಲಿ ಕೆಇಎ ಈ ಕ್ರಮ ಕೈಗೊಂಡಿದೆ.

ಹಲವಾರು ವಿದ್ಯಾರ್ಥಿಗಳು ಒಂದೇ ಐಪಿ ವಿಳಾಸವನ್ನು ಬಳಸಿಕೊಂಡು ಸೀಟು ಬ್ಲಾಕ್ ಮಾಡಿದ್ದಾರೆ. ಅವರು ಕೆಇಎಗೆ ನೀಡಿದ ಮೊಬೈಲ್ ಸಂಖ್ಯೆಗಳು ಮತ್ತು ಇಮೇಲ್ ಐಡಿಗಳು ನಕಲಿ ಎಂದು ಕಂಡುಬಂದಿದೆ. ಕೆಲ ಸಂದರ್ಭಗಳಲ್ಲಿ ಉನ್ನತ ಕಾಲೇಜುಗಳಲ್ಲಿ ಡಿಮ್ಯಾಂಡ್ ಇರುವ ವಿಭಾಗಗಳಲ್ಲಿ ಸೀಟುಗಳನ್ನು ಆರಿಸಿಕೊಂಡ ವಿದ್ಯಾರ್ಥಿಗಳು ಆ ಕಾಲೇಜುಗಳಿಗೆ ದಾಖಲಾಗದಿರುವುದು ಕಂಡುಬಂದಿದೆ. ಇದರ ಪರಿಣಾಮದಿಂದ ಕೆಸಿಇಟಿ ಕೋಟಾದಡಿ ಬರುವ ಅಂಥ ಎಲ್ಲಾ ಸೀಟುಗಳು ಮ್ಯಾನೇಜ್‌ಮೆಂಟ್ ಕೋಟಾಕ್ಕೆ ಸೇರುವಂತಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

ಈ ಸಂದರ್ಭಗಳಲ್ಲಿ ಸೀಟ್ ಬ್ಲಾಕಿಂಗ್ ಬಗ್ಗೆ ಅನುಮಾನ ವ್ಯಕ್ತಪಡಿಸಿದ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ, ಮೂರನೇ ವ್ಯಕ್ತಿಗಳು ಕಾಲೇಜು ಆಡಳಿತ ಮಂಡಳಿಗಳೊಂದಿಗೆ ಮತ್ತು ಕೆಲವು ಸಂದರ್ಭಗಳಲ್ಲಿ ವಿದ್ಯಾರ್ಥಿಗಳೊಂದಿಗೆ ಶಾಮೀಲಾಗಿರುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

ಸಣ್ಣ ಕೈಗಾರಿಕೆಗಳ ತಂತ್ರಜ್ಞಾನ ಉನ್ನತೀಕರಣಕ್ಕೆ ರಾಂಪ್ ಸಹಕಾರಿ

ಎಂಎಸ್‌ಎಂಇ ಕ್ಲಸ್ಟರ್ ಔಟ್‌ರೀಚ್ ಕಾರ್ಯಕ್ರಮದಲ್ಲಿ ಹೂಟಗಳ್ಳಿ ನಗರಸಭೆಯ ಪೌರಾಯುಕ್ತ ಬಿ.ಎನ್.ಚಂದ್ರಶೇಖರ್ ಅಭಿಮತ

ಮೈಸೂರು,ಅ.29(ಪಿಎಂ)– ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಲ್ಲಿ ತಂತ್ರಜ್ಞಾನದ ಉನ್ನತೀಕರಣಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಯೋಗದ ರಾಂಪ್ (ಆರ್‌ಎಎಂಪಿ) ಯೋಜನೆ ಸಹಕಾರಿಯಾಗಿದೆ ಎಂದು ಹೂಟಗಳ್ಳಿ ನಗರಸಭೆಯ ಪೌರಾಯುಕ್ತ ಬಿ.ಎನ್. ಚಂದ್ರಶೇಖರ್ ಅಭಿಪ್ರಾಯಪಟ್ಟರು.

ಮೈಸೂರಿನ ಬೆಂಗಳೂರು–ನೀಲಗಿರಿ ರಸ್ತೆಯಲ್ಲಿರುವ ಹೋಟೆಲ್ ದಿ ಪ್ರೆಸಿಡೆಂಟ್ ಸಭಾಂಗಣದಲ್ಲಿ ರಾಜ್ಯ ಸರ್ಕಾರದ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಭಾರತ ಸರ್ಕಾರದ ಎಂಎಸ್‌ಎಂಇ ಸೌಲಭ್ಯ ಕಚೇರಿ, ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ಬ್ಯಾಂಕ್ (ಸಿಡ್ಬಿ), ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ ಮತ್ತು ಕಾಸಿಯಾ ಸಂಯುಕ್ತಾಶ್ರಯದಲ್ಲಿ ಎಂಎಸ್‌ಎಂಇಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವ (ಆರ್‌ಎಎಂಪಿ) ಯೋಜನೆಯಡಿ ಮಂಗಳವಾರ ಹಮ್ಮಿಕೊಂಡಿದ್ದ ಎಂಎಸ್‌ಎಂಇ (ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು) ಕ್ಲಸ್ಟರ್ ಔಟ್‌ರೀಚ್ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯಪೂರ್ವದಲ್ಲಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಉದ್ಯೋಗ ಕಲ್ಪಿಸಿ ಸಾಕಷ್ಟು ಜನರು ಬದುಕು ಕಟ್ಟಿಕೊಳ್ಳುವಲ್ಲಿ ಮಹತ್ವ ಪಾತ್ರ ವಹಿಸಿದ್ದವು. ಬ್ರಿಟಿಷ್ ವಸಾಹತುಶಾಹಿ ಆಳ್ವಿಕೆ ಸಂದರ್ಭದಲ್ಲಿ ಗುಡಿ ಕೈಗಾರಿಕೆಗಳು ನಶಿಸುವ ಮೂಲಕ ಅಲ್ಲಿ ಬಳಕೆಯಲ್ಲಿದ್ದ ದೇಸಿ ತಂತ್ರಜ್ಞಾನವೂ ಮರೆಯಾಗುವುದು ಪ್ರಾರಂಭವಾಯಿತು. ಬಹುಶಃ ಕೇಂದ್ರ ಮತ್ತು ರಾಜ್ಯ ಸರ್ಕಾರದ ರಾಂಪ್ ಯೋಜನೆ ಅಂತಹ ತಂತ್ರಜ್ಞಾನದ ಅಭಿವೃದ್ಧಿಗೂ ಉತ್ತೇಜನ ನೀಡಲಿದೆ ಎಂದರು.

ಜಾಗತೀಕರಣದ ಹಿನ್ನೆಲೆಯಲ್ಲಿ ಬೃಹತ್ ಕೈಗಾರಿಕೆಗಳ ಪ್ರಭಾವ ಹೆಚ್ಚಳಗೊಂಡಿದ್ದು, ಈ ಸನ್ನಿವೇಶದಲ್ಲಿ ಸಣ್ಣಮಟ್ಟ ಕೈಗಾರಿಕೆಗಳು ಪೈಪೋಟಿ ನೀಡುವುದು ಕಷ್ಟಸಾಧ್ಯವಾಗಿದೆ. ಈ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಜಂಟಿ ಯೋಜನೆಯಾದ ರಾಂಪ್ ಕೈಗಾರಿಕೆಗಳಿಗೆ ನೆರವಾಗಲಿದೆ ಸಾಲ ಹಾಗೂ ಮಾರುಕಟ್ಟೆ ಸೌಲಭ್ಯಗಳು ಸಾಕಷ್ಟು ಇದ್ದು, ಅವುಗಳನ್ನು ಸದುಪಯೋಗ ಮಾಡಿಕೊಳ್ಳಬೇಕು. ಅದೇ ರೀತಿಯಲ್ಲಿ ನಮ್ಮ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಅಮೃತ್ ಯೋಜನೆ ಇದ್ದು, ಮೂಲಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಇದು ಪ್ರಯೋಜನಕಾರಿಯಾಗಲಿದೆ. ಎಲ್ಲರಿಗೂ ಜಲಮೂಲದಿಂದ ಕುಡಿಯುವ ನೀರು ಕಲ್ಪಿಸುವಲ್ಲಿ ಇದು ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಹೇಳಿದರು.

ನಗರಸಭೆಯ ಪರವಾಗಿ ಮನವಿ ಮಾಡುವುದೆಂದರೆ ಇಷ್ಟು ವರ್ಷ ಹೂಟಗಳ್ಳಿ ನಗರಸಭೆಯು ಪಂಚಾಯಿತಿಯಾಗಿತ್ತು. ಮೊನ್ನೆಯಲ್ಲಾ ತೆರಿಗೆ ವಿಚಾರವಾಗಿ ಚರ್ಚೆ ಮಾಡಲಾಗಿದೆ. ನಗರಸಭೆಯು ನಿಮ್ಮ ಕೈಗಾರಿಕೆಗಳಿಗೆ ಅಗತ್ಯ ಸಹಕಾರ ನೀಡಲಿದ್ದು, ನಿಮ್ಮ ಅಪಾಯಕಾರಿಯಲ್ಲದ ತ್ಯಾಜ್ಯದ ನಿರ್ವಹಣೆಗೆ ನಗರಸಭೆ ಕೈಜೋಡಿಸಲಿದೆ. ಹಾಗಾಗಿ ಈ ಸಂಬಂಧ ನಗರಸಭೆಗೆ ಸಂಪೂರ್ಣ ಮಾಹಿತಿ ನೀಡಿದರೆ ಕ್ರಮ ವಹಿಸಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ಎಂಎಸ್‌ಎಂಇ ಐಇಡಿಎಸ್‌ನ ಸಹಾಯಕ ನಿರ್ದೇಶಕ ಡಾ.ಶಿವಕುಮಾರ್ ಮಾತನಾಡಿ, ಸಣ್ಣ ಕೈಗಾರಿಕೆಗಳ ಉತ್ತೇಜನಕ್ಕೆ ಸಾಕಷ್ಟು ಸಂಖ್ಯೆಯ ಯೋಜನೆಗಳು ಇವೆ. ಆದರೆ ಈ ಬಗ್ಗೆ ಸಣ್ಣ ಉದ್ಯಮಿಗಳಿಗೆ ಅರಿವು ಕಡಿಮೆ. ಹಾಗಾಗಿ ಅರಿವು ಹೊಂದುವುದು ಮುಖ್ಯವಾಗಿದೆ. ಲೀನ್ ಯೋಜನೆ ನಿಮ್ಮ ಉತ್ಪಾದನೆ ಮತ್ತು ಗುಣಮಟ್ಟ ಅಭಿವೃದ್ಧಿಪಡಿಸಲು ಸಹಕಾರಿಯಾಗಿದೆ ಎಂದರು.



ಮೈಸೂರಿನ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಮಂಗಳವಾರ ಎಂಎಸ್‌ಎಂಇ ಕ್ಲಸ್ಟರ್ ಔಟ್‌ರೀಚ್ ಕಾರ್ಯಕ್ರಮ ನಡೆಯಿತು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಕೆ.ಶಿವಲಿಂಗಯ್ಯ ಮಾತನಾಡಿ, ರಾಂಪ್ ಯೋಜನೆಗೆ ಮೈಸೂರಿನಲ್ಲಿ ಚಾಲನೆ ನೀಡಲಾಗುತ್ತಿದೆ. ಇದು ನಾಲ್ಕು ವರ್ಷದ ಕಾರ್ಯಕ್ರಮ. ಯಾವುದೇ ಒಂದು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಸಮಗ್ರ ಬೆಳವಣಿಗೆಗೆ ಇದು ಸಹಕಾರಿಯಾಗಲಿದೆ. ಇದರಡಿಯಲ್ಲಿ ತಿಂಗಳಿಗೆ ಎರಡು ಕಾರ್ಯಕ್ರಮಗಳನ್ನು ಮಾಡಲಾಗುವುದು. ಗುಡಿ ಕೈಗಾರಿಕೆಗಳಿಗೂ ಕಾರ್ಯಕ್ರಮದ ಪ್ರಯೋಜನ ತಲುಪಬೇಕೆಂಬುದು ಯೋಜನೆಯ ಉದ್ದೇಶವಾಗಿದೆ ಎಂದು ಹೇಳಿದರು.

ಬಳಿಕ ರಫ್ತು ಉತ್ತೇಜನ ಸೇರಿದಂತೆ ವಿವಿಧ ಯೋಜನೆ ಮತ್ತು ಕಾರ್ಯಕ್ರಮಗಳ ಬಗ್ಗೆ ಸಂಪನ್ಮೂಲ ವ್ಯಕ್ತಿಗಳು ಪಿಪಿಟಿ ಪ್ರಸ್ತುತಿ ಮೂಲಕ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಉದ್ಯಮಿಗಳಿಗೆ ಮಾಹಿತಿ ನೀಡಿದರು. ಸಿಡ್ಬಿ ಮೈಸೂರು ಸಹಾಯಕ ಪ್ರಧಾನ ವ್ಯವಸ್ಥಾಪಕ ಆಲ್ಬರ್ಟ್ ಜೆರ್ಮಿ, ಕಾಸಿಯಾ ಅಧ್ಯಕ್ಷ ಎಂ.ಜಿ.ರಾಜಗೋಪಾಲ್, ಉಪಾಧ್ಯಕ್ಷ ಬಿ.ಆರ್.ಗಣೇಶ್ ರಾವ್, ಗೌರವ ಪ್ರಧಾನ ಕಾರ್ಯದರ್ಶಿ ಸುರೇಶ್ ಎನ್.ಸಾಗರ್ ಮತ್ತಿತರರು ಹಾಜರಿದ್ದರು.

ಯೋಗಾಚಾರ್ಯ ನಾಗರಾಜ ಸೂರ್ಯನಾರಾಯಣ ಪಾಂಡೇಜಿ ಸ್ಮರಣೋತ್ಸವ

ಮೈಸೂರು, ಅ.29(ಎಸ್‌ಪಿಎನ್)– ಮಹರ್ಷಿ ಪತಂಜಲಿ ಯೋಗ ಸೂತ್ರಗಳ ಬಗ್ಗೆ ಸಮಗ್ರ ಚಿತ್ರಣ ನೀಡುವ 'ಪಾತಂಜಲ ಯೋಗ ದರ್ಶನ' ಪುಸ್ತಕ ರಚಿಸಿದ ಕೀರ್ತಿ ಯೋಗಾಚಾರ್ಯ ನಾಗರಾಜ ಸೂರ್ಯ ನಾರಾಯಣ ಪಾಂಡೇಜಿ ಅವರಿಗೆ ಸಲ್ಲುತ್ತದೆ ಎಂದು ಸಂಸ್ಕೃತಿ ಚಿಂತಕಿ ಡಾ.ಕೆ.ಲೀಲಾ ಪ್ರಕಾಶ್ ಅಭಿಪ್ರಾಯಪಟ್ಟರು.

ಮೈಸೂರು ವಿಜಯನಗರ ಒಂದನೇ ಹಂತದಲ್ಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ಹಿಮಾಲಯ ಪ್ರತಿಷ್ಠಾನ ಹಾಗೂ ಜಿಲ್ಲಾ ಕಸಾಪ ಸಹಯೋಗದೊಂದಿಗೆ ಏರ್ಪಡಿಸಿದ್ದ ಯೋಗಾಚಾರ್ಯ ನಾಗರಾಜ ಸೂರ್ಯ ನಾರಾಯಣ ಪಾಂಡೇಜಿ ಸ್ಮರಣೋತ್ಸವದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ವೇದ, ಉಪನಿಷತ್ತು, ಯೋಗಸೂತ್ರಗಳು, ಭಗವದ್ಗೀತೆಗಳ ಕುರಿತು ಸಮಗ್ರ ಅಧ್ಯಯನ ನಡೆಸಿ ಅಧಿಕಾರಯುತ ಉಪನ್ಯಾಸ ನೀಡುವ ಕೆಲವೇ ವಿದ್ವಾಂಸರದಲ್ಲಿ ಶ್ರೀ ನಾಗರಾಜ ಸೂರ್ಯನಾರಾಯಣ ಪಾಂಡೇಜಿ ಕೂಡ ಒಬ್ಬರು ಎಂದರು.



ಜಿಲ್ಲಾ ಕಸಾಪ ಭವನದಲ್ಲಿ ಯೋಗಾಚಾರ್ಯ ನಾಗರಾಜ ಸೂರ್ಯ ನಾರಾಯಣ ಪಾಂಡೇಜಿ ಸ್ಮರಣೋತ್ಸವ ಆಚರಿಸಲಾಯಿತು.

ವೇದಿಕೆಯಲ್ಲಿ ವಿಪ್ರಮುಖಂಡ ಕೆ. ರಘುರಾಂ ವಾಜಪೇಯಿ, ಯೋಗಾಚಾರ್ಯ ಎಸ್.ವಿ.ವೆಂಕಟೇಶಯ್ಯ, ಆಧ್ಯಾತ್ಮಿಕ ಚಿಂತಕ ಮುಕುಂದನ್, ಕಸಾಪ ಜಿಲ್ಲಾಧ್ಯಕ್ಷ ಮಡ್ಡಿಕೆರೆ ಗೋಪಾಲ್, ಮೈಸೂರು ಯೋಗ ಅಸೋಸಿಯೇಷನ್ ಅಧ್ಯಕ್ಷ ಯೋಗ ಪ್ರಕಾಶ್, ಕಸಾಪ ಜಿಲ್ಲಾ ಉಪಾಧ್ಯಕ್ಷ ಎನ್.ಅನಂತ, ಹಿಮಾಲಿಯಾ ಫೌಂಡೇಶನ್‌ನ ಎಂ.ವಿ ನಾಗೇಂದ್ರ ಬಾಬು, ನಾಗೇಂದ್ರ ಹೆಬ್ಬಾರ್, ಯೋಗಾಚಾರ್ಯ ನಾಗರಾಜ ಸೂರ್ಯ ನಾರಾಯಣ ಪಾಂಡೇಜಿ ಅವರ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

ದೇವಸ್ಥಾನ ಉತ್ಸವ ವೇಳೆ ಪಟಾಕಿ ದುರಂತ

154 ಮಂದಿಗೆ ಗಾಯ, 10 ಜನರ ಸ್ಥಿತಿ ಗಂಭೀರ

ಕಾಸರಗೋಡು, ಅ.29– ದೀಪಾವಳಿ ಹಬ್ಬಕ್ಕೆ ಮುನ್ನ ಪಟಾಕಿ ಕಿಡಿ ಹೊತ್ತಿ ಉರಿದು ಅಗ್ನಿ ಅವಘಡ ಸಂಭವಿಸಿರುವ ಘಟನೆ ನೆರೆಯ ಕಾಸರಗೋಡು ಜಿಲ್ಲೆಯ ನೀಲೇಶ್ವರದಲ್ಲಿ ದೇವಸ್ಥಾನವೊಂದರ ಉತ್ಸವ ವೇಳೆ ಕಳೆದ ಮಧ್ಯರಾತ್ರಿ ನಡೆದಿದೆ.

ಕಾಸರಗೋಡು ಜಿಲ್ಲೆಯ ನೀಲೇಶ್ವರದ ಅವನೀಲೇಶ್ವರಂನ ಅಂಜೂಟ್ಟಂಬಳಂ ವೀರರ್ ಕಾವು ತೆಯ್ಯಂ ಕಟ್ಟೆ ಮಹೋತ್ಸವದ ವೇಳೆ ಪಟಾಕಿ ಕಿಡಿಯಿಂದ ಬೆಂಕಿ ಹತ್ತಿ ಉರಿದು 150 ಮಂದಿಗೆ ಗಾಯವಾಗಿದ್ದು, ಅವರಲ್ಲಿ 10 ಮಂದಿ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ.

ಗಾಯಗೊಂಡವರಲ್ಲಿ ಮಹಿಳೆಯರು ಮತ್ತು ಮಕ್ಕಳು ಸೇರಿದ್ದಾರೆ. ಗಾಯಾಳುಗಳನ್ನು ಕಾಸರಗೋಡು, ಕಣ್ಣೂರು, ಮಂಗಳೂರಿನ ವಿವಿಧ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಗಂಭೀರವಾಗಿ ಗಾಯಗೊಂಡವರಿಗೆ ಶೇ.80ರಷ್ಟು ಸುಟ್ಟ ಗಾಯಗಳಾಗಿವೆ ಎಂದು ಜಿಲ್ಲಾಧಿಕಾರಿ ಮಂಗಳವಾರ ತಿಳಿಸಿದ್ದಾರೆ.



ಅಪಘಾತಕ್ಕೆ ಕಾರಣವನ್ನು ಪತ್ತೆಹಚ್ಚಲಾಗುತ್ತಿದೆ. ಸ್ಥಳದಿಂದ ಮಾದರಿಗಳನ್ನು ಸಂಗ್ರಹಿಸಿಕೊಂಡು ಪ್ರಕರಣ ದಾಖಲಿಸಿ ತನಿಖೆ ನಡೆಸಲಾಗುತ್ತಿದೆ. ಪಟಾಕಿ ಸಂಗ್ರಹಣಾ ಕೇಂದ್ರ ಮತ್ತು ಪಟಾಕಿ ಸಿಡಿಸುವ ಸ್ಥಳವು ಹತ್ತಿರದಲ್ಲಿದೆ ಎಂದು ಹೇಳಿದ್ದಾರೆ.

ವೀರರ್ಕಾವು ದೇವಸ್ಥಾನದ ಬಳಿಯ ಪಟಾಕಿ ಸಂಗ್ರಹಾಗಾರಕ್ಕೆ ಬೆಂಕಿ ತಗುಲಿ ಈ ಅವಘಡ ಸಂಭವಿಸಿರುವ ಶಂಕೆ ವ್ಯಕ್ತವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸುರಕ್ಷತಾ ಮುನ್ನೆಚ್ಚರಿಕೆಗಳನ್ನು ತೆಗೆದುಕೊಂಡಿರಲಿಲ್ಲ. ಇವೆರಡರ ನಡುವೆ ಕನಿಷ್ಠ 100 ಮೀಟರ್ ಅಂತರವನ್ನು ಕಾಯ್ದುಕೊಳ್ಳುವ ಅವಶ್ಯಕತೆಯನ್ನು ಅನುಸರಿಸಿಲ್ಲ. ಪಟಾಕಿಗಳನ್ನು ಸಂಗ್ರಹಿಸಲು ಯಾವುದೇ ಅನುಮತಿಯನ್ನು ತೆಗೆದುಕೊಂಡಿಲ್ಲ ಎಂದು ಜಿಲ್ಲಾಧಿಕಾರಿ ಹೇಳಿದರು.

ಪೊಲೀಸರು ಪ್ರಕರಣ ದಾಖಲಿಸಿಕೊಂಡು ದೇವಸ್ಥಾನದ ಅಧಿಕಾರಿಗಳನ್ನು ವಶಕ್ಕೆ ಪಡೆದಿದ್ದಾರೆ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ಜಿಲ್ಲಾಡಳಿತದ ಉನ್ನತ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿದ್ದಾರೆ. ಕಾಸರಗೋಡು ಸಂಸದ ರಾಜಮೋಹನ್ ಉನ್ನಿತಾನ್ ಘಟನೆಯ ಬಗ್ಗೆ ವಿಸ್ತೃತ ತನಿಖೆಯಾಗಬೇಕು ಎಂದು ಒತ್ತಾಯಿಸಿದರು.

ಪುನುಗು ಬೆಕ್ಕು, ಕಾಡು ಬೆಕ್ಕು ಬೇಟೆ: ಇಬ್ಬರ ಬಂಧನ

ಮೈಸೂರು, ಅ.29(ಎಸ್‌ಪಿಎನ್)– ಒಂದು ಪುನುಗು ಬೆಕ್ಕು ಮತ್ತು ಎರಡು ಕಾಡು ಬೆಕ್ಕುಗಳನ್ನು ಬೇಟೆಯಾಡಿ ಪ್ಲಾಸ್ಟಿಕ್ ಚೀಲದಲ್ಲಿ ಸಾಗಿಸುತ್ತಿದ್ದ ಇಬ್ಬರನ್ನು ಮೈಸೂರು ಅರಣ್ಯ ಸಂಚಾರಿ ದಳದ ಸಿಬ್ಬಂದಿ ಬಂಧಿಸಿದ್ದಾರೆ.

ಸಿ.ಎಸ್.ರವಿ, ನಾಗರಾಜು ಬಂಧಿತ ಆರೋಪಿಗಳು. ಇವರಿಬ್ಬರು ಅ.27ರಂದು ಒಂದು ಪುನುಗು ಬೆಕ್ಕು ಮತ್ತು ಎರಡು ಕಾಡು ಬೆಕ್ಕುಗಳನ್ನು ಬೇಟೆಯಾಡಿ, ಅವುಗಳ ಮಾರಾಟ ಮಾಡಲು ಮಂಡ್ಯ ಜಿಲ್ಲೆ ಕೆ.ಆರ್.ಪೇಟೆ ತಾಲೂಕಿನ ಅಕ್ಕಿಹೆಬ್ಬಾಳು ಬಳಿ ಸ್ಕೂಟಿಯೊಂದರಲ್ಲಿ ಸಾಗಿಸುತ್ತಿದ್ದ ವೇಳೆ ಗಸ್ತಿನಲ್ಲಿದ್ದ ಮೈಸೂರು ಅರಣ್ಯ ಸಂಚಾರಿ ದಳದ ಸಿಬ್ಬಂದಿಗೆ ಸಿಕ್ಕಿಬಿದ್ದಿದ್ದು, ಇವರಿಬ್ಬರನ್ನು ವಶಕ್ಕೆ ಪಡೆದು ಅವರಿಂದ ಪುನುಗು ಬೆಕ್ಕು, 2 ಕಾಡು ಬೆಕ್ಕು, ಸ್ಕೂಟಿ(ಕೆಎ.54, ಆರ್.9878)ಯನ್ನು ವಶಪಡಿಸಿಕೊಂಡು ಆರೋಪಿಗಳ ವಿರುದ್ಧ ವನ್ಯಜೀವಿ ಸಂರಕ್ಷಣಾ ಕಾಯ್ದೆ 1972ರಡಿ ಪ್ರಕರಣ ದಾಖಲಿಸಿ, ನ್ಯಾಯಾಲಯಕ್ಕೆ ಹಾಜರುಪಡಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.




ಬೇಟೆಯಾಡಿದ್ದ ಇಬ್ಬರು ಆರೋಪಿಗಳೊಂದಿಗೆ ಅರಣ್ಯಾಧಿಕಾರಿಗಳು.

ಅರಣ್ಯ ಸಂಚಾರಿದಳದ ಉಪ ಅರಣ್ಯ ಸಂರಕ್ಷಣಾಧಿಕಾರಿ ಚಂದ್ರಶೇಖರ್‌ಗೌಡ ಸಿ.ಪಾಟೀಲ್ ಮಾರ್ಗದರ್ಶನದಲ್ಲಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಜಿ.ರುದ್ರೇಶ್, ವಲಯ ಅರಣ್ಯಾಧಿಕಾರಿ ಸಚಿನ್ ಹಾಗೂ ಕೆ.ಸುರೇಂದ್ರ, ಉಪ ವಲಯ ಅರಣ್ಯಾಧಿಕಾರಿ ವಿ.ಮುತ್ತುರಾಜು, ಸಿ.ಎಸ್.ಮೋಹನ್, ಗಸ್ತು ಅರಣ್ಯ ಪಾಲಕರಾದ ದೇವರಾಜ ಬಂಡಿವಡ್ಡರ್, ಕುಮಾರ, ಯೋಗೇಶ್ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಕೌಶಲಾಧಾರಿತ ಉದ್ಯೋಗ ಸೃಷ್ಟಿಗೆ ಬಜೆಟ್‌ನಲ್ಲಿ 3 ಲಕ್ಷ ಕೋಟಿ ಮೀಸಲು

• ಭಾರಿ ಕೈಗಾರಿಕಾ, ಉಕ್ಕು ಖಾತೆ ಸಚಿವ ಕುಮಾರಸ್ವಾಮಿ ಮಾಹಿತಿ • ಪ್ರಧಾನ ಮಂತ್ರಿ ಉದ್ಯೋಗ ಮೇಳದಡಿ 25 ಯುವಜನರಿಗೆ ನೇಮಕಾತಿ ಪತ್ರ ವಿತರಣೆ



ಬೆಂಗಳೂರು, ಅ.29 (ಕೆಎಂಶಿ)–ಕೌಶಲಾಧಾರಿತ ಉದ್ಯೋಗ ಸೃಷ್ಟಿಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಹೆಚ್ಚು ಒತ್ತು ನೀಡುತ್ತಿದ್ದು, ಬಜೆಟ್‌ನಲ್ಲಿ ಯುವಜನರ ಕೌಶಲ ವೃದ್ಧಿಗೆ 3 ಲಕ್ಷ ಕೋಟಿ ರೂ. ಮೀಸಲಿಡಲಾಗಿದೆ ಎಂದು ಕೇಂದ್ರದ ಭಾರಿ ಕೈಗಾರಿಕಾ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಇಂದಿಲ್ಲಿ ತಿಳಿಸಿದ್ದಾರೆ.

ನಗರದಲ್ಲಿ ಪ್ರಧಾನಮಂತ್ರಿ ಉದ್ಯೋಗ ಮೇಳ 2ನೇ ಹಂತದ ಕಾರ್ಯಕ್ರಮದಲ್ಲಿ 25 ಯುವಜನರಿಗೆ ನೇಮಕಾತಿ ಪತ್ರ ವಿತರಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ 12 ಇಲಾಖೆಗಳಲ್ಲಿ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ, 2047ರ ವೇಳೆಗೆ ವಿಕಸಿತ ಭಾರತ ಗುರಿ ಮುಟ್ಟುವ ಛಲದೊಂದಿಗೆ ಮೋದಿ ಅವರು ಕೌಶಲಾಧಾರಿತ ಉದ್ಯೋಗ ಸೃಷ್ಟಿಗೆ ಹೆಚ್ಚು ಉತ್ತೇಜನ ನೀಡುತ್ತಿದ್ದಾರೆ ಎಂದರು.

ಬಜೆಟ್‌ನಲ್ಲಿ ಮೀಸಲಿಟ್ಟ ಹಣ ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳಿಗೆ ನೇರವಾಗಿ ಬಿಡುಗಡೆ ಆಗುತ್ತದೆ, ಮೇಕ್ ಇನ್ ಇಂಡಿಯಾ, ಆತ್ಮನಿರ್ಭರ್ ಭಾರತ್ ಪರಿಕಲ್ಪನೆಗಳಡಿ ಉತ್ಪಾದನಾ ಸಂಪರ್ಕ ಉತ್ತೇಜನ ಯೋಜನೆ ಮೂಲಕವೂ ಉದ್ಯೋಗ ಕ್ಷೇತ್ರದಲ್ಲಿ ದೊಡ್ಡ ಮುನ್ನಡೆ ಸಾಧಿಸಲಾಗುತ್ತಿದೆ, ಭಾರತವನ್ನು 3ನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ರೂಪಿಸಲು ಸಹಕಾರಿ ಆಗುತ್ತದೆ. ಮೊದಲ ಹಂತದ ಉದ್ಯೋಗ ಮೇಳದಲ್ಲಿ 30,000 ಯುವಜನರಿಗೆ, ಎರಡನೇ ಹಂತದಲ್ಲಿ 20,000 ಮಂದಿಗೆ ಉದ್ಯೋಗ ನೀಡಲಾಗಿದೆ ಎಂದರು.

ಮೂರು ಕ್ಷೇತ್ರಗಳಲ್ಲೂ ಎನ್‌ಡಿಎ ಅಭ್ಯರ್ಥಿಗಳು ಗೆಲ್ಲುತ್ತಾರೆ



ಮೈಸೂರು, ಅ.29(ಆರ್‌ಕೆ)– ಉಪಚುನಾವಣೆಯಲ್ಲಿ ಮೂರು ಕ್ಷೇತ್ರಗಳಲ್ಲೂ ಎನ್‌ಡಿಎ ಅಭ್ಯರ್ಥಿಗಳು ಜಯಗಳಿಸುತ್ತಾರೆ ಎಂದು ಕೇಂದ್ರ ರೈಲ್ವೇ ಇಲಾಖೆ ರಾಜ್ಯ ಸಚಿವ ವಿ. ಸೋಮಣ್ಣ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ರೋಜ್ಗಾರ್ ಮೇಳದಲ್ಲಿ ಪಾಲ್ಗೊಳ್ಳಲು ಮೈಸೂರಿಗೆ ಆಗಮಿಸಿದ್ದ ಅವರು, ಇಂದು ಜಲದರ್ಶಿನಿ ಅತಿಥಿಗೃಹದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು. ಚನ್ನಪಟ್ಟಣದಲ್ಲಿ ಸಿ.ಪಿ. ಯೋಗೇಶ್ವರ್ ಆತುರದ ನಿರ್ಧಾರ ಕೈಗೊಂಡಿದ್ದಾರೆ. ಉಪಚುನಾವಣೆ ಮೂಲಕ ಜನರು ಕಾಂಗ್ರೆಸ್‌ಗೆ ಎಚ್ಚರಿಕೆ ಗಂಟೆ ಬಾರಿಸಲಿದ್ದಾರೆ ಎಂದು ಅವರು ತಿಳಿಸಿದರು.

ಮುಡಾ ನಿವೇಶನ ಹಂಚಿಕೆ ಪ್ರಕರಣ ತಾರ್ಕಿಕ ಅಂತ್ಯ ಕಾಣುತ್ತದೆ. ಆದರೆ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ತಾನು ಸಚಿವ ಎಂಬುದನ್ನು ಮರೆತು ಶೋಭಾ ಕರಂದ್ಲಾಜೆ ವಿರುದ್ಧ ಕೀಳಾಗಿ ಮಾತನಾಡುತ್ತಿರುವುದು ಸರಿಯಲ್ಲ. ಮುಡಾ ಬಹುಕೋಟಿ ಹಗರಣ ಜನಪ್ರತಿನಿಧಿಗಳು ತಲೆತಗ್ಗಿಸುವಂತಹ ವಿಚಾರ ಎಂದು ಅವರು ನುಡಿದರು. ನಾನು ಜಿಲ್ಲಾ ಉಸ್ತುವಾರಿ ಸಚಿವನಾಗಿದ್ದಾಗ ಮುಡಾ 7200 ಸೈಟುಗಳನ್ನು ಪತ್ತೆ ಮಾಡಿ ಹರಾಜು ಮಾಡಲು ತೀರ್ಮಾನಿಸಿದ್ದೆವು. ಈಗ ತನಿಖೆ ಆರಂಭವಾಗಿದೆ. ಅಕ್ರಮ ಹೊರಬರಲಿ ಎಂದು ಸೋಮಣ್ಣ ಒತ್ತಾಯಿಸಿದ್ದಾರೆ.

ನವೀಕರಣಕ್ಕೆ ಬಿಡುಗಡೆಯಾಗಿದ್ದ ಅನುದಾನದಲ್ಲಿ 1.51 ಕೋಟಿ ರೂ. ನಗರೋತ್ಥಾನ ಯೋಜನೆ ಕಾಮಗಾರಿಗೆ ಬಳಕೆ

ಘಟನೋತ್ತರ ಮಂಜೂರಾತಿ ನೀಡಿ ರಾಜ್ಯ ಸರ್ಕಾರದ ಆದೇಶ

ಮೈಸೂರು, ಅ.29(ಪಿಎಂ)– ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮೈಸೂರು ನಗರದ ಪಾರಂಪರಿಕ ಕಟ್ಟಡಗಳ ನವೀಕರಣಕ್ಕಾಗಿ ಬಿಡುಗಡೆಯಾಗಿದ್ದ ಅನುದಾನದಲ್ಲಿ 1,51,29,199 ರೂ.ಗಳನ್ನು ನಗರೋತ್ಥಾನ 3ನೇ ಹಂತದ ಯೋಜನೆಯಡಿಯ ಕಾಮಗಾರಿಗಳಿಗೆ ಪಾವತಿಸಿರುವ ಸಂಬಂಧ ಕೆಲ ಷರತ್ತುಗಳನ್ನು ವಿಧಿಸಿ ರಾಜ್ಯ ಸರ್ಕಾರ ಘಟನೋತ್ತರ ಮಂಜೂರಾತಿ ನೀಡಿ ಆದೇಶಿಸಿದೆ.

ಮೈಸೂರು ನಗರದ ಪಾರಂಪರಿಕ ಕಟ್ಟಡಗಳ ನವೀಕರಣಕ್ಕಾಗಿ ಬಿಡುಗಡೆಯಾಗಿದ್ದ ಅನುದಾನದಲ್ಲಿ ನಗರೋತ್ಥಾನ 3ನೇ ಹಂತದ ಯೋಜನೆಯ ಕಾಮಗಾರಿಗೆ ಪಾವತಿಸಿರುವ ಕಾರಣ ಘಟನೋತ್ತರ ಮಂಜೂರಾತಿ ನೀಡುವಂತೆ ಕೋರಿ ಪೌರಾಡಳಿತ ನಿರ್ದೇಶನಾಲಯ ನಿರ್ದೇಶಕರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರು.

ಪಾರಂಪರಿಕ ಕಟ್ಟಡಗಳ ನವೀಕರಣಕ್ಕಾಗಿ ಬಿಡುಗಡೆಯಾದ ಅನುದಾನವನ್ನು ಸರ್ಕಾರ ಹಿಂಪಡೆಯುವ ಸಂಭವನೀಯತೆ ಇದ್ದ ಕಾರಣ ಜಿಲ್ಲಾಧಿಕಾರಿಗಳು ಸದುದ್ದೇಶದಿಂದ ನಗರೋತ್ಥಾನ 3ನೇ ಹಂತದ ಯೋಜನೆಯಡಿ 4 ಕಾಮಗಾರಿಗಳಿಗೆ ಪಾವತಿಸಿದ್ದರು. ಈ ಕುರಿತು ಮಹಾಲೇಖಪಾಲರ ಲೆಕ್ಕ ಪರಿಶೋಧನೆ ವೇಳೆ ಸದರಿ ಕಾಮಗಾರಿಗಳಿಗೆ ಪಾವತಿಯಾಗಿರುವ ಬಗ್ಗೆ ಡೈವರ್‌ಸನ್ ಆಫ್ ಫಂಡ್ಸ್ ಎಂದು ಆಕ್ಷೇಪಣೆ ಇದ್ದಿತು. ಆದರೆ ಇದರಲ್ಲಿ ಅನುದಾನ ಯಾವುದೇ ರೀತಿಯ ದುರ್ಬಳಕೆಯಾಗಿಲ್ಲ. ಆದ್ದರಿಂದ ಈಗಾಗಲೇ ಪಾವತಿಸಿರುವ ಮೊತ್ತ 1,51,29,199.00 ರೂ.ಗಳಿಗೆ ಘಟನೋತ್ತರ ಮಂಜೂರಾತಿ ನೀಡುವಂತೆ ಪ್ರಸ್ತಾವನೆಯಲ್ಲಿ ಪೌರಾಡಳಿತ ನಿರ್ದೇಶನಾಲಯ ನಿರ್ದೇಶಕರು ಮನವಿ ಮಾಡಿದ್ದರು.

ರಾಷ್ಟ್ರೀಯ ಆಯುರ್ವೇದ ದಿನಾಚರಣೆಯಲ್ಲಿ ಸನ್ಮಾನ



ಮೈಸೂರಿನ ಡಾ.ಚಂದ್ರಶೇಖರ್ ಫೌಂಡೇಷನ್‌ನ ಕಾವೇರಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ 9ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಖ್ಯಾತ ಆಯುರ್ವೇದ ವೈದ್ಯರೂ ಆದ ಜೆಎಸ್‌ಎಸ್ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ನಿವೃತ್ತ ಪ್ರಾಧ್ಯಾಪಕ ಡಾ.ಬಿ.ಗುರುಬಸವರಾಜ ಅವರನ್ನು ಸನ್ಮಾನಿಸಲಾಯಿತು. ಕಾವೇರಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್‌ನ ಅಧ್ಯಕ್ಷ ಡಾ.ಜಿ.ಆರ್.ಚಂದ್ರಶೇಖರ್, ವ್ಯವಸ್ಥಾಪಕ ನಿರ್ದೇಶಕಿ ಡಾ.ಸರಳಾ ಚಂದ್ರಶೇಖರ್ ಮತ್ತಿತರರನ್ನು ಚಿತ್ರದಲ್ಲಿ ಕಾಣಬಹುದು.

ವರದಕ್ಷಿಣೆ ಕಿರುಕುಳದಿಂದ ಮಹಿಳೆ ಸಾವು; ಪತಿ ಸೇರಿ ಮೂವರಿಗೆ 3 ವರ್ಷ ಸಜೆ

ಮೈಸೂರು, ಅ.29– ವರದಕ್ಷಿಣೆಗಾಗಿ ಪತ್ನಿಗೆ ಕಿರುಕುಳ ನೀಡಿ, ಆಕೆಯ ಸಾವಿಗೆ ಕಾರಣನಾದ ಪತಿ ಸೇರಿದಂತೆ ಮೂವರಿಗೆ ನ್ಯಾಯಾಲಯ 3 ವರ್ಷ ಕಠಿಣ ಜೈಲು ಶಿಕ್ಷೆ ವಿಧಿಸಿದೆ.

ಪಿರಿಯಾಪಟ್ಟಣ ತಾಲೂಕು, ಹಿಟ್ಟನಹಳ್ಳಿ ಗ್ರಾಮದ ಹೆಚ್.ಆರ್.ಮಂಜು, ಆತನ ಪೋಷಕರಾದ ರಾಜಪ್ಪ ಮತ್ತು ಶಿವಮ್ಮ ಅವರಿಗೆ ಶಿಕ್ಷೆ ವಿಧಿಸಲಾಗಿದೆ.

ನಾರಳಾಪುರ ಗ್ರಾಮದ ಈರಪ್ಪಾಜಿ ಅವರ ಪುತ್ರಿ ಸುನಿತಾ ಹಾಗೂ ಮಂಜು 2020ರ ಮಾ.16ರಂದು ವಿವಾಹವಾಗಿದ್ದರು. ಆ ವೇಳೆ 3.50 ಲಕ್ಷ ರೂ. ನಗದು, 167 ಗ್ರಾಂ ಚಿನ್ನ ಹಾಗೂ ಬೆಳ್ಳಿ ಆಭರಣಗಳನ್ನು ವರದಕ್ಷಿಣೆಯಾಗಿ ನೀಡಲಾಗಿತ್ತು. ದಂಪತಿ ಐದಾರು ತಿಂಗಳು ಅನ್ಯೋನ್ಯವಾಗಿದ್ದರು. ನಂತರ ಮನೆ ನವೀಕರಣಕ್ಕೆ ತವರಿನಿಂದ ಹಣ 6 ಲಕ್ಷ ರೂ. ಹಣ ತರುವಂತೆ ಸುನಿತಾಗೆ ಕಿರುಕುಳ ನೀಡಲಾರಂಭಿಸಿದರು. ಈ ಸಂಬಂಧ ರಾಜೀ ಪಂಚಾಯ್ತಿ ಮಾಡಿ, ಮುಂದಿನ ವರ್ಷ ಹಣ ನೀಡುವುದಾಗಿ ಸುನಿತಾ ತವರು ಮನೆಯವರು ಒಪ್ಪಿಕೊಂಡಿದ್ದರು. ಆದರೂ ಗಂಡನ ಮನೆಯವರು ಕಿರುಕುಳ ಮುಂದುವರೆಸಿದ್ದರು. ಇದನ್ನು ಸಹಿಸಲಾಗದೆ 2021ರ ಫೆಬ್ರವರಿ 14ರಂದು ಬೆಳಗ್ಗೆ ಸ್ನಾನದ ಮನೆಯಲ್ಲಿ ಸೀಮೆಎಣ್ಣೆ ಸುರಿದುಕೊಂಡು ಬೆಂಕಿ ಹಂಚಿಕೊಂಡಿದ್ದ ಸುನಿತಾಳನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆ ಫಲಕಾರಿಯಾಗದೆ ಅಂದು ಮಧ್ಯಾಹ್ನ ಸಾವನ್ನಪ್ಪಿದರು. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ಪೊಲೀಸರು ತನಿಖೆ ನಡೆಸಿ, ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ 5ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಗುರುರಾಜ್ ಸೋಮಕ್ಕಳವರ್, ಆರೋಪಿಗಳ ವಿರುದ್ಧದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಮೂವರಿಗೂ 3 ವರ್ಷ ಜೈಲು ಹಾಗೂ ತಲಾ 5 ಸಾವಿರ ರೂ. ದಂಡ ವಿಧಿಸಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ಬಿ.ಈ. ಯೋಗೇಶ್ವರ ವಾದ ಮಂಡಿಸಿದ್ದರು.

ಒಂದೆಡೆ ಶಾಸಕ–ಡಿಸಿ; ಮತ್ತೊಂದೆಡೆ ಹಾಸನಾಂಬೆ ಸನ್ನಿಧಿಯಲ್ಲಿ ಪೊಲೀಸರು, ಡಿಸಿ ಕಚೇರಿ ಸಿಬ್ಬಂದಿ ವಾಗ್ವಾದ



ಹಾಸನ ಜಿಲ್ಲಾಧಿಕಾರಿ ಆಪ್ತ ಸಹಾಯಕ ಶಶಿ ಹಾಗೂ ಪೊಲೀಸ್ ಅಧಿಕಾರಿಗಳ ಮಧ್ಯೆ ಮಾತಿನ ಚಕಮಕಿ ನಡೆಯುತ್ತಿರುವುದು.

ಹಾಸನ: ಹಾಸನಾಂಬೆ ದೇವಿ ದರ್ಶನೋತ್ಸವ ವೇಳೆ ಪೊಲೀಸರು ಮತ್ತು ಜಿಲ್ಲಾಧಿಕಾರಿ ಕಚೇರಿ ಸಿಬ್ಬಂದಿ ಮಧ್ಯೆ ಮಂಗಳವಾರ ರಾತ್ರಿ ವಾಗ್ವಾದ ನಡೆದಿದ್ದು, ಕೈಕೈ ಮಿಲಾಯಿಸಿದ್ದಾರೆ. ಇದರಿಂದ ಸಿಟ್ಟಾದ ಜಿಲ್ಲಾಧಿಕಾರಿ ಸಿ.ಸತ್ಯಭಾಮಾ ಅವರು ಮಳವಳ್ಳಿ ಸಿಪಿಐ ರವಿ ಅವರನ್ನು ತರಾಟೆಗೆ ತೆಗೆದುಕೊಂಡ ಘಟನೆಯೂ ನಡೆಯಿತು.

ಶಿಷ್ಟಾಚಾರದ ವಾಹನ ತಡೆದಿದ್ದಕ್ಕೆ ಜಿಲ್ಲಾಧಿಕಾರಿ ಆಪ್ತ ಸಹಾಯಕ ಶಶಿ ಹಾಗೂ ಪೊಲೀಸ್ ಅಧಿಕಾರಿಗಳ ಮಧ್ಯೆ ಮಾತಿನ ಚಕಮಕಿ ನಡೆಯಿತು. ಆ ವೇಳೆ ಪೊಲೀಸರು, ಶಶಿ ಅವರನ್ನು ಹೊರಕ್ಕೆ ತಳ್ಳಿದ್ದರು.

ವಿಷಯ ತಿಳಿದು ಸಿಸಿಟಿವಿ ಕ್ಯಾಮೆರಾ ಪರಿಶೀಲಿಸಿದ ನಂತರ ಬಂದ ಜಿಲ್ಲಾಧಿಕಾರಿ, 'ಇಂಥ ವರ್ತನೆ ಸರಿಯಲ್ಲ. ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಹೇಳಿ ಅಮಾನತು ಮಾಡಿಸುತ್ತೇನೆ' ಎಂದು ಪೊಲೀಸರಿಗೆ ಎಚ್ಚರಿಕೆ ನೀಡಿದರು. ಅದೇ ಕಾರಣಕ್ಕೆ, ಮಳವಳ್ಳಿ ಸಿಪಿಐ ರವಿ ಮತ್ತು ಜಿಲ್ಲಾಧಿಕಾರಿ ನಡುವೆ ವಾಗ್ವಾದ ನಡೆಯಿತು.

'ನಮ್ಮ ಮಹಿಳಾ ಪಿಎಸ್‌ಐಗೆ ಗಾಯವಾಗಿದೆ. ಕೂಡಲೇ ಚಿಕಿತ್ಸೆ ಕೊಡಿಸಿ. ನಿಮ್ಮ ಪಿಎ ವರ್ತನೆಯೇ ಘಟನೆಗೆ ಕಾರಣ' ಎಂದು ರವಿ ದೂರಿದರು. ಅದರಿಂದ ಸ್ಥಳದಲ್ಲಿ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಗಿತ್ತು.

'ಗೇಟ್ ಮುಂದೆ ಪೊಲೀಸರ ಬದಲು, ಕಂದಾಯ ಅಧಿಕಾರಿಗಳು ನಿಂತು ಕೆಲಸ ನಿರ್ವಹಿಸಿ' ಎಂದು ಆದೇಶಿಸಿದ ಸಿ.ಸತ್ಯಭಾಮಾ, ಪೊಲೀಸರ ವಿರುದ್ಧ ಆಕ್ರೋಶ ಹೊರಹಾಕಿ ನಿರ್ಗಮಿಸಿದರು. ಎಸ್ಪಿ ಮೊಹಮ್ಮದ್ ಸುಜೀತಾ ಭೇಟಿ ನೀಡಿ, ಪರಿಶೀಲಿಸಿದರು.

ಶಾಸಕ ಸುರೇಶ್ ಡಿಸಿ ಮಧ್ಯೆ ವಾಗ್ವಾದ: ಬಿ.ಎಸ್. ಯಡಿಯೂರಪ್ಪ ಭೇಟಿ ವೇಳೆ, ಬೇಲೂರು ಶಾಸಕ ಎಚ್.ಕೆ. ಸುರೇಶ್ ಹಾಗೂ ಜಿಲ್ಲಾಧಿಕಾರಿ ಮಧ್ಯೆಯೂ ವಾಗ್ವಾದ ನಡೆಯಿತು. ಗರ್ಭಗುಡಿಗೆ ಪ್ರವೇಶಿಸುವುದನ್ನು ತಡೆದ ಜಿಲ್ಲಾಧಿಕಾರಿ ನಡೆಗೆ ಸುರೇಶ್ ಆಕ್ರೋಶ ವ್ಯಕ್ತಪಡಿಸಿದರು.

ಲಕ್ಷಾಂತರ ಕುಟುಂಬದ ಬೆಳಕು ಡಾ.ವೀರೇಂದ್ರ ಹೆಗಡೆ

ಮದ್ಯವರ್ಜನ ಶಿಬಿರದಲ್ಲಿ ಸಂಸದ ಯದುವೀರ್ ಬಣ್ಣನೆ



ಮದ್ಯವರ್ಜನ ಶಿಬಿರದಲ್ಲಿ ಸಂಸದ ಯದುವೀರ್ ಮಾತನಾಡಿದರು.

ಹುಣಸೂರು, ಅ.29– ಧರ್ಮಸ್ಥಳದ ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗಡೆಯವರು ಮದ್ಯವರ್ಜನ ಶಿಬಿರದ ಮೂಲಕ ರಾಜ್ಯದ ಲಕ್ಷಾಂತರ ಕುಟುಂಬದ ಬೆಳಕಾಗಿದ್ದಾರೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಬಣ್ಣಿಸಿದರು.

ತಾಲೂಕಿನ ಬಿಳಿಕೆರೆ ಗ್ರಾಮದ ಶ್ರೀನಂಜುಂಡೇಶ್ವರ ಕಲ್ಯಾಣ ಮಂಟಪದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಆಯೋಜಿಸಿದ್ದ 1877ನೇ ಮದ್ಯ ವರ್ಜನ ಶಿಬಿರದ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಮದ್ಯಪಾನ, ಧೂಮಪಾನ ದಂತಹ ದುಶ್ಚಟಗಳನ್ನು ಕಲಿತರೆ ಅದರ ಋಣಾತ್ಮಕ ಪರಿಣಾಮ ನಮ್ಮ ಹಾಗೂ ಕುಟುಂಬದ ಮೇಲೆ ಬೀಳುತ್ತದೆ. ಹೀಗಾಗಿ ದುಶ್ಚಟ ತ್ಯಜಿಸಿ ಹೊಸ ಮನುಷ್ಯ ರಾಗುತ್ತಿರುವುದು ಶ್ಲಾಘನೀಯ ಎಂದರು.

ಶ್ರೀಕ್ಷೇತ್ರ ಧರ್ಮಸ್ಥಳಕ್ಕೂ ಮೈಸೂರು ಮಹಾ ಸಂಸ್ಥಾನಕ್ಕೂ ನೂರಾರೂ ವರ್ಷಗಳ ಅವಿನಾಭಾವ ಸಂಬಂಧವಿದೆ. ನಮ್ಮ ಪೂರ್ವಿಕರು ಶ್ರೀಕ್ಷೇತ್ರಕ್ಕೆ ಭೇಟಿ ನೀಡಿ ಅನೇಕ ವಿಶೇಷ ಪೂಜಾ ಕಾರ್ಯ ನೆರವೇರಿಸುವ ಮೂಲಕ ಸಂಬಂಧವಿಸಿಕೊಂಡಿರುವ ಕಾರಣ ಶ್ರೀಕ್ಷೇತ್ರ ನಮಗೆ ಹತ್ತಿರವಾಗಿದೆ ಎಂದರು. ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ರಾಜ್ಯದ ಉದ್ದಗಲಕ್ಕೂ ಸಾಕಷ್ಟು ಜನಪರ ಕಾರ್ಯಗಳನ್ನು ಕೈಗೊಂಡಿದ್ದು, ನಾವೂ ಸಹ ಶ್ರೀಕ್ಷೇತ್ರದ ಜೊತೆಗೆ ಸೇರಿ ಗ್ರಾಮ, ದೇಶದ ಅಭಿವೃದ್ಧಿಗೆ ಶ್ರಮಿಸೋಣ ಎಂದರು.

ಉಕ್ಕಿನಕಂತೆ ಮಾದಳ್ಳಿ ಮಠದ ಶ್ರೀಸಾಂಬಸದಾಶಿವ ಸ್ವಾಮೀಜಿ ಮಾತನಾಡಿ, ಮದ್ಯ ವ್ಯಸನದಿಂದ ಪ್ರಸ್ತುತ ಸಮಾಜದಲ್ಲಿ ಲಕ್ಷಾಂತರ ಕುಟುಂಬಗಳು ಹಾಳಾಗಿದ್ದು, ಹೆಣ್ಣು ಮಕ್ಕಳು ಸಂಕಷ್ಟಕ್ಕೆ ಸಿಲುಕಿದ್ದಾರೆ. ಅಲ್ಲದೇ ಕುಟುಂಬಗಳ ನೆಮ್ಮದಿ ಹಾಳಾಗಿದೆ. ಇದನ್ನು ಅರಿತ ಶ್ರೀಕ್ಷೇತ್ರದ ಪೂಜ್ಯರು ಮದ್ಯವರ್ಜನ ಶಿಬಿರದಂತಹ ಕಾರ್ಯಕ್ರಮ ಆಯೋಜಿಸುವ ಮೂಲಕ ಮದ್ಯ ವ್ಯಸನಿಗಳನ್ನು ಸಮಾಜದ ಮುಖ್ಯ ವಾಹಿನಿಗೆ ತರಲು ಹಾಗೂ ಅವರು ನೆಮ್ಮದಿಯ ಬದುಕು ನಡೆಸಲು ಶ್ರಮಿಸಿದ್ದಾರೆ ಎಂದರು.

ಶಿಬಿರದಲ್ಲಿ ಸುಮಾರು 64 ಮಂದಿ ಭಾಗವಹಿಸಿದ್ದರು. ಈ ವೇಳೆ ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಹಂದನಹಳ್ಳಿ ಸೋಮಶೇಖರ್ ಅಧ್ಯಕ್ಷತೆ ವಹಿಸಿದ್ದರು. ಹುಣಸೂರು ಯೋಜನಾಧಿಕಾರಿ ಧನಂಜಯ್, ಪ್ರಾದೇಶಿಕ ನಿರ್ದೇಶಕ ಜಯರಾಮ್ ನೆಲ್ಲಿತಾಯ, ಬಿಳಿಕೆರೆ ಪ್ರಸನ್ನ, ಗ್ರಾಪಂ ಅಧ್ಯಕ್ಷೆ ಮಹದೇವಮ್ಮ, ಸಿದ್ದಮ್ಮ, ಶಿವಕುಮಾರ್, ಪ್ರಸನ್ನ, ಕೃಷ್ಣಕುಮಾರ್, ರೂಪೇಶ್, ಶಿಬಿರಾಧಿಕಾರಿ ವಿದ್ಯಾದರ, ವೀಣಾ ಇತರರಿದ್ದರು.

ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಪಠ್ಯೇತರ ಚಟುವಟಿಕೆ ಪೂರಕ

ಶಾಸಕ ದರ್ಶನ್



ಸಾಂಸ್ಕೃತಿಕ, ಕ್ರೀಡೆ, ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮವನ್ನು ಶಾಸಕ ದರ್ಶನ್ ಉದ್ಘಾಟಿಸಿದರು.

ನಂಜನಗೂಡು, ಅ.29– ವಿದ್ಯಾರ್ಥಿಗಳ ಪರಿಪೂರ್ಣ ವ್ಯಕ್ತಿತ್ವ ವಿಕಸನಕ್ಕೆ ವಿದ್ಯಾಭ್ಯಾಸ ಒಂದೇ ಸಾಲದು. ಸಾಂಸ್ಕೃತಿಕ ಕಾರ್ಯಕ್ರಮ, ಕ್ರೀಡೆ, ರಾಷ್ಟ್ರೀಯ ಸೇವಾ ಯೋಜನೆಗಳು ಸಹ ಪೂರಕ ಎಂದು ಶಾಸಕ ದರ್ಶನ್ ತಿಳಿಸಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಂಗಳವಾರ ನಡೆದ ಸಾಂಸ್ಕೃತಿಕ, ಕ್ರೀಡೆ, ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ಕಾಲೇಜಿಗೆ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆ. ಕಳೆದ ಬಾರಿ ವಿದ್ಯಾರ್ಥಿಗಳು ಕ್ಯಾಂಟೀನ್ ಸೌಲಭ್ಯ ಕಲ್ಪಿಸುವಂತೆ ಮನವಿ ಮಾಡಿದ್ದರು. ವಿದ್ಯಾರ್ಥಿಗಳ ಬೇಡಿಕೆಯಂತೆ ಈಗ ಕ್ಯಾಂಟೀನ್ ಸೌಲಭ್ಯ ಒದಗಿಸಲಾಗಿದೆ. ಮುಂದಿನ ದಿನಗಳಲ್ಲಿ ರೇಷ್ಮೆ ಅಥವಾ ಕಂದಾಯ ಇಲಾಖೆ ಜಾಗವನ್ನು ಕಾಲೇಜಿಗೆ ಹಸ್ತಾಂತರಿಸಿ ಸುಸಜ್ಜಿತ ಆಟದ ಮೈದಾನ ನಿರ್ಮಿಸಿ ಕೊಡಲಾಗುವುದು ಎಂದು ಭರವಸೆ ನೀಡಿದರು.

ವಿದ್ಯಾರ್ಥಿಗಳು ಸಮಯಕ್ಕೆ ಆದ್ಯತೆ ನೀಡಿ, ಮೊಬೈಲ್ ಬಳಕೆಯಿಂದ ದೂರವಿದ್ದು ಆಸಕ್ತಿಯಿಂದ ವ್ಯಾಸಂಗದಲ್ಲಿ ತೊಡಗಿಕೊಳ್ಳಬೇಕು. ನಿಮ್ಮ ತಂದೆ ತಾಯಿ ಮಾತನ್ನು ತಳ್ಳಿ ಹಾಕದೆ ಅವರಿಗೆ ಗೌರವ ಕೊಡುವುದನ್ನು ರೂಢಿಸಿಕೊಳ್ಳಬೇಕು. ಅಲ್ಲದೆ ದುಶ್ಚಟಗಳಿಂದ ದೂರವಿದ್ದು, ಪ್ರತಿದಿನ ಕ್ರೀಡೆಯಲ್ಲಿ ತೊಡಗಿಸಿಕೊಳ್ಳಬೇಕು. ಉತ್ತಮ ಹವ್ಯಾಸದೊಂದಿಗೆ ನಿಮ್ಮ ಜೀವನವನ್ನು ರೂಪಿಸಿಕೊಂಡು ಸಮಾಜಕ್ಕೆ ಕೊಡುಗೆ ನೀಡಿ ಎಂದು ಕಿವಿಮಾತು ಹೇಳಿದರು.

ಈ ವೇಳೆ ಮಾಜಿ ಶಾಸಕ ಕೇಶವ ಮೂರ್ತಿ, ತಾಪಂ ಮಾಜಿ ಅಧ್ಯಕ್ಷ ನಾಗೇಶ್ ರಾಜ್, ಪ್ರಾಂಶುಪಾಲ ಕೆಂಪೇಗೌಡ, ಪ್ರಾಧ್ಯಾಪಕ ಪ್ರೊ.ಶೋಭಾ, ಡಾ.ಅಪ್ಪಗೆರೆ ತಿಮ್ಮರಾಜು, ಕೃಷ್ಣೇಗೌಡ, ಹೇಮಲತಾ, ಕರುಣೇಶ್ ಕುಮಾರ್ ಸೇರಿದಂತೆ ಇತರರಿದ್ದರು.

ಮಕ್ಕಳಿಗೆ ಬ್ಯಾಗ್, ನೋಟ್‌ಬುಕ್ ವಿತರಣೆ



ಹೆಚ್.ಡಿ.ಕೋಟೆ ತಾಲೂಕಿನ ಪೈಲ್ವಾನ್ ಕಾಲೋನಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಮಕ್ಕಳಿಗೆ ದೀಪಾವಳಿ ಪ್ರಯುಕ್ತ ಸಿಎಸ್‌ಸಿ ಎಂಟರ್ ಪ್ರೈಸಸ್ ಮಾಲೀಕ ಸಿ.ಶಿವಕುಮಾರ್ ಬ್ಯಾಗ್ ಮತ್ತು ನೋಟ್‌ಬುಕ್ ವಿತರಿಸಿದರು. ಈ ವೇಳೆ ಶಾಲೆ ಮುಖ್ಯ ಶಿಕ್ಷಕ ಸಣ್ಣಯ್ಯ, ಸಹ ಶಿಕ್ಷಕ ಗಣೇಶ್ ಆಚಾರ್, ಸಿಎಸ್‌ಸಿಯ ಸಿಬ್ಬಂದಿಗಳಾದ ಪುಟ್ಟರಾಜು, ಮಹೇಶ್, ಪ್ರವೀಣ್, ಶಿವಣ್ಣ ಸೇರಿದಂತೆ ಅಡುಗೆ ಸಿಬ್ಬಂದಿ ಹಾಜರಿದ್ದರು.

ಸರ್ಕಾರ ಒಳ ಮೀಸಲಾತಿ ಜಾರಿಗೊಳಿಸಲಿ

ಸರಗೂರು, ಅ.29– ಸರ್ಕಾರ ಕೂಡಲೇ ಮೀಸಲಾತಿ ಜಾರಿಗೊಳಿಸಬೇಕು ಎಂದು ತಾಲೂಕು ಆರ್ಯ ಈಡಿಗರ ಸಂಘದ ಅಧ್ಯಕ್ಷ ಎಸ್.ಎನ್.ನಾಗರಾಜು ತಿಳಿಸಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೀಸಲಾತಿ ಜಾರಿಯಾಗಬೇಕು ಎಂಬುದು ನಮ್ಮ ಸಮುದಾಯದ ಹಲವು ವರ್ಷಗಳ ಬೇಡಿಕೆಯಾಗಿದೆ. ನಮ್ಮ ಸಮುದಾಯ ಆರ್ಥಿಕ, ಶೈಕ್ಷಣಿಕ, ಸಾಮಾಜಿಕ ಹಾಗೂ ರಾಜಕೀಯವಾಗಿ ಹಿಂದುಳಿದಿದ್ದು, ಸಚಿವ ಸಂಪುಟದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಒಳ ಮೀಸಲಾತಿ ಜಾರಿಗೊಳಿಸಬೇಕು ಎಂದು ಮನವಿ ಮಾಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆಯಾಗಿ ವಿದ್ಯಾ ಅವಿರೋಧ ಆಯ್ಕೆ



ಹಂಪಾಪುರ ಗ್ರಾಪಂ ಅಧ್ಯಕ್ಷೆಯಾಗಿ ವಿದ್ಯಾ ಅವಿರೋಧವಾಗಿ ಆಯ್ಕೆಯಾದರು.

ಕೆ.ಆರ್.ನಗರ, ಅ.29– ತಾಲೂಕಿನ ಹಂಪಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷೆಯಾಗಿ ವಿದ್ಯಾ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.


ಒಟ್ಟು 18 ಸದಸ್ಯ ಬಲದ ಗ್ರಾಪಂನ ಈ ಹಿಂದಿನ ಅಧ್ಯಕ್ಷೆ ರಮ್ಯ ಅವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಗ್ರಾಪಂ ಆವರಣದಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ವಿದ್ಯಾ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿ ಸಿಡಿಪಿಓ ಸಿ.ಎಂ. ಅಣ್ಣಯ್ಯ ಅವಿರೋಧ ಆಯ್ಕೆ ಘೋಷಿಸಿದರು. ನೂತನ ಅಧ್ಯಕ್ಷರ ಆಯ್ಕೆಯಾಗುತ್ತಿದ್ದಂತೆಯೇ ಗ್ರಾಪಂ ಆವರಣದಲ್ಲಿ ನೆರೆದಿದ್ದ ಮುಖಂಡರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ಚುನಾವಣೆಯಲ್ಲಿ ಉಪಾಧ್ಯಕ್ಷ ಎಂ.ಬಿ. ಲೋಕೇಶ್, ಸದಸ್ಯರಾದ ಹೆಚ್.ಡಿ.ನಾಗೇಶ್, ಮಹದೇವಕುಮಾರ್, ಕೆ.ಎಸ್.ಚೈತ್ರ, ಹೆಚ್.ಕೆ.ನಾಗರಾಜು, ಗೌರಮ್ಮ, ಹರಿರಾಜು, ಕಲಾವತಿ, ಆರ್.ಜಿ.ನಾಗಮಣಿ, ಹೆಚ್.ಎಸ್. ರಾಮೇಗೌಡ, ಕಾರ್ತಿಕ್, ಎಸ್.ವೈ.ಸೌಮ್ಯ, ಎಂ.ಎಸ್.ರವಿಕುಮಾರ್, ಬಿ.ಎನ್.ರೇವಣ್ಣ, ಎಂ.ಎಸ್.ಗಿರೀಶ್, ಪಿಡಿಓ ವಿ.ಎ.ಅಶ್ವಿನಿ, ಕಾರ್ಯದರ್ಶಿ ಭಾರತಿ ಹಾಜರಿದ್ದರು. ಸದಸ್ಯೆ ಎಂ.ಮಾನಸ ಗೈರಾಗಿದ್ದರು.

ನೂತನ ಅಧ್ಯಕ್ಷೆ ವಿದ್ಯಾ ಮಾತನಾಡಿ, ನನ್ನ ಅಧಿಕಾರವಧಿಯಲ್ಲಿ ಗ್ರಾಪಂ ವ್ಯಾಪ್ತಿಯ ಗ್ರಾಮಗಳಿಗೆ ಅಗತ್ಯ ಮೂಲ ಸೌಕರ್ಯ ಒದಗಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ. ಇದಕ್ಕೆ ಎಲ್ಲಾ ಸದಸ್ಯರು ಸಹಕಾರ ನೀಡಬೇಕು ಎಂದು ಕೋರಿದರು.

ಈ ವೇಳೆ ಹಂಪಾಪುರ ಪಿಎಸಿಎಸ್ ಅಧ್ಯಕ್ಷ ಹೆಚ್.ಪಿ.ಪ್ರಶಾಂತ್, ನಿರ್ದೇಶಕ ಪಿ.ಎಸ್.ದೇವರಾಜು, ಮಾಜಿ ಸದಸ್ಯ ಬಸಮಾಜು, ಮುಖಂಡರಾದ ಪರಶುರಾಮ್, ನಾರಾಯಣ್, ಮಂಜುನಾಥ್, ಪುರಸಭೆ ಮಾಜಿ ಅಧ್ಯಕ್ಷ ನರಸಿಂಹರಾಜು ಮತ್ತಿತರರಿದ್ದರು.

ಓಟದ ಸ್ಪರ್ಧೆ: ರಾಜ್ಯಮಟ್ಟಕ್ಕೆ ಆಯ್ಕೆ



ಹೆಚ್.ಡಿ.ಕೋಟೆ ತಾಲೂಕಿನ ಹೊಸಹೊಳಲು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ವಿದ್ಯಾರ್ಥಿನಿ ಹೆಚ್.ಆರ್.ಕಾಂಚನ ಜಿಲ್ಲಾ ಮಟ್ಟದ 14 ವರ್ಷದೊಳಗಿನ 200 ಮೀಟರ್ ಓಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ವಿದ್ಯಾರ್ಥಿನಿಯನ್ನು ಶಾಲಾ ಎಸ್‌ಡಿಎಂಸಿ ಅಧ್ಯಕ್ಷ ನಿಂಗರಾಜು, ಸದಸ್ಯ ನಾಗರಾಜು, ಮುಖ್ಯ ಶಿಕ್ಷಕ ಮಹದೇವಸ್ವಾಮಿ, ಸಹ ಶಿಕ್ಷಕಿ ರಜನಿ, ದೈಹಿಕ ಶಿಕ್ಷಣ ಶಿಕ್ಷಕ ಹಮೀದ್ ಅಭಿನಂದಿಸಿದ್ದಾರೆ.

ರಾಷ್ಟ್ರೀಯ ಆಯುರ್ವೇದ ದಿನ, ಧನ್ವಂತರಿ ಜಯಂತಿ



ವಿವೇಕಾನಂದ ಸ್ಮಾರಕ ಆಸ್ಪತ್ರೆಯಲ್ಲಿ ರಾಷ್ಟ್ರೀಯ ಆಯುರ್ವೇದ ದಿನ ಮತ್ತು ಧನ್ವಂತರಿ ಜಯಂತಿ ನಡೆಯಿತು.

ಸರಗೂರು, ಅ.29– ಪಟ್ಟಣದ ಸ್ವಾಮಿ ವಿವೇಕಾನಂದ ಸ್ಮಾರಕ ಆಸ್ಪತ್ರೆ ಆವರಣದಲ್ಲಿ ರಾಷ್ಟ್ರೀಯ ಆಯುರ್ವೇದ ದಿನ ಮತ್ತು ಧನ್ವಂತರಿ ಜಯಂತಿ ನಡೆಯಿತು.

ಆಸ್ಪತ್ರೆಯ ಕೀಲು ಮತ್ತು ಮೂಳೆ ರೋಗ ತಜ್ಞ ಡಾ.ಎಂ.ಆರ್.ಸೀತಾರಾಂ ಮಾತನಾಡಿ, ಆಯುರ್ವೇದದ ಬಗ್ಗೆ ಪ್ರತಿಯೊಬ್ಬರೂ ಅರಿವು ಮೂಡಿಸಿಕೊಳ್ಳ ಬೇಕು. ಆಯು ಎಂದರೆ ಜೀವ, ವೇದ ಎಂದರೆ ಜ್ಞಾನ ಎಂದರ್ಥ. ಆಯು ವೇದದ ಬಗ್ಗೆ ಅರಿತು ಪ್ರತಿಯೊಬ್ಬರೂ ತಮ್ಮ ಜೀವನ ಶೈಲಿಯನ್ನು ರೂಪಿಸಿಕೊಳ್ಳಬೇಕು ಎಂದರು.

ಆಯುರ್ವೇದ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞೆ ಡಾ.ರನೀಷಾ, ಆದಿ ಕರ್ನಾಟಕ ಮಹಾಸಭಾ ಪ್ರಧಾನ ಕಾರ್ಯದರ್ಶಿ ಮಲ್ಲೇಶ್, ಆಸ್ಪತ್ರೆ ಉಪ ನಿರ್ದೇಶಕ, ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞ ಡಾ.ಶಂಕರ್ ಹಾಗೂ ನೇರಳೆ ಗ್ರಾಮದ ಶಿವಮ್ಮ ಮಾತನಾಡಿದರು.

ಈ ವೇಳೆ ಆಸ್ಪತ್ರೆ ನಿರ್ದೇಶಕರಾದ ಡಾ.ರವೀಂದ್ರನಾಥ್ ಶ್ರಾಫ್, ಡಾ.ವೀಣಾ, ಡಾ.ವಿಭಾ, ಹಿರಿಯ ಆಯುರ್ವೇದ ತಜ್ಞ ಡಾ.ಪ್ರಶಾತ್ ಎಸ್. ಬಿಂಜಾಲ್‌ಬಾವಿ, ಡಾ. ರಿಂದಾ ದೇವಿ, ಕಣ್ಣಿನ ತಜ್ಞ ಡಾ. ನರೇಂದ್ರ ರಾಮಕೃಷ್ಣ, ಶಸ್ತ್ರ ಚಿಕಿತ್ಸಾ ತಜ್ಞ ಡಾ.ಶರತ್ ಚಂದ್ರ, ಡಾ.ಅರುಣ್ ಕುಮರ್, ಡಾ.ಅಭಿಷೇಕ್ ಮತ್ತು ಆಯುರ್ವೇದ ಪಂಚಕರ್ಮ ಥೆರಪಿ ಸಿಬ್ಬಂದಿಗಳಾದ ರವಿ, ಮೀನಾಕ್ಷಿ, ವಿದ್ಯಾ, ಪ್ರೀತಿ, ಶ್ರೀನಿವಾಸ್ ಇತರೆ ಆಸ್ಪತ್ರೆ ಸಿಬ್ಬಂದಿ ವರ್ಗ ಮತ್ತು ಸಾರ್ವಜನಿಕರು ಇದ್ದರು.

ಸೆರೆಸಿಕ್ಕ ಚಿರತೆ ಸಾವು



ಬೆಟ್ಟದಪುರ, ಅ.29– ಗ್ರಾಮದ ಸಿಡಿಲು ಮಲ್ಲಿಕಾರ್ಜುನಸ್ವಾಮಿ ಬೆಟ್ಟದ ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಿರುವ ಬೆಟ್ಟದಕಾವಲು ಗ್ರಾಮದಲ್ಲಿ ಅರಣ್ಯ ಇಲಾಖೆ ಇರಿಸಿದ್ದ ಬೋನಿಗೆ 2 ವರ್ಷದ ಹೆಣ್ಣು ಚಿರತೆ ಬಿದ್ದಿದೆ. ಆದರೆ ಅರಣ್ಯಕ್ಕೆ ಬಿಡುವ ವೇಳೆಗೆ ಚಿರತೆ ಸಾವನ್ನಪ್ಪಿದೆ.

ಸಾಕು ಪ್ರಾಣಿಗಳನ್ನು ಬಲಿ ಪಡೆಯುತ್ತಿದ್ದ ಹಿನ್ನೆಲೆಯಲ್ಲಿ ಗ್ರಾಮದ ನಿವಾಸಿ ಶಿವಪ್ಪ, ಭಾಗ್ಯಮ್ಮ ದಂಪತಿ ಮನೆ ಪಕ್ಕದಲ್ಲಿ ಕಳೆದ 4 ದಿನಗಳ ಹಿಂದೆ ಅರಣ್ಯ ಇಲಾಖೆಯಿಂದ ಇರಿಸಲಾಗಿದ್ದ ಬೋನಿಗೆ ಹೆಣ್ಣು ಚಿರತೆ ಬಿದ್ದಿದೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಚಿರತೆಯನ್ನು ರಕ್ಷಿಸಿ ಮುಮ್ಮಡಿ ಕಾವಲು ಮೀಸಲು ಅರಣ್ಯ ಪ್ರದೇಶಕ್ಕೆ ಬಿಡುವ ವೇಳೆ ಚಿರತೆ ಮೃತಪಟ್ಟಿದೆ ಎನ್ನಲಾಗಿದೆ. ಈ ವೇಳೆ ಮರಣೋತ್ತರ ಪರೀಕ್ಷೆ ನಡೆಸಿದ ವೈದ್ಯರು ಚಿರತೆ ಶ್ವಾಸಕೋಶದ ಸಮಸ್ಯೆ ಹಾಗೂ 4 ದಿನದಿಂದ ಆಹಾರ ಸಿಗದಿರುವುದು, ಹೊಟ್ಟೆಯಲ್ಲಿ ಪ್ಲಾಸ್ಟಿಕ್ ಪದಾರ್ಥ ಸೇರಿರುವುದು ಸೇರಿದಂತೆ ಬೋನಿಂದ ತಪ್ಪಿಸಿಕೊಳ್ಳಲು ಪ್ರಯತ್ನಿಸಿದ ವೇಳೆ ತಲೆ ಪೆಟ್ಟಾಗಿ ಚಿರತೆ ಸಾವನ್ನಪ್ಪಿದೆ ಎಂದು ತಿಳಿಸಿದ್ದಾರೆ. ಮರಣೋತ್ತರ ಪರೀಕ್ಷೆ ಬಳಿಕ ಚಿರತೆ ಯನ್ನು ಮಾಲಂಗಿ ಗ್ರಾಪಂ ವ್ಯಾಪ್ತಿಯ ಅರಣ್ಯ ಪ್ರದೇಶದಲ್ಲಿ ಸುಡಲಾಯಿತು. ಈ ವೇಳೆ ಆರ್‌ಎಫ್‌ಓ ಪದ್ಮಶ್ರೀ ಸಿಬ್ಬಂದಿ ಉಪಸ್ಥಿತರಿದ್ದರು.

ಬೋನಿಗೆ ಬಿದ್ದ ಗಂಡು ಚಿರತೆ

ತಿಂಗಳೊಳಗೆ ಒಂದೇ ಸ್ಥಳದಲ್ಲಿ 5ನೇ ಚಿರತೆ ಸೆರೆ



ಬೋನಿಗೆ ಬಿದ್ದ ಚಿರತೆ

ಹೆಚ್.ಡಿ.ಕೋಟೆ, ಅ.29– ಪಟ್ಟಣದ ಹೌಸಿಂಗ್ ಬೋರ್ಡ್ ಸಮೀಪವಿರುವ ಮಾಜಿ ಶಾಸಕ ಎನ್.ನಾಗರಾಜು ಅವರ ಜಮೀನಿನಲ್ಲಿ ಅರಣ್ಯ ಇಲಾಖೆ ಇರಿಸಿದ್ದ ಬೋನಿಗೆ ಮಂಗಳವಾರ ಮುಂಜಾನೆ ಮತ್ತೊಂದು ಚಿರತೆ ಬಿದ್ದಿದ್ದು, ಇದರೊಂದಿಗೆ ತಿಂಗಳೊಳಗೆ ಒಂದೇ ಸ್ಥಳದಲ್ಲಿ ಬೋನಿಗೆ ಬಿದ್ದ ಐದನೇ ಚಿರತೆಯಾಗಿದೆ.

ಈ ಭಾಗದಲ್ಲಿ ಚಿರತೆ ಹಾವಳಿ ಹೆಚ್ಚಾಗಿದ್ದು, ಸಾಕು ಪ್ರಾಣಿಗಳನ್ನು ಬಲಿ ಪಡೆಯುತ್ತಿವೆ ಎಂದು ರೈತರು ಅರಣ್ಯ ಇಲಾಖೆಗೆ ಮನವಿ ಮಾಡಿದ್ದರು. ಅದರಂತೆ ಅರಣ್ಯ ಇಲಾಖೆ ಅಧಿಕಾರಿಗಳು ಬೋನಿಟ್ಟಿದ್ದರು. ಅದರಂತೆ ಈ ಹಿಂದೆ ನಾಲ್ಕು ಚಿರತೆಗಳು ಸೆರೆಯಾಗಿದ್ದು, ಇದೀಗ ಮತ್ತೊಂದು ಗಂಡು ಚಿರತೆ ಸೆರೆಯಾಗಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಚಿರತೆಯನ್ನು ರಕ್ಷಣೆ ಮಾಡಿ ಅರಣ್ಯಕ್ಕೆ ಬಿಟ್ಟಿದ್ದಾರೆ. ಈ ವೇಳೆ ರೈತರು ಈ ಭಾಗದಲ್ಲಿ ಮತ್ತಷ್ಟು ಚಿರತೆಗಳಿದ್ದು, ಅವುಗಳ ಸೆರೆಗೆ ಕ್ರಮ ಕೈಗೊಳ್ಳಬೇಕು ಎಂದು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮನವಿ ಮಾಡಿದರು.

ನೂತನ ನಿರ್ದೇಶಕರಿಗೆ ಅಭಿನಂದನೆ



ತಿ.ನರಸೀಪುರ ತಾಲೂಕು ರಾಜ್ಯ ಸರ್ಕಾರಿ ನೌಕರರ ಸಂಘದ ನಿರ್ದೇಶಕರ ಸ್ಥಾನಕ್ಕೆ ಸೋಮವಾರ ನಡೆದ ಚುನಾವಣೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಾರ್ವಜನಿಕ ಆಸ್ಪತ್ರೆ ವಿಭಾಗದಿಂದ ಸ್ಪರ್ಧಿಸಿ ಜಯಗಳಿಸಿದ ಎಸ್.ಕಿಶೋರ್ ಕುಮಾರ್ ಅವರನ್ನು ಸಹೋದ್ಯೋಗಿಗಳು ಅಭಿನಂದಿಸಿದರು. ಈ ವೇಳೆ ಡಾ.ರಾಜನಾರಾಯಣ್, ಎಂ.ಮಧು, ಡೆನ್ನಿಸ್ ಸಾಮ್ಯೂಯೆಲ್, ಸಂತೋಷ್ ಕುಮಾರ್ ಇದ್ದರು.

ಕೆ.ಎಲ್. ಸಾಧನ ಕುಮಾರಿಗೆ ಪಿಎಚ್.ಡಿ



ಮೈಸೂರು, ಅ.29– ಡಾ. ವಿಜಯಕುಮಾರಿ ಎಸ್. ಕರಿಕಲ್ ಅವರ ಮಾರ್ಗದರ್ಶನದಲ್ಲಿ ಕೆ.ಎಲ್. ಸಾಧನ ಕುಮಾರಿ ಅವರು ಸಂಶೋಧನೆ ನಡೆಸಿ ಸಾದರಪಡಿಸಿದ 'ವಸುಧೇಂದ್ರ ಅವರ ಸಾಹಿತ್ಯ' ಮಹಾಪ್ರಬಂಧ'ವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಭ್ರಷ್ಟಾಚಾರದ ವಿರುದ್ಧ ಪ್ರತಿಯೊಬ್ಬರೂ ಜಾಗೃತರಾಗಿ



ಭ್ರಷ್ಟಾಚಾರ ನಿರ್ಮೂಲನೆ ಜಾಗೃತಿ ಅರಿವು ಸಪ್ತಾಹದಲ್ಲಿ ಲೋಕಾಯುಕ್ತ ಡಿವೈಎಸ್‌ಪಿ ಮಾಲತೇಶ್ ಮಾತನಾಡಿದರು.

ಬನ್ನೂರು, ಅ.29– ದೇಶ ಭ್ರಷ್ಟಾಚಾರದಲ್ಲಿ 3ನೇ ಸ್ಥಾನದಲ್ಲಿದ್ದು, ವರ್ಷ ಕಳೆದಂತೆ ಮಾನವೀಯ ಮೌಲ್ಯಗಳು ಕಡಿಮೆಯಾಗುತ್ತಿವೆ. ಸಾರ್ವಜನಿಕರು ಜಾಗೃತರಾಗದಿದ್ದರೆ ಮುಂದಿನ ದಿನದಲ್ಲಿ ಸಾಕಷ್ಟು ನಷ್ಟ ಅನುಭವಿಸಬೇಕಾಗುತ್ತದೆ ಎಂದು ಲೋಕಾಯುಕ್ತ ಡಿವೈಎಸ್‌ಪಿ ಮಾಲತೇಶ್ ತಿಳಿಸಿದರು.


ಪಟ್ಟಣದ ಖಾಸಗಿ ಸಮುದಾಯ ಭವನದಲ್ಲಿ ಮದ್ರಾಸ್ ಫರ್ಟಿಲೈಜರ್ಸ್ ವತಿಯಿಂದ ಮಂಗಳವಾರ ನಡೆದ ಭ್ರಷ್ಟಾಚಾರ ನಿರ್ಮೂಲನೆ ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬರೂ ಭ್ರಷ್ಟಾಚಾರ ವಿರೋಧಿಸಿ ಉತ್ತಮ ರಾಷ್ಟ್ರನಿರ್ಮಾಣಕ್ಕೆ ಸಹಕರಿಸಿ ಎಂದರು.

ದೇಶಕ್ಕೆ ಸ್ವಾತಂತ್ರ್ಯ ಬಂದು 76 ವರ್ಷ ಕಳೆದರೂ, ಭ್ರಷ್ಟಾಚಾರ ವಿರೋಧಿಸುವ ಗುಣ ಬಾರದಿರುವುದು ದುರಾದೃಷ್ಟದ ಸಂಗತಿ. ಸಾಮಾನ್ಯವಾಗಿ ಹಳ್ಳಿಯ ಎಲ್ಲಾ ಡೈರಿಗಳಲ್ಲಿ ಪರೀಕ್ಷೆಗಾಗಿ 50ಎಂಎಲ್ ಹಾಲನ್ನು ಮಾತ್ರ ಪಡೆಯಬೇಕಿದ್ದು, ಅದಕ್ಕಿಂತ ಹೆಚ್ಚಿನ ಹಾಲನ್ನು ಪಡೆದಲ್ಲಿ ನಮ್ಮ ಇಲಾಖೆಗೆ ದೂರು ನೀಡಬಹುದು ಎಂದರು.

ಪಟ್ಟಣದಲ್ಲಿ ಗ್ರಾಮ ಲೆಕ್ಕಿಗ, ಕಂದಾಯ ನಿರೀಕ್ಷಕ, ಸರ್ವೇಯರ್, ಗ್ರಾಪಂ ಅಧಿಕಾರಿ, ಪೊಲೀಸ್ ಇಲಾಖೆ ಸೇರಿದಂತೆ ಯಾವುದೇ ಸರ್ಕಾರಿ ಇಲಾಖೆ ಸಾರ್ವಜನಿಕ ಕೆಲಸಕ್ಕೆ ತೊಂದರೆ ನೀಡಿದರೆ ನಮ್ಮ ಇಲಾಖೆಗೆ ತಿಳಿಸುವಂತೆ ಹೇಳಿದರು.

ಮದ್ರಾಸ್ ಫರ್ಟಿಲೈಜರ್ಸ್ ಪ್ರಾದೇಶಿಕ ವ್ಯವಸ್ಥಾಪಕ ಚೌಗುಲೇಶ್ ಮಾತನಾಡಿದರು. ಈ ವೇಳೆ ಲೋಕಾಯುಕ್ತ ಉಪನಿರೀಕ್ಷಕ ಪಿ.ಲೋಕೇಶ್ ಇತರರಿದ್ದರು.

ತಿ.ನರಸೀಪುರದಲ್ಲಿ ಪುನೀತ್ ರಾಜ್‌ಕುಮಾರ್ ಪುಣ್ಯಸ್ಮರಣೆ



ನಟ ಪುನೀತ್ ರಾಜ್‌ಕುಮಾರ್ 3ನೇ ವರ್ಷದ ಪುಣ್ಯ ಸ್ಮರಣೆ ನಡೆಯಿತು.

ತಿ.ನರಸೀಪುರ, ಅ.29– ಪವರ್‌ಸ್ಟಾರ್ ಪುನೀತ್ ರಾಜಕುಮಾರ್ ಅವರ 3ನೇ ವರ್ಷದ ಪುಣ್ಯಸ್ಮರಣೆ ಮಂಗಳವಾರ ಪಟ್ಟಣದಲ್ಲಿ ನಡೆಯಿತು.


ಪಟ್ಟಣದ ತಾಲೂಕು ಕಚೇರಿ ಎದುರಿನ ಎಂಟರ್ನ್ ಫಿಟ್ನೆಸ್ ಕ್ಲಬ್ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ವಿವಿಧ ಪುಷ್ಪಗಳಿಂದ ಅಲಂಕರಿಸಿದ್ದ ಅಪ್ಪು ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಅಭಿಮಾನಿಗಳು ಗೌರವ ಸಲ್ಲಿಸಿದರು. ಇದೇ ವೇಳೆ ಅಪ್ಪು ಅಭಿಮಾನಿಗಳು ಹಾಗೂ ಸಾರ್ವಜನಿಕರಿಗೆ ಚಿಕನ್ ಬಿರಿಯಾನಿ ವಿತರಿಸಲಾಯಿತು.

ವಕೀಲ ವಿ.ಎಂ.ನಾಗೇಂದ್ರ ಪ್ರಸಾದ್ ಮಾತನಾಡಿ, ಅಪ್ಪು ನಮ್ಮನ್ನು ಅಗಲಿ 3 ವರ್ಷಗಳಾದರೂ ಅವರ ಅಗಲಿಕೆಯನ್ನು ಅರಗಿಸಿಕೊಳ್ಳಲಾಗುತ್ತಿಲ್ಲ. ಪುನೀತ್ ರಾಜ್‌ಕುಮಾರ್ ಅವರು ತಮ್ಮ ಅತ್ಯದ್ಭುತ ನಟನೆಯಿಂದ ರಾಜ್ಯದಲ್ಲಿ ಯಾರೂ ಹೊಂದಿರದ ಅಭಿಮಾನಿ ಬಳಗವನ್ನು ಹೊಂದಿದ್ದರು. ಅವರ ಸಿನಿಮಾಗಳು ಯುವಕರಿಗೆ ಆದರ್ಶವಾಗಿದ್ದವು. ನಾವೆಲ್ಲರೂ ಅವರನ್ನು ಕಳೆದುಕೊಂಡಿದ್ದು ದುರ್ದೈವ ಎಂದರು.

ಪುನೀತ್ ರಾಜ್‌ಕುಮಾರ್ ಅವರು ಸರಳ ಸೌಮ್ಯ ವ್ಯಕ್ತಿತ್ವವುಳ್ಳವರಾಗಿದ್ದು, ದೊಡ್ಮನೆ ಕುಟುಂಬ ಎಂಬ ಯಾವುದೇ ಹಮ್ಮು ಅವರಿಗಿರಲಿಲ್ಲ. ಸಾಮಾನ್ಯರೊಡನೇ ಮುಕ್ತವಾಗಿ ಬೆರೆಯುತ್ತಿದ್ದ ಅವರ ಸಾವು ನಾಡಿನ ಜನತೆಗೆ ತುಂಬಲಾರದ ನಷ್ಟ. ನಟ ಶಂಕರ್ ನಾಗ್ ಹೇಗೆ ಇನ್ನೂ ನಮ್ಮ ನೆನಪಿಂದ ಮಾಸಿಲ್ಲವೋ ಹಾಗೆಯೇ ಪುನೀತ್ ಸಹ ನಮ್ಮ ಹೃದಯದಲ್ಲಿ ಸದಾ ಕಾಲ ನೆಲೆಸಿರುತ್ತಾರೆ ಎಂದರು.

ಈ ವೇಳೆ ಎಂಟರ್ನ್ ಜಿಮ್ ಮಾಲೀಕ ಮುನ್ನ, ಸಂತೋಷ್, ಸ್ವಾಮಿನಾಥ್, ವಾಸು ವೈನ್ಸ್ ಉಮೇಶ್, ಶ್ರೀರಾಂಪುರ ಮಂಜು, ಮೈಸೂರು ಟೈಸನ್ ಫಿಟ್‌ನ ಟೈಸನ್ ಮೋಸೆಸ್ ಹಾಗೂ ಅವರ ಪತ್ನಿ ರಶ್ಮಿ ಟೈಸನ್, ಬುಡೇನ್ ಸಾಬ್, ಕೃಷ್ಣಮೂರ್ತಿ, ಐಶ್ವರ್ಯ ಮೊಬೈಲ್ ಚಂದ್ರು, ಮನುರಾನಿ, ಸುನಾಗ್, ಎಲೆ ಕ್ರಿಕಲ್ ಪ್ರಕಾಶ್, ಕಿರಣ್, ಮನೋಜ್, ಯಶ್ವಿನ್ ಅಪ್ಪು ಸೇರಿದಂತೆ ಅಪ್ಪು ಅಭಿಮಾನಿಗಳು ಹಾಜರಿದ್ದರು.

ತುಂಬಲ ಗ್ರಾಮ ಪಂಚಾಯಿತಿಗೆ ಉಮಾ ಉಪಾಧ್ಯಕ್ಷೆ



ತುಂಬಲ ಗ್ರಾಪಂ ಉಪಾಧ್ಯಕ್ಷೆಯಾಗಿ ಉಮಾ ಅವಿರೋಧವಾಗಿ ಆಯ್ಕೆಯಾದರು.

ತಿ.ನರಸೀಪುರ, ಅ.29– ತಾಲೂಕಿನ ತುಂಬಲ ಗ್ರಾಮ ಪಂಚಾಯಿತಿ ನೂತನ ಉಪಾಧ್ಯಕ್ಷೆಯಾಗಿ ಉಮಾ ಗುರುಮಲ್ಲೇಶ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಉಪಾಧ್ಯಕ್ಷೆ ಸರಸ್ವತಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ಅವರಿಂದ ತೆರವಾದ ಸ್ಥಾನಕ್ಕೆ ಪಂಚಾಯ್ತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಚುನಾವಣೆಯಲ್ಲಿ ಉಮಾ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ರೇಷ್ಮೆ ಇಲಾಖೆ ಸಹಾಯಕ ನಿರ್ದೇಶಕ ಕೃಷ್ಣಮೂರ್ತಿ ಪ್ರಕಟಿಸಿದರು.

ಚುನಾವಣೆ ಸಭೆಯಲ್ಲಿ ಸದಸ್ಯೆ ಪದ್ಮ, ಎಸ್.ಬಸವರಾಜು, ರತ್ನಮ್ಮ, ಅನಿತಾ, ಶೇಖರ, ಕಂಬಯ್ಯ, ಸತೀಶ, ಚಂದ್ರಶೇಖರ್, ಪಿ.ಎಂ.ಸುಲೋಚನ ಹಾಜರಾಗಿ ಉಪಾಧ್ಯಕ್ಷರ ಆಯ್ಕೆಗೆ ಅನುಮೋದನೆ ನೀಡಿದರೆ, ಅಧ್ಯಕ್ಷ ರಾಮನಂಜಯ್ಯ, ನಿಕಟಪೂರ್ವ ಉಪಾಧ್ಯಕ್ಷೆ ಸರಸ್ವತಿ ಹಾಗೂ ಸದಸ್ಯೆ ಮಣಿಯಮ್ಮ ಗೈರಾಗಿದ್ದರು.

ನೂತನ ಉಪಾಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿದ ತಾಪಂ ಮಾಜಿ ಅಧ್ಯಕ್ಷ ಅಂದಾನಿ, ತುಂಬಲ ಗ್ರಾಮ ಸಿದ್ದರಾಮಯ್ಯ ಅವರ ತವರು ಕ್ಷೇತ್ರ ವರುಣ ಕ್ಷೇತ್ರ ವ್ಯಾಪ್ತಿಗೊಳಪಟ್ಟಿದ್ದು, ಯಾವುದೇ ಅಭಿವೃದ್ಧಿ ಕಾರ್ಯ ನಡೆಯಬೇಕಿದ್ದರೆ ಸಿದ್ದರಾಮಯ್ಯರ ಪಾತ್ರ ಮುಖ್ಯ. ಪ್ರತಿಷ್ಠಿತ ಕ್ಷೇತ್ರದಲ್ಲಿ ನಾವೆಲ್ಲರೂ ಜನಪ್ರತಿನಿಧಿಗಳಾಗಿ ಕೆಲಸ ಮಾಡುತ್ತಿದ್ದೇವೆ. ಪಂಚಾಯ್ತಿಯಲ್ಲಿ ಹೆಚ್ಚಿನ ಅಭಿವೃದ್ಧಿ ಕೆಲಸಗಳು ಆಗುತ್ತಿದ್ದು, ಎಂಎಲ್‌ಸಿ ಡಾ.ಯತೀಂದ್ರ ಅವರು ಮುಖ್ಯಮಂತ್ರಿಗಳ ಹೆಸರಿಗೆ ಕಳಂಕ ಬಾರದಂತೆ ಕರ್ತವ್ಯ ನಿರ್ವಹಣೆಗೆ ಸೂಚನೆ ನೀಡಿರುವ ಹಿನ್ನೆಲೆಯಲ್ಲಿ ಅವರ ನಿರ್ದೇಶನದಂತೆ ಎಲ್ಲರೂ ಕೆಲಸ ಮಾಡುತ್ತಿದ್ದೇವೆ ಎಂದರು.

ಒಪ್ಪಂದದ ಪ್ರಕಾರ ಗ್ರಾಪಂ ಅಧ್ಯಕ್ಷ–ಉಪಾಧ್ಯಕ್ಷರು ತಮ್ಮ ಅವಧಿ ಮುಗಿಸಿ ಯಾವುದೇ ಲಾಬಿ ಮಾಡದೇ ಮುಂದಿನವರಿಗೆ ಅವಕಾಶ ಕಲ್ಪಿಸಿಕೊಡುತ್ತಿದ್ದು, ಅವರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ನೂತನ ಉಪಾಧ್ಯಕ್ಷರು ಅಧ್ಯಕ್ಷರೊಂದಿಗೆ ಸಮನ್ವಯತೆ ಸಾಧಿಸಿ ಸಹಕಾರ ನೀಡುವ ಮೂಲಕ ಗ್ರಾಪಂ ಅಭಿವೃದ್ಧಿಗೆ ಮುಂದಾಗಬೇಕೆಂದು ಸಲಹೆ ನೀಡಿದರು.

ಈ ವೇಳೆ ಪಿಡಿಓ ಧರಣೇಶ್, ಜಿಲ್ಲಾ ದಲಿತ ಜಾಗೃತಿ ಸಮಿತಿ ಅಧ್ಯಕ್ಷ ಮಂಜುನಾಥ್, ಗ್ರಾಪಂ ಮಾಜಿ ಅಧ್ಯಕ್ಷ ಚುಂಚೇಗೌಡ, ಮಾಜಿ ಸದಸ್ಯ ಗುರುರಾಜು, ಡಾ.ಪ್ರದೀಪ್, ಡೈರಿ ಅಧ್ಯಕ್ಷ ಬಿ.ಸಿದ್ದ ರಾಜು, ಗುಡ್ಡಪ್ಪ, ಯಡದೊರೆ ಮರಯ್ಯ, ಆರ್.ಪಿ. ಹುಂಡಿ ನಾಗರಾಜು, ಬಿಲಿಗೆರೆಹುಂಡಿ ಬಸವರಾಜು, ಕುಪ್ಯ ಗೋವಿಂದ ರಾಜು, ಹಿಟ್ಟುವಳ್ಳಿ ಮಹದೇವಸ್ವಾಮಿ, ನಿಂಗೇಗೌಡನ ಹುಂಡಿ ನಿಂಗಪ್ಪ, ಕುಪ್ಯ ಜಯರಾಂ, ಗ್ರಾಪಂ ಸದಸ್ಯರಾದ ನಿರಂಜನ್, ಮಹೇಶ್, ತಾಯೂರು ಮಧು, ರಮೇಶ್, ಗಣೇಶ್ ಮತ್ತಿತರಿದ್ದರು.

ಮೈಸೂರು ಮಿತ್ರ ಬುಧವಾರ 30 ಅಕ್ಟೋಬರ್ 2024

ದೀಪಾವಳಿಗೆ ಮೈಸೂರಿಗರ ಮನೆ ಬೆಳಗಲು ಸಿದ್ಧವಾಗಿವೆ 'ದೂರದ ದೀಪ'

● ಮೌಲ್ಡ್ ದೀಪದ ಹಾವಳಿಗೆ ತತ್ತರಿಸಿದ ಮಣ್ಣಿನ ದೀಪ ● ಈ ಬಾರಿ 70 ಸಾವಿರ ದೀಪವಷ್ಟೇ ತಯಾರಿ
● ಕುಂಬಾರ ಕುಶಲ ಕೈಗಾರಿಕಾ ಸಹಕಾರ ಸಂಘದ 14 ಕುಟುಂಬಗಳಿಂದ ಮಣ್ಣಿನ ಹಣತೆ ತಯಾರಿ



ದೀಪಗಳು ಒಣಗಲು ಬಿಸಿಲಿಗಿಡುತ್ತಿರುವ ದೂರ ಗ್ರಾಮದ ಗುಡಿ ಕೈಗಾರಿಕೆ ನಿರತ ಗೋವಿಂದರಾಜು. /ಚಿತ್ರಗಳು: ಎಂ.ಎನ್. ಲಕ್ಷ್ಮೀನಾರಾಯಣ ಯಾದವ್

ತಯಾರಿಕೆ ಸುಲಭವಲ್ಲ

ಮಣ್ಣಿನ ದೀಪ ತಯಾರಿಸುವುದು ಸುಲಭವಲ್ಲ. ಕೆರೆಯಿಂದ ಮಣ್ಣನ್ನು ತಂದು ಅದನ್ನು ಹದಗೊಳಿಸಿ ಉಂಡೆ ಕಟ್ಟಿ ಮೆದುಗೊಳಿಸಲಾಗುತ್ತದೆ. ಬಳಿಕ ಕಲ್ಲು ತೆಗೆದು ಕೈಯ್ಯಲ್ಲಿ ಉಂಡೆ ಮಾಡಿ ದೀಪ ತಯಾರಿಸಲಾಗುತ್ತದೆ. 3 ದಿನ ಒಣಗಿದ ನಂತರ ಆ ದೀಪಗಳನ್ನು ಗೂಡಿನಲ್ಲಿ ಬೇಯಿಸಲಾಗುತ್ತದೆ. ಈ ವೇಳೆ ಕೆಲವು ದೀಪಗಳು ಒಡೆದು ಹೋಗುತ್ತವೆ. ಇಷ್ಟೆಲ್ಲಾ ಕಷ್ಟಪಟ್ಟರೂ ಮಾರುಕಟ್ಟೆಯಲ್ಲಿ ಬೇಡಿಕೆ ಸಿಗದಿರುವುದಕ್ಕೆ ದೀಪ ತಯಾರಕರು ವಿಷಾದ ವ್ಯಕ್ತಪಡಿಸಿದ್ದಾರೆ.



ಮಣ್ಣಿನ ದೀಪ ತಯಾರಿಸುತ್ತಿರುವ ರತ್ನಮ್ಮ, ರಶ್ಮಿ.

ಎಂ.ಟಿ.ಯೋಗೇಶ್‌ಕುಮಾರ್

ಮೈಸೂರು,ಅ.29– ಬೆಳಕಿನ ಹಬ್ಬ ದೀಪಾವಳಿಗೆ ಮೈಸೂರಿಗರ ಮನೆಗೆ ಬೆಳಕು ಚೆಲ್ಲಲು ದೂರ ಗ್ರಾಮದ ಕುಂಬಾರರ ಕುಲ ಕಸುಬಿನಿಂದ ತಯಾರಾದ ಪರಿಸರ ಸ್ನೇಹಿ ಮಣ್ಣಿನ ದೀಪಗಳು ಸಜ್ಜಾಗಿವೆ.

ಮೈಸೂರು ಜಿಲ್ಲೆಯ ದೂರ ಗ್ರಾಮದ ಕುಂಬಾರ ಕುಶಲ ಕೈಗಾರಿಕಾ ಸಹಕಾರ ಸಂಘದ ಸದಸ್ಯರು ಗುಡಿ ಕೈಗಾರಿಕೆಯಲ್ಲಿ ಈ ಬಾರಿ ಸುಮಾರು 70 ಸಾವಿರಕ್ಕೂ ಹೆಚ್ಚು ಮಣ್ಣಿನ ದೀಪಗಳನ್ನು ತಯಾರಿಸಿ ಮಾರುಕಟ್ಟೆಗೆ ಸರಬರಾಜು ಮಾಡಿದ್ದಾರೆ. ಆದರೆ ಅಂದ–ಚೆಂದ ಕಾಣುವ ರಾಸಾಯನಿಕ ಅಂಶವುಳ್ಳ ಮೌಲ್ಡ್ ದೀಪಗಳು ಸಾಂಪ್ರದಾಯಿಕ ದೀಪಗಳಿಗೆ ಹೊಡೆತ ನೀಡುತ್ತಿವೆ. ದೂರ ಗ್ರಾಮದ ಕುಂಬಾರ ಕುಶಲ ಕೈಗಾರಿಕಾ ಸಹಕಾರ ಸಂಘದಲ್ಲಿ ಕುಂಬಾರ ಸಮುದಾಯದ 14 ಕುಟುಂಬಗಳ ಸುಮಾರು 30ಕ್ಕೂ ಹೆಚ್ಚು ಮಂದಿ ಈ ಬಾರಿಯೂ ದೀಪಾವಳಿ ಹಾಗೂ ಕಾರ್ತಿಕ ಸೋಮವಾರದಂದು ಬಳಸುವ ಮಣ್ಣಿನ ದೀಪಗಳನ್ನು ಕಳೆದ ಒಂದು ತಿಂಗಳಿನಿಂದ ತಯಾರಿಸುವ ಕಾಯಕದಲ್ಲಿ ಮಗ್ನರಾಗಿದ್ದಾರೆ. ವರ್ಷದಿಂದ ವರ್ಷಕ್ಕೆ ಗುಡಿ–ಕೈಗಾರಿಕೆಯಲ್ಲಿ ತಯಾರಾಗುವ ದೀಪಗಳ ಬಳಕೆ ಹೆಚ್ಚಾಗಬೇಕಾಗಿತ್ತು. ಆದರೆ ಗುಡಿ–ಕೈಗಾರಿಕೆಗೆ ಪೆಟ್ಟು ನೀಡಲು ವರ್ಷದಿಂದ ವರ್ಷಕ್ಕೆ ಮಾರುಕಟ್ಟೆಗೆ ಮೌಲ್ಡ್‌ನಲ್ಲಿ ತಯಾರಿಸಿರುವ ದೀಪಗಳು ಹೆಚ್ಚಿನ ಸಂಖ್ಯೆಯಲ್ಲಿ ಲಗ್ಗೆ ಇಡುತ್ತಿವೆ. ಕುಲ ಕಸುಬಿನಲ್ಲಿ ತಯಾರಾದ ಮಣ್ಣಿನ ದೀಪಗಳಿಗೆ ಭಾರಿ ಹೊಡೆತ ಬಿದ್ದಂತಾಗಿದೆ. ಕಳೆದ ಕೆಲವು ವರ್ಷಗಳ ಹಿಂದೆ ದೂರ ಗ್ರಾಮದ ಕುಂಬಾರರು 3 ರಿಂದ 4 ಲಕ್ಷ ಮಣ್ಣಿನ ಹಣತೆಗಳನ್ನು ತಯಾರಿಸುತ್ತಿದ್ದರು. ಆದರೆ ಕಳೆದ 2 ವರ್ಷದಿಂದ ಕೇವಲ 70 ರಿಂದ 80 ಸಾವಿರ ಮಣ್ಣಿನ ಹಣತೆಗಳನ್ನು ತಯಾರಿಸಿದರೂ ಸೂಕ್ತ ಮಾರುಕಟ್ಟೆ ಇಲ್ಲ.

ಬೇಡಿಕೆ ಕಡಿಮೆಯಾದ ಹಿನ್ನೆಲೆಯಲ್ಲಿ ಕುಂಬಾರಿಕೆಯ ಕಲೆಯಿಂದ ಮೂಡಿ ಬರುತ್ತಿರುವ ಮಣ್ಣಿನ ದೀಪಗಳ ಸಂಖ್ಯೆಯು ಕಡಿಮೆಯಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿಯವರು ಮೇಕ್ ಇನ್ ಇಂಡಿಯಾ ಯೋಜನೆಯಡಿ ಗುಡಿ–ಕೈಗಾರಿಕೆ ಪ್ರೋತ್ಸಾಹಿಸುವಂತೆ ಹಾಗೂ ಸ್ಥಳೀಯ ಮಟ್ಟದಲ್ಲಿ ತಯಾರಾಗುವ ವಸ್ತುಗಳನ್ನೇ ಬಳಸುವಂತೆ ಕರೆ ನೀಡಿದ್ದರೂ, ಜನರು ಮಾತ್ರ ನೋಡಲು ಅಂದವಾಗಿರುವ ರಾಸಾಯನಿಕ ಅಂಶವುಳ್ಳ ಮೌಲ್ಡ್‌ನಲ್ಲಿ ಕಾರ್ಖಾನೆಗಳು ತಯಾರಿಸಿರುವ ದೀಪಗಳನ್ನು ದುಪ್ಪಟ್ಟು ಬೆಲೆ ನೀಡಿ ಖರೀದಿಸಲು ಮುಗಿ ಬೀಳುತ್ತಿರುವುದು ಕುಂಬಾರಿಕೆಯ ಕುಲ ಕಸುಬಿಗೆ ಹಿನ್ನಡೆ ಉಂಟಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕುಂಬಾರರು ಗುಡಿ–ಕೈಗಾರಿಕೆ ಮೂಲಕ ತಯಾರಿಸಿರುವ ಮಣ್ಣಿನ ದೀಪಗಳನ್ನೇ ಬಳಸುವಂತೆ ಜನರಲ್ಲಿ ಮನವಿ ಮಾಡತೊಡಗಿದ್ದಾರೆ.



ತಯಾರಾದ ಮಣ್ಣಿನ ದೀಪಗಳನ್ನು ಒಲೆ ಗೂಡಿಗೆ ಜೋಡಿಸುತ್ತಿರುವ ಪ್ರವೀಣ್.

ಕಡಿಮೆ ದರ: ಮಣ್ಣಿನ ದೀಪಗಳು ಪರಿಸರ ಸ್ನೇಹಿಯೂ ಹಾಗೂ ಆರೋಗ್ಯಕ್ಕೆ ಪೂರಕವಾಗಿಯೂ ಇವೆ. ಶುದ್ಧ ಮಣ್ಣಿನಿಂದ ಯಾವುದೇ ರಾಸಾಯನಿಕ ಪದಾರ್ಥವನ್ನೂ ಬೆರಸದೇ ದೀಪವನ್ನು ತಯಾರಿಸಿ ಗೂಡಿನಲ್ಲಿ ಬೇಯಿಸುವ ಮೂಲಕ ಮಣ್ಣಿನ ದೀಪವನ್ನು ತಯಾರಿಸಲಾಗುತ್ತಿದೆ. ಒಂದು ಜೋಡಿ ಮಣ್ಣಿನ ದೀಪಕ್ಕೆ 3 ರಿಂದ 5 ರೂ. ದರ ನಿಗದಿ ಮಾಡಲಾಗಿದೆ. ಆದರೆ ಮೌಲ್ಡ್ ದೀಪಕ್ಕೆ ಒಂದು ಜೊತೆಗೆ 25 ರೂ.ನಿಂದ 35 ರೂ. ದರ ನಿಗದಿ ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ ಬೇರೆ ಬೇರೆ ರಾಜ್ಯಗಳಿಂದ ತಂದು ಮಾರಾಟ ಮಾಡುವ ಮೌಲ್ಡ್ ದೀಪಗಳಿಗೆ ಮಣೆ ಹಾಕದಂತೆ ಕುಂಬಾರ ಕುಲ ಕಸುಬು ಆಧಾರಿತ ಜನ ಮನವಿ ಮಾಡಿದ್ದು, ಸ್ಥಳೀಯವಾಗಿ ತಯಾರಿಸಿರುವ ದೀಪಗಳನ್ನು ಬಳಸುವಂತೆ ಕೋರಿದ್ದಾರೆ.

ಪ್ರೋತ್ಸಾಹಿಸಿ: ವರ್ಷದಿಂದ ವರ್ಷಕ್ಕೆ ಮಣ್ಣಿನ ದೀಪಗಳಿಗೆ ಬೇಡಿಕೆ ಕಡಿಮೆಯಾಗಲಿದೆ. ಸರ್ಕಾರ ಮಣ್ಣಿನ ದೀಪಗಳ ಬಳಕೆಗೆ ಪ್ರೇರಣೆ ನೀಡಲು ಕಾರ್ಯಕ್ರಮ ರೂಪಿಸಬೇಕು. ಇದರೊಂದಿಗೆ ಜನರು ಸಹಕಾರ ನೀಡಿ ಕುಲ ಕಸುಬು ಆಧಾರಿತ ವೃತ್ತಿಗೆ ಪ್ರೋತ್ಸಾಹ ನೀಡಬೇಕು. ದಸರಾ ಸಂದರ್ಭದಲ್ಲಿ ಕುಂಬಾರಿಕೆಯ ಕುಲ ಕಸುಬು ಪ್ರದರ್ಶನ ನೀಡಲು ಅವಕಾಶ ಒದಗಿಸಬೇಕು. ವಸ್ತುಪ್ರದರ್ಶನದಲ್ಲಿ ಕುಂಬಾರ ಕುಶಲ ಕೈಗಾರಿಕಾ ಸಹಕಾರ ಸಂಘಕ್ಕೆ ಮಳಿಗೆಯೊಂದನ್ನು ನೀಡಿ ಪ್ರೋತ್ಸಾಹ ನೀಡಬೇಕು ಎಂದು ಕುಂಬಾರ ಕುಶಲ ಕೈಗಾರಿಕಾ ಸಂಘದ ಸದಸ್ಯ ಗೋವಿಂದರಾಜು ಒತ್ತಾಯಿಸಿದ್ದಾರೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	**(ದೂ: 2521923)**
ನಸಾಬ್ (ಕ)	1 ಪ್ರದರ್ಶನಗಳು
ಅನ್ನ (ಕ)	3 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಎಲ್ಲಿಗೆ ಪಯಣ ಯಾವುದೋ ದಾರಿ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ದಿ ಹಂಟರ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಯಲಾ ಕುನ್ನಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಮಾರ್ಟಿನ್ (ಕ)	4 ಪ್ರದರ್ಶನಗಳು
ರಾಜಕಮಲ್	
ದೇವರ (ತೆ)	4 ಪ್ರದರ್ಶನಗಳು
ಸಂಗಂ	
ಮಾರ್ಟಿನ್ (ಕ)	4 ಪ್ರದರ್ಶನಗಳು
ಲಿಡೋ	
ಕೃಷ್ಣಂ ಪ್ರಣಯ ಸಖಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ವೇಟೇಯನ್ (ತ)	4 ಪ್ರದರ್ಶನಗಳು
ಪ್ರಭಾ	
ಭೀಮಾ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ವೆನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ಬೆ.11.05ಕ್ಕೆ, ಮ.1.30ಕ್ಕೆ, ರಾ.7.15ಕ್ಕೆ, ರಾ.9.45ಕ್ಕೆ, ವೆಟ್ಟೈಯನ್ (ತ): ಸಂ.4ಕ್ಕೆ.
ಸ್ಕ್ರೀನ್ 2	ದಿ ವೈಲ್ಡ್ ರೋಬೋಟ್ (3ಡಿ)(ಇಂ): ಬೆ.11ಕ್ಕೆ, ಮಾರ್ಟಿನ್ (ಕ): ಮ.1.10ಕ್ಕೆ, ವೆಟ್ಟೈಯನ್ (ತ): ಸಂ.4.05ಕ್ಕೆ, ಯಲಾ ಕುನ್ನಿ (ಕ): ರಾ.7.10ಕ್ಕೆ, ನರುಡಿ ಬ್ರದುಕು ನಟನ (ತೆ): ರಾ.9.50ಕ್ಕೆ.
ಸ್ಕ್ರೀನ್ 3	ಎಲ್ಲಿಗೆ ಪಯಣ ಯಾವುದೋ ದಾರಿ (ಕ): ಬೆ.10.35ಕ್ಕೆ, ಇಬ್ಬನಿ ತಬ್ಬಿದ ಇಳೆಯಲಿ (ಕ): ಮ.1.15ಕ್ಕೆ, ಅನ್ನ (ಕ): ಸಂ.4.30ಕ್ಕೆ, ಮರ್ಫಿ (ಕ): ರಾ.7ಕ್ಕೆ, ಪಣಿ (ಮ): ರಾ.9.50ಕ್ಕೆ.
ಸ್ಕ್ರೀನ್ 4	ನಸಾಬ್ (ಕ): ಬೆ.10.20ಕ್ಕೆ, ವೆಟ್ಟೈಯನ್ (ತ): ಮ.1.05ಕ್ಕೆ, ಸಂ.6.55ಕ್ಕೆ, ಯಲಾಕುನ್ನಿ (ಕ): ಸಂ.4.15ಕ್ಕೆ, ರಾ.10.05ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821-2973519

ಸ್ಕ್ರೀನ್ 1	ವೆಟ್ಟೈಯನ್ (ತ): ಮ.1ಕ್ಕೆ, ಎಲ್ಲಿಗೆ ಪಯಣ ಯಾವುದೋ ದಾರಿ (ಕ): ಸಂ.4ಕ್ಕೆ, ಮಾರ್ಟಿನ್ (ಕ): ಸಂ.6.30ಕ್ಕೆ, ವೆಟ್ಟೈಯನ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ವೆನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ಮ.1.30ಕ್ಕೆ, ಸಂ.4ಕ್ಕೆ, ರಾ.7ಕ್ಕೆ.
ಸ್ಕ್ರೀನ್ 3	ಯಲಾಕುನ್ನಿ (ಕ): ಮ.1.30ಕ್ಕೆ, ಒಬ್ಬಟ್ಟು (ಕ): ಸಂ.4.30ಕ್ಕೆ, ಉದಾಹರಣೆ (ಕ): ರಾ.7ಕ್ಕೆ, ವೆನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ರಾ.9.15ಕ್ಕೆ.
ಸ್ಕ್ರೀನ್ 4	ಮಾರ್ಟಿನ್ (ಕ): ಮ.1.10ಕ್ಕೆ, ಯಲಾಕುನ್ನಿ (ಕ): ಮ.3.55ಕ್ಕೆ, ವೆಟ್ಟೈಯನ್ (ತ): ಸಂ.6.30ಕ್ಕೆ, ಪಣಿ (ಮ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಚನ್ನಪಟ್ಟಣದಲ್ಲಿ ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ 6 ಕೌನ್ಸಿಲರ್‌ಗಳು

ಚನ್ನಪಟ್ಟಣ, ಅ.29– ಉಪಚುನಾವಣೆಗೆ ದಿನಗಣನೆ ಆರಂಭವಾಗಿರುವಂತೆಯೇ ಇತ್ತ ಮತ್ತೆ ಬಿಜೆಪಿಗೆ ಆಘಾತ ಎದುರಾಗಿದ್ದು, ಬಿಜೆಪಿ ಪಕ್ಷದಿಂದ ಗೆದ್ದಿದ್ದ 6 ಕೌನ್ಸಿಲರ್‌ಗಳು ಇದೀಗ ಪಕ್ಷ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ.

ಬಿಜೆಪಿ ಟಿಕೆಟ್ ಆಕಾಂಕ್ಷಿಯಾಗಿದ್ದ ಸಿಪಿ ಯೋಗೇಶ್ವರ್ ಅವರನ್ನೇ ಪಕ್ಷಕ್ಕೆ ಸೆಳೆದು ಅಭ್ಯರ್ಥಿಯನ್ನಾಗಿ ಮಾಡಿರುವ ಕಾಂಗ್ರೆಸ್ ಇದೀಗ ಮತ್ತೊಂದು ಆಪರೇಷನ್ ಮಾಡುವ ಮೂಲಕ ಬಿಜೆಪಿಗೆ ಶಾಕ್ ಕೊಟ್ಟಿದೆ.

ಚನ್ನಪಟ್ಟಣ ಉಪಚುನಾವಣೆ ಕಣದಲ್ಲಿ ಬಿಜೆಪಿಗೆ ಮತ್ತೊಂದು ಆಘಾತ ಕೊಟ್ಟಿರುವ ಕಾಂಗ್ರೆಸ್, ಬಿಜೆಪಿಯಿಂದ ಗೆದ್ದಿದ್ದ 7 ನಗರಸಭಾ ಸದಸ್ಯರಲ್ಲಿ 6 ಮಂದಿಯನ್ನು ತೆಕ್ಕೆಗೆ ಸೆಳೆದುಕೊಂಡಿದೆ. ಇದರಿಂದ ಬಿಜೆಪಿಗೆ ಹಿನ್ನಡೆಯಾಗಿದೆ.

ನಗರಸಭಾ ಸದಸ್ಯ ಚಂದ್ರು, ಮಂಗಳಮ್ಮ, ಮನೋಹರ್, ಕಮಲ, ಜಯಮಾಲ, ಕಸ್ತೂರಿ ಕಾಂಗ್ರೆಸ್ ಸೇರ್ಪಡೆಯಾಗಿದ್ದು, ಇವರೆಲ್ಲ 2021–22ರಲ್ಲಿ ನಗರಸಭಾ ಸದಸ್ಯರಾಗಿ ಆಯ್ಕೆ ಆಗಿದ್ದರು. ಒಟ್ಟು 31 ನಗರಸಭಾ ಸದಸ್ಯರ ಪೈಕಿ 07 ಜನ ಬಿಜೆಪಿಯಿಂದ ಗೆದ್ದಿದ್ದರು. 16 ಮಂದಿ ಜೆಡಿಎಸ್‌ನಿಂದ ಗೆದ್ದಿದ್ದರು.

ಇನ್ನು ಪಕ್ಷ ಸೇರ್ಪಡೆ ಸಂದರ್ಭದಲ್ಲಿ ಬಿಎಂಐಸಿಪಿಎ ಅಧ್ಯಕ್ಷ ರಘುನಂದನ್ ರಾಮಣ್ಣ ಉಪಸ್ಥಿತರಿದ್ದರು. ಎರಡು ತಿಂಗಳ ಹಿಂದಷ್ಟೇ 13 ಮಂದಿ ಜೆಡಿಎಸ್ ಸದಸ್ಯರು ಕಾಂಗ್ರೆಸ್ ಸೇರ್ಪಡೆ ಆಗಿದ್ದರು. ಕಾಂಗ್ರೆಸ್‌ನಿಂದ 7 ಮಂದಿ ನಗರಸಭೆ ಸದಸ್ಯರು ಗೆದ್ದಿದ್ದರು. ಒಬ್ಬರು ಪಕ್ಷೇತರ ಅಭ್ಯರ್ಥಿ ಗೆಲುವು ಸಾಧಿಸಿದ್ದರು. ಅವರೂ ಸಹ ಸೋಮವಾರ ಕಾಂಗ್ರೆಸ್ ಸೇರ್ಪಡೆಯಾಗಿದ್ದಾರೆ.

ಹಿಂದಿನ ದಿನಾಂಕ ನಮೂದಿಸಿ ಹಿಂಬರಹ ನೀಡಿದ ಆರೋಪ

ಮೈಸೂರಿನ ಎಎಸ್ಪಿ ವಿರುದ್ಧ ದೂರು ದಾಖಲಿಸಲು ಸ್ನೇಹಮಯಿ ಕೃಷ್ಣ ನಿರ್ಧಾರ



ಸ್ನೇಹಮಯಿ ಕೃಷ್ಣ

ಮೈಸೂರು, ಅ.29(ಬಿಎಲ್‌ಯು)– ಸುಳ್ಳು ದಾಖಲೆ ಸೃಷ್ಟಿಸಿ ಹಿಂಬರಹ ನೀಡಿರುವ ಮೈಸೂರಿನ ಹೆಚ್ಚುವರಿ ಪೊಲೀಸ್ ಅಧೀಕ್ಷಕ ನಾಗೇಶ್ ವಿರುದ್ಧ ನಾಳೆ ನಜರ್‌ಬಾದ್ ಪೊಲೀಸ್ ಠಾಣೆಗೆ ದೂರು ನೀಡುವುದಾಗಿ ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ತಿಳಿಸಿದ್ದಾರೆ.

ಮೈಸೂರಿನ ಜೆ.ಪಿ.ನಗರದ ಮೀನಾಕ್ಷಿ ಎಂಬುವರು ಪ್ರೌಢಶಾಲಾ ಶಿಕ್ಷಕರ ಬಡಾವಣೆಯಲ್ಲಿ ವಾಸ ಮಾಡುತ್ತಿದ್ದು, ಅವರ ಸಂಬಂಧಿ ಯಶವಂತ ಕುಮಾರ್ ತನಗೆ ಎಂಟು ಲಕ್ಷ ರೂಪಾಯಿ ನೀಡಬೇಕೆಂದು ಅಕ್ರಮವಾಗಿ ಅವರ ಮನೆಗೆ ನುಗ್ಗಿದ್ದಾನೆ ಎಂದು ಮೇ ತಿಂಗಳಲ್ಲಿ ಮೀನಾಕ್ಷಿ ದೂರು ನೀಡಲು ಮುಂದಾಗಿದ್ದರು ಎಂದು ಸ್ನೇಹಮಯಿ ಕೃಷ್ಣ ತಿಳಿಸಿದ್ದಾರೆ. ಆದರೆ ಮೈಸೂರಿನ ಗ್ರಾಮಾಂತರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಶೇಖರ್ ದೂರು ಸ್ವೀಕರಿಸಲು ನಿರಾಕರಿಸಿದಾಗ ಹೆಚ್ಚುವರಿ ಪೊಲೀಸ್ ಅಧೀಕ್ಷಕರಿಗೆ ದೂರು ಸಲ್ಲಿಸಿದ್ದೆ. ಜೊತೆಗೆ ಇನ್ಸ್‌ಪೆಕ್ಟರ್ ಶೇಖರ್ ಹಾಗೂ ಯಶವಂತ್ ಕುಮಾರ್ ನಡುವಿನ ಫೋನ್ ಸಂಪರ್ಕದ ಕಾಲ್ ಡೀಟೈಲ್ಸ್ ಅನ್ನು ಆರೋಪ ಪಟ್ಟಿಯಲ್ಲಿ ಸೇರಿಸುವಂತೆ ಕೋರಿದ್ದೆ ಎಂದರು. ಆದರೆ ನ್ಯಾಯಾಲಯಕ್ಕೆ ಸಲ್ಲಿಸಿರುವ ಆರೋಪ ಪಟ್ಟಿಯಲ್ಲಿ ಕಾಲ್ ಡೀಟೈಲ್ಸ್ ಮಾಹಿತಿ ನೀಡಿಲ್ಲ ಎಂದು ಆರೋಪಿಸಿದ್ದಾರೆ. ಈ ಪ್ರಕರಣ ಸಂಬಂಧ ಹೆಚ್ಚುವರಿ ಪೊಲೀಸ್ ಅಧೀಕ್ಷಕರು ನನಗೆ ಹಿಂಬರಹವನ್ನು 46 ದಿನದ ಹಿಂದಿನ, ಅಂದರೆ ಸೆಪ್ಟಂಬರ್ 13, 2024ರ ದಿನಾಂಕ ನಮೂದಿಸಿ ನೀಡಿದ್ದಾರೆ. ಇಷ್ಟು ದಿನ ಅಲೆದಾಡಿದರೂ ಹಿಂಬರ ನೀಡದೆ ಈಗ ಹಿಂಬರಹ ನೀಡಲಾಗಿದೆ ಎಂದು ಆಪಾದಿಸಿದ್ದಾರೆ. ಈ ಪ್ರಕರಣದಿಂದ ಇನ್ಸ್‌ಪೆಕ್ಟರ್ ರಕ್ಷಿಸಲು ಹೆಚ್ಚುವರಿ ಪೊಲೀಸ್ ಅಧೀಕ್ಷಕ ನಾಗೇಶ್ ಸುಳ್ಳು ದಾಖಲೆ ಸೃಷ್ಟಿಸಿದ್ದಾರೆ. ಈ ಹಿನ್ನೆಲೆಯಲ್ಲಿ ನಾಗೇಶ್ ವಿರುದ್ಧ ನಾಳೆ ನಜರ್‌ಬಾದ್ ಪೊಲೀಸ್ ಠಾಣೆಯಲ್ಲಿ ದೂರು ನೀಡುವುದಾಗಿ ಸ್ನೇಹಮಯಿ ಕೃಷ್ಣ ತಿಳಿಸಿದ್ದಾರೆ.

ವಯೋವೃದ್ಧರಿಗೆ ಆತ್ಮಸ್ಥೈರ್ಯ ತುಂಬುವ ಜೆಎಸ್‌ಎಸ್ ವಯಾ ವಿಕಾಸ ನೋಡೆಲ್ ಕೇಂದ್ರ ಆರಂಭ

ಕೇಂದ್ರ, ರಾಜ್ಯ ಸರ್ಕಾರದ ಯೋಜನೆ, ಸೌಕರ್ಯಗಳನ್ನು ವೃದ್ಧರಿಗೆ ತಲುಪಿಸುವ ಕಾರ್ಯ



ಹಿರಿಯ ನಾಗರಿಕರ ಅನುಕೂಲಕ್ಕಾಗಿ ಆರಂಭಗೊಂಡ ಜೆಎಸ್‌ಎಸ್ ವಯಾವಿಕಾಸ ನೋಡೆಲ್ ಕೇಂದ್ರದ ಮಾಹಿತಿಯನ್ನು ಗಣ್ಯರಿಗೆ ಇಲ್ಲಿನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕವಿತಾ ರೆಡ್ಡಿ ನೀಡುತ್ತಿರುವುದು.

ಮೈಸೂರು, ಅ.29(ಎಸ್‌ಪಿಎನ್)– 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರ ಅನುಕೂಲಕ್ಕಾಗಿ ಜೆಎಸ್‌ಎಸ್ ವಯಾ ವಿಕಾಸ ನೋಡೆಲ್ ಕೇಂದ್ರವನ್ನು ಮಂಗಳವಾರ ಉದ್ಘಾಟಿಸಲಾಯಿತು.

ಮೈಸೂರು ಮಹಾತ್ಮ ಗಾಂಧಿ(ಎಂಜಿ) ರಸ್ತೆಯ ಜೆಎಸ್‌ಎಸ್ ಆವರಣದ ಶ್ರೀ ರಾಜೇಂದ್ರ ಶತಮಾನೋತ್ಸವ ಸಭಾಂಗಣದಲ್ಲಿ ಜೆಎಸ್‌ಎಸ್ ಆಸ್ಪತ್ರೆಯ ಜೆರಿಯಾಟ್ರಿಕ್ಸ್ ವಿಭಾಗದ ವತಿಯಿಂದ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಈ ಕೇಂದ್ರವನ್ನು ಆರಂಭಿಸಲಾಯಿತು.

ನಂತರ ಮಾತನಾಡಿದ ಜೆಎಸ್‌ಎಸ್ ಮಹಾವಿದ್ಯಾಪೀಠ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸಿ.ಜಿ.ಬೆಟಸೂರಮಠ, ವಯೋವೃದ್ಧರನ್ನು ಸಮಾಜ ಗೌರವದಿಂದ ಕಾಣಬೇಕು. ಸ್ವಾವಲಂಬಿ ಮತ್ತು ಸ್ವತಂತ್ರವಾಗಿ ಬದುಕು ಸಾಗಿಸಲು ಜೆಎಸ್‌ಎಸ್ ವಯಾ ವಿಕಾಸ ಕೇಂದ್ರದಲ್ಲಿ ಕೌಶಲ ಹಾಗೂ ಸೂಕ್ತ ತರಬೇತಿ, ಆರೋಗ್ಯದ ಕಾಳಜಿ ಹಾಗೂ ಹಿರಿಯರಿಗೆ ಸರ್ಕಾರದಿಂದ ಸಿಗುವ ಸವಲತ್ತುಗಳ ಬಗ್ಗೆಯೂ ಮಾಹಿತಿ ನೀಡಲಾಗುವುದು ಎಂದು ತಿಳಿಸಿದರು. ವಿಶ್ವ ಆರೋಗ್ಯ ಸಂಸ್ಥೆಯ ಅಂಕಿ–ಅಂಶಗಳ ಪ್ರಕಾರ ಪ್ರಪಂಚದ ಒಟ್ಟು ಜನಸಂಖ್ಯೆ ಶೇ.12ರಷ್ಟು 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿದ್ದಾರೆ. ಹಿರಿಯರ ಸಂಖ್ಯೆ ಜಾಗತಿಕವಾಗಿ ದಿನೇದಿನೆ ಬೆಳೆಯುತ್ತಿದೆ. ಮುಂದಿನ 30 ವರ್ಷದಲ್ಲಿ ಏಷ್ಯಾ ಮತ್ತು ಲ್ಯಾಟಿನ್ ಅಮೆರಿಕಾದಲ್ಲಿ ಶೇ.300ರಷ್ಟು ಏರಿಕೆಯಾಗುವ ನಿರೀಕ್ಷೆಯಿದೆ. ಅಲ್ಲದೆ 2050ರ ವೇಳೆ ಭಾರತದಲ್ಲಿ ಶೇ.20ರಷ್ಟಾಗಬಹುದು ಅಂದಾಜಿಸಲಾಗಿದೆ ಎಂದು ತಿಳಿಸಿದರು.

ಇಂದಿಗೂ ನಮ್ಮ ದೇಶದಲ್ಲಿ ಹಿರಿಯ ನಾಗರಿಕರ ಏಳಿಗೆಗಾಗಿ ಜಾರಿಗೆ ತಂದಿರುವ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳು ಮತ್ತು ಸೌಲಭ್ಯಗಳ ಬಗ್ಗೆ ಮಾಹಿತಿ ಕೊರತೆ ಇದೆ. ಹೀಗಾಗಿ ಈ ಸೌಲಭ್ಯ ಹಿರಿಯರಿಗೆ ಸಿಗಲಿ ಎಂಬ ಸದುದ್ದೇಶದಿಂದ ಜೆಎಸ್‌ಎಸ್ ಸಂಸ್ಥೆ ಆಸ್ಪತ್ರೆಯಿಂದ ವಯಾ ವಿಕಾಸ ಸಂಪರ್ಕ ಕೇಂದ್ರವನ್ನು ಸ್ಥಾಪಿಸಲಾಗಿದೆ. ಇದರ ಜೊತೆಗೆ ಸರ್ಕಾರದ ಹಿರಿಯ ನಾಗರಿಕರ ಸಹಾಯವಾಣಿಯು ಆಸ್ಪತ್ರೆ ಆವರಣದಲ್ಲಿ ಈಗಾಗಲೇ ಸ್ಥಾಪಿಸಿದ್ದು, ಇದರ ಸದುಪಯೋಗ ಪಡೆಯುವಂತೆ ಮನವಿ ಮಾಡಿದರು.

ಸಮಾಜದಲ್ಲಿ ತಂತ್ರಜ್ಞಾನ ಅಭಿವೃದ್ಧಿಯಿಂದಾಗಿ ಬಹುತೇಕ ಹಳ್ಳಿಗಳಲ್ಲಿ ಯುವಕರು ಕೆಲಸ ಅರಸಿ ನಗರದತ್ತ ಮುಖ ಮಾಡುತ್ತಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಶೇ.50ಕ್ಕೂ ಹೆಚ್ಚು ಹಿರಿಯ ನಾಗರಿಕರು ಒಬ್ಬಂಟಿಯಾಗಿ ವಾಸಿಸುತ್ತಿದ್ದಾರೆ. ಪಟ್ಟಣ, ನಗರ ಪ್ರದೇಶದಲ್ಲಿ ದಂಪತಿಗಳಿಬ್ಬರು ಕೆಲಸಕ್ಕೆ ಹೋಗುವ ಸನ್ನಿವೇಶ ಸೃಷ್ಟಿಯಾಗಿರುವುದರಿಂದ ವೃದ್ಧಾಶ್ರಮಗಳ ಸಂಖ್ಯೆ ಹೆಚ್ಚಾಗುತ್ತಿವೆ. ಹಾಗಾಗಿ ಸಮಾಜದಲ್ಲಾಗುವ ಬದಲಾವಣೆ ಅನುಸಾರ ಹಿರಿಯ ನಾಗರಿಕರಿಗೆ ಆರೋಗ್ಯ, ವೃದ್ಧಾಪ್ಯ ಜೀವನ ನಡೆಸಲು ಸೂಕ್ತ ಮಾಹಿತಿ ಈ ಕೇಂದ್ರದಿಂದ ದೊರೆಯಲಿದೆ ಎಂದು ಮಾಹಿತಿ ನೀಡಿದರು.

ಇನ್ಫೋಸಿಸ್‌ನ ತರಬೇತಿ ಮತ್ತು ಮೌಲ್ಯಮಾಪನ ಶಿಕ್ಷಣ ವಿಭಾಗದ ಮುಖ್ಯಸ್ಥ ತಿರುಮಲ ಆರೋಹಿ ಮಾಮುನೂರು ಮಾತನಾಡಿ, ಜೆಎಸ್‌ಎಸ್ ಸಂಸ್ಥೆ ವಯಾ ವಿಕಾಸ ಸಂಸ್ಥೆಯನು ಹಿರಿಯ ನಾಗರಿಕರಿಗೆ ಭೌತಿಕ, ಸಾಮಾಜಿಕ ಮತ್ತು ಆರೋಗ್ಯದ ಕಾಳಜಿಯ ಬಗ್ಗೆ ಜಾಗೃತಿ ಮತ್ತು ಮಾಹಿತಿಯನ್ನು ನೀಡಲು ಸಂಪರ್ಕ ಕೇಂದ್ರವನ್ನು ಸ್ಥಾಪಿಸಿರುವುದು ಸಂತೋಷದ ಸಂಗತಿ. ಈ ಸೌಲಭ್ಯ ಎಲ್ಲಾ ನಾಗರಿಕರಿಗೂ ಸಿಗಬೇಕು. ಇನ್ನೂ ಹೆಚ್ಚಿನ ಇಂತಹ ಸಂಪರ್ಕ ಕೇಂದ್ರಗಳು ಸ್ಥಾಪನೆಯಾಗಬೇಕು. ಇದಕ್ಕೆ ನಮ್ಮ ಇನ್ಫೋಸಿಸ್ ಸಂಸ್ಥೆಯೂ ಕೂಡ ಬೆಂಬಲಿಸಲಿದೆ ಎಂದು ತಿಳಿಸಿದರು.

ನಾರಾಯಣ ಹೆಲ್ತ್‌ನ ಕ್ಲಸ್ಟರ್ ಮತ್ತು ಕಾರ್ಪೋರೇಟ್ ವಿಭಾಗದ ನಿರ್ದೇಶಕರಾದ ಡಾ.ವಿಜಯಸಿಂಗ್ ಮತ್ತು ಕೆನರಾ ಬ್ಯಾಂಕ್ ಸಹಾಯಕ ಜನರಲ್ ಮ್ಯಾನೇಜರ್ ಚಂದನ್ ಕುಮಾರ್ ಚೌಧರಿ ಮಾತನಾಡಿ, ಹಿರಿಯ ನಾಗರಿಕರ ಆರೋಗ್ಯ ಕಾಳಜಿ ಬಹಳ ಪ್ರಮುಖವಾದುದು. ಇದರ ಜೊತೆಗೆ ಹಿರಿಯರಿಗೆ ಸಿಗಬೇಕಾದ ಸೌಲಭ್ಯಗಳ ಬಗ್ಗೆ ಜಾಗೃತಿ ಮೂಡಿಸುವ ಜವಾಬ್ದಾರಿಯನ್ನು ಜೆಎಸ್‌ಎಸ್ ಆಸ್ಪತ್ರೆ ಕಾರ್ಯ ಶ್ಲಾಘನೀಯ. ಈ ಕಾರ್ಯದೊಂದಿಗೆ ಕೆನರಾ ಬ್ಯಾಂಕ್ ಕೈ ಜೋಡಿಸಲಿದೆ ಎಂದರು. ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠದ ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್.ಮಹೇಶ್, ವಯಾ ವಿಕಾಸ ಕೇಂದ್ರದ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕವಿತಾ ರೆಡ್ಡಿ, ವೈದ್ಯಕೀಯ ಅಧೀಕ್ಷಕ ಡಾ.ಸಿ.ಪಿ.ಮಧು, ವೃದ್ಧಾರೋಗ್ಯ ವಿಭಾಗದ ಮುಖ್ಯಸ್ಥೆ ಡಾ. ಪ್ರತಿಭಾ ಪರೇರ, ಸಹ ಪ್ರಾಧ್ಯಾಪಕ ಡಾ. ಶಿಲ್ಪ ಅವರೆಬೀಳ್, ಜೆಎಸ್‌ಎಸ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿ ಮತ್ತು ವಿವಿಧ ಬಡಾವಣೆಯ ಹಿರಿಯ ನಾಗರಿಕರು ಪಾಲ್ಗೊಂಡಿದ್ದರು. ಡಾ.ಸಿ.ಜೆ.ತೇಜಸ್ವಿನಿ ವಂದಿಸಿದರು. ಡಾ.ಅಶ್ರಿತಾ ಕಾರ್ಯಕ್ರಮ ನಿರೂಪಿಸಿದರು.

ಮೂರು ಕ್ಯಾನ್ಸರ್ ನಿವಾರಕ ಔಷಧಿಗಳ ಬೆಲೆ ಕಡಿತಕ್ಕೆ ಸರ್ಕಾರ ಸೂಚನೆ

ನವದೆಹಲಿ:ಕಸ್ಟಮ್ಸ್ ಸುಂಕ ವಿನಾಯಿತಿ ಮತ್ತು ಜಿಎಸ್‌ಟಿ ಕಡಿತದ ಲಾಭವನ್ನು ಗ್ರಾಹಕರಿಗೆ ವರ್ಗಾಯಿಸಲು ಮೂರು ಕ್ಯಾನ್ಸರ್ ನಿವಾರಕ ಔಷಧಿಗಳ ಬೆಲೆ ಕಡಿಮೆ ಮಾಡುವಂತೆ ಕೇಂದ್ರ ಸರ್ಕಾರ ಮಂಗಳವಾರ ಕಂಪನಿಗಳಿಗೆ ಸೂಚಿಸಿದೆ.


ಕೈಗೆಟಕುವ ಬೆಲೆಯಲ್ಲಿ ಔಷಧಿಗಳ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರದ ಬದ್ಧತೆಗೆ ಅನುಗುಣವಾಗಿ, ರಾಷ್ಟ್ರೀಯ ಔಷಧಿ ಬೆಲೆ ಪ್ರಾಧಿಕಾರವು ಮೂರು ಕ್ಯಾನ್ಸರ್ ನಿವಾರಕ ಔಷಧಿಗಳಾದ ಟ್ರಾಸ್ಟುಜುಮಾಬ್, ಒಸಿಮೆರ್ಟಿನಿಬ್ ಮತ್ತು ದುರ್ವಾಲುಮಾಬ್ ಬೆಲೆ ಕಡಿಮೆ ಮಾಡುವಂತೆ ಸಂಬಂಧಿಸಿದ ಕಂಪನಿಗಳಿಗೆ ನಿರ್ದೇಶನ ನೀಡಲಾಗಿದೆ. 2024–25ನೇ ಸಾಲಿನ ಕೇಂದ್ರ ಬಜೆಟ್‌ನಲ್ಲಿ ಈ ಮೂರು ಕ್ಯಾನ್ಸರ್ ನಿವಾರಕ ಔಷಧಿಗಳಿಗೆ ಕಸ್ಟಮ್ಸ್ ಸುಂಕದಿಂದ ವಿನಾಯಿತಿ ನೀಡುವುದಾಗಿ ಘೋಷಿಸಲಾಗಿತ್ತು.

ನಟ ದರ್ಶನ್ ಜಾಮೀನು ಅರ್ಜಿ ಸಂಬಂಧ ಇಂದು ಆದೇಶ

ಬಳ್ಳಾರಿ, ಅ.29– ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಜೈಲುಪಾಲಾಗಿರುವ ನಟ ದರ್ಶನ್ ಜಾಮೀನು ಅರ್ಜಿಗೆ ಸಂಬಂಧಿಸಿದ ತೀರ್ಪನ್ನು ಕೋರ್ಟ್ ನಾಳೆಗೆ ಕಾಯ್ದಿರಿಸಿದೆ.

ನಟ ದರ್ಶನ್‌ರ ಆರೋಗ್ಯ ಸಮಸ್ಯೆಯನ್ನು ಮುಂದು ಮಾಡಿ ಜಾಮೀನು ಕೇಳಲಾಗಿದ್ದು, ಈ ಸಂಬಂಧ ಹಿರಿಯ ವಕೀಲ ಸಿ.ವಿ.ನಾಗೇಶ್ ಇಂದು ಕೋರ್ಟ್‌ನಲ್ಲಿ ತಮ್ಮ ವಾದ ಮಂಡಿಸಿದರು. ದರ್ಶನ್‌ಗೆ ಆರೋಗ್ಯ ಸಮಸ್ಯೆ ಇದ್ದು, ಅವರಿಗೆ ತುರ್ತಾಗಿ ಶಸ್ತ್ರಚಿಕಿತ್ಸೆಯ ಅವಶ್ಯಕತೆ ಇದೆ ಎಂದು ವಾದಿಸಿದರು.

ಅರ್ಜಿದಾರರ ದೇಹದಲ್ಲಿ ಸಮರ್ಪಕವಾಗಿ ರಕ್ತಪರಿಚಲನೆ ಆಗುತ್ತಿಲ್ಲ, ಪಾದಗಳಲ್ಲಿ ಮರಗಟ್ಟುವಿಕೆ ಸಮಸ್ಯೆ ಇದೆ. ಕಾಲಿನಲ್ಲಿ ನರದ ತೊಂದರೆ ಉಂಟಾಗಿದ್ದು, ಈಗಾಗಲೇ ಸ್ವಲ್ಪ ಮಟ್ಟಿಗೆ ಪಾದ ಸ್ಪರ್ಶ ಕಳೆದುಕೊಂಡಿದ್ದಾರೆ. ಹೀಗಿರುವಾಗ ಸೂಕ್ತ ಚಿಕಿತ್ಸೆ ನೀಡುವಲ್ಲಿ ವಿಫಲವಾದರೆ, ಮುಂದಿನ ದಿನಗಳಲ್ಲಿ ದೊಡ್ಡ ಅನಾಹುತಕ್ಕೆ ಎಡೆಮಾಡಿಕೊಡಬಹುದು. ವೈದ್ಯಕೀಯ ವರದಿಯೂ ಅವರು ಪಾರ್ಶ್ವವಾಯುಗೆ ತುತ್ತಾಗುವ ಸಾಧ್ಯತೆ ಅಧಿಕವಾಗಿದೆ. ಹಾಗಾಗಿ ತುರ್ತು ಶಸ್ತ್ರಚಿಕಿತ್ಸೆಗೆ ಒಳಗಾಗಬೇಕು ಎಂದಿದ್ದಾರೆ. ಇವೆಲ್ಲವನ್ನೂ ಗಮನಿಸಿ ಮಧ್ಯಂತರ ಜಾಮೀನು ನೀಡಬೇಕು ಎಂದು ಮನವಿ ಮಾಡಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಎಸ್‌ಪಿಪಿ ಪ್ರಸನ್ನ ಕುಮಾರ್, ದರ್ಶನ್ ಜಾಮೀನು ಅರ್ಜಿಗೆ ಕೆಲ ತಕರಾರುಗಳನ್ನು ಎತ್ತಿದರು. 'ವೈದ್ಯಕೀಯ ವರದಿಯಲ್ಲಿ ಪಾರ್ಶ್ವವಾಯುಗೆ ತುತ್ತಾಗುತ್ತಾರೆ ಎಂದಿಲ್ಲ, ತುತ್ತಾಗಲೂಬಹುದು ಎಂದು ವೈದ್ಯರು ಅಂದಾಜಿಸಿದ್ದಾರಷ್ಟೇ ಎಂದರು. ಈ ವೇಳೆ ನ್ಯಾಯಪೀಠ, ಏನು ನಿಮ್ಮ ಮಾತಿನ ಅರ್ಥ, ಅರ್ಜಿದಾರರು ಅನಾರೋಗ್ಯದ ಅಂತಿಮ ಹಂತಕ್ಕೆ ತಲುಪುವವರೆಗೆ ಕಾಯಬೇಕು ಎನ್ನುವುದೇ ಎಂದು ಪ್ರಶ್ನಿಸಿತ್ತು. ವಾದ–ಪತ್ರಿವಾದ ಆಲಿಸಿದ ನ್ಯಾಯಪೀಠ ಅರ್ಜಿಯ ತೀರ್ಪನ್ನು ನಾಳೆಗೆ (ಬುಧವಾರ) ಪ್ರಕಟಿಸುವುದಾಗಿ ಹೇಳಿದೆ. ಅಂದಹಾಗೆ ಕೊಲೆ ಪ್ರಕರಣದಲ್ಲಿ ಆರೋಪಿಗಳಾದ ನಟ ದರ್ಶನ್, ಆಪ್ತೆ ಪವಿತ್ರಾಗೌಡ ಹಾಗೂ ಇಬ್ಬರು ಸಹಚರರ ಜಾಮೀನು ಅರ್ಜಿಯನ್ನು ಅ.14 ರಂದು 57ನೇ ಸಿಸಿಹೆಚ್ ನ್ಯಾಯಾಲಯವು ವಜಾಗೊಳಿಸಿತ್ತು.




ಸರ್ಕಾರಿ ಪಠ್ಯಪುಸ್ತಕ ಮುದ್ರಣಾಲಯದ
ನೌಕರರ ಸಂಘದ ಕಾರ್ಯದರ್ಶಿಗಳಾದ
ಶ್ರೀ ಎನ್ ರಾಜು ರವರು
ವಯೋನಿವೃತ್ತಿ ಹೊಂದಲಿದು ಇವರ ನಿವೃತ್ತಿ ಜೀವನವು
ಸುಖಕರವಾಗಿರಲಿ ಎಂದು ಶುಭ ಕೋರುತ್ತೇವೆ.
ಶುಭಕೋರುವವರು : ದುರ್ಗಾ ಗ್ರೂಪ್ಸ್